ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 22 ಶುಕ್ರವಾರ 2026

47

ಸಂಪುಟ: 47 | ಸಂಚಿಕೆ: 36 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಮೈಸೂರು ಮಿತ್ರ ಶುಕ್ರವಾರ 22 ಮೇ 2026

ವಿದ್ಯುತ್ ಚಾಲಿತ ವಾಹನ ಪ್ರೋತ್ಸಾಹ ಯೋಜನೆಯಡಿ ಅನುಕೂಲ ಕಲ್ಪಿಸಿದರೆ ಗುಜರಿ ನೀತಿ ಪಾಲನೆಗೆ ಸಹಮತ

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರಲ್ಲಿ ಮೈಸೂರು ಲಾರಿ ಮಾಲೀಕರ ಸಂಘ, ರೈಲ್ವೆ ಗೂಡ್ಸ್ ಲಾರಿ ಮಾಲೀಕರ ಸಂಘ ಪ್ರಸ್ತಾಪ



ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರಿಗೆ ಅಬ್ದುಲ್ ಖಾದರ್ ಶಾಹಿದ್ ಹಾಗೂ ಕೋದಂಡರಾಮು ಪ್ರಸ್ತಾವ ಸಲ್ಲಿಸಿದರು

ನವದೆಹಲಿ: ವಿದ್ಯುತ್ ಚಾಲಿತ ವಾಹನಗಳ ಬಳಕೆ ಹೆಚ್ಚಳ ಮಾಡುವ ಉಪಕ್ರಮದಡಿ ಅನುಕೂಲ ಮಾಡಿಕೊಡುವುದಾದರೆ 15 ವರ್ಷ ಮೇಲ್ಪಟ್ಟಂತಹ ತಮ್ಮ ವಾಹನಗಳನ್ನು ಗುಜುರಿ ನೀತಿಯಂತೆ ಸ್ಕ್ರ್ಯಾಪ್ ಮಾಡಲು ನಿರ್ಧರಿಸುವುದಾಗಿ ಮೈಸೂರು ಲಾರಿ ಮಾಲೀಕರ ಸಂಘದ ಅಧ್ಯಕ್ಷ ಕೋದಂಡರಾಮು ಹಾಗೂ ರೈಲ್ವೇ ಗೂಡ್ಸ್ ಲಾರಿ ಮಾಲೀಕರ ಸಂಘದ ಅಧ್ಯಕ್ಷ ಅಬ್ದುಲ್ ಖಾದರ್ ಶಾಹಿದ್ ಅವರು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರಲ್ಲಿ ಪ್ರಸ್ತಾಪವಿಟ್ಟಿದ್ದಾರೆ.

ಇಂದು ನವದೆಹಲಿಯಲ್ಲಿ ಸಚಿವರನ್ನು ಭೇಟಿಯಾದ ಈ ಇಬ್ಬರು ಮುಖಂಡರು ಕೇಂದ್ರ ಸರ್ಕಾರ, ವಿದ್ಯುತ್ ಚಾಲಿತ ವಾಹನಗಳ ಸಂಚಾರಕ್ಕೆ ಪ್ರೋತ್ಸಾಹ ನೀಡುತ್ತಿರುವುದನ್ನು ತಮಗೂ ವಿಸ್ತರಿಸಿದರೆ 15 ವರ್ಷ ಮೇಲ್ಪಟ್ಟಂತಹ ತಮ್ಮ ಲಾರಿಗಳನ್ನು ಗುಜುರಿಗೆ ಹಾಕುವ ಬಗ್ಗೆ ನಿರ್ಧರಿಸುವುದಾಗಿ ತಿಳಿಸಿದ್ದಾರೆ.

ಇದಕ್ಕೆ ಸಕರಾತ್ಮಕವಾಗಿ ಸ್ಪಂದಿಸಿರುವ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿಯವರು ಕೆಲವೇ ದಿನಗಳಲ್ಲಿ ಈ ವಿಚಾರವಾಗಿ ಸೂಕ್ತ ನಿರ್ಧಾರಕ್ಕೆ ಬರುವುದಾಗಿ ತಿಳಿಸಿದ್ದಾರೆ ಎಂದು ಅಬ್ದುಲ್ ಖಾದರ್ ಶಾಹಿದ್ ತಿಳಿಸಿದ್ದಾರೆ.

ಅಭಿನಂದನೆ



ಮೈಸೂರು ಗ್ರಾಮಾಂತರ ಪೊಲೀಸ್ ವೃತ್ತ ನಿರೀಕ್ಷಕರಾಗಿ ಅಧಿಕಾರ ಸ್ವೀಕರಿಸಿದ ಡಿ.ಬಿ. ಜಯಪ್ರಕಾಶ್ ಅವರನ್ನು ಮೈಸೂರು ಜಿಲ್ಲಾ ಕನ್ನಡ ಜಾಗೃತಿ ಸಮಿತಿ ಸದಸ್ಯ ಕಡಕೊಳ ಕುಮಾರಸ್ವಾಮಿ, ಯುವ ಮುಖಂಡರಾದ ಮಂಜು, ಪೈಲ್ವಾನ್ ರಾಘವೇಂದ್ರ, ಬಂಡಿಪಾಳ್ಯ ಕಾರ್ತಿಕ್ ಮತ್ತಿತರರು ಅಭಿನಂದಿಸಿದರು.

ಕೆ.ಆರ್.ಮಿಲ್ ನೌಕರರಿಗೆ ಇನ್ನೂ ಸಿಗದ ನ್ಯಾಯ


ಮಾನವ ಹಕ್ಕುಗಳ ಆಯೋಗಕ್ಕೆ ಮನವಿ

ಮೈಸೂರು, ಮೇ 21(ಜಿಎ)– ಕೃಷ್ಣರಾಜೇಂದ್ರ ಮಿಲ್ ಮುಚ್ಚಲ್ಪಟ್ಟು ನಾಲ್ಕಕ್ಕೂ ಹೆಚ್ಚು ದಶಕ ಕಳೆದರೂ ಅಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕರಿಗೆ ನ್ಯಾಯ ದೊರೆತಿಲ್ಲ. ಹೀಗಾಗಿ ರಾಜ್ಯ ಮಾನವ ಹಕ್ಕುಗಳ ಆಯೋಗ ಈ ಬಗ್ಗೆ ಗಮನ ಹರಿಸಬೇಕೆಂದು ಕಾರ್ಖಾನೆ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಡಿ.ಎಂ.ಕೆಂಚಪ್ಪ ಮನವಿ ಮಾಡಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ಈ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದ ಹಲವರು ಮಡಿದಿದ್ದಾರೆ. ಇವರಿಗೆ ಇವರ ಕುಟುಂಬದವರಿಗೆ ಇನ್ನೂ ಸಹಾ ಸೂಕ್ತ ಪರಿಹಾರ ದೊರೆತಿಲ್ಲ. ಕಾರ್ಖಾನೆಯ ಸುಮಾರು 112 ಎಕರೆ ಜಮೀನಿನಲ್ಲಿನ 40 ಎಕರೆ ಜಮೀನನ್ನು ಕಂಪನಿಯ ಸಾಲಕ್ಕೆ ಜಮಾ ಮಾಡಲಾಗಿದೆ. ಕಂಪನಿಯ ಯಂತ್ರೋಪಕರಣ, ಮೊದಲಾದವುಗಳಿಂದ ಬಂದ ಹಣದಲ್ಲಿ ಕೇವಲ 713 ಮಂದಿಗೆ ಮಾತ್ರ ಅಲ್ಪ ಪ್ರಮಾಣದ ಹಣ ನೀಡಲಾಗಿದೆ. ಉಳಿದವರಿಗೆ ನೀಡಿಲ್ಲ. ಹೀಗಾಗಿ ಮಾನವ ಹಕ್ಕುಗಳ ಆಯೋಗ ಮಧ್ಯ ಪ್ರವೇಶಿಸಿ ಪರಿಹಾರ ದೊರಕಿಸಿಕೊಡಬೇಕೆಂದು ಕೋರಿದರು.

ಈ ವೇಳೆ ಸುದ್ದಿಗೋಷ್ಠಿಯಲ್ಲಿ ಮಾಜಿ ಕಾರ್ಮಿಕ ರಾದ ಮಾದಪ್ಪ, ಶಿವಣ್ಣ, ಗುರುಮಲ್ಲಪ್ಪ ಉಪಸ್ಥಿತರಿದ್ದರು.

ಅಧಿಕೃತ ಆಹ್ವಾನ



ಕರ್ನಾಟಕ ರಂಗ ಪರಿಷತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಮೇ 25 ರಂದು ಬೆಂಗಳೂರಿನ ಕನ್ನಡ ಭವನ ನಯನದಲ್ಲಿ ಆಯೋಜಿಸಿರುವ ಕರ್ನಾಟಕ ರಂಗ ಸಂಘಟಕರ ಸಮಾವೇಶದ ಸರ್ವಾಧ್ಯಕ್ಷರಾದ ರಂಗಕರ್ಮಿ ರಾಜಶೇಖರ ಕದಂಬ ಅವರಿಗೆ ಅಧಿಕೃತವಾಗಿ ಆಹ್ವಾನ ಪತ್ರಿಕೆ ನೀಡಿ ಆಹ್ವಾನಿಸಲಾಯಿತು. ರಂಗ ಪರಿಷತ್ತಿನ ಅಧ್ಯಕ್ಷ ಸಂಸ ಸುರೇಶ್, ಸಂಚಾಲಕ ಸಿ.ಎಂ.ನರಸಿಂಹಮೂರ್ತಿ, ಕೂಡ್ಲಿಗಿ ವೆಂಕಟಪ್ಪ ಲಿಂಗಪ್ಪ ಉಪಸ್ಥಿತರಿದ್ದರು

ಅರ್ಥಾರ್ಥ ಕುರಿತು ಕನ್ನಡದಲ್ಲಿ ಭಾಷಣ

ಮೈಸೂರು, ಮೇ 21– ಮೈಸೂರಿನ ಚಿತ್ರಭಾನು ರಸ್ತೆಯಲ್ಲಿರುವ ಸುರುಚಿ ರಂಗ ಮನೆಯಲ್ಲಿ ಮೇ 23 ರಂದು ಸಂಜೆ 6.30 ರಿಂದ 7.30 ರವರೆಗೆ ಅರ್ಥಾರ್ಥ ಎಂಬ ಅರ್ಥಶಾಸ್ತ್ರ ಹಾಗೂ ವಾಣಿಜ್ಯ ಕ್ಷೇತ್ರಗಳ ಬಗ್ಗೆ ನಿಯಮಿತವಾಗಿ ಕಾರ್ಯಕ್ರಮಗಳನ್ನು ನಡೆಸಲು ಉದ್ದೇಶಿಸಲಾಗಿದೆ. ಪ್ರೊ ಟಿ ಎಸ್ ವೇಣುಗೋಪಾಲ್ ಅವರು 'ಭಾರತದ ಆರ್ಥಿಕತೆಯ ಕಥನ – ಪ್ರೊ ಕಾರ್ತಿಕ್ ಮುರುಳಿಧರನ್ ಅವರ ನೋಟ' ಎಂಬ ವಿಷಯದ ಕುರಿತು ಕನ್ನಡದಲ್ಲಿ ಭಾಷಣ ಮಾಡಲಿದ್ದಾರೆ.

ವಿದ್ವಾನ್ ಶ್ರೀನಿಧಿ ಶಿರೂರುರಿಂದ ಕೊಳಲು ವಾದನ



ವಿದ್ವಾನ್ ಶ್ರೀನಿಧಿ ಶಿರೂರು ವಿದ್ವಾನ್ ರೂಪನಗುಡಿ ರತ್ನತೇಜ ವಿದ್ವಾನ್ ಪ್ರಣವ್ ಸುಬ್ರಮಣ್ಯ

ಮೈಸೂರು, ಮೇ 21– ನರಸಿಂಹರಾಜ ಮೊಹಲ್ಲಾ ಸಂಗೀತ ಸಭಾ ಚಾರಿಟಬಲ್ ಟ್ರಸ್ಟ್ ವತಿಯಿಂದ ಮೇ 23 ರಂದು ಸಂಜೆ 6.30ಕ್ಕೆ ಎನ್.ಆರ್. ಮೊಹಲ್ಲಾದ ಶಿವಾಜಿ ರಸ್ತೆಯಲ್ಲಿರುವ ಶ್ರೀ ಪ್ರಸನ್ನ ಮಹಾಗಣಪತಿ ದೇವಸ್ಥಾನದಲ್ಲಿ ವಿದ್ವಾನ್ ಶ್ರೀನಿಧಿ ಶಿರೂರು ಅವರಿಂದ ಕರ್ನಾಟಕ ಶಾಸ್ತ್ರೀಯ ಕೊಳಲು ವಾದನ ಕಾರ್ಯಕ್ರಮ ಏರ್ಪಡಿಸಲಾಗಿದೆ. ಪಕ್ಕವಾದ್ಯದಲ್ಲಿ ವಿದ್ವಾನ್ ರೂಪನಗುಡಿ ರತ್ನತೇಜ–ವಯೋಲಿನ್, ವಿದ್ವಾನ್ ಪ್ರಣವ್ ಸುಬ್ರಮಣ್ಯ–ಮೃದಂಗದಲ್ಲಿ ಸಹಕಾರ ನೀಡಲಿದ್ದಾರೆ.

ಸಬೀರಾ ಖಾನುಮ್ ನಿಧನ



ಮೈಸೂರು, ಮೇ 21– ನಗರದ ಬನ್ನಿಮಂಟಪ ಸಿ–ಲೇಔಟ್ ನಿವಾಸಿ ಅಸ್ಲಾಂ ಪಾಷಾ ಅವರ ಪತ್ನಿ ಸಬೀರಾ ಖಾನುಮ್ (62) ಅವರು ಗುರುವಾರ ಬೆಳಗ್ಗೆ ಹೃದಯಾಘಾತದಿಂದ ನಿಧನರಾದರು.

ಇವರು ಓರ್ವ ಪುತ್ರ, ನಾಲ್ವರು ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಬನ್ನಿಮಂಟಪ 2ನೇ ಹಂತದ ಟಿಪ್ಪು ಮಸೀದಿಯಲ್ಲಿ ಇಶಾ ಸಲಾತ್ ಪ್ರಾರ್ಥನೆ, ನಮಾಜ್–ಎ–ಜನಾಜಾ ನಂತರ ಟಿಪ್ಪು ವೃತ್ತದ ಬಳಿಯ ಮುಸ್ಲಿಂ ಸ್ಮಶಾನದಲ್ಲಿ ಅಂತ್ಯಕ್ರಿಯೆ ನಡೆಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಗೌತಮ ಹಾಸ್ಟೆಲ್‌ನ ಸಮಗ್ರ ನವೀಕರಣಕ್ಕೆ ಪ್ರಸ್ತಾವನೆ: ಸಮಾಜ ಕಲ್ಯಾಣ ಇಲಾಖೆ ಸಚಿವರಿಂದ ಅಸ್ತು

ನಾಲ್ಕೈದು ಕೋಟಿ ಅನುದಾನ ಕಲ್ಪಿಸಲು ಅಧಿಕಾರಿಗಳಿಗೆ ಸಚಿವರ ಸೂಚನೆ

ಮೈಸೂರು, ಮೇ 21(ಎಂಕೆ)– ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ 'ಗೌತಮ ಹಾಸ್ಟೆಲ್(ವಿದ್ಯಾರ್ಥಿ ನಿಲಯ)'ನ ಸಮಗ್ರ ನವೀಕರಣಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, 4 ರಿಂದ 5 ಕೋಟಿ ರೂ.ಅನುದಾನ ಕಲ್ಪಿಸುವಂತೆ ಪ್ರಸ್ತಾಪಿಸಲಾಗಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಕಳೆದ 53 ವರ್ಷಗಳಿಂದ ಆಶ್ರಯ ನೀಡಿರುವ ಗೌತಮ ವಿದ್ಯಾರ್ಥಿ ನಿಲಯಕ್ಕೆ ಪುನಶ್ಚೇತನ ನೀಡಲು ಕ್ರಮ ಕೈಗೊಳ್ಳಲಾಗುತ್ತಿದ್ದು, ಡಿಪಿಆರ್ ತಯಾರಿಕೆಗಾಗಿ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿದ್ದಾರೆ.

1973 ಜು.28 ರಂದು ಅಂದಿನ ಸಮಾಜ ಕಲ್ಯಾಣ ಇಲಾಖೆ ಸಚಿವ ಎಂ.ಮಲ್ಲಿ ಕಾರ್ಜುನ ಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ಮುಖ್ಯಮಂತ್ರಿಯಾಗಿದ್ದ ಡಿ.ದೇವರಾಜ ಅರಸು ಅವರು ಶಂಕುಸ್ಥಾಪನೆ ನೆರವೇರಿಸಿದ್ದರು. ಬಳಿಕ ಸುಸಜ್ಜಿತವಾಗಿ ನಿರ್ಮಾಣಗೊಂಡು ಅಂದಿನಿಂದ ಇವತ್ತಿನವರೆಗೂ ಪ್ರತೀ ವರ್ಷ 300–400 ವಿದ್ಯಾರ್ಥಿಗಳಂತೆ ಸಾವಿರಾರು ವಿದ್ಯಾರ್ಥಿಗಳಿಗೆ ಆಶ್ರಯ ನೀಡಿರುವ ಗೌತಮ ಹಾಸ್ಟೆಲ್‌ನ ಸಮಗ್ರ ನವೀಕರಣಕ್ಕೆ ಸರ್ಕಾರ ಮುಂದಾಗಿದೆ.

ವಿದ್ಯಾರ್ಥಿನಿಲಯದ ಕಟ್ಟಡ, ಶೌಚಾಲಯಗಳು, ಸ್ನಾನದ ಕೊಠಡಿಗಳು, ಯುಜಿಡಿ ಮತ್ತು ವಿದ್ಯುತ್ ವ್ಯವಸ್ಥೆ, ಅಡುಗೆ ಮನೆ ಮತ್ತು ಭೋಜನಾಲಯ, ಕೊಠಡಿಗಳ ನೆಲಹಾಸು, ಪ್ರತ್ಯೇಕವಾದ ವಾಚನಾಲಯ ಹಾಗೂ ಬಣ್ಣ ಬಳಿಯುವುದು ಸೇರಿದಂತೆ ಸಮಗ್ರ ನವೀಕರಣಕ್ಕೆ ಅನುದಾನ ಕೋರಿ ಮೈಸೂರು ವಿವಿ ಕುಲಸಚಿವರಾದ ಎಂ.ಕೆ. ಸವಿತಾ, ಸಮಾಜ ಕಲ್ಯಾಣ ಇಲಾಖೆ ಸಚಿವರು ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆದು ಮನವಿ ಮಾಡಿದ್ದರು.

ಮನವಿಗೆ ಸ್ಪಂದಿಸಿರುವ ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಸ್ಥಳ ಪರಿಶೀಲಿಸಿ, ಅಂದಾಜು ವೆಚ್ಚದ ಪಟ್ಟಿಯನ್ನು ಸಲ್ಲಿಸುವಂತೆ ಸೂಚಿಸಿದ್ದರ ಮೇರೆಗೆ ಈಗಾಗಲೇ ಸ್ಥಳ ಪರಿಶೀಲನೆಯನ್ನು ನಡೆಸಲಾಗಿದೆ. ಅಲ್ಲದೆ 4 ರಿಂದ 5 ಕೋಟಿ ರೂ.ಅನುದಾನ ಬಿಡುಗಡೆಗೂ ಸೂಚಿಸಿದ್ದಾರೆ ಎಂದು ಮೈಸೂರು ವಿವಿ ವಿದ್ಯಾರ್ಥಿ ಕ್ಷೇಮಪಾಲನಾಧಿಕಾರಿ ಪ್ರೊ.ಗುರುಸಿದ್ದಯ್ಯ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ನವೀಕರಣ ಅಗತ್ಯ: ಗೌತಮ ಹಾಸ್ಟೆಲ್‌ನಲ್ಲಿ ಆಶ್ರಯ ಪಡೆದು ವಿದ್ಯಾಭ್ಯಾಸ ಮಾಡಿರುವ ಸಾವಿರಾರು ಮಂದಿ ದೇಶ ಮತ್ತು ರಾಜ್ಯ ಮಟ್ಟದಲ್ಲಿ ಸಿವಿಲ್ ಸರ್ವಿಸ್ ಅಧಿಕಾರಿಗಳು, ಅಧ್ಯಾಪಕರು, ಪ್ರಾಧ್ಯಾಪಕರು, ಸಾಹಿತಿಗಳು, ಪೊಲೀಸ್ ಅಧಿಕಾರಿಗಳು, ಸಾಮಾಜಿಕ ಚಿಂತಕರು ಹಾಗೂ ರಾಜಕಾರಣಿಗಳು ಆಗಿದ್ದಾರೆ. ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಉತ್ತಮ ವಾತಾವರಣವನ್ನೊಳಗೊಂಡ ಗೌತಮ ಹಾಸ್ಟೆಲ್ ನವೀಕರಣ ಅಗತ್ಯವಾಗಿದೆ ಎಂದು ಮೈಸೂರು ವಿವಿ ಕುಲಸಚಿವರಾದ ಎಂ.ಕೆ. ಸವಿತಾ ಮಾಹಿತಿ ನೀಡಿದ್ದಾರೆ.



ಮೈಸೂರು ವಿಶ್ವವಿದ್ಯಾನಿಲಯದ ಗೌತಮ ವಿದ್ಯಾರ್ಥಿನಿಲಯದ ಸಮಗ್ರ ನವೀಕರಣ ಹಿನ್ನಲೆಯಲ್ಲಿ ಇತ್ತೀಚೆಗಷ್ಟೇ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿದರು. ಮೈಸೂರು ವಿವಿ ಕುಲಸಚಿವೆ ಎಂ.ಕೆ.ಸವಿತಾ, ಡೀನ್ ಗುರುಸಿದ್ದಯ್ಯ, ವಿದ್ಯಾರ್ಥಿ ನಿಲಯದ ಶಿಕ್ಷಕ ಸಲಹೆಗಾರ ಡಾ.ಸಿದ್ದರಾಜು ಉಪಸ್ಥಿತರಿದ್ದರು.

> ಗೌತಮ ಹಾಸ್ಟೆಲ್‌ನ ಸಮಗ್ರ ನವೀಕರಣಕ್ಕೆ ಆರ್ಥಿಕ ಸಹಾಯಕ್ಕಾಗಿ ವಿವರವಾದ ಯೋಜನಾ ವರದಿಯನ್ನು ಜಿಲ್ಲಾ ಉಸ್ತುವಾರಿ ಸಚಿವರಿಗೆ ಸಲ್ಲಿಸಲಾಗಿತ್ತು. ಅವರು ಸಕಾರಾತ್ಮಕವಾಗಿ ಸ್ಪಂದಿಸಿ, ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಅದರಂತೆ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು 4 ಕೋಟಿ ಅಂದಾಜು ಪಟ್ಟಿ ಸಿದ್ಧಪಡಿಸಿ ಸಲ್ಲಿಸಿದ್ದು, ಎಸ್‌ಸಿಎಸ್‌ಪಿ/ಟಿಎಸ್‌ಪಿ ಅನುದಾನದಲ್ಲಿ ಹಾಸ್ಟೆಲ್ ನವೀಕರಣ ಕಾಮಗಾರಿ ಕೈಗೊಳ್ಳಲು ಕೋರಲಾಗಿದೆ.
>
> – ಎಂ.ಕೆ.ಸವಿತಾ, ಕುಲಸಚಿವರು, ಮೈಸೂರು ವಿವಿ

ನಾಳೆ ಬಸವ ಜಯಂತಿ, ಬಸವರತ್ನ ಪ್ರಶಸ್ತಿ ಪ್ರದಾನ



ಪ್ರೇಮ್‌ಕುಮಾರ್ ಡಿ.ವಿ.ಪರಶಿವಮೂರ್ತಿ ಸುಂದರ್‌ರಾಜ್ ಸಚ್ಚಿದಾನಂದಮೂರ್ತಿ ಪ್ರೊ.ಮುರಳಿ ಶ್ರೀಮತಿ ಸುಧಾ

ಮೈಸೂರು, ಮೇ 21– ಮೈಸೂರು ಶರಣ ಮಂಡಲಿ ಮತ್ತು ಶ್ರೀ ನಟರಾಜ ಪ್ರತಿಷ್ಠಾನದ ಸಂಯುಕ್ತಾಶ್ರಯದಲ್ಲಿ ಮೇ 23 ರಂದು ಬೆಳಗ್ಗೆ 10.30 ಗಂಟೆಗೆ ಶ್ರೀ ಹೊಸಮಠದ ಶ್ರೀ ನಟರಾಜ ಸಭಾ ಭವನದಲ್ಲಿ ಬಸವ ಜಯಂತಿ ಹಾಗೂ ಬಸವರತ್ನ ಪ್ರಶಸ್ತಿ ಪ್ರದಾನ ಸಮಾರಂಭ ಏರ್ಪಡಿಸಲಾಗಿದೆ.

ಕಾರ್ಯಕ್ರಮದ ಸಾನ್ನಿಧ್ಯವನ್ನು ವಾಟಾಳು ಮಠದ ಸೂರ್ಯಸಿಂಹಾಸನ ಮಠಾಧ್ಯಕ್ಷರಾದ ಡಾ. ಶ್ರೀ ಸಿದ್ಧಲಿಂಗಶಿವಾಚಾರ್ಯ ಸ್ವಾಮೀಜಿ ವಹಿಸುವರು. ಕಾರ್ಯಕ್ರಮವನ್ನು ಆಹಾರ ನಾಗರಿಕ ಸರಬರಾಜು ಸಚಿವ ಕೆ.ಹೆಚ್. ಮುನಿಯಪ್ಪ ಉದ್ಘಾಟಿಸಲಿದ್ದು, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಹೆಳವರಹುಂಡಿ ಸಿದ್ದಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಡಾ. ಡಿ. ತಿಮ್ಮಯ್ಯ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮತ್ತು ಶ್ರೀ ನಟರಾಜ ಪ್ರತಿಷ್ಠಾನದ ವಿಶೇಷಾಧಿಕಾರಿ ಪ್ರೊ. ಎಸ್. ಶಿವರಾಜಪ್ಪ ಭಾಗವಹಿಸಲಿದ್ದಾರೆ.

ಇದೇ ವೇಳೆ ಸಮಾಜ ಸೇವಕ ಹೆಚ್.ಎನ್.ಪ್ರೇಮ್‌ಕುಮಾರ್, ಪೊಲೀಸ್ ಆಯುಕ್ತ (ಅಪರಾಧ) ಕೆ.ಎಸ್. ಸುಂದರ್‌ರಾಜ್, ಸಮಾಜ ಸೇವಕರಾದ ಶ್ರೀಮತಿ ಸುಧಾ ಮೃತ್ಯುಂಜಯಪ್ಪ, ಹಂಪಿ ಕನ್ನಡ ವಿವಿ ಕುಲಪತಿ ಡಿ.ವಿ.ಪರಶಿವಮೂರ್ತಿ, ಡಿಎವಿ ಶಾಲೆಯ ಎನ್. ಸರ್ದಾರ್ ಸಚ್ಚಿದಾನಂದ ಮೂರ್ತಿ, ಎಂಐಟಿ ವಿದ್ಯಾಸಂಸ್ಥೆಯ ಪ್ರೊ. ಮುರಳಿ ಅವರಿಗೆ ಬಸವ ರತ್ನ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಕೆರೆಯಲ್ಲಿ ನೀರುಪಾಲಾಗಿದ್ದ ಯುವಕನ ಶವ ಪತ್ತೆ

ಮೈಸೂರು, ಮೇ21(ಬಿಎಲ್ ಯು) ಮೈಸೂರು ತಾಲೂಕು ಕೆ.ಹೆಮ್ಮನಹಳ್ಳಿಯ ಚಿಕ್ಕೆರೆಯಲ್ಲಿ ಮೀನು ಹಿಡಿಯಲು ಹೋಗಿ ನೀರು ಪಾಲಾಗಿದ್ದ ಅಮಿತ್ ಕುಮಾರ್ ಶವ ಕೊನೆಗೂ ಪತ್ತೆಯಾಗಿದೆ.

ಇಂದು ಬೆಳಿಗ್ಗೆ ಅಗ್ನಿಶಾಮಕ ದಳದ ಸಿಬ್ಬಂದಿ ಹಾಗೂ ನುರಿತ ಈಜು ತಜ್ಞರು ಕೆರೆಯಿಂದ ಅಮಿತ್ ಕುಮಾರ್ ಶವ ಮೇಲೆತ್ತಿದರು. ಕೆ.ಆರ್.ಆಸ್ಪತ್ರೆಯ ಶವಾಗಾರದಲ್ಲಿ ಶವ ಇಡಲಾಗಿದೆ. ಮೂಲತಃ ಬಿಹಾರ ಮೂಲದ ಈತ ಇಲ್ಲಿನ ಪೌಲ್ಟ್ರಿ ಫಾರಂನಲ್ಲಿ ಕೆಲಸ ಮಾಡುತ್ತಿದ್ದನು. ಅಮಿತ್ ಕುಮಾರ್ ಮೃತಪಟ್ಟಿರುವ ಬಗ್ಗೆ ಆತನ ಕುಟುಂಬಸ್ಥರಿಗೆ ಪೊಲೀಸರು ವಿಷಯ ತಿಳಿಸಿದ್ದು, ಅವರು ಬಿಹಾರದಿಂದ ಹೊರಟಿದ್ದಾರೆ. ಅವನ ಕುಟುಂಬಸ್ಥರು ಮೈಸೂರಿಗೆ ಬಂದ ನಂತರ ಮರಣೋತ್ತರ ಪರೀಕ್ಷೆ ಬಳಿಕ ಶವವನ್ನು ಕುಟುಂಬಸ್ಥರಿಗೆ ಹಸ್ತಾಂತರಿಸಲಿದ್ದಾರೆ.

ಸುದರ್ಶನ ಕ್ರಿಯೆ ಶಿಬಿರ

ಮೈಸೂರು, ಮೇ 21– ಮೈಸೂರಿನ ಆರ್ಟ್ ಆಫ್ ಲಿವಿಂಗ್ ವತಿಯಿಂದ ಮೇ 25 ರಿಂದ 29 ರವರೆಗೆ ಆರೋಗ್ಯಕರ ಜೀವನ, ಧ್ಯಾನ, ಯೋಗ, ಪ್ರಾಣಾಯಾಮ, ಸುದರ್ಶನ ಕ್ರಿಯೆಯನ್ನು ಕಲಿಸುವ ಶಿಬಿರವನ್ನು ಲಲಿತಾದ್ರಿಪುರ ರಸ್ತೆಯಲ್ಲಿರುವ ಆರ್ಟ್ ಆಫ್ ಲಿವಿಂಗ್ ಆಶ್ರಮದಲ್ಲಿ ಹಮ್ಮಿಕೊಳ್ಳಲಾಗಿದೆ. ಶಿಬಿರವು ಬೆಳಿಗ್ಗೆ 6 ರಿಂದ 8–30 ಹಾಗೂ ಸಂಜೆ 6 ರಿಂದ 8–30 ವರೆಗೆ ನಡೆಯಲಿದೆ. ಹೆಚ್ಚಿನ ಮಾಹಿತಿಗೆ 9480476825, 9483589825 ಸಂಪರ್ಕಿಸಬಹುದು

ಥೈರಾಯ್ಡ್ ನಿಯಂತ್ರಣಕ್ಕೆ ಉತ್ತಮ ಜೀವನ ಶೈಲಿ ಆಹಾರ ಕ್ರಮ ಬಹಳ ಮುಖ್ಯ

ಮೈಸೂರು, ಮೇ 21– ಥೈರಾಯ್ಡ್ ನಿಯಂತ್ರಣಕ್ಕೆ ಉತ್ತಮ ಜೀವನ ಶೈಲಿ ಆಹಾರ ಕ್ರಮ ಬಹಳ ಮುಖ್ಯ ಎಂದು ಜೆಎಸ್‌ಎಸ್ ಆಸ್ಪತ್ರೆಯ ನಿರ್ದೇಶಕರಾದ ಡಾ.ಸಿ.ಪಿ.ಮಧು ಹೇಳಿದರು.

ಜೆಎಸ್‌ಎಸ್ ಆಸ್ಪತ್ರೆ ಮತ್ತು ಎಂಡೋಕ್ರೈನಾಲಜಿ ವಿಭಾಗ ಆಯೋಜಿಸಿದ್ದ ವಿಶ್ವ ಥೈರಾಯ್ಡ್ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಥೈರಾಯ್ಡ್ ಗ್ರಂಥಿಯ ಮಹತ್ವ, ಅದರ ಕಾರ್ಯಗಳು ಮತ್ತು ಸಂಬಂಧಿತ ಕಾಯಿಲೆಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಅಗತ್ಯ. ಇದು ಇತ್ತೀಚೆಗೆ ಸಾಮಾನ್ಯ ಕಾಯಿಲೆಯಾಗಿದ್ದು, ಇದನ್ನು ರಕ್ತ ಪರೀಕ್ಷೆಗಳ ಮೂಲಕ ಸುಲಭವಾಗಿ ಪತ್ತೆಹಚ್ಚಬಹುದು. ಸೂಕ್ತ ವೈದ್ಯಕೀಯ ಚಿಕಿತ್ಸೆ, ಔಷಧಿಗಳು, ಆಹಾರ ಕ್ರಮ ಹಾಗೂ ಶಿಸ್ತಿನ ಜೀವನ ಶೈಲಿಯ ಮೂಲಕ ಇದನ್ನು ಸಂಪೂರ್ಣವಾಗಿ ನಿಯಂತ್ರಣದಲ್ಲಿಡಬಹುದು ಎಂದರು.

ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲ ಡಾ.ಡಿ.ನಾರಾಯಣಪ್ಪ ಮಾತನಾಡಿ, ಥೈರಾಯ್ಡ್ ಜಾಗತಿಕ ಮತ್ತು ಸಾಮಾನ್ಯ ಕಾಯಿಲೆಯಾಗಿದ್ದು ಇದರ ಬಗ್ಗೆ ಜಾಗೃತಿ ಬಹಳ ಮುಖ್ಯ. ಥೈರಾಯ್ಡ್ ನಮ್ಮ ಕುತ್ತಿಗೆಯ ಮುಂಭಾಗದಲ್ಲಿರುವ ಚಿಟ್ಟೆಯಾಕಾರದ ಸಣ್ಣ ಗ್ರಂಥಿಯಾಗಿದೆ, ಇದು ದೇಹದ ಅನೇಕ ಪ್ರಮುಖ ಕಾರ್ಯಗಳನ್ನು ನಿಯಂತ್ರಿಸುವ ಹಾರ್ಮೋನುಗಳನ್ನು ಉತ್ಪಾದಿಸುತ್ತದೆ.

ಈ ಗ್ರಂಥಿಯ ಕಾರ್ಯವೈಖರಿಯಲ್ಲಿ ಏರುಪೇರಾದಾಗ ಅನೇಕ ದೈಹಿಕ ಮತ್ತು ಮಾನಸಿಕ ಸಮಸ್ಯೆಗಳು ಉಂಟಾಗುತ್ತವೆ. ನವಜಾತು ಶಿಶುವಿನಿಂದ ಹಿಡಿದು ವಯಸ್ಕರಲ್ಲೂ ಈ ಕಾಯಿಲೆ ಕಂಡುಬರುತ್ತಿದ್ದು, ಗರ್ಭಾವಸ್ಥೆಯಲ್ಲಿ ಥೈರಾಯ್ಡ್ ಹಾರ್ಮೋನುಗಳ ಬೇಡಿಕೆ ಶೇಕಡಾ 50 ರಷ್ಟು ಹೆಚ್ಚಾಗುತ್ತದೆ. ಇದು ತಾಯಿಯ ಚಯಾಪಚಯ ಕ್ರಿಯೆ ಮತ್ತು ಮಗುವಿನ ಮಿದುಳು ಹಾಗೂ ನರಮಂಡಲದ ಬೆಳವಣಿಗೆಗೆ ಅತ್ಯಗತ್ಯವಾಗಿರುತ್ತದೆ. ಆದ್ದರಿಂದ ವೈದ್ಯರ ಸಲಹೆಯ ಮೇರೆಗೆ ಸರಿಯಾದ ಚಿಕಿತ್ಸೆ ಮತ್ತು ಔಷಧಿಗಳನ್ನು ತೆಗೆದುಕೊಳ್ಳುವುದರಿಂದ ತಾಯಿ ಮತ್ತು ಮಗು ಇಬ್ಬರೂ ಸುರಕ್ಷಿತವಾಗಿರಬಹುದು ಎಂದು ಸಲಹೆ ನೀಡಿದರು.

ಬೆಂಗಳೂರಿನ ಶ್ರೀ ಶಂಕರ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ಸರ್ಜಿಕಲ್ ಆಂಕೋಲಜಿಸ್ಟ್ ಎಂಡೋಕ್ರೈನ್ ಮತ್ತು ಬ್ರೆಸ್ಟ್ ಸರ್ಜನ್ ಡಾ. ಸಸಿಮೌಲಿ ವೇಲಾಡಿ ಅವರು ಇತ್ತೀಚಿನ ಶಸ್ತ್ರಚಿಕಿತ್ಸಾ ಪ್ರಗತಿಗಳು ಥೈರಾಯ್ಡ್ ಗಂಟುಗಳು ಮತ್ತು ಗೆಡ್ಡೆಗಳನ್ನು ನೋವು ರಹಿತ ಮತ್ತು ಗಾಯಗಳಿಲ್ಲದೆ ತೆಗೆದುಹಾಕಲು ಇರುವ ಅತ್ಯಾಧುನಿಕ ತಂತ್ರಜ್ಞಾನ ಮತ್ತು ವೈದ್ಯಕೀಯ ಅವಕಾಶಗಳ ಬಗ್ಗೆ ಹೆಚ್ಚಿನ ಮಾಹಿತಿಯನ್ನು ನೀಡಿದರು.

ಈ ವೇಳೆ ಕಾರ್ಯಕ್ರಮದಲ್ಲಿ ವೈದ್ಯಕೀಯ ವಿಭಾಗದ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರಾದ ಡಾ.ಎಂ.ಸುರೇಶ್ ಬಾಬು, ಪ್ರಾಧ್ಯಾಪಕರಾದ ಡಾ. ವೈ.ಎಸ್.ರವಿ ಕುಮಾರ್, ಎಂಡೋಕ್ರೈನಾಲಜಿ ವಿಭಾಗದ ವೈದ್ಯರುಗಳಾದ ಡಾ.ಲಕ್ಷ್ಮೀ ನಾಗೇಂದ್ರ, ಡಾ. ಅಜಯ್ ಹನುಮಂತು, ಡಾ. ಸಂಜನಾ, ಡಾ.ರಘು, ಮತ್ತು ಇನ್ನಿತರರು ಹಾಜರಿದ್ದರು.



ವಿಶ್ವ ಥೈರಾಯ್ಡ್ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿರುವ ಗಣ್ಯರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

22.5.2026 ಶುಕ್ರವಾರ, ಮಳೆ ನಕ್ಷತ್ರ: ಕೃತ್ತಿಕ 11.05.2026ರಿಂದ 24.05.2026ರವರೆಗೆ ಪರಾಭವ ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ (ಅಧಿಕ) ಮಾಸ, ಶುಕ್ಲ ಪಕ್ಷ, ತಿಥಿ: ಷಷ್ಠಿ, ನಕ್ಷತ್ರ: ಆಶ್ಲೇಷ, ರಾಹುಕಾಲ: ಬೆಳಗ್ಗೆ 10.30ರಿಂದ 12ರವರೆಗೆ

- **ಸುಯೋಗ್ ಆಸ್ಪತ್ರೆ :** ಉಚಿತ ಸಕ್ಕರೆ ಕಾಯಿಲೆ ತಪಾಸಣಾ ಶಿಬಿರ, ಸ್ಥಳ: ಸುಯೋಗ್ ಆಸ್ಪತ್ರೆ, ರಾಮಕೃಷ್ಣನಗರ, ಬೆಳಗ್ಗೆ 9 ರಿಂದ.
- **ರಾಮ್‌ಸನ್ಸ್ ಕ್ರೀಡಾ ಕೌಶಲ್ಯ:** ಪಾರಂಪರಿಕ ಹಾಸು ಆಟಗಳ 11ನೇ ದ್ವೈವಾರ್ಷಿಕ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್, ಬೆಳಗ್ಗೆ 10 ರಿಂದ.
- **ಕಲಾತಪ ಅಕಾಡೆಮಿ ಆಫ್ ಪರ್ಫಾರ್ಮಿಂಗ್ ಆರ್ಟ್ಸ್ :** ಒಡಿಸ್ಸಿ ನೃತ್ಯ ಕಾರ್ಯಾಗಾರ, ಸ್ಥಳ: ಜಗನ್ನಾಥ ಸೆಂಟರ್ ಫಾರ್ ಆರ್ಟ್ ಅಂಡ್ ಕಲ್ಚರ್ ಸಭಾಂಗಣ, ವಿಜಯನಗರ, ಬೆಳಗ್ಗೆ 10ಕ್ಕೆ.
- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ** : ಬೆಳಗ್ಗೆ 6.30 ರಿಂದ ದೇಹ–ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಬೆಳಗ್ಗೆ 9 ರಿಂದ ಮಧುಮೇಹದ ಗಾಯಗಳು, ವೆರಿಕೋಸ್ ವೇನ್ಸ್, ಆರೋಗ್ಯಾಯುಷ್ಯ ಆರೋಗ್ಯವರ್ಧಕ ಶಿಬಿರ, ಮೂತ್ರಪಿಂಡ (ಕಿಡ್ನಿ) ಕಾಯಿಲೆಗೆ ಚಿಕಿತ್ಸಾ ಶಿಬಿರ, ಬೆಳಗ್ಗೆ 9.30 ರಿಂದ ಕಣ್ಣಿನ ದೃಷ್ಟಿ ಸಮಸ್ಯೆಗಳಿಗೆ ವಿಶೇಷ ಬೇಸಿಗೆ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ.
- **ಶಾರದಾ ವಿಲಾಸ ಕಾನೂನು ಕಾಲೇಜು :** ಹಿರಿಯ ವಿದ್ಯಾರ್ಥಿಗಳ ಸನ್ಮಾನ ಸಮಾರಂಭ, ಸನ್ಮಾನಿತರು : ನ್ಯಾಯಾಧೀಶ ಇ.ಎಸ್. ಇಂದ್ರೇಶ್, ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಟಿ.ಜಿ. ಶಿವಶಂಕರೇಗೌಡ, ವಕೀಲ ಹೆಚ್.ಎನ್. ವೆಂಕಟೇಶ್, ಅಧ್ಯಕ್ಷತೆ : ಶಾರದಾ ವಿಲಾಸ ಶಿಕ್ಷಣ ಸಂಸ್ಥೆ ಹಿರಿಯ ಆಡಳಿತ ಮಂಡಳಿ ಸದಸ್ಯ ಎಸ್.ಎಲ್. ರಾಮಚಂದ್ರ, ಗೌರವ ಕಾರ್ಯದರ್ಶಿ ಆರ್. ದಿನೇಶ್, ಮೈಸೂರು ವಕೀಲರ ಸಂಘದ ಅಧ್ಯಕ್ಷ ಎಸ್. ಲೋಕೇಶ್, ಸ್ಥಳ: ಶಾರದಾ ವಿಲಾಸ ಶತಮಾನೋತ್ಸವ ಭವನ, ಬೆಳಗ್ಗೆ 11ಕ್ಕೆ.
- **ಅನಿಕೇತನ ಸೇವಾ ಟ್ರಸ್ಟ್, ಕೆ.ವಿ. ಮಲ್ಲೇಶ್ ಸ್ನೇಹ ಬಳಗ :** ನಗರ ಪಾಲಿಕೆ ಮಾಜಿ ಸದಸ್ಯ ಕೆ.ವಿ. ಮಲ್ಲೇಶ್ ಜನ್ಮ ದಿನದ ಅಂಗವಾಗಿ ಸುಗಮ ಸಂಗೀತ ಗಾಯಕಿ ಎಂ.ಡಿ. ಪಲ್ಲವಿ ಮತ್ತು ಸಂಗಡಿಗರಿಂದ ಸಂಗೀತ ಕಾರ್ಯಕ್ರಮ, ಸ್ಥಳ: ರವಿತೇಜ ಕನ್ವೆನ್ಷನ್ ಹಾಲ್, ಶಿವ ದೇವಾಲಯದ ಹತ್ತಿರ, ಅರವಿಂದನಗರ, ಸಂಜೆ 5ಕ್ಕೆ.
- **ಶ್ರೀ ಉತ್ತರಾದಿ ಮಠ, ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನ :** ಸಾಂಸ್ಕೃತಿಕ ಕಾರ್ಯಕ್ರಮಗಳು, ವಿದುಷಿ ಶ್ರೀಮತಿ ಸ್ಮಿತಾ ಕಿರಣ್ ಅವರಿಂದ ವೇಣುವಾದನ, ಸ್ಥಳ: ಶ್ರೀ ಕಾಶಿ ವಿಶ್ವೇಶ್ವರ ಸನ್ನಿಧಿ ಆವರಣ, ಅಗ್ರಹಾರ, ಸಂಜೆ 5.30ಕ್ಕೆ
- **ಸಂಚಲನ ಮೈಸೂರು, ಬೆಂಗಳೂರಿನ ಉದ್ಭವ ಕಲಾವಿದರು, ಅರಳಿ ಸೇವಾ ಟ್ರಸ್ಟ್, ತಸ್ಮಿ ಮೈಸೂರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ :** ಗ್ರೀಷ್ಮ ರಂಗೋತ್ಸವ, ಉಪಸ್ಥಿತರು : ಶಾಸಕ ಕೆ. ಹರೀಶ್‌ಗೌಡ, ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಡಾ. ಕೆ.ಬಿ. ಲಿಂಗರಾಜು, ಕಾವಾ ಆಡಳಿತಾಧಿಕಾರಿ ನಿರ್ಮಲಾ ಮಠಪತಿ, ಪತ್ರಕರ್ತೆ ರಶ್ಮಿಕೋಟಿ, ಉದ್ಭವ ಕಲಾವಿದರ ತಂಡದ ಖಜಾಂಚಿ ಶಾಂತಾ, ಹಾಸನದ ನಾಟ್ಯ ವೈಭವ ಸೆಂಟ್ರಲ್ ಕಾಲೇಜು ವಿದ್ಯಾರ್ಥಿಗಳಿಂದ ಜಿ. ಪ್ರಕಾಶ್ ಅವರ ನನ್ನಿರಿ ಕಾದಂಬರಿ ಆಧಾರಿತ ನನ್ನಿರಿ ನಾಟಕ ಪ್ರದರ್ಶನ, ಸ್ಥಳ: ಕಿರು ರಂಗಮಂದಿರ, ಕಲಾಮಂದಿರ ಆವರಣ, ಸಂಜೆ 6.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಗೀತಾರಾಧನ, 6.30 ಚಿಂತನ, 6.35 ಮತ್ತುಸಂಜೆ 6.10 ಜ್ಞಾನ ಜ್ಯೋತಿ ಜೀವನ ಪಾಠ ಕಲಿಸಿದ ಸಾಧಕಿಯರ ಪರಿಚಯ ಮಾಲಿಕೆ, ಪ್ರಸ್ತುತಿ :ಬಿ.ಕೆ.ಮೀನಾಕ್ಷಿ, 6.40 ಪದಸಂಸ್ಕೃತಿ–ಕನ್ನಡ ಪದಗಳ ಬಳಕೆ ಕಲಿಕೆಯ ವಿಶಿಷ್ಟ ಬಾನುಲಿ ಸರಣಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು 8.30 ನಾ ಕಸ್ತೂರಿ ಅವರ ಪಾತಾಳದಲ್ಲಿ ಪಾಪಚ್ಚಿ–ಮಕ್ಕಳ ಸಾಹಿತ್ಯ ಕೃತಿಯ ಬಾನುಲಿ ಓದು, ಪ್ರಸ್ತುತಿ ಉಮೇಶ್ ಎಸ್. ಎಸ್., 8.35 ಕನ್ನಡ ಚಿತ್ರಗೀತೆಗಳು, 9.00 ನಮ್ಮ ಆರೋಗ್ಯ, 9.30 ಗಾಂಧೀ ಸ್ಮೃತಿ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ 'ಸ್ವರ ಸಂಚಾರ' ಸಂಗೀತ ಲೋಕದಲ್ಲೊಂದು ವಿಹಾರ, ಪ್ರಸ್ತುತಿ: ಅಹಿರಿ ಪುಟ್ಟಿ

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಕಾದಂಬರಿ ವಿಹಾರ–ಕೃಪಾಕರ ಸೇನಾನಿ ಅವರ ಕೆನ್ನಾಯಿಯ ಜಾಡಿನಲಿ ಕೃತಿಯ ಬಾನುಲಿ ಓದು. ಪ್ರಸ್ತುತಿ: ಜಿ ಶಾಂತಕುಮಾರ್, 1.00 ಪ್ರಗತಿ ಪಥ– ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿದೀಪ ಪ್ರಾಯೋಜಿತ ಕಾರ್ಯಕ್ರಮ. ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ : ಜಿ.ಕೆ. ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, 4.00 ಮಹಿಳಾರಂಗ –ಕವನ ಮಾಲೆ ಮಹಿಳೆಯರ ಸ್ವರಚಿತ ಕವನ ವಾಚನ ಕಾರ್ಯಕ್ರಮ, ಪ್ರಸ್ತುತಿ–ದಿಗ್ವಿಜಯ್ .ಬಿ., 4.30 ವೃತ್ತಿ ಮಾರ್ಗದರ್ಶನ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ –ತೊಗರಿ ಬೇಸಾಯ ಈ ಕುರಿತು ಮಂಡ್ಯದ ವಿ.ಸಿ. ಫಾರಂ, ವಲಯ ಕೃಷಿ ಸಂಶೋಧನಾ ಕೇಂದ್ರದ ಪ್ರಾಧ್ಯಾಪಕರಾದ ಡಾ. ಪಿ. ಮಹದೇವು ಅವರೊಂದಿಗೆ ಸಂದರ್ಶನ, ಸಂದರ್ಶಕರು– ಎನ್. ಕೇಶವಮೂರ್ತಿ, 7.45 ಕನ್ನಡದಲ್ಲಿ ಭಾಷಣ, 8.00 ರಸಮಂಜರಿ, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ, 10.00 ತತ್ವ ಸಂಚಾರ–ಜನಪದ ಗಾಯಕರ ತತ್ವಗಾಯನ, 10.30 ಸವಿನೆನಪು




ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 22 ಶುಕ್ರವಾರ 2026



ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ– ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 47 | ಸಂಚಿಕೆ: 36 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ತಹಸೀಲ್ದಾರ್ ನಿಷೇಧಾಜ್ಞೆ ಆದೇಶಕ್ಕೆ ಕಿಮ್ಮತ್ತಿಲ್ಲ...!

ಬಲಮುರಿಯಲ್ಲಿ ಮತ್ತೆ ಇಬ್ಬರು ಯುವಕರ ಬಲಿ

- ದುರಂತ ತಡೆಗಟ್ಟುವಲ್ಲಿ ಮಂಡ್ಯ ಜಿಲ್ಲಾಡಳಿತ, ಶ್ರೀರಂಗಪಟ್ಟಣ ತಾಲೂಕು ಆಡಳಿತದ ವೈಫಲ್ಯ: ಆಕ್ರೋಶ
- ಪೊಲೀಸರ ನಿರ್ಲಕ್ಷ್ಯಕ್ಕೆ ಮುಂದುವರಿದ ಮಾರಣಹೋಮ
- ಪ್ರವಾಸಿಗರ ನಿಯಂತ್ರಣಕ್ಕೆ ಸಾರ್ವಜನಿಕರ ಒತ್ತಾಯ

ಶ್ರೀರಂಗಪಟ್ಟಣ, ಮೇ 21(ವಿನಯ್ ಕಾರೇಕುರ)– **ಈ ಸರ್ಕಾರದಲ್ಲಿ ಅಧಿಕಾರಿಗಳೇ ಕಾನೂನು ಧಿಕ್ಕರಿಸುವ, ನಿಯಾಮಾವಳಿ ಗಾಳಿಗೆ ತೂರುವ ಆದೇಶಗಳ ಕೇವಲವಾಗಿ ಪರಿಗಣಿಸುವ ಪರಿಪಾಠ ವ್ಯಾಪಕವಾಗಿ ಮುಂದುವರೆದಿದೆ. ಇದರಿಂದ ಅಮಾಯಕರು, ಎಳೆಯ ಜೀವಗಳು ಬಲಿಯಾಗುತ್ತಿವೆ. ಇದಕ್ಕೆ ಹೊಣೆ ಯಾರು.**


ರವಿಚಂದ್ರ


ಮೋಹನ್ ಕುಮಾರ್

ನಿಷೇಧಾಜ್ಞೆ ಜಾರಿಯಲ್ಲಿದ್ದರೂ, ಅದನ್ನು ಕಟ್ಟುನಿಟ್ಟಾಗಿ ಪಾಲನೇ ಮಾಡದೇ ಇರುವುದರಿಂದ ತಾಲೂಕಿನ ಬೆಳಗೊಳ ಗ್ರಾಮ ಸಮೀಪದ ಪ್ರಸಿದ್ಧ ಪ್ರವಾಸಿ ತಾಣ ಬಲಮುರಿಯಲ್ಲಿ ಗುರುವಾರ ಸಂಜೆ ಮತ್ತಿಬ್ಬರು ಯುವಕರು ಕಾವೇರಿ ನದಿಯಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ.

ತಾಲೂಕಿನ ಬೆಳಗೊಳ ಕೈಗಾರಿಕಾ ಪ್ರದೇಶದಲ್ಲಿರುವ ಕೇನ್ಸ್ ಟೆಕ್ನಾಲಜಿ ಸಂಸ್ಥೆ ಉದ್ಯೋಗಿ, ಚಾಮರಾಜನಗರ ಜಿಲ್ಲೆಯ ಸಂತೇಮರಳಿ ಸಮೀಪದ ಕಮರವಾಡಿ ಗ್ರಾಮದ ಮೋಹನ್ ಕುಮಾರ್ (21) ಹಾಗೂ ಮೈಸೂರು ತಾಲೂಕಿನ ಜಯಪುರ ಹೋಬಳಿಯ ಕೆಲ್ಲಹಳ್ಳಿ ಗ್ರಾಮದ ರವಿಚಂದ್ರ (21) ಜಲಸಮಾಧಿಯಾದವರು.

ಐಟಿಐ ಶಿಕ್ಷಣ ಮುಗಿಸಿ ಖಾಸಗಿ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿದ್ದ ಇವರಿಬ್ಬರೂ ಗುರುವಾರ ತಮ್ಮ ಸ್ನೇಹಿತ ವಿಕಾಸ್ ಜೊತೆಗೂಡಿ ಬಲಮುರಿ ಪ್ರವಾಸಿ ತಾಣಕ್ಕೆ ತೆರಳಿದ್ದರು. ಇಲ್ಲಿನ ಶಂಭು ಮೋಳೆ ಭಾಗದಲ್ಲಿ ಈಜಲು ಇಳಿದಿದ್ದಾರೆ ಆಗ ಇಬ್ಬರೂ ಕಾವೇರಿ ನದಿಯಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ. ಈ ವೇಳೆ ಜೊತೆಯಲ್ಲಿದ್ದ ವಿಕಾಸ್ ಸ್ಥಳೀಯ ರೈತರ ನೆರವಿನಿಂದ ಕೆ.ಆರ್.ಸಾಗರ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದು, ತಕ್ಷಣ ಎಸ್‌ಐ ಹಾಗೂ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ ಆರಂಭಿಸಿದರು. ಅಲ್ಲದೇ ಸ್ಥಳೀಯ ನುರಿತ ಈಜುಗಾರರು ಹಾಗೂ ಅಗ್ನಿಶಾಮಕ ಸಿಬ್ಬಂದಿ ಕಾರ್ಯಾಚರಣೆ ನಡೆಸಿ ಮೋಹನ್ ಕುಮಾರ್ ಶವವನ್ನು ನದಿಯಿಂದ ಹೊರ ತೆಗೆದರು.


ಮೋಹನ್‌ಕುಮಾರ್ ಶವ ನೀರಿನಿಂದ ಹೊರತರುತ್ತಿರುವುದು.

ಆದರೆ ರವಿಚಂದ್ರನ ಶವ ಪತ್ತೆಯಾಗದ ಹಿನ್ನೆಲೆಯಲ್ಲಿ ಕತ್ತಲಾಗುತ್ತಿದ್ದಂತೆ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಿ ಶುಕ್ರವಾರ ಮುಂದುವರೆಸಲು ನಿರ್ಧರಿಸಿದ್ದಾರೆ. ಈ ವೇಳೆ ಕೆ.ಆರ್.ಸಾಗರ ವೃತ್ತ ನಿರೀಕ್ಷಕ ವಿವೇಕಾನಂದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಲ್ಲದೇ ಮೋಹನ್ ಕುಮಾರ್ ಶವವನ್ನು ಮೈಸೂರಿನ ಕೆ.ಆರ್. ಆಸ್ಪತ್ರೆ ಶವಾಗಾರಕ್ಕೆ ರವಾನಿಸಲಾಗಿದೆ. ಈ ಸಂಬಂಧ ಕೆ.ಆರ್.ಸಾಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ■ 6ನೇ ಪುಟಕ್ಕೆ

ಮೇ 23ಕ್ಕೆ ಡಿಸಿಇಟಿ, ಎಂ.ಟೆಕ್ ಪ್ರವೇಶ ಪರೀಕ್ಷೆ: ಕೆಇಎ

ಬೆಂಗಳೂರು: ಎಂಜಿನಿಯರಿಂಗ್ ಕೋರ್ಸ್‌ನ 3ನೇ ಸೆಮಿಸ್ಟರ್ ಅಥವಾ 2ನೇ ವರ್ಷಕ್ಕೆ ಪ್ರವೇಶ ಕಲ್ಪಿಸುವ ಡಿಸಿಇಟಿ ಹಾಗೂ ಎಂ.ಟೆಕ್/ಎಂಇ ಪ್ರವೇಶ ಪರೀಕ್ಷೆಗಳು



ಮೇ 23 ರಂದು ನಡೆಯಲಿದ್ದು, ಸಕಲ ತಯಾರಿ ಮಾಡಿಕೊಳ್ಳಲಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ. ಈ ಎರಡೂ ಪರೀಕ್ಷೆಗಳು ಅಂದು ಬೆಂಗಳೂರು, ಬಳ್ಳಾರಿ, ಬಾಗಲಕೋಟೆ, ದಾವಣಗೆರೆ, ಧಾರವಾಡ, ■ 6ನೇ ಪುಟಕ್ಕೆ

ಶೃಂಗೇರಿ ಶಾಸಕರಾಗಿ ಟಿ.ಡಿ. ರಾಜೇಗೌಡ ಮುಂದುವರಿಕೆ

ನವದೆಹಲಿ: ಶೃಂಗೇರಿ ಶಾಸಕರಾಗಿ ಕಾಂಗ್ರೆಸ್‌ನ ಟಿ.ಡಿ.ರಾಜೇಗೌಡ ಮುಂದುವರಿಕೆ ಸಂಬಂಧ ನೀಡಿದ್ದ ಮಧ್ಯಂತರ ಆದೇಶ ಜಾರಿಗೆ ಸುಪ್ರೀಂ ಕೋರ್ಟ್ ಗುರುವಾರ ಸೂಚಿಸಿದೆ. ಬಿಜೆಪಿಯ



ಡಿ.ಎನ್. ಜೀವರಾಜ್ ಅವರನ್ನು ಚುನಾಯಿತ ಎಂದು ಚುನಾವಣಾ ಆಯೋಗ ಘೋಷಿಸಿ ಪ್ರಮಾಣವಚನ ಬೋಧಿಸಿದ್ದರೂ, ಕಾಂಗ್ರೆಸ್ ನಾಯಕ ರಾಜೇಗೌಡ ಅವರಿಗೆ ನ್ಯಾಯಮೂರ್ತಿಗಳಾದ ಸಂಜಯ್ ಕುಮಾರ್ ಮತ್ತು ಕೆ ವಿನೋದ್ ಚಂದ್ರನ್ ಪೀಠ ಕಳೆದ ವಾರ ಮಧ್ಯಂತರ ಪರಿಹಾರ ನೀಡಿತ್ತು. ಸದ್ಯಕ್ಕೆ ಕ್ಷೇತ್ರದ ರಾಜೇಗೌಡ ಶಾಸಕರಾಗಿ ಉಳಿಯಬೇಕೆಂದು ಆದೇಶಿಸಿತ್ತು.

ಕಾರು ಡಿಕ್ಕಿ ಹೊಡೆಸಿ, ಬಾನೆಟ್ ಮೇಲೆ ಬಿದ್ದ ವ್ಯಕ್ತಿಗೆ ನರಕ ದರ್ಶನ ಪ್ರಕರಣ!

ಆರ್‌ಟಿಐ ಕಾರ್ಯಕರ್ತ ಗಂಗರಾಜು ಬಂಧನ

ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ ಕೋರ್ಟ್



ಮೈಸೂರು, ಮೇ21(ಬಿಎಲ್‌ಯು)– ಕೊಟ್ಟ ಹಣ ಕೇಳಿದ ವ್ಯಕ್ತಿಗೆ ಕಾರು ಡಿಕ್ಕಿ ಹೊಡೆಸಿ, ಬಾನೆಟ್ ಮೇಲೆ ಬಿದ್ದ ಆತನನ್ನು ಕೆಳಗಿಳಿಯಲು ಬಿಡದೆ ಸಿನಿಮಾ ಸ್ಟೈಲ್‌ನಲ್ಲಿ ವೇಗವಾಗಿ ಕಾರು ಚಾಲನೆ ಮಾಡಿ ಪೊಲೀಸ್ ಠಾಣೆ ಮುಂದೆ ಬಿಸಾಡಿದ ಪ್ರಕರಣ ಸಂಬಂಧ ಮೈಸೂರಿನ ಆರ್‌ಟಿಐ ಕಾರ್ಯಕರ್ತ ಗಂಗರಾಜುವನ್ನು ಪೊಲೀಸರು ಬಂಧಿಸಿದ್ದಾರೆ.

ಬಾನೆಟ್ ಮೇಲಿಂದ ಬಿಸಾಡಲ್ಪಟ್ಟು ಪ್ರಾಣಾಪಾಯದಿಂದ ಪಾರಾದ ಧನಂಜಯ, ಕುವೆಂಪುನಗರ ಪೊಲೀಸ್ ಠಾಣೆಗೆ ನಿನ್ನೆ ರಾತ್ರಿಯೇ ದೂರು ನೀಡಿದ್ದನು. ಕೊಟ್ಟ ಹಣ ಕೇಳಿದ್ದಕ್ಕಾಗಿ ಗಂಗರಾಜು ನನ್ನ ಕೊಲೆಗೆ ಯತ್ನಿಸಿದ್ದ ಎಂದು ದೂರಿನಲ್ಲಿ ಆಪಾದಿಸಿದ್ದರು.


ಗಂಗರಾಜು

ಈ ಸಂಬಂಧ ಪ್ರಕರಣ ದಾಖಲಿಸಿಕೊಂಡ ಕುವೆಂಪುನಗರ ಪೊಲೀಸರು ಎಫ್‌ಐಆರ್ ದಾಖಲಿಸುವ ಪ್ರಕ್ರಿಯೆಯನ್ನು ಇಡೀ ರಾತ್ರಿ ನಡೆಸಿ ■ 6ನೇ ಪುಟಕ್ಕೆ

ಗಂಗರಾಜು ವಿರುದ್ಧ ವಿವಿಧ ಪೊಲೀಸ್ ಠಾಣೆಗಳಲ್ಲಿ ಎಫ್‌ಐಆರ್ ದಾಖಲು

ಈಗ ಕೊಲೆ ಯತ್ನದಲ್ಲಿ ಬಂಧಿತನಾಗಿರುವ ಆರ್‌ಟಿಐ ಕಾರ್ಯಕರ್ತ ಗಂಗರಾಜು ವಿರುದ್ಧ ವಿವಿಧ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಆಸ್ತಿ ವಿಚಾರಕ್ಕೆ ಸಂಬಂಧಿಸಿದಂತೆ ಗಂಗರಾಜು ಸೇರಿದಂತೆ ಆರು ಮಂದಿ ತುಮಕೂರು ಜಿಲ್ಲೆ ನಗರ್ಲೆಕಟ್ಟೆಯ ವ್ಯಕ್ತಿಯೊಬ್ಬರಿಗೆ ನಿದ್ರೆ ಮಾತ್ರೆ ಹಾಕಿರುವ ತಂಪು ಪಾನಿಯ ಕುಡಿಸಿರುವ ಆರೋಪದಲ್ಲಿ ತುರುವೆಕೆರೆ ಪೊಲೀಸ್ ಠಾಣೆಯಲ್ಲಿ ಮೇ 17, 2024 ರಂದು ಎಫ್‌ಐಆರ್ ದಾಖಲಾಗಿದೆ. ಇದರಲ್ಲಿ ಈತನೇ ಮೊದಲ ಆರೋಪಿ.

ಮುಡಾ ಕಚೇರಿಯಲ್ಲೇ ವ್ಯಕ್ತಿಯೊಬ್ಬರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ, ಕೊಲೆ ಬೆದರಿಕೆ ಹಾಕಿದ್ದ ಬಗ್ಗೆ ಲಕ್ಷ್ಮಿಪುರಂ ಪೊಲೀಸ್ ಠಾಣೆಯಲ್ಲಿ ಮೇ 14, 2022 ರಂದು ದೂರು ದಾಖಲಾಗಿತ್ತು. ಈ ಪ್ರಕರಣ ಸಂಬಂಧ ಲಕ್ಷ್ಮಿಪುರಂ ಪೊಲೀಸರು ಅದೇ ದಿನದಂದು ಗಂಗರಾಜು ವಿರುದ್ಧ ಎಫ್‌ಐಆರ್ ದಾಖಲಿಸಿದ್ದರು. ■ 6ನೇ ಪುಟಕ್ಕೆ

ನಾನು ಮುಖ್ಯಮಂತ್ರಿ ಆಗೋದನ್ನು ಕಾಲ ತೀರ್ಮಾನಿಸುತ್ತೆ!

ಕೊಳ್ಳೇಗಾಲ, ಮೇ 21– ತಾವು ಯಾವಾಗ ಸಿಎಂ ಆಗಬೇಕು ಎಂಬುದನ್ನು ಕಾಲವೇ ತೀರ್ಮಾನ ಮಾಡಲಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದಿಲ್ಲಿ ತಿಳಿಸಿದ್ದಾರೆ.



ತಾಲೂಕಿನ ಶಿವನಸಮುದ್ರದ ಭರಚುಕ್ಕಿ ರಸ್ತೆ ಸಮೀಪದ ಹೆಲಿಪ್ಯಾಡ್‌ನಲ್ಲಿ ಸುದ್ದಿಗಾರರು ನೀವು ಯಾವಾಗ ಸಿಎಂ ಆಗುತ್ತೀರಿ ಎಂದು ಕೇಳುತ್ತಿದ್ದಂತೆ, ಅದನ್ನು ಕಾಲ ತೀರ್ಮಾನ ಮಾಡುತ್ತದೆ ಎಂದರು. ಚಾಮರಾಜನಗರ ಐತಿಹಾಸಿಕ ಜಿಲ್ಲೆ. ಧಾರ್ಮಿಕ, ಪ್ರಾಕೃತಿಕ ಸಂಪತ್ತು ಹೊಂದಿರುವ ಕಾವೇರಿ ನದಿ ತೀರದಲ್ಲಿರುವ ಪವಿತ್ರ ಪುಣ್ಯಭೂಮಿ. ಜಿಲ್ಲೆಗೆ ಭೇಟಿ ನೀಡಿದರೆ ಅಧಿಕಾರ ಕಳೆದು ಕೊಳ್ಳುತ್ತಾರೆ ಎಂಬುದು ಮೌಢ್ಯ. ಎಲ್ಲಿ ಭಕ್ತಿ ಇದೆಯೋ ಅಲ್ಲಿ ಭಗವಂತ ಇದ್ದಾನೆ. ಮಲೆ ಮಹದೇಶ್ವರ, ಮಧ್ಯರಂಗ, ಸಿದ್ದಪ್ಪಾಜಿ, ಗೋಪಾಲಸ್ವಾಮಿ ಪುಣ್ಯ ಕ್ಷೇತ್ರಗಳಿಗೆ ಬಂದು ಜನ ನೆಮ್ಮದಿ ಕಂಡುಕೊಳ್ಳುತ್ತಿದ್ದಾರೆ. ಬೆಳಗ್ಗೆಯಿಂದ ಸೂರ್ಯ ಮುಳುಗುವ ವೇಳೆಗೆ ಶ್ರೀರಂಗ ಪಟ್ಟಣ ಆದಿರಂಗ, ಮಧ್ಯರಂಗ ಹಾಗೂ ತಮಿಳುನಾಡಿನಲ್ಲಿರುವ ಅಂತ್ಯರಂಗ ದೇವಾಲಯಗಳಿಗೆ ಭೇಟಿ ನೀಡುವ ಪದ್ಧತಿ ನಡೆದುಕೊಂಡು ಬಂದಿದೆ ಎಂದರು.

ಅಸಮಾಧಾನಿತ ಕಾಂಗ್ರೆಸ್ ಶಾಸಕರು ಬಿಜೆಪಿ ಸಂಪರ್ಕದಲ್ಲಿದ್ದಾರೆ..

- ರಾಜ್ಯ ಬಿಜೆಪಿ ಉಸ್ತುವಾರಿ ರಾಧಾ ಮೋಹನ್ ಅಗರ್ವಾಲ್ ಬಾಂಬ್
- ಅವರು ಬಿಜೆಪಿ ಸೇರಲು ಅವಕಾಶ ನೀಡಿದರೆ ಸರ್ಕಾರ ಪತನ
- ಚುನಾವಣೆ ಘೋಷಣೆಯಾದರೆ ಅವರೆಲ್ಲಾ ಬಿಜೆಪಿ ಸೇರ್ತಾರೆ!

ಬೆಂಗಳೂರು, ಮೇ 21(ಕೆಎಂಶಿ)– ರಾಜ್ಯದಲ್ಲಿ ಆಡಳಿತರೂಢ ಕಾಂಗ್ರೆಸ್ ಪಕ್ಷದ ಸರ್ಕಾರದ ವಿರುದ್ಧ ಆ ಪಕ್ಷದ ಶಾಸಕರೇ ಅಸಮಾಧಾನಗೊಂಡಿದ್ದಾರೆ. ಅವರೆಲ್ಲರೂ ಬಿಜೆಪಿ ನಾಯಕರ ಜೊತೆ ಸಂಪರ್ಕದಲ್ಲಿದ್ದು ಯಾವುದೇ ಕ್ಷಣ ವಿಧಾನ ಸಭೆಗೆ ಚುನಾವಣೆ ಘೋಷಣೆಯಾದರೆ ಅವರೆಲ್ಲ ಬಿಜೆಪಿ ಸೇರ್ಪಡೆಯಾಗಲಿದ್ದಾರೆ ಎಂದು ರಾಜ್ಯ ಬಿಜೆಪಿ ಉಸ್ತುವಾರಿ ನಾಯಕ ರಾಧಾ ಮೋಹನ್ ಅಗರ್ವಾಲ್ ಹೇಳಿದ್ದಾರೆ.


ರಾಧಾ ಮೋಹನ್

ಪಕ್ಷದ ಅಧ್ಯಕ್ಷರ ಕಾರ್ಯವೈಖರಿ ಕುರಿತಂತೆ ಕಾರ್ಯಕರ್ತರ ಅಭಿಪ್ರಾಯ ಹಾಗೂ ಪ್ರಮುಖರ ಸಭೆಯಲ್ಲಿ ಪಾಲ್ಗೊಳ್ಳಲು ಆಗಮಿಸಿರುವ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಸರ್ಕಾರದ ಕಾರ್ಯವೈಖರಿಯ ಬಗ್ಗೆ ಕಾಂಗ್ರೆಸ್ ಶಾಸಕರೇ ಭ್ರಮನಿರಸನಗೊಂಡಿದ್ದಾರೆ ಎಂದು ತಿಳಿಸಿದರು.

ಅಧಿಕಾರಕ್ಕೆ ಕಾದಿರುವ ಖರ್ಗೆ: ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ದೆಹಲಿಯಲ್ಲಿ ಕುಳಿತುಕೊಂಡು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಎಂಬ ಎರಡು ಬೆಕ್ಕುಗಳ ನಡುವೆ ಜಗಳ ತಂದಿಟ್ಟು ತಮ್ಮ ಅವಕಾಶಕ್ಕಾಗಿ ಕಾಯು ತ್ತಿದ್ದಾರೆ. ಅಧಿಕಾರಕ್ಕಾಗಿ ಇಬ್ಬರು ನಾಯಕರು ಕಚ್ಚಾಡುತ್ತಿದ್ದಾರೆ ಅವಕಾಶ ಸಿಕ್ಕರೆ ತಾವೇ ಮುಖ್ಯಮಂತ್ರಿ ಆಗಲು ಖರ್ಗೆ ಯೋಜನೆ ರೂಪಿಸಿದ್ದಾರೆ ಎಂದು ತಿಳಿಸಿದರು.

ಮೂವರು ಸಿಎಂ ಮುಖ: ರಾಜ್ಯ ಸರ್ಕಾರದಲ್ಲಿ ಒಬ್ಬ ಮುಖ್ಯಮಂತ್ರಿ ಇಲ್ಲ ಮೂವರು ಮುಖ್ಯ ಮಂತ್ರಿಯ ಮುಖಗಳಿವೆ ಹೀಗಾಗಿ ಆಡಳಿತ ಯಂತ್ರ ಸಂಪೂರ್ಣ ಕುಸಿದು ಹೋಗಿದೆ. ಕಾಂಗ್ರೆಸ್‌ನ ಅನೇಕ ಮಂದಿ ಶಾಸಕರು ನಮ್ಮ ಸಂಪರ್ಕದಲ್ಲಿದ್ದಾರೆ ಅವರು ಬಿಜೆಪಿ ಸೇರಲು ಅವಕಾಶ ನೀಡಿದರೆ ಸರ್ಕಾರ ಪತನ ಹೊಂದಲಿದೆ ಆದರೆ ನಮಗೆ ಈ ಸರ್ಕಾರ ಬೀಳುವುದು ಬೇಕಾಗಿಲ್ಲ. ಯಾಕೆಂದರೆ ಯಾವುದೇ ಕ್ಷಣ ಚುನಾವಣೆ ನಡೆದರೂ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲಿದೆ. ಹೀಗಾಗಿ ಚುನಾವಣೆ ಎದುರಿಸಲು ನಾವು ಸಜ್ಜುಗೊಂಡಿದ್ದೇವೆ ಎಂದು ಹೇಳಿದರು. ರಾಜ್ಯದ ಹಣಕಾಸು ಪರಿಸ್ಥಿತಿ ಸಂಪೂರ್ಣ ಹದಗೆಟ್ಟು ಹೋಗಿದೆ. ದೈನಂದಿನ ಆಡಳಿತ ನಿರ್ವಹಣೆಗೆ ಹೊರಗಿನಿಂದ ಸಾಲ ತಂದು ನಿಭಾಯಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.

ಗೃಹಲಕ್ಷ್ಮಿ ಹಣಕ್ಕಾಗಿ ಹೈಕೋರ್ಟ್ ಮೊರೆ

ಬೆಂಗಳೂರು: ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಗೃಹಲಕ್ಷ್ಮಿ ಯೋಜನೆಯಡಿ ಬಾಕಿ ಉಳಿಸಿಕೊಂಡಿರುವ ಮಾಸಿಕ ಕಂತುಗಳ ಹಣವನ್ನು ತಕ್ಷಣವೇ ಬಿಡುಗಡೆ ಮಾಡಲು ನಿರ್ದೇಶನ ನೀಡುವಂತೆ ಕೋರಿ ಸಲ್ಲಿಕೆಯಾಗಿರುವ ಅರ್ಜಿಯ ಸಂಬಂಧ ಹೈಕೋರ್ಟ್, ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿದೆ.



ಬೆಂಗಳೂರಿನ ಆರ್.ಗಂಗಾ ಮತ್ತು ಜಿ.ಡಿ. ಪವಿತ್ರಾ ಎಂಬುವರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೂರಜ್ ಗೋವಿಂದ ರಾಜು ಮತ್ತು ನ್ಯಾಯಮೂರ್ತಿ ಕೆ.ಮನ್ಮಥರಾವ್ ಅವರಿದ್ದ ನ್ಯಾಯಪೀಠ, ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿ ಆಕ್ಷೇಪಣೆ ಸಲ್ಲಿಸಲು ಸೂಚಿಸಿ ವಿಚಾರಣೆ ಮುಂದೂಡಿದೆ.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಬಡ ಮತ್ತು ಆರ್ಥಿಕವಾಗಿ ಹಿಂದುಳಿದ ಮಹಿಳೆಯರು ಈ ಯೋಜನೆಯನ್ನೇ ನೆಚ್ಚಿಕೊಂಡಿದ್ದು, ಹಣ ಬಿಡುಗಡೆಯಾಗದ ಕಾರಣ ಜೀವನ ನಿರ್ವಹಣೆಗೆ ತೊಂದರೆಯಾಗಿದೆ. ಬಾಕಿ ಇರುವ ಹಣವನ್ನು ಫಲಾನುಭವಿಗಳ ಖಾತೆಗೆ ನೇರವಾಗಿ ಜಮಾ ಮಾಡಲು ಸರ್ಕಾರಕ್ಕೆ ಆದೇಶ ನೀಡಬೇಕು ಎಂದು ಪೀಠಕ್ಕೆ ಮನವಿ ಮಾಡಿದರು.

ಚಾಮರಾಜನಗರದಲ್ಲಿ ಭಾರೀ ಗಾಳಿಯೊಂದಿಗೆ ಧಾರಾಕಾರ ಮಳೆ

ರಸ್ತೆ, ಚರಂಡಿ, ಖಾಲಿ ನಿವೇಶನಗಳು, ಆಟದ ಮೈದಾನಗಳು ಜಲಾವೃತ



ಚಾಮರಾಜನಗರ: ಚಾಮರಾಜನಗರದಲ್ಲಿ ಗುರುವಾರ ಸಂಜೆ ಭಾರೀ ಗಾಳಿಯೊಂದಿಗೆ ಧಾರಾಕಾರ ಮಳೆ ಸುರಿಯಿತು. ಮಳೆಯಿಂದ ಹಲವು ದಿನಗಳಿಂದ ಕಾದ ಕಾವಲಿಯಂತಾಗಿದ್ದ ಭೂಮಿಗೆ ತಂಪೆರೆದಂತಾಯಿತು.

ಬೆಳಗ್ಗೆಯಿಂದ ಬಿಸಿಲು, ಮೋಡವಿದ್ದು, ಬಿಸಿಲ ಬೇಗೆಯಿಂದ ಕಂಗೆಟ್ಟಿದ್ದ ಜನತೆಗೆ ಇಂದು ಅರ್ಧ ಗಂಟೆಗೂ ಹೆಚ್ಚು ಕಾಲ ಸುರಿದ ಮಳೆಯಿಂದ ಪಟ್ಟಣದ ರಸ್ತೆಗಳು, ಚರಂಡಿಗಳು ಉಕ್ಕಿ ಹರಿಯಲಾರಂಭಿಸಿತ್ತು.



ಮೈಸೂರಿನಲ್ಲಿ ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳ ಗುರುತಿಸಲು ಡಿಸಿ ಸೂಚಿಸಿದ ಬೆನ್ನಲ್ಲೇ

ಸಂಸ್ಕೃತ ಪಾಠಶಾಲೆ ಕಾಂಪೌಂಡ್ ಕುಸಿತ



ಮೈಸೂರು, ಮೇ 21(ಎಂಕೆ)– ಸಾಂಸ್ಕೃತಿಕ ನಗರಿ ಮೈಸೂರಿನ ಪಾರಂಪರಿಕ ನಿರ್ಮಾಣಗಳಲ್ಲಿ ಒಂದಾದ 150 ವರ್ಷಗಳ ಇತಿಹಾಸವುಳ್ಳ ಸಂಸ್ಕೃತ ಪಾಠ ಶಾಲೆಯ ಕಾಂಪೌಂಡ್ ಕುಸಿದು ಬಿದ್ದಿದ್ದು, ಎಚ್ಚೆತ್ತುಕೊಳ್ಳದಿದ್ದರೆ ಬಾರೀ ಅನಾಹುತ ಸಂಭವಿಸುವ ಆತಂಕ ಎದುರಾಗಿದೆ.

ಮಳೆಗಾಲ ಆರಂಭಕ್ಕೂ ಮುನ್ನವೇ ಮೈಸೂರಿನಲ್ಲಿ ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳು ಗಾಳಿ–ಮಳೆಗೆ ಬೀಳುವ ಸಾಧ್ಯತೆ ಇದ್ದಲ್ಲಿ ತಕ್ಷಣವೇ ಅವುಗಳ ಪಟ್ಟಿ ಮಾಡಿ ಎರಡು ದಿನದೊಳಗಾಗಿ ತಮ್ಮ ಕಚೇರಿಗೆ ಸಲ್ಲಿಸುವಂತೆ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ್ ರೆಡ್ಡಿ, ಅಧಿಕಾರಿಗಳಿಗೆ ಸೂಚನೆ ನೀಡಿದ ಬೆನ್ನಲ್ಲೆ ಸಂಸ್ಕೃತ ಪಾಠ ಶಾಲೆಯ ಕಟ್ಟಡ ಗೋಡೆಯ ಭಾಗ ಕುಸಿದು ಬಿದ್ದಿರುವುದು ಆತಂಕದ ಸಂಗತಿಯಾಗಿದೆ.

ಮುಮ್ಮಡಿ ಕೃಷ್ಣರಾಜ ಒಡೆಯರ್ ಅವರ ಕಾಲದಲ್ಲಿ ನಿರ್ಮಾಣವಾದ, ಸಾಂಸ್ಕೃತಿಕ ನಗರಿಯಲ್ಲಿರುವ ನಾಡಿನ ಅಪರೂಪದ ಸಂಸ್ಕೃತ ಪಾಠಶಾಲೆಯಾಗಿರುವ ಇಲ್ಲಿ, ಇಂದಿಗೂ ವೇದ, ಆಗಮ, ಶಾಸ್ತ್ರಗಳ ಅಧ್ಯಯನಕ್ಕೆ ಬೇರೆ ಬೇರೆ ಪ್ರದೇಶಗಳಿಂದ ಆಗಮಿಸುತ್ತಾರೆ.

ಅಧ್ಯಯನದ ಜೊತೆಗೆ ಆಕರ್ಷಣೀಯವಾಗಿರುವ ಸಂಸ್ಕೃತ ಪಾಠ ಶಾಲೆಯ ಕಟ್ಟಡ ಹಿಂಭಾಗದ ಕಾಂಪೌಂಡ್‌ನ ಭಾಗ ಕುಸಿದು ಬಿದ್ದಿದ್ದು, ದುರಸ್ಥಿ ಮಾಡದಿದ್ದಲ್ಲಿ ಬೆಂಗಳೂರಿನ ಬೌರಿಂಗ್ ಆಸ್ಪತ್ರೆಯ ಆವರಣದಲ್ಲಿ ನಡೆದ ಗೋಡೆ ಕುಸಿತದ ದುರಂತದಂತೆಯೇ ಇಲ್ಲಿಯೂ ಸಂಭವಿಸುವ ಎಲ್ಲಾ ಸಾಧ್ಯತೆಗಳಿಗೆ ಎಂದು ಮೈಸೂರಿನ ಪ್ರಜ್ಞಾವಂತ ನಾಗರಿಕರು ಆತಂಕ ವ್ಯಕ್ತಪಡಿಸಿದ್ದಾರೆ.

ಮೈಸೂರಿನಲ್ಲಿ 130ಕ್ಕೂ ಹೆಚ್ಚು ಪಾರಂಪರಿಕ ಕಟ್ಟಡಗಳಿದ್ದು, ಅವುಗಳಲ್ಲಿ ಸಂಸ್ಕೃತ ಪಾಠ ಶಾಲೆಯೂ ಒಂದಾಗಿದೆ. ಸಾವಿರಾರು ವಿದ್ಯಾರ್ಥಿಗಳಿಗೆ ಅಕ್ಷರ ಕಲಿಕೆಗೆ ಆಶ್ರಯ ನೀಡಿದ ಶಾಲೆಯನ್ನು ಉಳಿಸುವುದು ಅವಶ್ಯವಾಗಿದ್ದು, ಕೂಡಲೇ ಜಿಲ್ಲಾಡಳಿತ, ಪರಂಪರೆ ಇಲಾಖೆ ಕ್ರಮವಹಿಸಬೇಕು ಎಂದು ಆಗ್ರಹಿಸಿದ್ದಾರೆ.


ಸಂಸ್ಕೃತ ಪಾಠಶಾಲೆಯ ಕಾಂಪೌಂಡ್‌ನ ಒಂದು ಭಾಗ ಕುಸಿದು ಬಿದ್ದಿರುವುದು.

ನಗರದ ಹೃದಯ ಭಾಗದಲ್ಲಿರುವ ಸಂಸ್ಕೃತ ಪಾಠ ಶಾಲೆಯಲ್ಲಿ ಸುತ್ತಲೂ ಜನಸಂದಣಿ ಹೆಚ್ಚಾಗಿರಲಿದೆ. ಆಕಸ್ಮಾತ್ ಪಾಠ ಶಾಲೆಯ ಕಟ್ಟಡ ಕುಸಿತವಾದಲ್ಲಿ ಸಾಕಷ್ಟು ಸಾವು–ನೋವುಗಳಾಗುವ ಸಾಧ್ಯತೆ ಹೆಚ್ಚು. ಅಲ್ಲದೆ ಮಳೆಗಾಲ ಆರಂಭವಾಗುತ್ತಿದ್ದು, ಎಚ್ಚೆತ್ತುಕೊಳ್ಳದಿದ್ದರೆ ಅನಾಹುತ ಕಟ್ಟಿಟ್ಟ ಬುತ್ತಿ ಎಂದು ಎಚ್ಚರಿಸಿದ್ದಾರೆ.

ಮೈಸೂರಿನ ಪಾರಂಪರಿಕ ಕಟ್ಟಡವಾದ ಲ್ಯಾನ್ಸ್‌ಡೌನ್ ಬಿಲ್ಡಿಂಗ್ ಕುಸಿದು ಬಿದ್ದು, ಕೆಲವರ ಸಾವಾಗಿದ್ದನ್ನು ಕಂಡಿದ್ದೇವೆ. ಅದೇ ರೀತಿ ಮತ್ತೊಂದು ದುರ್ಘಟನೆ ಸಂಭವಿಸುವ ಮೊದಲು ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು. ಸಂಸ್ಕೃತ ಪಾಠ ಶಾಲೆ ಕಟ್ಟಡ ಕಾಂಪೌಂಡ್ ಬಾಗ ಕುಸಿದಿದೆ. ಅಲ್ಲದೆ ಬಹುತೇಕ ಕಾಂಪೌಂಡ್ ಹಾಳಾಗಿದ್ದು, ಕೂಡಲೇ ದುರಸ್ಥಿ ಕಾರ್ಯವಾಗಬೇಕು ಎಂದು ಮುಖಂಡ ಮೋಹನ್ ಕುಮಾರ್ ಗೌಡ ಆಗ್ರಹಿಸಿದ್ದಾರೆ.

ದ್ವಿತೀಯ ಪಿಯು ಪರೀಕ್ಷೆ–2ರ ಫಲಿತಾಂಶ ಪ್ರಕಟ;

ಶೇ45.65 ರಷ್ಟು ತೇರ್ಗಡೆ

ಬೆಂಗಳೂರು, ಮೇ 21(ಕೆಎಂಶಿ)–ದ್ವಿತೀಯ ಪಿಯುಸಿ ಪರೀಕ್ಷೆ–2ರ ಫಲಿತಾಂಶವನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ ಪ್ರಕಟಿಸಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್.ಮಧು ಬಂಗಾರಪ್ಪ ತಿಳಿಸಿದ್ದಾರೆ.

ಫಲಿತಾಂಶ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಪರೀಕ್ಷೆಗೆ 80,535 ವಿದ್ಯಾರ್ಥಿಗಳು ಹಾಜರಾಗಿದ್ದು, 36,746 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ತೇರ್ಗಡೆ ಪ್ರಮಾಣ ಶೇ. 45.65ರಷ್ಟಾಗಿದೆ ಎಂದಿದ್ದಾರೆ. ದ್ವಿತೀಯ ಪಿಯುಸಿ ಪರೀಕ್ಷೆ–2 ಏಪ್ರಿಲ್ 30ರಿಂದ ಮೇ 13ರವರೆಗೆ ರಾಜ್ಯದ 253 ಪರೀಕ್ಷಾ ಕೇಂದ್ರಗಳಲ್ಲಿ ನಡೆದಿತ್ತು, 12 ಕೇಂದ್ರಗಳಲ್ಲಿ ಉತ್ತರ ಪತ್ರಿಕೆಗಳ ಮೌಲ್ಯಮಾಪನ ನಡೆಸಲಾಗಿತ್ತು.


ಮಧು ಬಂಗಾರಪ್ಪ

ಎರಡೂ ಪರೀಕ್ಷೆಗಳ ಒಟ್ಟು ಕ್ರೋಢೀಕೃತ ಫಲಿತಾಂಶ ಶೇ.92.25ಕ್ಕೆ ಏರಿಕೆಯಾಗಿದೆ. ದ್ವಿತೀಯ ಪರೀಕ್ಷೆ–1ರಲ್ಲಿ ಶೇ.86.52ರಷ್ಟು ಫಲಿತಾಂಶ ಬಂದಿತ್ತು. ಕಳೆದ ವರ್ಷದ ಶೇ.85.19 ಫಲಿತಾಂಶಕ್ಕೆ ಹೋಲಿಸಿದರೆ ಇದು ಶೇ.7.06ರಷ್ಟು ಏರಿಕೆಯಾಗಿದ್ದು, ಕರ್ನಾಟಕದ ಇತಿಹಾಸದಲ್ಲೇ


ಸಂಗ್ರಹ ಚಿತ್ರ

ದೊಡ್ಡ ಸಾಧನೆಯಾಗಿದೆ ಎಂದು ಬಣ್ಣಿಸಿದ್ದಾರೆ.

ಈ ವರ್ಷ ದ್ವಿತೀಯ ಪಿಯುಸಿ ಪರೀಕ್ಷೆ–1ರಲ್ಲೇ ರಾಜ್ಯ ಸಾರ್ವಕಾಲಿಕ ದಾಖಲೆ ಫಲಿತಾಂಶ ಸಾಧಿಸಿದೆ, ಇದೀಗ ಪರೀಕ್ಷೆ–2ರ ನಂತರ ಈ ದಾಖಲೆ ಮತ್ತಷ್ಟು ಸುಧಾರಿಸಿ ಹೊಸ ಇತಿಹಾಸ ನಿರ್ಮಿಸಿರುವುದು ಹೆಮ್ಮೆ ತಂದಿದೆ.

ಕಳೆದ ವರ್ಷ ಗ್ರಾಮೀಣ ಭಾಗದ ಫಲಿತಾಂಶ ಶೇ.84.94ರಷ್ಟು ಇತ್ತು, ಈ ಬಾರಿ ಇನ್ನಷ್ಟು ಸುಧಾರಣೆಯಾಗಿದೆ. ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಫಲಿತಾಂಶ ಸುಧಾರಿಸಿರುವುದು ಸಂತೋಷ ತಂದಿದೆ.

ಕಳೆದ ವರ್ಷ ಶೇ.73.04ರಷ್ಟಿದ್ದ ಕ್ರೋಢೀಕೃತ ಫಲಿತಾಂಶ ಈ ಬಾರಿ ಶೇ.87.03ಕ್ಕೆ ಏರಿಕೆಯಾಗಿದೆ. ಇದರಲ್ಲಿ ಶೇ.13.99ರಷ್ಟು ಸುಧಾರಣೆಯಾಗಿದೆ. ಸಮಾಜದ ಎಲ್ಲಾ ವರ್ಗಗಳ ವಿದ್ಯಾರ್ಥಿಗಳ ಫಲಿತಾಂಶದಲ್ಲೂ ಸುಧಾರಣೆ ಕಂಡು ಬಂದಿದೆ. ಶಿಕ್ಷಣ ಇಲಾಖೆ ■ 6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಸಂತ : ಮಾಣಿ, ಒಂದು ಕಾಫಿ ಕೊಡಪ್ಪಾ. ಎಷ್ಟು?
ಮಾಣಿ : 50 ರೂ. ಸಾರ್
ಸಂತ : ಎದುರುಗಡೆ 50 ಪಿಎಸ್ ಅಂತ ಬೋರ್ಡ್ ಹಾಕಿದ್ದಾರಲ್ಲಾ?
ಮಾಣಿ : ಅದು ಜೆರಾಕ್ಸ್ ಅಂಗಡಿ ಸರ್.

ಮೈಸೂರು ಮಿತ್ರ
ಶುಕ್ರವಾರ, ಮೇ 22, 2026
ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ಹೊಟ್ಟೆ ತುಂಬಿದ ಶ್ರೀಮಂತ ಆಹಾರದಲ್ಲಿ ರುಚಿ ಹುಡುಕುತ್ತಾನೆ. ಹಸಿದ ಬಡವ ಆಹಾರವೇ ದೇವ್ರು ಅಂತ ಭಾವಿಸುತ್ತಾನೆ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು } ಅಡಿಕೆ ಕಾಯಿಯನ್ನು ಚೀಲದೊಳಗೆ ಹಾಕಬಹುದು, ಮರ ಆದ ನಂತರ ಹಾಕಬಹುದೇ?

ನಿಮ್ಮ ಪತ್ರಗಳು

ವ್ಯಗ್ರ ನಾಯಿ ಉಪಟಳ ತಪ್ಪಿಸಿ

ಮಾನ್ಯರೆ,

ಕೊನೆಗೂ ಸುಪ್ರೀಂಕೋರ್ಟ್ ವ್ಯಗ್ರ ನಾಯಿಗಳನ್ನು ಕೊಲ್ಲಿ ಎಂದು ಆದೇಶ ನೀಡಿರುವುದು ಪತ್ರಿಕೆಗಳಲ್ಲಿ (20.5.26) ವರದಿಯಾಗಿದೆ. ಆದರೆ ಹಿಂದಿನಂತೆ ನಾಯಿಗಳನ್ನು ನಗರ ಪಾಲಿಕೆಯವರು ನಿಯಂತ್ರಣ ಮಾಡದೆ ಸರಿಯಾಗಿ ಕ್ರಮ ವಹಿಸದೇ ಇರುವ ಕಾರಣ ನಾಯಿಗಳ ಉಪಟಳ ಇತ್ತೀಚಿನ ವರ್ಷಗಳಲ್ಲಿ ತುಂಬಾ ಹೆಚ್ಚಾಗಿದೆ.

ಮಕ್ಕಳು, ವೃದ್ಧರು, ಪಾದಚಾರಿಗಳ ಮೇಲೆ ನಾಯಿಗಳ ದಾಳಿ ಮಿತಿ ಮೀರಿದೆ. ಮನೆಯವರು ಹಾಗೂ ಮಾಂಸಹಾರಿ ಹೋಟೆಲ್, ಅಂಗಡಿಗಳಿಂದ ಸಿಗುವ ಆಹಾರದಿಂದ ಬೀದಿ ನಾಯಿಗಳು ಈಗ ತೋಳಗಳಂತೆ ದಷ್ಟ ಪುಷ್ಟವಾಗಿವೆ. ಇತ್ತೀಚೆಗೆ ಬೀದಿ ನಾಯಿಯೊಂದು ಮಗುವಿನ ಮೇಲೆ ದಾಳಿ ಮಾಡಿ ಮಗುವನ್ನು ಕಚ್ಚಿ ಹೊತ್ತೊಯ್ದ ಪ್ರಕರಣ ವರದಿಯಾಗಿತ್ತು. ನಿತ್ಯ ಇಂತಹ ನೂರಾರು ಘಟನೆಗಳು ನಡೆಯುತ್ತಿವೆ. ಆದರೆ, ನಗರ ಪಾಲಿಕೆ, ಪುರಸಭೆ, ಗ್ರಾಮಪಂಚಾಯಿತಿಗಳು ತೀವ್ರ ನಿರ್ಲಕ್ಷ್ಯ ವಹಿಸಿವೆ. ಯಾವುದೇ ಬಡಾವಣೆಯ ಒಂದು ಬೀದಿಯಲ್ಲಿ 2 ನಾಯಿಗಳಿಗಿಂತ ಹೆಚ್ಚು ನಾಯಿಗಳಿದ್ದರೆ ಅವುಗಳನ್ನು ಹಿಡಿದು ಪುನರ್ವಸತಿ ಕೇಂದ್ರಕ್ಕೆ ಬಿಡುವ ಕೆಲಸ ಪಾಲಿಕೆಗಳಿಂದಾಗಬೇಕು. ಆದರೆ 10–15 ನಾಯಿಗಳು ಗುಂಪಾಗಿ ರಾತ್ರಿ ವೇಳೆ ರಂಪಾಟ ನಡೆಸಿ ಜನರ ನೆಮ್ಮದಿ ಹಾಳು ಮಾಡುತ್ತಿವೆ. ಪಾಲಿಕೆ ಕೇವಲ ಅವುಗಳಿಗೆ ಸಂತಾನಹರಣ ಶಸ್ತ್ರ ಚಿಕಿತ್ಸೆ ನಡೆಸಿ, ಮತ್ತೆ ಅಲ್ಲಿಗೇ ಬಿಟ್ಟರೆ ಆಗುವುದಿಲ್ಲ. ಅಲ್ಲದೆ ಅವರು ಇವುಗಳಿಗೆ ಸಂತಾನ ಹರಣ ಚಿಕಿತ್ಸೆ ನೀಡಿದ್ದಾರೆ ಎನ್ನುವುದಕ್ಕೆ ಯಾವ ಪುರಾವೆಯೂ ಇಲ್ಲ. ಲಸಿಕೆ ಖರೀದಿಗೆ ಸರ್ಕಾರದ ಹಣ ದುರುಪಯೋಗವಾಗುತ್ತಿದೆ. ಈ ಬಗ್ಗೆ ಸರ್ಕಾರ ಗಂಭೀರವಾಗಿ ಪರಿಗಣಿಸಿ ಕ್ರಮ ವಹಿಸಬೇಕು.

–ಮುಳ್ಳೂರು ಪ್ರಕಾಶ್, ಕನಕದಾಸ ನಗರ, ಮೈಸೂರು.

ಹಿರಿಯಕ್ಕನ ಚಾಳಿ...

ಮಾನ್ಯರೆ,

2023ರ ಕರ್ನಾಟಕ ರಾಜ್ಯ ವಿಧಾನ ಸಭಾ ಚುನಾವಣೆಯಲ್ಲಿ ಮತದಾರರಿಗೆ ಗ್ಯಾರಂಟಿ ಯೋಜನೆಗಳ ಆಶ್ವಾಸನೆ ನೀಡಿದ್ದ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಿತ್ತು. ವಿಪರ್ಯಾಸವೆಂದರೆ, ಆಗ ಭಾರತೀಯ ಜನತಾ ಪಕ್ಷ, ಜೆಡಿಎಸ್ ಹಾಗೂ ಇನ್ನಿತರ ಪಕ್ಷಗಳು ಗ್ಯಾರಂಟಿ ಯೋಜನೆಗಳನ್ನು ತೀವ್ರವಾಗಿ ಖಂಡಿಸಿ, ವಿರೋಧಿಸಿದ್ದವು. ಆದರೆ, ಭಾರತೀಯ ಜನತಾ ಪಕ್ಷ ಹಾಗೂ ಅದರ ಮಿತ್ರ ಪಕ್ಷಗಳು ಸಹ, ಚುನಾವಣೆ ಪೂರ್ವದಲ್ಲಿ ಮತದಾರರಿಗೆ ಗ್ಯಾರಂಟಿ ಯೋಜನೆಗಳನ್ನು ನೀಡಿ, ಪಶ್ಚಿಮ ಬಂಗಾಳ, ಪುದುಚೇರಿ ಸೇರಿದಂತೆ ಇತರ ರಾಜ್ಯಗಳಲ್ಲಿ ಜಯಭೇರಿ ಮೊಳಗಿಸಿವೆ. ದೂರದ ದೆಹಲಿಯಲ್ಲಿ ಕೂಡ ಗ್ಯಾರಂಟಿ ಯೋಜನೆಗಳು ಸದ್ದು ಮಾಡುತ್ತಿವೆ. ತಮಿಳುನಾಡು, ಕೇರಳ, ತೆಲಂಗಾಣ, ಹಿಮಾಚಲ ಪ್ರದೇಶ, ಆಂಧ್ರಪ್ರದೇಶ ಸೇರಿದಂತೆ ದೇಶದ ಬಹುತೇಕ ರಾಜ್ಯಗಳಲ್ಲಿ ಗ್ಯಾರಂಟಿ ಯೋಜನೆಗಳ ಅವತಾರವೋ ಅವತಾರವಾಗಿದೆ. ಗ್ಯಾರಂಟಿ ಯೋಜನೆಗಳು ವಿದೇಶಗಳಲ್ಲಿ ಕೂಡ ಸದ್ದು ಮಾಡುತ್ತಿದೆ ಎಂಬ ಸುದ್ದಿ ಮಾಧ್ಯಮಗಳಲ್ಲಿ ಪ್ರಕಟವಾಗಿವೆ. ಹಿರಿಯಕ್ಕನ ಚಾಳಿ ಮನೆ ಮಂದಿಗೆಲ್ಲಾ ಅನ್ನುವ ಹಾಗೆ ಇಂದು ಗ್ಯಾರಂಟಿ ಯೋಜನೆಗಳು ಅನಿವಾರ್ಯವಾಗುತ್ತಿರುವುದು ವಿಪರ್ಯಾಸವೇ ಸರಿ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

ವಿಟಿಯು ನಡೆ ಶ್ಲಾಘನೀಯ

ಮಾನ್ಯರೇ,

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು (ವಿಟಿಯು) ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಉಚಿತ ಡ್ರೋನ್ ತರಬೇತಿ ಮತ್ತು ಡಿಜಿಸಿಎ ಲೈಸೆನ್ಸ್ ನೀಡುತ್ತಿರುವುದು ಅತ್ಯಂತ ಪ್ರಶಂಸನೀಯ ಮತ್ತು ದೂರದೃಷ್ಟಿಯ ಹೆಜ್ಜೆಯಾಗಿದೆ. ಸಾಮಾನ್ಯವಾಗಿ ಇದಕ್ಕೆ ಸುಮಾರು 1 ಲಕ್ಷ ವೆಚ್ಚವಾಗಲಿದ್ದು ಗ್ರಾಮೀಣ ವಿದ್ಯಾರ್ಥಿಗಳಿಗೆ ಇದು ಗಗನಕುಸುಮವಾಗಿತ್ತು. ಪ್ರಸ್ತುತ ಜಾಗತಿಕವಾಗಿ ಡ್ರೋನ್ ಮಾರುಕಟ್ಟೆಯು ಶೇಕಡಾ 20 ಕ್ಕಿಂತಲೂ ಹೆಚ್ಚಿನ ವಾರ್ಷಿಕ ಬೆಳವಣಿಗೆಯನ್ನು ಕಾಣುತ್ತಿದೆ.

ರಕ್ಷಣೆ, ಕೃಷಿ ಮತ್ತು ವಿತರಣಾ ವಲಯಗಳಲ್ಲಿ ಲಕ್ಷಾಂತರ ಉದ್ಯೋಗಾವಕಾಶಗಳು ಸೃಷ್ಟಿಯಾಗುತ್ತಿವೆ. ಇಂತಹ ಸಮಯದಲ್ಲಿ ವಿಟಿಯುನ ಈ ಉಚಿತ ಉದ್ಯೋಗಾಧಾರಿತ ತರಬೇತಿಯು ವಿದ್ಯಾರ್ಥಿಗಳ ಭವಿಷ್ಯಕ್ಕೆ ದೊಡ್ಡ ಆಸರೆಯಾಗಿದೆ. ಕರ್ನಾಟಕದ ಇತರ ಎಲ್ಲಾ ವಿಶ್ವವಿದ್ಯಾಲಯಗಳೂ ಸಹ ಇದೇ ಮಾದರಿಯನ್ನು ಅಳವಡಿಸಿಕೊಂಡು ತಮ್ಮ ವಿದ್ಯಾರ್ಥಿಗಳಿಗೆ ಇಂತಹ ಅತ್ಯಾಧುನಿಕ ತರಬೇತಿಗಳನ್ನು ನೀಡಬೇಕು. ಇದರಿಂದ ನಮ್ಮ ರಾಜ್ಯದ ಯುವಕರು ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸಲು ಸಾಧ್ಯವಾಗುತ್ತದೆ.

–ಡಾ. ಎಚ್.ಕೆ. ವಿಜಯಕುಮಾರ್, ಮೈಸೂರು.

ಬೀದಿ ದೀಪಗಳಿಲ್ಲದ, ಜನಸಂಚಾರ ಕಡಿಮೆ ಇರುವ ರಸ್ತೆಗಳು ಕುಡುಕರ ಅಡ್ಡೆಗಳಾಗುತ್ತಿವೆ...


ಮಾನ್ಯರೆ,

ಮೈಸೂರು ನಗರದಲ್ಲಿ ಸಾರ್ವಜನಿಕ ಸ್ಥಳಗಳನ್ನೇ ಕುಡುಕರು, ಪುಂಡ–ಪೋಕರಿಗಳು ತಮ್ಮ ಅಡ್ಡೆ ಮಾಡಿಕೊಂಡಿದ್ದಾರೆ. ರಾತ್ರಿಯಾಗುತ್ತಿದ್ದಂತೆ ಬೀದಿ ದೀಪಗಳು ಬೆಳಗದ ಮುಖ್ಯ ರಸ್ತೆಗಳಲ್ಲಿ ಕಾರು ನಿಲ್ಲಿಸಿಕೊಂಡು ರಾಜಾರೋಷವಾಗಿ ಮದ್ಯಪಾನ ಮಾಡುವವರ ಸಂಖ್ಯೆ ಹೆಚ್ಚಾಗಿದೆ.



ರಾತ್ರಿ ವೇಳೆ ಜನಸಂಚಾರವಿಲ್ಲದ ರಸ್ತೆಗಳಂತೂ ಕುಡುಕರ ತಾಣವಾಗಿ ಬದಲಾಗುತ್ತವೆ. ಇಷ್ಟೇ ಅಲ್ಲದೆ ಪಾರ್ಕ್‌ಗಳಲ್ಲೂ ಕುಡುಕರು, ಪುಂಡರ ಹಾವಳಿ ವಿಪರೀತವಾಗಿದೆ. ಉದಾಹರಣೆಗೆ ಕುವೆಂಪುನಗರ 'ಎನ್' ಬ್ಲಾಕ್ ಕೆಎಸ್‌ಆರ್‌ಟಿಸಿ ಡಿಪೋ ಮುಖ್ಯ ರಸ್ತೆಯಲ್ಲಿ ರಾತ್ರಿ ವಾಹನ ಸಂಚಾರ ಕಡಿಮೆಯಾಗುತ್ತಿದ್ದಂತೆ ಕಾರು ನಿಲ್ಲಿಸಿಕೊಂಡು ಮದ್ಯಪಾನ ಮಾಡುತ್ತಾರೆ. ರಾತ್ರಿ 10 ಗಂಟೆ ನಂತರವಂತೂ ಈ ರಸ್ತೆಯಲ್ಲಿ ಮಹಿಳೆಯರು–ಮಕ್ಕಳು ಓಡಾಡದಂತ ಪರಿಸ್ಥಿತಿ ನಿರ್ಮಾಣ ವಾಗುತ್ತದೆ. ಈ ಬಗ್ಗೆ ಹಿರಿಯ ಪೊಲೀಸ್ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳ ಬೇಕು. ಹಾಗೆಯೇ ನಗರ ಪಾಲಿಕೆಯವರು ಬೀದಿ ದೀಪಗಳ ಸಮರ್ಪಕ ನಿರ್ವಹಣೆ ಮೂಲಕ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು



ಸದ್ಗುರು
ಸಂಸ್ಥಾಪಕರು, ಇಶಾ ಫೌಂಡೇಷನ್

ಅನುಭಾವದ ಚಿಂತನೆಗಳು

ಆಧ್ಯಾತ್ಮಿಕತೆಯಲ್ಲಿ ಸ್ವಚ್ಛತೆಯ ಮಹತ್ವ

ಮನೆ ಮತ್ತು ಪರಿಸರವನ್ನು ಸ್ವಚ್ಛವಾಗಿ ಇಟ್ಟುಕೊಳ್ಳುವುದು ನಿಮ್ಮ ಆಧ್ಯಾತ್ಮಿಕ ಬೆಳವಣಿಗೆಯ ಮೇಲೆ ಆಳವಾದ ಪರಿಣಾಮ ಬೀರಬಹುದೇ? ಖಂಡಿತವಾಗಿ. ನೀವು ಮಗುವಾಗಿದ್ದಾಗ, ನಿಮ್ಮನ್ನು ಮತ್ತು ನಿಮ್ಮ ಸುತ್ತಮುತ್ತಲಿನ ವಾತಾವರಣವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು, ಪೋಷಕರು ಮತ್ತು ಹಿರಿಯರು ನಿಮ್ಮ ಮೇಲೆ ಹೊರಿಸಿದ್ದ ಒಂದು ಅವಶ್ಯಕತೆಯಾಗಿದ್ದಿರಬಹುದು. ಆದರೆ ಈ ಸಾಮಾಜಿಕ ನಿರೀಕ್ಷೆಗಳನ್ನು ಮೀರಿ, ಮನೆ ಮತ್ತು ಪರಿಸರವನ್ನು ಸ್ವಚ್ಛವಾಗಿರಿಸುವುದು ನಿಮ್ಮ ಆಧ್ಯಾತ್ಮಿಕ ಬೆಳವಣಿಗೆಯ ಮೇಲೆ ಆಳವಾದ ಪರಿಣಾಮವನ್ನು ಬೀರಬಹುದು.

ಶೌಚ, ಅಥವಾ ಶುಚಿತ್ವ / ಸ್ವಚ್ಛತೆ ಆಧ್ಯಾತ್ಮಿಕ ಬೆಳವಣಿಗೆಯ ಪ್ರಮುಖ ಅಂಶ. ಶುಚಿತ್ವವಿರುವುದು ಕೇವಲ ದೇಹದ ಬಗ್ಗೆಯಲ್ಲ. ಅದು ನಿಮ್ಮ ಸುತ್ತಲಿನ ಪರಿಸರದ ಬಗ್ಗೆಯೂ ಹೌದು. ನಮ್ಮ ಇಂದ್ರಿಯಗಳ ಮೂಲಕ ನಾವು ಗ್ರಹಿಸುವುದೆಲ್ಲವೂ ನಮ್ಮೊಳಗೆ ಹೊಲಸು ಅಥವಾ ಸ್ವಾಸ್ಥ್ಯವನ್ನು ಸೃಷ್ಟಿಸಬಹುದು.

ನಾವು ನಿರ್ಮಿಸುವ ಆಕಾರಗಳು, ನಮ್ಮ ಸುತ್ತಲಿರುವ ರೂಪಗಳು ಮತ್ತು ನಾವು ವಾಸಿಸುವ ಕಟ್ಟಡಗಳು ನಾವೇನು ಎನ್ನುವುದರ ಮೇಲೆ ಅಪಾರ ಪ್ರಭಾವ ಬೀರುತ್ತವೆ.

ನಾವು ಏನನ್ನಾದರೂ ಗ್ರಹಿಸಿದರೆ, ಅದು ನಮ್ಮ ಇಂದ್ರಿಯಗಳಿಗೆ ಹಿತವಾಗಿದ್ದರೆ, ನಾವದನ್ನು ಒಂದು ರೀತಿಯಲ್ಲಿ ಅನುಭವಿಸುತ್ತೇವೆ. ನಾವು ಗ್ರಹಿಸಿದ್ದು ನಮ್ಮ ಇಂದ್ರಿಯಗಳಿಗೆ ಅಹಿತವಾಗಿದ್ದರೆ, ಅದು ನಮ್ಮ ಅನುಭವದಲ್ಲಿ ಹೊಲಸು ಎಂದಾಗುತ್ತದೆ. ನಮ್ಮ ಸುತ್ತಮುತ್ತಲಿನ ಪ್ರದೇಶಗಳು ಸ್ವಚ್ಛವಾಗಿಲ್ಲದಿದ್ದರೆ, ಅಥವಾ ಇನ್ನೊಂದು ರೀತಿಯಲ್ಲಿ ಹೇಳುವುದಾದರೆ, ನಮ್ಮ ಸುತ್ತಮುತ್ತಲಿನ ಪರಿಸರವು ನಮ್ಮ ಇಂದ್ರಿಯಗಳಿಗೆ ಹಿತವಾಗಿಲ್ಲದಿದ್ದರೆ, ನಾವು ನಮ್ಮ ಮನಸ್ಸಿನಲ್ಲಿ ರಚಿಸುವ ಚಿತ್ರಣಗಳು, ನಮ್ಮ ಅನುಭವ ಮಂಚದಲ್ಲಿ ಮೂಡುವ ಚಿತ್ತಾರಗಳು ಅಹಿತಕರವಾಗುತ್ತವೆ. ನೀವು ಈ ರೀತಿಯಲ್ಲಿ ಅಹಿತಕರತೆಯನ್ನು ಸೃಷ್ಟಿಸಿಕೊಂಡಾಗ, ಆನಂದದ ಸ್ಥಿತಿಗಳನ್ನು ತಲುಪುವುದು ಮತ್ತು ನಿಮ್ಮ ಅನುಭವದ ಸ್ವರೂಪವನ್ನು ಸೃಷ್ಟಿಸುವುದು ಕಷ್ಟವಾಗುತ್ತದೆ.



> ❝ ಶೌಚ, ಅಥವಾ ಶುಚಿತ್ವ / ಸ್ವಚ್ಛತೆ ಆಧ್ಯಾತ್ಮಿಕ ಬೆಳವಣಿಗೆಯ ಪ್ರಮುಖ ಅಂಶ. ಶುಚಿತ್ವವಿರುವುದು ಕೇವಲ ದೇಹದ ಬಗ್ಗೆಯಲ್ಲ. ಅದು ನಿಮ್ಮ ಸುತ್ತಲಿನ ಪರಿಸರದ ಬಗ್ಗೆಯೂ ಹೌದು. ನಮ್ಮ ಇಂದ್ರಿಯಗಳ ಮೂಲಕ ನಾವು ಗ್ರಹಿಸುವುದೆಲ್ಲವೂ ನಮ್ಮೊಳಗೆ ಹೊಲಸು ಅಥವಾ ಸ್ವಾಸ್ಥ್ಯವನ್ನು ಸೃಷ್ಟಿಸಬಹುದು. ನಾವು ನಿರ್ಮಿಸುವ ಆಕಾರಗಳು, ನಮ್ಮ ಸುತ್ತಲಿರುವ ರೂಪಗಳು ಮತ್ತು ನಾವು ವಾಸಿಸುವ ಕಟ್ಟಡಗಳು ನಾವೇನು ಎನ್ನುವುದರ ಮೇಲೆ ಅಪಾರ ಪ್ರಭಾವ ಬೀರುತ್ತವೆ.

ನೀವು ದುಃಖದಲ್ಲಿರುವಿರೋ ಅಥವಾ ಸಂತೋಷದಲ್ಲಿರುವಿರೋ ಎನ್ನುವುದು ಮೂಲತಃ ನಿಮ್ಮೊಳಗೆ ನೀವೇನು ಮಾಡುತ್ತಿರುವಿರಿ ಎನ್ನುವುದರ ಮೇಲೆ ಅವಲಂಬಿತವಾಗಿರುತ್ತದೆ. ಆಧ್ಯಾತ್ಮಿಕ ಪ್ರಕ್ರಿಯೆಯ ಅರ್ಥವಿದು: ನೀವೇನು ಎನ್ನುವುದೆಲ್ಲವೂ ಪ್ರಜ್ಞಾಪೂರ್ವಕವಾಗಿ ನಡೆಯಬೇಕು – ನಿಮ್ಮ ಜೀವನದ ಅನುಭವವು ನಿಮ್ಮಿಂದ ನಿರ್ಧರಿಸಲ್ಪಡುತ್ತದೆ. ಇದಾಗಬೇಕಿದ್ದರೆ, ನಮ್ಮ ಇಂದ್ರಿಯಗಳು ಯಾವುದನ್ನೂ ಅಹಿತಕರವೆಂದು ಗ್ರಹಿಸದಿರುವುದು ಬಹಳ ಮುಖ್ಯವಾಗುತ್ತದೆ.

ಪ್ರತಿ ಸಂಸ್ಕೃತಿಯಲ್ಲಿಯೂ, ಯಾವುದಾದರೊಂದು ಸಮಯದಲ್ಲಿ ನಿಮಗೆ – ನಿಮ್ಮ ಹೆತ್ತವರು ಅಥವಾ ನಿಮ್ಮ ಅಜ್ಜಿ–ತಾಂತಂದಿರು – ನಿಮ್ಮ ಬಟ್ಟೆ ಮತ್ತು ಹಾಸಿಗೆಯನ್ನು ಹೇಗೆ ಇಟ್ಟುಕೊಳ್ಳಬೇಕು ಎಂದು ಹೇಳಿರುತ್ತಾರೆ. ನಿರ್ದಿಷ್ಟವಾಗಿ ಭಾರತದಲ್ಲಿ, 'ನಿಮ್ಮ ಹಾಸಿಗೆ ಹೊದಿಕೆಯನ್ನು ಮಡಚದೇ ಹಾಗೆ ಇಟ್ಟರೆ, ದೆವ್ವಗಳು ಬಂದು ಸೇರಿಕೊಳ್ಳುತ್ತವೆ, ರಾತ್ರಿ ಹೊತ್ತು ನೀವು ಮಲಗಿದಾಗ ಅವುಗಳು ನಿಮ್ಮೊಂದಿಗೆ ಮಲಗಿ ನಿಮಗೆ ತೊಂದರೆ ಕೊಡುತ್ತವೆ' ಎಂದು ಹೇಳುತ್ತಾರೆ. ಇಂಗ್ಲಿಷ್–ನಲ್ಲಿ ಒಂದು ಹೇಳಿಕೆ ಇದೆ – "ನಿಮ್ಮ ಹಾಸಿಗೆಯನ್ನು ಹೇಗೆ ಇಟ್ಟುಕೊಳ್ಳುತ್ತೀರೋ, ಹಾಗೆಯೇ ನೀವದರ ಮೇಲೆ ಮಲಗುತ್ತೀರಿ." ಇದು ಮೂಲತಃ ನಿಮ್ಮ ಸುತ್ತಲಿರುವ ರೂಪಗಳ ಬಗ್ಗೆ ಇರುವುದು. ಇಡೀ ಅಸ್ತಿತ್ವವು ಕೋಟ್ಯಂತರ ವಿಭಿನ್ನ ರೀತಿಗಳಲ್ಲಿ ಶಕ್ತಿಯ ಒಂದು ಅಭಿವ್ಯಕ್ತಿ ಎಂದು ವಿಜ್ಞಾನಿಗಳು ಇಂದು ನಮಗೆ ಹೇಳುತ್ತಿದ್ದಾರೆ. ಶಕ್ತಿಯು ರೂಪಗಳನ್ನು ಸೃಷ್ಟಿಸಿದಂತೆ, ರೂಪಗಳೂ ಶಕ್ತಿಯನ್ನು ಸೃಷ್ಟಿಸುತ್ತವೆ. ಅದಲ್ಲದೇ ನಿಮ್ಮ ಸುತ್ತಲಿನ ಪ್ರತಿಯೊಂದು ರೂಪವೂ ನಿರ್ದಿಷ್ಟ ರೀತಿಯ ಶಕ್ತಿಯನ್ನು ಸೃಷ್ಟಿಸುತ್ತಿದೆ.

ನಾವು ನಿರ್ಮಿಸುವ ಆಕಾರಗಳು, ನಮ್ಮ ಸುತ್ತಲಿರುವ ರೂಪಗಳು ಮತ್ತು ನಾವು ವಾಸಿಸುವ ಕಟ್ಟಡಗಳು ನಮ್ಮ ಮೇಲೆ ಅಪಾರ ಪ್ರಭಾವ ಬೀರುತ್ತವೆ. ನಾವು ಕೂರುವ ರೀತಿ, ನಮ್ಮನ್ನು ನಾವು ವ್ಯವಸ್ಥಿತಗೊಳಿಸಿಕೊಳ್ಳುವ ರೀತಿ ಮತ್ತು ನಮ್ಮ ಸುತ್ತಲಿರುವ ವಿಷಯಗಳನ್ನು ನಾವು ಇರಿಸಿಕೊಳ್ಳುವ ರೀತಿಯ ಕುರಿತು ಸ್ವಲ್ಪ ಹೆಚ್ಚು ಜಾಗೃತಿ ಮೂಡಿದರೆ, ಅಂತರ್ಮುಖರಾಗಲು ಅನುವು ಮಾಡಿಕೊಡುವಂತಹ ದೈಹಿಕ ವ್ಯವಸ್ಥೆಯನ್ನು ನಾವು ರಚಿಸಬಹುದು. ಇದು ನಮ್ಮ ಆಧ್ಯಾತ್ಮಿಕ ಪ್ರಕ್ರಿಯೆಯನ್ನು ಸಾಕಷ್ಟು ಸುಲಭಗೊಳಿಸುತ್ತದೆ. ನಿಮಗೆ ಒಂದು ಜಾಗದಿಂದ ಮತ್ತೊಂದು ಜಾಗಕ್ಕೆ ಪಯಣಿಸಬೇಕಾದರೆ, ಹೇಗಾದರೂ ಹೋಗಬಹುದು. ಆದರೊಂದು ಸರಿಯಾದ ರಸ್ತೆಯನ್ನು ನಿರ್ಮಿಸಿದ್ದರೆ, ಅಲ್ಲಿಗೆ ಹೋಗುವುದು ಸುಲಭವಾಗುತ್ತದೆ. ಆ ಹಿನ್ನಲೆಯಲ್ಲಿ, ನಮ್ಮ ಸುತ್ತಲಿರುವ ದೈಹಿಕ ವ್ಯವಸ್ಥೆಯನ್ನು ನಾವು ಅಂತರ್ಮುಖರಾಗುವಂತೆ ಅನುವು ಮಾಡಿಕೊಡುವಂತಹ ರೀತಿಯಲ್ಲಿ ನಿರ್ಮಿಸಿದರೆ, ಇದು ಬಹಳ ಸುಲಭವಾಗಿ ಆಗುತ್ತದೆ.

ರಾಜ್ಯದಲ್ಲಿ ಮತ್ತೆ ಕುರ್ಚಿ ಬಿಕ್ಕಟ್ಟು

ಸಿಎಂ, ಡಿಸಿಎಂ ಜೊತೆ ಸುರ್ಜೇವಾಲ ಪ್ರತ್ಯೇಕ ಸಭೆ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರವು ಯಶಸ್ವಿಯಾಗಿ ಮೂರು ವರ್ಷಗಳನ್ನು ಪೂರೈಸಿ, ಇದೀಗ ನಾಲ್ಕನೇ ವರ್ಷಕ್ಕೆ ಹೆಜ್ಜೆ ಇಟ್ಟಿದೆ. ಆದರೆ, ಇದೇ ಹೊತ್ತಿನಲ್ಲಿ ರಾಜ್ಯ ರಾಜಕಾರಣದಲ್ಲಿ ಮತ್ತೊಮ್ಮೆ ಕುರ್ಚಿ ಬಿಕ್ಕಟ್ಟು ತಾರಕಕ್ಕೇರುವ ಮುನ್ಸೂಚನೆಗಳು ಸಿಗುತ್ತಿವೆ.



ನೆರೆಯ ಕೇರಳದಲ್ಲಿ ಇತ್ತೀಚೆಗಷ್ಟೇ ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದ ಬೆನ್ನಲ್ಲೇ, ಹೈಕಮಾಂಡ್ ಇದೀಗ ಕರ್ನಾಟಕದ ನಾಯಕತ್ವ ಗೊಂದಲವನ್ನು ಬಗೆಹರಿಸಲು ಗಂಭೀರವಾಗಿ ಮುಂದಾದಂತೆ ಕಾಣುತ್ತಿದೆ.

ನಗರದಲ್ಲಿ ಆಯೋಜಿಸಲಾಗಿದ್ದ ನೀಟ್ ಪರೀಕ್ಷೆ ಅಕ್ರಮಗಳ ವಿರುದ್ಧದ ಪ್ರತಿಭಟನೆಯಲ್ಲಿ ಭಾಗವಹಿಸಲು ಬೆಂಗಳೂರಿಗೆ ಆಗಮಿಸಿದ್ದ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇ ವಾಲ ಅವರು, ಗುಪ್ತವಾಗಿ ನಡೆಸಿದ ಸಭೆಗಳು ಈ ಅನುಮಾನಗಳಿಗೆ ದಟ್ಟವಾದ ಪುಷ್ಟಿ ನೀಡಿವೆ.

ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಮೊಕ್ಕಾಂ ಹೂಡಿದ್ದ ಉಸ್ತುವಾರಿ ಸುರ್ಜೇವಾಲ, ಮುಖ್ಯಮಂತ್ರಿ ಸಿದ್ದ ರಾಮಯ್ಯ ಹಾಗೂ ಉಪ ಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ್ ಅವರ ಜೊತೆ ಪ್ರತ್ಯೇಕವಾಗಿ ಸುದೀರ್ಘ ಸಭೆಗಳನ್ನು ನಡೆಸಿದ್ದಾರೆ. 3 ವರ್ಷಗಳ ಆಡಳಿತಾವಧಿ ಮುಗಿದಿರುವುದರಿಂದ ಅಧಿಕಾರ ಹಂಚಿಕೆಯ ಮೂಲ ಒಪ್ಪಂದದ ಕುರಿತು ಉಭಯ ನಾಯಕರ ಅಭಿಪ್ರಾಯಗಳನ್ನು ಸುರ್ಜೇವಾಲ ಆಲಿಸಿದ್ದಾರೆ ಎನ್ನಲಾಗಿದೆ.

ರಾಜ್ಯದ ಈ ಪ್ರಮುಖ ಬಿಕ್ಕಟ್ಟನ್ನು ಬಗೆಹರಿಸಲು ಎಐಸಿಸಿ ನಾಯಕ ರಾಹುಲ್ ಗಾಂಧಿ ಅವರೇ ನೇರವಾಗಿ ಅಖಾಡಕ್ಕಿಳಿಯಲಿದ್ದಾರೆ. ಆದರೆ, ರಾಹುಲ್ ಗಾಂಧಿ ಅವರು ಮೇ 24 ರಿಂದ ಸುಮಾರು 11 ದಿನಗಳ ಕಾಲ ಬ್ರೆಜಿಲ್ ಹಾಗೂ ಜರ್ಮನಿ ಪ್ರವಾಸ ಕೈಗೊಳ್ಳಲಿದ್ದಾರೆ.

ಒಂದೊಮ್ಮೆ ರಾಹುಲ್ ಗಾಂಧಿ ಅವರ ಈ ವಿದೇಶಿ ಪ್ರವಾಸದ ವೇಳಾಪಟ್ಟಿಯಲ್ಲಿ ಏನಾದರೂ ಬದಲಾವಣೆ ಅಥವಾ ಮುಂದೂಡಿಕೆ ಆದಲ್ಲಿ, ತಕ್ಷಣವೇ ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಇಬ್ಬರನ್ನೂ ದೆಹಲಿಗೆ ಕರೆಸಿಕೊಳ್ಳುವ ಸಾಧ್ಯತೆ ದಟ್ಟವಾಗಿದೆ. ಹೈಕಮಾಂಡ್‌ನ ಮುಂದಿನ ಕರೆಯ ಕುರಿತು ನಾಳೆಯ ಒಳಗಾಗಿ (ಶುಕ್ರವಾರ) ಸಿಎಂ ಮತ್ತು ಡಿಸಿಎಂ ಇಬ್ಬರಿಗೂ ಖಚಿತಪಡಿಸುವುದಾಗಿ ಸುರ್ಜೇವಾಲ ಭರವಸೆ ನೀಡಿದ್ದಾರೆ ಎನ್ನಲಾಗಿದೆ.

ಒಂದೊಮ್ಮೆ ರಾಹುಲ್ ಗಾಂಧಿ ಅವರ ಪ್ರವಾಸ ನಿಗದಿಯಂತೆ ನಡೆದರೆ, ಈ ತಿಂಗಳ ಕೊನೆಯ ವಾರದಲ್ಲಿ ಕಾಂಗ್ರೆಸ್ ಹಿರಿಯ ನಾಯಕಿ ಸೋನಿಯಾ ಗಾಂಧಿ ಅವರ ನೇತೃತ್ವದಲ್ಲೇ ದೆಹಲಿಯಲ್ಲಿ ಹೈ–ವೋಲ್ಟೇಜ್ ಸಭೆ ನಡೆಯುವ ಸಾಧ್ಯತೆ ಇದೆ. ಈ ಸಭೆಯಲ್ಲೇ ಕರ್ನಾಟಕದ ಅಧಿಕಾರ ಸೂತ್ರದ ಅಂತಿಮ ಭವಿಷ್ಯ ನಿರ್ಧಾರವಾಗಲಿದೆ ಎಂದು ಮೂಲಗಳು ತಿಳಿಸಿವೆ.

ಪಿಯುಸಿ, ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಮೈಸೂರು, ಮೇ 21(ಜಿಎ)–ಬೆಂಗಳೂರಿನ ಬಸವೇಶ್ವರ ನಗರದ ಕನಕಶ್ರೀ ಚಾರಿಟಬಲ್ ಟ್ರಸ್ಟ್ ವತಿಯಿಂದ 2025–26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.95 ಮತ್ತು ಅದಕ್ಕಿಂತಲೂ ಹೆಚ್ಚಿನ ಅಂಕ, ಪಿಯುಸಿ ಪರೀಕ್ಷೆಯಲ್ಲಿ ಕನಿಷ್ಠ ಶೇ.90 ಅಂಕ ಮತ್ತು ಅದಕ್ಕಿಂತಲೂ ಹೆಚ್ಚಿನ ಅಂಕಗಳನ್ನು (ಹಾಲುಮತ, ಕಾಡು ಕುರುಬ, ಜೇನುಕುರುಬ) ಗಳಿಸಿದ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಟ್ರಸ್ಟ್ ಅಧ್ಯಕ್ಷ ಟಿ.ಬಿ. ಬಳಗಾವಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರು ವಿಭಾಗದ ಜಿಲ್ಲೆಗಳಾದ ಮೈಸೂರು, ಮಂಡ್ಯ, ಚಾಮರಾಜನಗರ, ಹಾಸನ, ಕೊಡಗು, ದಕ್ಷಿಣ ಕನ್ನಡ, ಉಡುಪಿ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ವಿದ್ಯಾಭ್ಯಾಸ ಮಾಡಿರುವವರು ಮಾತ್ರ ಅರ್ಜಿ ಸಲ್ಲಿಸಬಹುದು. ಆಯ್ಕೆಗೊಂಡ ವಿದ್ಯಾರ್ಥಿಗಳಿಗೆ 5000 ರೂ. ನಗದು ಪ್ರೋತ್ಸಾಹಧನ ಮತ್ತು ಪ್ರಶಂಸಾ ಪತ್ರ ನೀಡಿ ಪುರಸ್ಕರಿಸಲಾಗುವುದು ಎಂದರು.

ಪ್ರತಿ ಅರ್ಹ ವಿದ್ಯಾರ್ಥಿಗಳು ಅಂಕಪಟ್ಟಿಯ ದೃಢೀಕೃತ ನಕಲು ಪ್ರತಿ, ವರ್ಗಾವಣೆ ಪ್ರಮಾಣ ಪತ್ರ ಅಥವಾ ಜಾತಿ ಪ್ರಮಾಣ ಪತ್ರದ ದೃಢೀಕೃತ ನಕಲು ಪ್ರತಿ, ವಿದ್ಯಾರ್ಥಿಯ ಆಧಾರ್ ಕಾರ್ಡ್ ನಕಲು ಪ್ರತಿ ಮತ್ತು ಭಾವಚಿತ್ರದೊಂದಿಗೆ ತಂದೆ–ತಾಯಿ ಹೆಸರು, ವಿಳಾಸ, ದೂರವಾಣಿ ಸಂಖ್ಯೆ, ವಿದ್ಯಾರ್ಥಿಯು ಗಳಿಸಿದ ಒಟ್ಟು ಅಂಕ, ವಿದ್ಯಾಭ್ಯಾಸ ಮಾಡಿದ ಶಾಲೆಯ ಹೆಸರು, ವಿಳಾಸ ಮತ್ತು ಜಿಲ್ಲೆ ಮುಂತಾದ ವಿವರಗಳನ್ನೊಳಗೊಂಡ ಅರ್ಜಿಯನ್ನು ಜೂ.8ರೊಳಗೆ ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಸ್ವೀಕೃತಿ ಬಾಕಿ ಮೂಲಕ ಟಿ.ಬಿ. ಬಳಗಾವಿ, ಅಧ್ಯಕ್ಷರು, ಕನಕಶ್ರೀ ಚಾರಿಟಬಲ್ ಟ್ರಸ್ಟ್, ಕೇರ್ ಆಫ್ ಕನಕಶ್ರೀ ಗೃಹ ನಿರ್ಮಾಣ ಸಹಕಾರ ಸಂಘ, ನಂ. 20/31, 6ನೇ ಮುಖ್ಯ ರಸ್ತೆ, 80 ಅಡಿ ರಸ್ತೆ, ಕೆಎಚ್‌ಬಿ ಕಾಲೋನಿ, 1 ನೇ ಹಂತ ಬಸವೇಶ್ವರನಗರ, ಬೆಂಗಳೂರು 560079ಕ್ಕೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ದೂ.080–23585684, 98451 01696 ಸಂಪರ್ಕಿಸಿ ಎಂದು ತಿಳಿಸಿದರು. ಈ ವೇಳೆ

ಸುದ್ದಿಗೋಷ್ಠಿಯಲ್ಲಿ ಟ್ರಸ್ಟ್ ಗೌರವ ಅಧ್ಯಕ್ಷ ಹೆಚ್.ಎಂ.ರೇವಣ್ಣ, ಕಾರ್ಯದರ್ಶಿ ಪಿ.ಎನ್.ಕೃಷ್ಣಮೂರ್ತಿ, ಖಜಾಂಚಿ ಎಂ. ಪ್ರಕಾಶ್, ಟ್ರಸ್ಟಿ ವಿ.ಮುನಿರಾಜಪ್ಪ, ಕುರುಬ ಸಮುದಾಯ ಮುಖಂಡ ಸುಬ್ರಹ್ಮಣ್ಯ ಉಪಸ್ಥಿತರಿದ್ದರು.

ಧರ್ಮಸ್ಥಳ ಬುರುಡೆ ಪ್ರಕರಣದ ತನಿಖೆ ಮತ್ತೆ ಚುರುಕು

ವಿಧಿವಿಜ್ಞಾನ ತಂಡದ ಜೊತೆ ಮತ್ತೆ ಬಂಗ್ಲೆಗುಡ್ಡೆ ಕಾಡಿಗೆ ತೆರಳಿದ ಎಸ್‌ಐಟಿ

ಮಂಗಳೂರು: ಧರ್ಮಸ್ಥಳ ಗ್ರಾಮದ ಬುರುಡೆ ರಹಸ್ಯ ಪ್ರಕರಣದ ತನಿಖೆ ಮತ್ತೆ ಚುರುಕು ಪಡೆದುಕೊಂಡಿದೆ. 4 ತಿಂಗಳ ಹಿಂದೆ 7 ಅಸ್ಥಿಪಂಜರ ಪತ್ತೆಯಾಗಿದ್ದ ಬಂಗ್ಲೆಗುಡ್ಡೆ ಕಾಡಿಗೆ ವಿಧಿವಿಜ್ಞಾನ ಪ್ರಯೋಗಾಲಯ ತಂಡ ಭೇಟಿ ನೀಡಿದೆ.

ಮೂವರು ಅಧಿಕಾರಿಗಳನ್ನೊಳಗೊಂಡ ಎಫ್‌ಎಸ್‌ಎಲ್ ಅಧಿಕಾರಿಗಳ ತಂಡ ಇಂದು ಬೆಂಗಳೂರಿನಿಂದ ಎಸ್‌ಐಟಿ ಅಧಿಕಾರಿಗಳೊಂದಿಗೆ ಬಂಗ್ಲೆಗುಡ್ಡೆ ಅರಣ್ಯ ಪ್ರದೇಶಕ್ಕೆ ಭೇಟಿ ನೀಡಿದೆ. 4 ತಿಂಗಳ ಹಿಂದೆ 4 ತಿಂಗಳ ಹಿಂದೆ 7 ಅಸ್ಥಿಪಂಜರ ಸಿಕ್ಕಿದ್ದ ಜಾಗದಲ್ಲಿ ಪರಿಶೀಲನೆ ನಡೆಸಿದೆ. ಅಲ್ಲದೇ ಆರೋಪಿ ಪ್ರದೀಪ್ ಕುಲಾಲ್‌ನನ್ನ ಸ್ಥಳಕ್ಕೆ ಕರೆತಂದು ಪರಿಶೀಲನೆ ನಡೆಸಲಾಗಿದೆ.

ಈ ಪ್ರಕರಣದ ಸಾಕ್ಷಿ ದೂರುದಾರ ಚಿನ್ನ ಸಿ.ಎನ್ ಅಲಿಯಾಸ್ ಚಿನ್ನಯ್ಯ ನ್ಯಾಯಾಲಯಕ್ಕೆ ಒಪ್ಪಿಸಿದ್ದ ತಲೆ ಬುರುಡೆಯನ್ನು ಕಾಡಿನಿಂದ ಹೊರತೆಗೆದಿದ್ದ ದೃಶ್ಯ ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡಿತ್ತು. ಬಳಿಕ ಆ ತಲೆ ಬುರುಡೆಯನ್ನು ನಾನು ನೆಲದಿಂದ ಹೊರತೆಗೆದಿಲ್ಲ ಎಂದು ಚಿನ್ನ ಎಸ್ ಪೊಲೀಸರ ಮುಂದೆ ಒಪ್ಪಿಕೊಂಡಿದ್ದ. ತಲೆಬುರುಡೆ ತೆಗೆಯುವ ದೃಶ್ಯವನ್ನು ಚಿತ್ರೀಕರಿಸಿದ್ದ ಪ್ರದೀಪ್ ಕುಲಾಲ್ ಎಂಬಾತ ಈ ಬಗ್ಗೆ ಎಸ್‌ಐಟಿ ಮುಂದೆ ಹೇಳಿಕೆ ನೀಡಿದ್ದ. ಆತನನ್ನು ಎಸ್‌ಐಟಿ ಹಾಗೂ ವಿಧಿವಿಜ್ಞಾನ ತಂಡದ ಅಧಿಕಾರಿಗಳು ಜೊತೆಯಲ್ಲಿ ಕಾಡಿನೊಳಗೆ ಕರೆದೊಯ್ದಿದ್ದಾರೆ.

ಗುರುವಾರ ಮಧ್ಯಾಹ್ನ 2.30ರ ಸುಮಾರಿಗೆ ಎಸ್‌ಐಟಿ ಅಧಿಕಾರಿಗಳು ಕಾಡಿನೊಳಗೆ ತೆರಳಿದ್ದು, ಸಂಜೆಯಾದರೂ ಹೊರಗೆ ಬಂದಿಲ್ಲ. ಟಾರ್ಚ್ ಮತ್ತಿತರ ಪರಿಕರಗಳನ್ನು ಜೊತೆಯಲ್ಲಿ ಒಯ್ದಿದ್ದೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

7 ಅಸ್ಥಿಪಂಜರ ಎಫ್‌ಎಸ್‌ಎಲ್‌ಗೆ ರವಾನೆ : ಬುರುಡೆ ಪ್ರಕರಣದ ತನಿಖೆ ಚುರುಕುಗೊಳಿಸಿದ್ದ ಎಸ್‌ಐಟಿ ತಂಡ, 4 ತಿಂಗಳ ಹಿಂದೆ ಬಂಗ್ಲೆಗುಡ್ಡೆ ಅರಣ್ಯದಲ್ಲಿ ಉತ್ಖನನ ಕೈಗೊಂಡಿತ್ತು. ಸೆ.17 ರಂದು 5 ಅಸ್ಥಿಪಂಜರ, ಸೆ.18 ರಂದು 2 ಅಸ್ಥಿಪಂಜರ ಪತ್ತೆಯಾಗಿತ್ತು. ಎಲ್ಲವೂ ಆತ್ಮಹತ್ಯೆ ಮಾಡಿಕೊಂಡ ಸ್ಥಿತಿಯಲ್ಲಿತ್ತು. ಈ ಅಸ್ಥಿಗಳನ್ನು ಬೆಳ್ತಂಗಡಿ ಎಸ್‌ಐಟಿ ಕಚೇರಿಯಿಂದ ಹೆಚ್ಚಿನ ತನಿಖೆಗಾಗಿ ಬೆಂಗಳೂರಿನ ಮಡಿವಾಳದಲ್ಲಿರುವ ಎಫ್‌ಎಸ್‌ಎಲ್ ಕೇಂದ್ರಕ್ಕೆ ಅಸ್ಥಿಪಂಜರಗಳ ರವಾನೆ ಮಾಡಲಾಗಿತ್ತು.

ಇದಕ್ಕೂ ಮುನ್ನ ಪ್ರಕರಣದ ತನಿಖೆ ನಡೆಸಿದ್ದ ಎಸ್‌ಐಟಿ ಕಳೆದ ನ.20 ರಂದು ಬೆಳ್ತಂಗಡಿಯ ಜೆಎಂಎಫ್‌ಸಿ ನ್ಯಾಯಾಲಯಕ್ಕೆ ತನಿಖಾ ಪ್ರಾಥಮಿಕ ವರದಿ ಸಲ್ಲಿಸಿತ್ತು. ಈ ವೇಳೆ ಶೀಘ್ರವೇ ತನಿಖೆ ನಡೆಸಿ ಪೂರ್ಣ ವರದಿ ಸಲ್ಲಿಸುವಂತೆ ಕೋರ್ಟ್ ಸೂಚನೆ ನೀಡಿತ್ತು.

ದೇಶದಲ್ಲಿ ಪೆಟ್ರೋಲ್, ಡೀಸೆಲ್ ಖರೀದಿಗೆ ಯಾವುದೇ ಮಿತಿ ಇಲ್ಲ: ಕೇಂದ್ರ ಸ್ಪಷ್ಟನೆ

ನವದೆಹಲಿ: ಪೆಟ್ರೋಲ್, ಡೀಸೆಲ್ ಖರೀದಿಗೆ ಯಾವುದೇ ಮಿತಿಯಿಲ್ಲ ಎಂದು ಕೇಂದ್ರ ಸರ್ಕಾರ ಗುರುವಾರ (ಇಂದು) ಪುನರುಚ್ಚರಿಸಿದೆ. ಅಲ್ಲದೇ ಅಕ್ರಮ ವಿತರಣೆ ಮತ್ತು ದಾಸ್ತಾನು ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆಯನ್ನೂ ನೀಡಿವೆ.

ಕೆಲವು ರಾಜ್ಯಗಳಲ್ಲಿ ಪೆಟ್ರೋಲ್ ಬಂಕ್‌ಗಳು ಪೆಟ್ರೋಲ್ ಮತ್ತು ಡೀಸೆಲ್ ಖರೀದಿಗೆ ಮಿತಿ ಹೇರಿವೆ ವದಂತಿಗಳು ಹಾಗೂ ತೈಲ ಪೂರೈಕೆಯಲ್ಲಿನ ಅಡಚಣೆ ವರದಿಗಳ ಕುರಿತು ಇಂಡಿಯನ್ ಆಯಿಲ್ ಪ್ರಕಟಣೆ ಹೊರಡಿಸಿದೆ. ಈ ಬೆನ್ನಲ್ಲೇ ಕೇಂದ್ರ ಸರ್ಕಾರ ಕೂಡ ತೈಲ ಖರೀದಿಗೆ ಮಿತಿ ಇಲ್ಲ ಎಂದು ಪುನರುಚ್ಚರಿಸಿದೆ.

ಜಂಟಿ–ಸಚಿವಾಲಯ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಪೆಟ್ರೋಲಿಯಂ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ, ಅವಶ್ಯಕತೆಗಳನ್ನು ಪೂರೈಸಲು ನಮ್ಮಲ್ಲಿ ಸಾಕಷ್ಟು ದಾಸ್ತಾನುಗಳಿವೆ. ಜಾಗತಿಕ, ಭೌಗೋಳಿಕ, ರಾಜಕೀಯ ಉದ್ವಿಗ್ನತೆ ಆಮದುಗಳ ಮೇಲೆ ಪರಿಣಾಮ ಬೀರುತ್ತಿದ್ದರೂ, ಭಾರತವು ಪೆಟ್ರೋಲ್, ಡೀಸೆಲ್, ಎಲ್‌ಪಿಜಿ ಮತ್ತು ನೈಸರ್ಗಿಕ ಅನಿಲದ ಸಾಕಷ್ಟು ದಾಸ್ತಾನನ್ನು ಹೊಂದಿದೆ. ನಾಗರಿಕರ ಮೇಲಿನ ಹೊರೆ ಕಡಿಮೆ ಮಾಡಲು ಸರ್ಕಾರ ಅಗತ್ಯ ಕ್ರಮಗಳನ್ನ ತೆಗೆದುಕೊಂಡಿದೆ. ದೇಶಾದ್ಯಂತ ಹೆಚ್ಚುತ್ತಿರುವ ಬೇಡಿಕೆಗಳನ್ನು ಪೂರೈಸಲು ಎಲ್‌ಪಿಜಿ ಉತ್ಪಾದನೆಯನ್ನು ಹೆಚ್ಚಿಸಲಾಗಿದೆ ಎಂದು ತಿಳಿಸಿದ್ದಾರೆ.



ಇಂಧನ ಅಕ್ರಮಗಳ ತಡೆಗೆ ಕ್ರಮ : ಮುಂದುವರಿದು ಮಾತನಾಡಿ, ಬಿಕ್ಕಟ್ಟಿನ ನಡುವೆಯೂ ದೇಶಾದ್ಯಂತ ಸುಮಾರು 1.34 ಕೋಟಿ ಎಲ್‌ಪಿಜಿ ಸಿಲಿಂಡರ್‌ಗಳನ್ನ ವಿತರಣೆ ಮಾಡಲಾಗಿದೆ. ವಾಣಿಜ್ಯ ಎಲ್‌ಪಿಜಿ ಮಾರಾಟವು 23,588 ಟನ್‌ಗಳನ್ನು ತಲುಪಿದೆ. ನೈಸರ್ಗಿಕ ಅನಿಲ ವಿಷಯದಲ್ಲಿ 7.99 ಲಕ್ಷ ಹೊಸ ಗ್ರಾಹಕರನ್ನು ನೋಂದಾಯಿಸಲಾಗಿದೆ. ಜೊತೆಗೆ ದೇಶಾದ್ಯಂತ ಇಂಧನ ವಿತರಣೆ ಮೇಲ್ವಿಚಾರಣೆ ಮಾಡಲು ಮತ್ತು ಅಕ್ರಮಗಳನ್ನ ತಡೆಯಲು ಅಗತ್ಯ ಕ್ರಮ ತೆಗೆದುಕೊಳ್ಳಲಾಗುತ್ತಿದೆ ಎಂದು ಅಧಿಕಾರಿಗಳಿಂದ ಮಾಹಿತಿ ಪಡೆದರು.

ದೇಶದ ವಿವಿಧೆಡೆ ಈವರೆಗೆ 500 ಕಡೆ ದಾಳಿ ನಡೆಸಲಾಗಿದೆ, 111 ಮಂದಿಗೆ ಶೋಕಾಸ್ ನೋಟಿಸ್ ನೀಡಲಾಗಿದೆ, 35 ವಿತರಕರಿಗೆ ನೋಟಿಸ್ ನೀಡಲಾಗಿದೆ, ಒಬ್ಬ ವಿತರಕನನ್ನ ಸಸ್ಪೆಂಡ್ ಮಾಡಲಾಗಿದೆ ಎಂದು ಸುಜಾತಾ ಶರ್ಮಾ ವಿವರಿಸಿದರು.

ಇಂಧನ ಖರೀದಿಗೆ ಮಿತಿಯಿಲ್ಲ: ಇನ್ನೂ ದೇಶಾದ್ಯಂತ ಇಂಧನ ಸರಬರಾಜು ಸ್ಥಿರವಾಗಿದ್ದು, ಖರೀದಿಗೆ ಯಾವುದೇ ಮಿತಿಯಿಲ್ಲ ಎಂದು ಇಂಡಿಯನ್ ಆಯಿಲ್ ಕಾರ್ಪೊರೇಷನ್ ಲಿಮಿಟೆಡ್ ಹೇಳಿದೆ.

ಗ್ರಾಹಕರು ಆತಂಕಕ್ಕೆ ಒಳಗಾಗುವುದು ಬೇಡ, ವದಂತಿಗಳು ಮತ್ತು ತಪ್ಪು ಮಾಹಿತಿಗಳಿಗೆ ಕಿವಿಗೊಡಬಾರದು. ದೇಶಾದ್ಯಂತ ವಿಶ್ವಾಸಾರ್ಹ ಇಂಧನ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಇಂಡಿಯನ್ ಆಯಿಲ್ ಬದ್ಧವಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ನೀಟ್ ಬೇಡ; ಹಳೆ ವ್ಯವಸ್ಥೆಯೇ ಇರಲಿ

● ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹ ● ನೀಟ್ ಅವಾಂತರ ವಿರೋಧಿಸಿ ಯುವ ಕಾಂಗ್ರೆಸ್ ಪ್ರತಿಭಟನೆ ವೇಳೆ ಕೇಂದ್ರದ ವಿರುದ್ಧ ಸಿಎಂ ವಾಗ್ದಾಳಿ



ಬೆಂಗಳೂರು, ಮೇ 21(ಕೆಎಂಶಿ)– ವೈದ್ಯಕೀಯ ಸೀಟುಗಳ ಪ್ರವೇಶಕ್ಕೆ ನಡೆಸುವ ನೀಟ್ ಅನ್ನು ರದ್ದು ಮಾಡಿ, 2015ಕ್ಕೂ ಮೊದಲು ಇದ್ದ ವ್ಯವಸ್ಥೆಯನ್ನೇ ಪುನರ್ ಸ್ಥಾಪಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಆಗ್ರಹಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಕೂಡಲೇ ವಿದೇಶ ಪ್ರವಾಸ ಮೊಟಕುಗೊಳಿಸಿ, ರಾಷ್ಟ್ರದ ಜ್ವಲಂತ ಸಮಸ್ಯೆಗಳ ಪರಿಹಾರಕ್ಕೆ ಸರ್ವ ಪಕ್ಷಗಳ ಸಭೆ ಕರೆಯುವಂತೆ ಒತ್ತಾಯಿಸಿದ್ದಾರೆ. ನೀಟ್ ಅವಾಂತರಕ್ಕೆ ಪ್ರಧಾನಿ ಕ್ಷಮೆಯಾಚಿಸಬೇಕು. ಪ್ರಶ್ನೆ ಪತ್ರಿಕೆ ಸೋರಿಕೆಗೆ ಕಾರಣರಾದ ಅಧಿಕಾರಿಗಳನ್ನು ವಜಾ ಮಾಡಬೇಕು ಎಂದಿದ್ದಾರೆ.

ನೀಟ್ ಅಕ್ರಮಗಳ ಕುರಿತು ಕೇಂದ್ರ ಸರ್ಕಾರದ ವಿರುದ್ಧ ಕರ್ನಾಟಕ ಯುವ ಕಾಂಗ್ರೆಸ್ ಪ್ರತಿಭ'ಟನೆ ವೇಳೆ ಮಾತನಾಡಿದ ಅವರು, ಬಿಜೆಪಿ ಮತ್ತು ಆರ್‌ಎಸ್‌ಎಸ್‌ನ ಬಣ್ಣದ ಮಾತುಗಳಿಗೆ ಯುವಜನರು ಮರುಳಾಗಬೇಡಿ ಎಂದು ಕಿವಿಮಾತು ಹೇಳಿದರು.

ಈ ಸತ್ಯ ಅರಿಯದಿದ್ದರೆ ನಿಮ್ಮ ಭವಿಷ್ಯ ನೀವೇ ಹಾಳು ಮಾಡಿಕೊಳ್ಳಲು ಸಿದ್ಧರಾಗಿ. ನಿಮ್ಮ ಸಮಾದಿಗೆ ನೀವೇ ಹಳ್ಳ ತೋಡಿಕೊಳ್ಳುವಿರಿ. ನಿಮ್ಮ ಚಟ್ಟಕ್ಕೆ ನೀವೇ ಬಿದಿರು ಕಟ್ಟಿಕೊಳ್ಳುವಿರಿ ಎಂಬುದನ್ನು ಅರ್ಥ ಮಾಡಿಕೊಳ್ಳಿ ಎಂದರು.

ಬಿಜೆಪಿಗೆ ಒಂದು ಪರೀಕ್ಷೆಯನ್ನೂ ಸರಿಯಾಗಿ ನಡೆಸಲಾಗುತ್ತಿಲ್ಲ. ಎಷ್ಟು ಬಾರಿ ಪ್ರಶ್ನೆ ಪತ್ರಿಕೆಗಳು ಸೋರಿಕೆಯಾಗಿ ಅನೇಕ ಮಕ್ಕಳು ಆತ್ಮಹತ್ಯೆ ಮಾಡಿಕೊಂಡರೂ ಇವರಿಗೆ ಬುದ್ಧಿ ಬಂದಿಲ್ಲ. ಇಲ್ಲಿ ಮಕ್ಕಳು ನೇಣಿಗೆ ಕೊರಳೊಡ್ಡುತ್ತಿದ್ದರೆ ಪ್ರಧಾನಿ ಮೋದಿ ಯೂರೋಪ್‌ನಲ್ಲಿ ತಿರುಗಾಡುತ್ತಿದ್ದಾರೆ. ಆರ್‌ಎಸ್‌ಎಸ್ ಮೂಲದ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಮರು ಪರೀಕ್ಷೆ ಮಾಡಲು ಹೊರಟಿರುವುದು ನಾಚಿಕೆಗೇಡು ಎಂದರು.

ಪ್ರಧಾನಿ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ಹಾಗೂ ಆ ಪಕ್ಷದ ಆಡಳಿತದ ರಾಜ್ಯಗಳಲ್ಲಿ ಒಂದು ಪರೀಕ್ಷೆಯನ್ನೂ ನೆಟ್ಟಗೆ ಮಾಡಲು ಆಗುವುದಿಲ್ಲ.

ದೇಶದ ಜ್ವಲಂತ ಸಮಸ್ಯೆಗಳ ಬಗ್ಗೆ ಬಿಜೆಪಿಯ ಯಾವ ಸಚಿವರಿಗೂ ತಿಳಿವಳಿಕೆಯಿಲ್ಲ. ದೇಶದ ಭವಿಷ್ಯದ ಕುರಿತು ಅದು ಎಂದೂ ಗಂಭೀರವಾಗಿಲ್ಲ.

ದೇಶದಲ್ಲಿ ನಿರುದ್ಯೋಗ ಸಮಸ್ಯೆ ಭೀಕರವಾಗಿದೆ. 20 ರಿಂದ 29 ವಯಸ್ಸಿನ ಪದವೀಧರರ ನಿರುದ್ಯೋಗ ಪ್ರಮಾಣ ಶೇ.69ರಷ್ಟಿದೆ. ಚಿನ್ನ, ಬೆಳ್ಳಿ ಖರೀದಿಸಬೇಡಿ, ಪೆಟ್ರೋಲ್, ಡೀಸೆಲ್ ಕಡಿಮೆ ಬಳಸಿ ಎಂದು ಪ್ರಧಾನಿ ಮೋದಿ ದೇಶಕ್ಕೆ ಉಪದೇಶ ಮಾಡಿ ಫಾರಿನ್ ಟೂರ್ ಮಾಡುತ್ತಿದ್ದಾರೆ, ದೇಶಕ್ಕೆ ಕಷ್ಟ ಬಂದಾಗಲೆಲ್ಲ ಫಾರಿನ್ ಟೂರಿನಲ್ಲೇ ಇರುತ್ತಾರೆ.

ದೇಶದಲ್ಲಿ ಮನುವಾದ ಜಾರಿಗೆ ತರುವುದನ್ನು ಹೊರತುಪಡಿಸಿ ಯಾವುದೇ ಉದ್ದೇಶ ಬಿಜೆಪಿಗೆ ಇಲ್ಲ. ಅಂಬಾನಿ, ಅದಾನಿಗಳು ಅಮೆರಿಕ, ಯುರೋಪ್, ಆಸ್ಟ್ರೇಲಿಯಾದಲ್ಲಿ ಹೂಡಿಕೆ ಮಾಡಲು ಹೊರಟಿದ್ದಾರೆ. 327.4 ಬಿಲಿಯನ್ ಡಾಲರ್ ಅಂದರೆ, ಭಾರತದ ಕರೆನ್ಸಿಯಲ್ಲಿ 27.3 ಲಕ್ಷ ಕೋಟಿ ರೂ.ಗಳನ್ನು ಬೇರೆ ದೇಶಗಳಲ್ಲಿ ಹೂಡಿಕೆ ಮಾಡುತ್ತಿದ್ದಾರೆ. ನಮ್ಮ ಯುವಜನರಿಗೆ ಉದ್ಯೋಗ ಇಲ್ಲದಂತಾಗಿದೆ.

ಈ ಇಬ್ಬರು ಬಂಡವಾಳದಾರರಿಗೆ ಮಾರುಕಟ್ಟೆ ಕುದುರಿಸಿಕೊಡುವ ಕೆಲಸವನ್ನ ಕೇಂದ್ರ ಮಾಡಿಕೊಡುತ್ತಿದೆ ಎಂದರು.

ಪೆಟ್ರೋಲ್, ಡೀಸೆಲ್ ಮೇಲಿನ ತೆರಿಗೆ ನಾವ್ಯಾಕೆ ಕಡಿಮೆ ಮಾಡ್ಬೇಕು!



ಬೆಂಗಳೂರು, ಮೇ 21(ಕೆಎಂಶಿ)– ಪೆಟ್ರೋಲ್, ಡೀಸೆಲ್ ಮೇಲಿನ ತೆರಿಗೆ ಇಳಿಕೆ ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಸ್ಪಷ್ಟಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ತೈಲ ದರಗಳನ್ನು ಹೆಚ್ಚಿಸಿದರೆ ನಾವ್ಯಾಕೆ ತೆರಿಗೆ ಕಡಿಮೆ ಮಾಡಬೇಕು ಎಂದು ಪ್ರಶ್ನಿಸಿದ್ದಾರೆ.

ನರೇಂದ್ರ ಮೋದಿ ಪ್ರಧಾನಿ ಆಗುವುದಕ್ಕೂ ಮುನ್ನ ಡೀಸೆಲ್ 40 ರೂ., ಪೆಟ್ರೋಲ್ 70 ರೂ., ಅಡುಗೆ ಅನಿಲ ದರ 414 ರೂ. ಇತ್ತು. ಅಧಿಕಾರಕ್ಕೆ ಬಂದ ನಂತರ ಅಚ್ಛೇದಿನ್, ಅಚ್ಛೇದಿನ್ ಎಂಬುದಾಗಿ ಹೇಳಿಕೊಂಡೇ ಸಾಮಾನ್ಯ ಜನರ ಮೇಲೆ ಹೊರೆ ಹಾಕುತ್ತಿದ್ದಾರೆ.

ಕೇಂದ್ರದವರು ಬೆಲೆ ಜಾಸ್ತಿ ಮಾಡಿದರೆ, ನೀವು, ಮಾಧ್ಯಮದವರು, ನಮ್ಮನ್ನು ಕಡಿಮೆ ಮಾಡುತ್ತೀರಾ ಎಂಬುದಾಗಿ ಪ್ರಶ್ನಿಸುತ್ತೀರಿ. ಆದರೆ, ಅವರನ್ನು ಮಾತ್ರ ಕೇಳುವುದಿಲ್ಲ. ಪೆಟ್ರೋಲ್, ಡೀಸೆಲ್ ಮೇಲೆ ರಾಜ್ಯ ಸರ್ಕಾರ ಹೆಚ್ಚಿನ ತೆರಿಗೆ ವಿಧಿಸುತ್ತಿದೆ ಎಂಬ ಸುದ್ದಿಗಾರರ ಪ್ರಶ್ನೆಗೆ ಕೇಳಿಯೂ ಕೇಳಿಸದಂತೆ ಮುನ್ನಡೆದರು.

ದ್ವಿಚಕ್ರ ವಾಹನ ಕಳ್ಳನ ಬಂಧನ

ಮೈಸೂರು,ಮೇ 21(ಪಿಎಂ)– ದ್ವಿಚಕ್ರ ವಾಹನ ಕಳ್ಳನನ್ನು ಬಂಧಿಸಿರುವ ಮೈಸೂರು ದಕ್ಷಿಣ ಠಾಣೆ ಪೊಲೀಸರು, ಈತನಿಂದ ನಾಲ್ಕು ಬೈಕ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಮೈಸೂರಿನ ರಾಜೀವ್‌ನಗರದ ನಿವಾಸಿ ಮೊಹಮದ್ ತೌಸಿಫ್ (20) ಬಂಧಿತ ಆರೋಪಿ. ಈತ ವೃತ್ತಿಯಲ್ಲಿ ವೆಲ್ಡಿಂಗ್ ಕೆಲಸಗಾರ. ಮೇ 20ರಂದು ಮಧ್ಯಾಹ್ನ ಎಪಿಎಂಸಿ ಎ ಬ್ಲಾಕ್ ಸಮೀಪ ಮೈಸೂರು–ನಂಜನಗೂಡು ರಸ್ತೆಯಲ್ಲಿ ವಾಹನ ತಪಾಸಣೆ ವೇಳೆ ಮೈಸೂರು ಕಡೆಯಿಂದ ಬಂದ ಈತ ವಾಪಸ್ ಹಿಂದಿರುಗಲು ಮುಂದಾದಾಗ ಪೊಲೀಸರ ಕೈಗೆ ಸಿಕ್ಕಿ ಬಿದ್ದಿದ್ದಾನೆ.

ವಾಹನದ ದಾಖಲಾತಿ ಕೇಳಿದ ವೇಳೆ ಆತ ಅನುಮಾನಸ್ಪದವಾಗಿ ವರ್ತಿಸಿದ್ದು, ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಿದಾಗ ಅದು ಕದ್ದಿರುವ ಬೈಕ್ ಎಂದು ಒಪ್ಪಿಕೊಂಡಿದ್ದಾನೆ. ಅಲ್ಲದೆ, ಇನ್ನೂ ನಾಲ್ಕು ಬೈಕ್ ಕದ್ದಿರುವ ಬಗ್ಗೆ ಮಾಹಿತಿ ನೀಡಿದ್ದಾನೆ.

ಬೆಂಕಿ ಅವಘಡ

ಮೈಸೂರು, ಮೇ 21(ಪಿಎಂ)– ಹೋಟೆಲ್‌ನ ಕೊಠಡಿಯೊಂದರಲ್ಲಿ ಬೆಂಕಿ ಅವಘಡ ಸಂಭವಿಸಿ ಕೆಲ ಪೀಠೋಪಕರಣಗಳು ಸುಟ್ಟು ಭಸ್ಮವಾಗಿವೆ. ಬೆಂಗಳೂರು–ನೀಲಗಿರಿ ರಸ್ತೆಯಲ್ಲಿರುವ ಈ ಹಿಂದೆ ರಮಣ ಶ್ರೀ ಹೋಟೆಲ್ ಇದ್ದ ಕಟ್ಟಡದಲ್ಲಿನ ಮೂರನೇ ಅಂತಸ್ತಿನ ಕೊಠಡಿಯಲ್ಲಿ ಗುರುವಾರ ಮಧ್ಯಾಹ್ನ ಬೆಂಕಿ ಕಾಣಿಸಿಕೊಂಡಿದೆ. ಸ್ಥಳೀಯರು ಕೂಡಲೇ ಅಗ್ನಿಶಾಮಕ ದಳಕ್ಕೆ ಮಾಹಿತಿ ನೀಡಿದ್ದು, ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ಸಿಬ್ಬಂದಿ ಬೆಂಕಿಯನ್ನು ನಂದಿಸಿ ಹೆಚ್ಚಿನ ಅನಾಹುತ ಆಗುವುದನ್ನು ತಪ್ಪಿಸಿದ್ದಾರೆ.

ಅನಗತ್ಯವಾಗಿ ಮತದ ಹಕ್ಕು ಕಸಿದರೆ ಎಸ್‌ಐಆರ್ ವಿರುದ್ಧ ಸುಪ್ರೀಂಕೋರ್ಟ್‌ನಲ್ಲಿ ಹೋರಾಟಕ್ಕೆ ಚಿಂತನೆ

ಸಚಿವ ಸಂಪುಟ ಸಭೆಯ ಬಳಿಕ ಸಚಿವ ಹೆಚ್.ಕೆ.ಪಾಟೀಲ್ ಮಾಹಿತಿ

52 ಕ್ರಿಮಿನಲ್ ಪ್ರಕರಣ ವಾಪಸ್, ಮೈಸೂರಲ್ಲಿ 17 ಎಕರೆ ಭೂಮಿ ಕ್ರೀಡಾ ಇಲಾಖೆಗೆ, ನಾಲ್ವರು ಕೆಎಎಸ್ ಅಧಿಕಾರಿಗಳಿಗೆ ಐಎಎಸ್ ಬಡ್ತಿ, ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ನೀಟ್, ಜೆಇಇ, ಸಿಇಟಿಗೆ ವಸತಿ ರಹಿತ ತರಬೇತಿ



ಬೆಂಗಳೂರು, ಮೇ 21– ಮತದಾನದ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ(ಎಸ್‌ಐಆರ್) ವೇಳೆ ರಾಜ್ಯದ ಯಾವೊಬ್ಬ ಪ್ರಜೆಯ ಮತದಾನದ ಹಕ್ಕನ್ನು ಅನಾವಶ್ಯಕವಾಗಿ ಕಸಿದರೆ ಸುಪ್ರೀಂಕೋರ್ಟ್ ಮೆಟ್ಟಿಲೇರುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆ ಎಂದು ಕಾನೂನು ಸಂಸದೀಯ ಸಚಿವ ಹೆಚ್.ಕೆ.ಪಾಟೀಲ್ ಅವರು ತಿಳಿಸಿದ್ದಾರೆ.

ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯ ನಿರ್ಣಯಗಳ ಬಗ್ಗೆ ವಿವರಣೆ ನೀಡಿದ ಅವರು, ನಾಗರಿಕನ ಮತದಾನದ ಹಕ್ಕು ಕಾಪಾಡುವುದು ಸರ್ಕಾರದ ಕರ್ತವ್ಯ. ಈ ನಿಟ್ಟಿನಲ್ಲಿ ಎಸ್‌ಐಆರ್ ಬಗ್ಗೆ ಸುದೀರ್ಘ ಚರ್ಚೆ ನಡೆದಿದೆ. ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ಪ್ರಕ್ರಿಯೆಯಿಂದ 27 ಲಕ್ಷ ಜನರ ಮತದ ಹಕ್ಕು ಕಸಿಯಲಾಗಿದೆ. ಇಂತಹ ಗಂಭೀರ ಆಕ್ಷೇಪಗಳ ಬಗ್ಗೆ ಚರ್ಚಿಸಿ ಈ ಸಂಬಂಧ ಸುಪ್ರೀಂಕೋರ್ಟ್ ಮೆಟ್ಟಿಲೇರುವ ಬಗ್ಗೆ ಚಿಂತಿಸಲಾಗಿದ್ದು, ಈ ಬಗ್ಗೆ ಶೀಘ್ರದಲ್ಲೇ ನಿರ್ಣಯಿಸಲಾಗುವುದು ಎಂದರು.

ಪ್ರಮುಖ ನಿರ್ಣಯಗಳು: ವಿವಿಧ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿದ್ದ 52 ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆಯುವುದು, ಕಾರವಾರ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ 100 ಕೋಟಿ ರೂ. ವೆಚ್ಚದಲ್ಲಿ 200 ಹಾಸಿಗೆಗಳ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣ, ಶಹಾಪುರ ಮತ್ತು ದೇವದುರ್ಗದಲ್ಲಿ ತಲಾ 50 ಹಾಸಿಗೆಗಳ ತಾಯಿ– ಮಗು ಆಸ್ಪತ್ರೆ ನಿರ್ಮಿಸಲು 38 ಕೋಟಿ ರೂ. ನೀಡಲು ಸಚಿವ ಸಂಪುಟ ಅನುಮೋದಿಸಿದೆ.

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರಾಗಿ ನ್ಯಾಯಮೂರ್ತಿ ಪಿ.ಎನ್.ದೇಸಾಯಿ ಅವರ ಆಯ್ಕೆ, ಸುಶೀಲಮ್ಮ ಎನ್, ಚೆನ್ನಪ್ಪ ಎ, ಸೀಮಾ ನಾಯಕ್ ಬಿ ಮತ್ತು ಶಿವಕುಮಾರ್ ಹೆಚ್.ಆರ್ ಸೇರಿದಂತೆ ನಾಲ್ವರು ಕೆಎಎಸ್ ಅಧಿಕಾರಿಗಳನ್ನು ಐಎಎಸ್ ವೃಂದಕ್ಕೆ ಬಡ್ತಿ, ಪೊಲೀಸ್ ಇಲಾಖೆಯಲ್ಲಿ ಮೃತರಾದ ಅಧಿಕಾರಿಗಳ 24 ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡುವುದು ಹಾಗೂ ಇತರೆ 37 ಅಭ್ಯರ್ಥಿಗಳ ಪ್ರಕರಣಗಳನ್ನು ವಿಶೇಷವಾಗಿ ಪರಿಗಣಿಸಲು ಒಪ್ಪಿಗೆ ನೀಡಲಾಗಿದೆ. ಲಂಚ ಪ್ರಕರಣದಲ್ಲಿ ಸಿಲುಕಿದ್ದ ಅಫ್ಜಲ್‌ಪುರ ತಾಲೂಕಿನ ಮಾಜಿ ತಹಶೀಲ್ದಾರ್ ಶಶಿಕಲಾ ಜಿ.ಪಾದಗಟ್ಟಿ ಅವರಿಗೆ ಕಡ್ಡಾಯ ನಿವೃತ್ತಿ ಶಿಕ್ಷೆ ವಿಧಿಸಲು ನಿರ್ಧರಿಸಲಾಗಿದೆ.

ಎಡಿಬಿ ನೆರವಿನೊಂದಿಗೆ 802 ಕೋಟಿ ರೂ. ವೆಚ್ಚದಲ್ಲಿ 53 ಸರ್ಕಾರಿ ಪದವಿ ಕಾಲೇಜುಗಳು ಮತ್ತು 14 ಪಾಲಿಟೆಕ್ನಿಕ್‌ಗಳ ಉನ್ನತೀಕರಣ ಹಾಗೂ ಪ್ರತಿ ಜಿಲ್ಲೆಯ 15ರಂತೆ ಒಟ್ಟು 500 ಹಿಂದುಳಿದ ವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನೀಟ್, ಜೆಇಇ ಮತ್ತು ಸಿಇಟಿ ಪರೀಕ್ಷೆಗಳಿಗೆ 15 ಕೋಟಿ ರೂ. ವೆಚ್ಚದಲ್ಲಿ ವಸತಿ ಸಹಿತ ತರಬೇತಿ ನೀಡಲು ನಿರ್ಣಯಿಸಲಾಯಿತು. ರಾಜ್ಯದ 69 ಸಾವಿರ ಅಂಗನವಾಡಿಗಳಿಗೆ ತಲಾ 300 ರೂ. ವೆಚ್ಚದಲ್ಲಿ ಶಾಲಾ ಪೂರ್ವ ಶಿಕ್ಷಣ ಕಿಟ್‌ಗಳನ್ನು ವಿತರಿಸಲು 20.98 ಕೋಟಿ ರೂ. ಬಿಡುಗಡೆ ಮಾಡಲಾಗಿದೆ.

ಹಳೆ ಮೈಸೂರು ಭಾಗದ ಪ್ರಮುಖಾಂಶ: ಮೈಸೂರು ಜಿಲ್ಲೆ ಸಾತಗಳ್ಳಿ ಗ್ರಾಮದ ಸ.ನಂ.85, 88, 106 ಹಾಗೂ 107ರಲ್ಲಿನ ಕೆರೆ ಜಾಗವನ್ನು ಹೊರತುಪಡಿಸಿ, ಬಡಾವಣೆಯಲ್ಲಿರುವ ಉದ್ಯಾನವನ ಹಾಗೂ ಬಯಲು ಜಾಗಕ್ಕೆ ಕಾಯ್ದಿರಿಸಿರುವ 17.35 ಎಕರೆ ಜಮೀನನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರಿಸಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ. ನಂಜನಗೂಡು ತಾಲೂಕಿನ ಶ್ರೀಕಂಠೇಶ್ವರ ದೇವಾಲಯದ ಸ್ನಾನಘಟ್ಟದ ಹತ್ತಿರ ಕಬಿನಿ ನದಿಗೆ ಅಡ್ಡಲಾಗಿ ವಿಯರ್ ನಿರ್ಮಾಣ ಕಾಮಗಾರಿಯನ್ನು 15 ಕೋಟಿಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಮಂಡ್ಯ ಜಿಲ್ಲೆ, ನಾಗಮಂಗಲ ತಾಲೂಕು, ಬೆಳ್ಳೂರು ಹೋಬಳಿಯ ದಾಸನಕೆರೆ ಅಭಿವೃದ್ಧಿ ಹಾಗೂ ವಿದ್ಯುದ್ದೀಕರಣ ಕಾಮಗಾರಿಗಳನ್ನು 25 ಕೋಟಿ ಅಂದಾಜು ಮೊತ್ತದಲ್ಲಿ ಕೈಗೊಳ್ಳಲು ಹಾಗೂ ಮಂಡ್ಯ ತಾಲೂಕು ಎಸ್.ಐ. ಕೋಡಿಹಳ್ಳಿ ಗೇಟ್‌ನಿಂದ ಬಸರಾಳು–ಕೊಪ್ಪ ರಸ್ತೆಗೆ ಸೇರುವ ಜಿಲ್ಲಾ ಮುಖ್ಯ ರಸ್ತೆಯ ಸರಪಳಿ(0 ರಿಂದ 7.40 ಕಿ.ಮೀ) ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ರೂ.11.40 ಕೋಟಿಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಗುಜರಾತ್ ವಿರುದ್ಧ ಹೀನಾಯವಾಗಿ ಸೋತು ಟೂರ್ನಿಯಿಂದ ಹೊರಬಿದ್ದ ಸಿಎಸ್‌ಕೆ



ಗುಜರಾತ್ ತಂಡದ ಆಟಗಾರರ ಸಂಭ್ರಮ.

ಅಹಮದಾಬಾದ್, ಮೇ 21(ವಿವಿಹೆಚ್)– ನಾಯಕ ಶುಭ್‌ಮನ್ ಗಿಲ್, ಸಾಯ್ ಸುದರ್ಶನ್ ಹಾಗೂ ಬಟ್ಲರ್ ಅರ್ಧಶತಕದಾಟ, ಸಿರಾಜ್ ಹಾಗೂ ರಬಾಡ ಬೌಲಿಂಗ್ ಕಮಾಲ್‌ನಿಂದಾಗಿ ಚೆನ್ನೈಸೂಪರ್ ಕಿಂಗ್ಸ್ ವಿರುದ್ಧ 89 ರನ್‌ಗಳ ಅಂತರದ ಭರ್ಜರಿ ಗೆಲುವು ದಾಖಲಿಸಿತು. ಗುಜರಾತ್ ಟೈಟನ್ಸ್ 18 ಅಂಕಗಳೊಂದಿಗೆ ಎರಡನೇ ಸ್ಥಾನದಲ್ಲಿ ಉಳಿದುಕೊಂಡಿತು.

ಇತ್ತ ತಾವಾಡಿದ ಕೊನೆಯ ಪಂದ್ಯದಲ್ಲಿಯೂ ಹೀನಾಯವಾಗಿ ಸೋತ ಚೆನ್ನೈಸೂಪರ್ ಕಿಂಗ್ಸ್ 7ನೇ ಸ್ಥಾನಕ್ಕೆ ಕುಸಿತ ಕಾಣುವ ಮೂಲಕ ಟೂರ್ನಿಯಿಂದ ಹೊರಬಿದ್ದಿತು.

ಇಲ್ಲಿನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಗುರುವಾರ ನಡೆದ ಐಪಿಎಲ್–2026ರ 66ನೇ ಲೀಗ್ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಗುಜರಾತ್ ಸಾಯ್ ಸುದರ್ಶನ್ 84(57), ಗಿಲ್ 64(37), ಬಟ್ಲರ್ 57(27) ಬ್ಯಾಟಿಂಗ್ ನೆರವಿನಿಂದ ನಿಗದಿತ 20 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 229 ರನ್ ಕಲೆಹಾಕಿತು. ಈ ಬೃಹತ್ ಮೊತ್ತ ಬೆನ್ನತ್ತುವಲ್ಲಿ ವಿಫಲವಾದ ಚೆನ್ನೈ ಮೊಹಮದ್ ಸಿರಾಜ್ 26ಕ್ಕೆ3, ರಶೀದ್ ಖಾನ್ 18ಕ್ಕೆ3 ಹಾಗೂ ಕಗಿಸೋ ರಬಾಡ 32ಕ್ಕೆ3 ಮಾರಕ ಬೌಲಿಂಗ್ ದಾಳಿಗೆ ತತ್ತರಿಸಿ, 13.4 ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು 140 ರನ್ ಗಳಿಸಿ ಸೋಲೊಪ್ಪಿಕೊಂಡಿತು.

ಲಾಗೈಡ್ ಬಳಗದಿಂದ ಅಭಿನಂದನೆ



ಮೈಸೂರು ಪ್ರಾದೇಶಿಕ ಆಯುಕ್ತರ ಕಚೇರಿಯ ಹೆಚ್ಚುವರಿ ಆಯುಕ್ತ ಪಿ.ಶಿವರಾಜು ಅವರನ್ನು 'ಲಾಗೈಡ್ ಬಳಗ'ದ ವತಿಯಿಂದ ಲಾ ಗೈಡ್ ಕಾನೂನು ಮಾಸಪತ್ರಿಕೆಯ ಗೌರವ ಸಂಪಾದಕರೂ ಹಾಗೂ ಹಿರಿಯ ವಕೀಲ ಹೆಚ್.ಎನ್.ವೆಂಕಟೇಶ್ ಅವರು ಸನ್ಮಾನಿಸಿ, ಗೌರವಿಸಿದರು. ಈ ವೇಳೆ ಉದ್ಯಮಿಗಳಾದ ಹಿರಿಯ ವಕೀಲ ಎಂ.ಡಿ.ಹರೀಶ್ ಕುಮಾರ್ ಹೆಗ್ಡೆ, ಅಭಿಜಿತ್ ಹೆಗ್ಡೆ, ಪಾಲಿಕೆ ಮಾಜಿ ಸದಸ್ಯ ಲೋಕೇಶ್ ಪಿಯಾ, ವಕೀಲರಾದ ರಾಜೇಶ್ ಹೇಮಂತ್, ಮಾಧ್ಯಮ ಪ್ರತಿನಿಧಿಗಳಾದ ಟಿವಿ9 ರಾಮ್, ಪಬ್ಲಿಕ್ ಟಿವಿ ಕೆ.ಪಿ.ನಾಗರಾಜ್, ಟೈಮ್ಸ್ ಆಫ್ ಇಂಡಿಯಾದ ಲಾರೆನ್ಸ್ ಮಿಲ್ಟನ್ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಮಿತ್ರ

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ಪುರಸಭಾ ಕಾರ್ಯಾಲಯ, ಸಕಲೇಶಪುರ
ದೂರವಾಣಿ ಸಂಖ್ಯೆ: 08173–244042 email: itstaff_ulb_sakleshpur@yahoo.com
Website: www.sakaleshpurtown.gov.in
ನಂ/ಮುನಿಸಿ/ಜೆ.ಇ/ಪಿಆರ್/14/2025–26 ದಿನಾಂಕ 19–05–2026

ಇ–ಪ್ರಕ್ಯೂರ್‌ಮೆಂಟ್ ಮರು ಟೆಂಡರ್ ಪ್ರಕಟಣೆ

ಸಕಲೇಶಪುರ ಪುರಸಭೆಯಿಂದ ಕೆ.ಟಿ.ಪಿ.ಪಿ ಕಾಯ್ದೆ 2000ರ ಪ್ರಕಾರ ಕೆ.ಜಿ–2 ನಿಯಮದಂತೆ ಘನತ್ಯಾಜ್ಯ ವಸ್ತು ನಿರ್ವಹಣೆಗಾಗಿ ಸಕಲೇಶಪುರ ಪುರಸಭೆಗೆ 4 ಚಕ್ರದ ಆಟೋ ಟಿಪ್ಪರ್ ವಾಹನವನ್ನು ಸರಬರಾಜು ಮಾಡಲು ಇ–ಪೋರ್ಟಲ್ ಮೂಲಕ ಮರು ಟೆಂಡರ್ ಕರೆಯಲಾಗಿದ್ದು, ಆಸಕ್ತಿಯುಳ್ಳ ಗುತ್ತಿಗೆದಾರರು http://Kppp. karnataka.gov.in ನಿಂದ ಟೆಂಡರ್ ಷರತ್ತು ಇಎಂಡಿ ಹಾಗೂ ದಸ್ತಾವೇಜನ್ನು ಡೌನ್‌ಲೋಡ್ ಮಾಡಿಕೊಂಡು ಆನ್‌ಲೈನ್ ಮುಖಾಂತರ ಟೆಂಡರ್‌ಗಳನ್ನು ಮಾತ್ರ ಸಲ್ಲಿಸತಕ್ಕದ್ದು. ಟೆಂಡರ್‌ಅನ್ನು ಸಲ್ಲಿಸುವ ಮತ್ತು ತೆರೆಯುವ ದಿನಾಂಕವನ್ನು ಇ–ಪೋರ್ಟಲ್‌ನಲ್ಲಿ ತಿಳಿಸಲಾಗಿದೆ. ಟೆಂಡರ್ ನಿಯಮಾವಳಿಗಳ ಕುರಿತು ಹೆಚ್ಚಿನ ವಿವರಕ್ಕಾಗಿ ಸಕಲೇಶಪುರ ಪುರಸಭೆಯ ತಾಂತ್ರಿಕ ಶಾಖೆಯನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ. ಕ್ರ.ಸಂ.ಇಂಡೆಂಟ್ ನಂ.1.DMA/2025-26/IND6136/call-2 ಅಂದಾಜು ಮೊತ್ತ (ಲಕ್ಷಗಳಲ್ಲಿ)38.00 ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ 03–06–2026 ಸಂಜೆ 5.30 ಗಂಟೆಗೆ ಸೂಚನೆ:– ಕಾರಣಾಂತರಗಳಿಂದ ಟೆಂಡರ್ ದಿನಾಂಕಗಳು ಹಾಗೂ ಇತರೆ ಬದಲಾವಣೆಗಳಾದಲ್ಲಿ ದಿನಪತ್ರಿಕೆಯಲ್ಲಿ ಪ್ರಕಟಿಸಲಾಗುವುದಿಲ್ಲ. ಇ–ಪ್ರಕ್ಯೂರ್‌ಮೆಂಟ್‌ನಲ್ಲಿ ಸೂಚಿಸಲಾಗುವುದು. ಹೆಚ್ಚಿನ ವಿವರಗಳನ್ನು ಗುತ್ತಿಗೆದಾರರು http://Kppp.karnataka.gov.in ಪೋರ್ಟಲ್‌ನಲ್ಲಿ ನೋಡಿಕೊಳ್ಳುವುದು.

ಸಹಿ/–ಮುಖ್ಯಾಧಿಕಾರಿ,
ಪುರಸಭೆ, ಸಕಲೇಶಪುರ

ವಾಸಾಸಂಇ/ಹಿಸನಿ/ಹಾಸನ/149/ಕೆಎಸ್‌ಎಂಸಿಎ/2026–27

ಅಧಿಕಾರಿಗಳು ಕಾನೂನು ರೀತಿ ಕಾರ್ಯ ನಿರ್ವಹಿಸದಿದ್ದರೆ ಜೈಲೇ ಗತಿ


ಉಪಲೋಕಾಯುಕ್ತ ನ್ಯಾ.ಬಿ.ವೀರಪ್ಪ ಖಡಕ್ ಎಚ್ಚರಿಕೆ

ಮಂಡ್ಯ, ಮೇ 21– ಭ್ರಷ್ಟಾಚಾರ ಮಾಡಿದರೆ ನಿಮ್ಮನ್ನು ಸುಮ್ಮನೆ ಬಿಡಲ್ಲ. ಅಧಿಕಾರಿಗಳು ಸಂಪೂರ್ಣ ತಮ್ಮ ಧೋರಣೆ ಬದಲಾಯಿಸಿಕೊಂಡು ಕಾನೂನು ರೀತಿ ಕರ್ತವ್ಯ ನಿರ್ವಹಿಸಬೇಕು. ಇಲ್ಲದಿದ್ದರೆ ನಿಮ್ಮನ್ನು ಜೈಲಿಗೆ ಕಳುಹಿಸಲಾಗುವುದು ಎಂದು ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಎಚ್ಚರಿಸಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ ಮಂಡ್ಯ ಹಾಗೂ ಮಳವಳ್ಳಿ ತಾಲೂಕಿನ ಪ್ರಕರಣಗಳ ವಿಚಾರಣೆ ಹಾಗೂ ವಿಲೇವಾರಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, 2ನೇ ಬಾರಿಗೆ ಜಿಲ್ಲೆಗೆ ಆಗಮಿಸಿದ್ದೇನೆ. ಇಂದಿಗೆ ಒಂದು ವರ್ಷವಾಗಿದ್ದು, ಜಿಲ್ಲೆಯಲ್ಲಿ 196 ಸುಮೋಟೋ ಪ್ರಕರಣಗಳು ದಾಖಲಾಗಿವೆ. ಆದರೆ ಯಾವುದೇ ಪ್ರಕರಣಗಳಲ್ಲೂ ಪ್ರಗತಿ ಕಂಡಿಲ್ಲ. ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ. ಪ್ರತಿ ತಿಂಗಳು ಪ್ರಕರಣಗಳ ವಿಚಾರಣೆ ನಡೆಸಲಾಗುತ್ತಿದೆ. ಆದರೂ ಏಕೆ ಇತ್ಯರ್ಥವಾಗುತ್ತಿಲ್ಲ ಎಂಬುದು ತಿಳಿಯುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ದೇಶಕ್ಕೆ ಸ್ವಾತಂತ್ರ್ಯ ಬಂದು 79 ವರ್ಷ ಹಾಗೂ ಸಂವಿಧಾನ ಜಾರಿಗೆ ಬಂದು 72 ವರ್ಷ ಆದರೂ ಇನ್ನೂ ಬದಲಾವಣೆಯಾಗುತ್ತಿಲ್ಲ. ಅಧಿಕಾರಿಗಳು ತಮ್ಮ ಧೋರಣೆ ಬದಲಾಯಿಸಿಕೊಳ್ಳಬೇಕು. ಸಮಾಜವೂ ಬದಲಾಗಬೇಕು. ಅಧಿಕಾರಿಗಳಿಗೆ ಲಂಚ ಕೊಡಬಾರದು. ಬದುಕಿದ್ದಾಗ ಉತ್ತಮ ಕೆಲಸ ಮಾಡಬೇಕು. ಕಾಯಾ, ವಾಚಾ, ಮನಸಾ ಎಂದು ಕೆಲಸ ನಿರ್ವಹಿಸಬೇಕು. ಕಾನೂನು ಮೀರಿ ಕೆಲಸ ಮಾಡಿದರೆ ಜೈಲಿಗೆ ಹಾಕಲಾಗುವುದು ಎಂದು ಎಚ್ಚರಿಸಿದರು.

ಗ್ರಾಮಗಳಿಗೆ ಭೇಟಿ ನೀಡಿದಾಗ ಅಲ್ಲಿನ ಅವ್ಯವಸ್ಥೆ, ಕರ್ತವ್ಯ ಲೋಪ ಕಂಡು ಬರುತ್ತಿವೆ. ಕೃಷಿ ಜಮೀನು, ಲೇಔಟ್‌ಗಳು ಅನುಮತಿ ನೀಡಲಾಗುತ್ತಿದೆ. ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಯೋಜನಾಧಿಕಾರಿಗಳಾಗಿದ್ದಾರೆ. ಪಿಡಿಓಗಳು ಪಂಚಾಯ್ತಿ ನಾಶ ಮಾಡುವ ಅಧಿಕಾರಿಗಳಾಗಿದ್ದಾರೆ. ದುಡ್ಡಿಗಾಗಿ ನಿಯಮಗಳನ್ನು ಗಾಳಿಗೆ ತೂರಿದ್ದಾರೆ. ಅನ್ಯಾಯದ ದುಡ್ಡಿನಲ್ಲಿ ನೆಮ್ಮದಿ ಸಿಗಲ್ಲ. ತಿನ್ನುವ ಊಟ ಕಲ್ಮಶದಿಂದ ಮುಕ್ತವಾಗಿರಬೇಕು. ಪಾಪದ ದುಡ್ಡು ತಿಂದರೆ ಒಳ್ಳೆಯದಾಗಲ್ಲ. ಇದರಿಂದ ನಿಮ್ಮ ಮಕ್ಕಳ ಮೇಲೆ ದುಷ್ಪರಿಣಾಮ ಬೀರಲಿದೆ ಎಂದು ತಿಳಿಸಿದರು.



ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಮಾತನಾಡಿದರು.

ರಾಜ್ಯದ ಪ್ರತಿಯೊಂದು ಇಲಾಖೆಯಲ್ಲೂ ಭ್ರಷ್ಟಾಚಾರ ತುಂಬಿ ತುಳುಕಾಡುತ್ತಿದ್ದು, ಕರ್ನಾಟಕ ಭ್ರಷ್ಟಾಚಾರದ ಪಟ್ಟಿಯಲ್ಲಿ 5ನೇ ಸ್ಥಾನ ಪಡೆದಿದೆ. ಈ ಪಿಡುಗನ್ನು ತಡೆಯದೇ ಹೋದಲ್ಲಿ ಭವಿಷ್ಯದಲ್ಲಿ ಭೀಕರ ಅಪಾಯ ಕಟ್ಟಿಟ್ಟ ಬುತ್ತಿ. ಜಿಲ್ಲೆಯಲ್ಲಿ ಪೂರ್ಣ ಪ್ರಮಾಣದ ಪ್ರಕರಣಗಳನ್ನು ಜಿಲ್ಲೆಯ ಅಧಿಕಾರಿಗಳು ವಿಲೇವಾರಿ ಮಾಡಲು ಸಾಧ್ಯವಾಗಿಲ್ಲ. ಅಧಿಕಾರಿಗಳು ಅಶ್ವಾಸನೆ ನೀಡಿದರೆ ಸಾಲದು ಧೋರಣೆ ಬದಲಾಗಬೇಕು. ಆತ್ಮಸಾಕ್ಷಿಗೆ ಅನುಗುಣವಾಗಿ ಬದುಕಬೇಕು ಎಂದರು.

3 ವರ್ಷ ನಾನೇ ಇರುತ್ತೇನೆ. ಭ್ರಷ್ಟಾಚಾರ ಮಾಡಿದರೆ ಯಾರನ್ನೂ ಬಿಡುವುದಿಲ್ಲ. ನನಗೆ 10 ವರ್ಷ ಅಧಿಕಾರ ಕೊಟ್ಟರೆ ಎಲ್ಲವನ್ನೂ ಸರಿ ಮಾಡುವ ಪ್ರಯತ್ನ ಮಾಡಲಾಗುವುದು. ಕಾನೂನು ರೀತಿ ಕೆಲಸ ಮಾಡಿದರೆ ನಾನೇ ತಲೆಬಾಗುತ್ತೇನೆ. ಕಾನೂನು ಮೀರಿ ಕೆಲಸ ಮಾಡಿದರೆ ಸೆಂಟ್ರಲ್ ಜೈಲ್‌ಗೆ ಕಳುಹಿಸುತ್ತೇನೆ ಎಂದು ಹೇಳಿದರು.

140 ಭ್ರಷ್ಟಾಚಾರ ದೇಶಗಳಲ್ಲಿ ನಮ್ಮ ಭಾರತ ದೇಶ 91ನೇ ಸ್ಥಾನದಲ್ಲಿದ್ದು, ನಮ್ಮ ರಾಜ್ಯ ಭ್ರಷ್ಟಾಚಾರದಲ್ಲಿ 5ನೇ ಸ್ಥಾನದಲ್ಲಿದೆ. ಭ್ರಷ್ಟಾಚಾರ ಮುಕ್ತವಾಗಿ ಅಧಿಕಾರಿಗಳು ಕೆಲಸ ಮಾಡಬೇಕು. ಅಧಿಕಾರಿಗಳು ಹಾಗೂ ಪ್ರಜೆಗಳು ಬದಲಾಗಬೇಕು. ರಾಜ್ಯದ 16 ಜಿಲ್ಲೆಯಲ್ಲಿ 1,281 ಅಕ್ರಮ ಕೇಸ್‌ಗಳನ್ನು ಪತ್ತೆ ಮಾಡಲಾಗಿದೆ. ಲೋಕಾಯುಕ್ತದಲ್ಲಿ 40 ಸಾವಿರ ಪ್ರಕರಣಗಳಿವೆ. ಎಲ್ಲವನ್ನೂ ವಿಲೇವಾರಿ ಮಾಡುವ ಕೆಲಸ ಮಾಡಲಾಗುತ್ತಿದೆ. ಅಧಿಕಾರಿಗಳು ಜನಸೇವೆ ಮಾಡಲು ಅಧಿಕಾರವನ್ನು ನೀಡಲಾಗಿದೆ. ಅಧಿಕಾರಿಗಳು ಪ್ರಾಮಾಣಿಕವಾಗಿ ನಿಷ್ಠೆಯಿಂದ ಕಾರ್ಯನಿರ್ವಹಿಸಬೇಕು. ಇಲ್ಲದಿದ್ದಲ್ಲಿ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಸುಳ್ಳು ಪ್ರಕರಣಗಳಿಗೆ ಇಲ್ಲಿ ಜಾಗವಿಲ್ಲ. ಪ್ರಕರಣ ನ್ಯಾಯಯುತವಾಗಿದ್ದರೆ ನಿಮ್ಮ ಜೊತೆಗೆ ನಾನು ನಿಲ್ಲುತ್ತೇನೆ. ಆದರೆ ಸುಳ್ಳು ಪ್ರಕರಣಗಳ ದಾಖಲಿಸಿದರೆ 3 ವರ್ಷ ಜೈಲಿಗೆ ಹಾಕುತ್ತೇನೆ. ಆದ್ದರಿಂದ ಸಮಯ ಹಾಳು ಮಾಡದೆ ಜಿಲ್ಲೆಯ 250 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗುವುದು ಎಂದರು.

ಕಾರ್ಯಕ್ರಮಕ್ಕೂ ಮೊದಲು ಎಲ್ಲಾ ಅಧಿಕಾರಿಗಳು ನಿಷ್ಠೆಯಿಂದ ಭ್ರಷ್ಟಾಚಾರವಿಲ್ಲದ ಕೆಲಸ ಮಾಡುವ ಪ್ರತಿಜ್ಞಾವಿಧಿ ಸ್ವೀಕರಿಸಿದರು. ಜಿಲ್ಲಾ ಪ್ರಧಾನ ನ್ಯಾಯಮೂರ್ತಿ ಜಿ.ಎನ್.ಸುಬ್ರಮಣ್ಯ, ಉಪ ಲೋಕಾಯುಕ್ತ ಅಪ್ಪರ ಕಾರ್ಯದರ್ಶಿ ಅರವಿಂದ್, ಲೋಕಾಯುಕ್ತ ಎಸ್‌ಪಿ ಸುರೇಶ್‌ಬಾಬು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಸದಸ್ಯ ಕಾರ್ಯದರ್ಶಿ ಆನಂದ, ಜಿಲ್ಲಾಧಿಕಾರಿ ಡಾ.ಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿ.ಜೆ.ಶೋಭರಾಣಿ, ಜಿಲ್ಲಾ ವಕೀಲ ಸಂಘದ ಅಧ್ಯಕ್ಷ ಟಿ.ಎಸ್.ಸತ್ಯಾನಂದ ಉಪಸ್ಥಿತರಿದ್ದರು.

ನಾಗಮಂಗಲ ಭೂ ಹಗರಣ ಪ್ರಕರಣದಲ್ಲಿ ಮೊದಲು 238 ಎಕರೆ ಎಂದು ತಿಳಿದು ಬಂದಿತ್ತು ಇದೀಗ ಅದು 960 ಎಕರೆಗೆ ಹೋಗಿದೆ. ತನಿಖೆ ನಡೆಯುತ್ತಿದ್ದು ಪ್ರಕರಣದಲ್ಲಿ ಸ್ಥಳದಿಂದ ಹಿಡಿದು ದೊಡ್ಡವರವರೆಗೂ ಭಾಗಿಯಾಗಿದ್ದಾರೆ. ಯಾರನ್ನೂ ಬಿಡುವ ಪ್ರಶ್ನೆಯೇ ಇಲ್ಲ. ಶ್ರೀರಂಗಪಟ್ಟಣದಲ್ಲಿ ನಾಲೆ, ನದಿ ಒತ್ತುವರಿ ಮಾಡಿಕೊಂಡು ಹೋಂಸ್ಟೇ ನಿರ್ಮಾಣ ಮಾಡಿರುವುದನ್ನು ತೆರವುಗೊಳಿಸಲಾಗುವುದು. ಅಪ್ರಾಪ್ತ ಗರ್ಭಿಣಿ ಹೆಣ್ಣು ಮಕ್ಕಳ ಸ್ಕ್ಯಾನಿಂಗ್ ಮಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಐವರು ವೈದ್ಯರ ವಿರುದ್ಧ ಕ್ರಮ ಕೈಗೊಳ್ಳಲಾಗಿದ್ದು, ಅದರಲ್ಲಿ ಮೂವರು ಬಂಧನವಾದರೆ ಇಬ್ಬರು ತಲೆ ಮರೆಸಿಕೊಂಡಿದ್ದಾರೆ. ಅದರ ವಿಚಾರಣೆ ನಡೆಯುತ್ತಿದೆ. ಲೋಕಾಯುಕ್ತದಲ್ಲಿ 40 ಸಾವಿರ ಪ್ರಕರಣಗಳಿವೆ. ಅವುಗಳನ್ನು ಮೂವರಿಂದ ಬಗೆಹರಿಸಲು ಸಾಧ್ಯವಿಲ್ಲ. – ಬಿ.ವೀರಪ್ಪ, ಉಪ ಲೋಕಾಯುಕ್ತ.

ಹಸಿದವರಿಗೆ ಅನ್ನ ಹಾಕುವುದು ಶ್ರೇಷ್ಠ ಕೆಲಸ

ಮಾಜಿ ಸಚಿವ ಡಿ.ಸಿ.ತಮ್ಮಣ್ಣ

ಭಾರತೀನಗರ, ಮೇ 21– ಹಸಿದವರಿಗೆ ಅನ್ನ ಹಾಕುವುದು ಬಹಳ ಶ್ರೇಷ್ಠವಾದ ಕೆಲಸ ಎಂದು ಮಾಜಿ ಸಚಿವ ಡಿ.ಸಿ.ತಮ್ಮಣ್ಣ ತಿಳಿಸಿದರು.

ಇಲ್ಲಿನ ಕೆ.ಎಂ.ದೊಡ್ಡಿ ಸಮುದಾಯ ಆರೋಗ್ಯ ಕೇಂದ್ರದ ಆವರಣದಲ್ಲಿ ಭಾರತೀನಗರ ಸ್ಫೂರ್ತಿ ಲಯನ್ಸ್ ಸಂಸ್ಥೆ ವತಿಯಿಂದ ಆಯೋಜಿಸಿದ್ದ ಹಸಿವು–ಆರೈಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆಸ್ಪತ್ರೆಗೆ ಬಂದ ರೋಗಿಗಳಿಗೆ ಹಾಗೂ ಹಸಿದವರಿಗೆ ಅನ್ನ ಹಾಕುವ ಕೆಲಸವನ್ನು ಭಾರತೀನಗರ ಸ್ಫೂರ್ತಿ ಲಯನ್ಸ್ ಸಂಸ್ಥೆ ಮಾಡುತ್ತಿರುವುದು ಶ್ಲಾಘನೀಯ. ಜಿಪಂ ಮಾಜಿ ಸದಸ್ಯ ಸುಕನ್ಯಾ ಹನುಮಂತೇಗೌಡ ಅವರ ಸೇವಾರ್ಥದಲ್ಲಿ ಇಂದು ಹಸಿವು ಆರೈಕೆ ಕಾರ್ಯಕ್ರಮ ನಡೆಯುತ್ತಿದೆ. ಇದನ್ನು ಸದುಪಯೋಗ ಪಡಿಸಿಕೊಳ್ಳಿ ಎಂದ ಅವರು ಮುಂದಿನ ದಿನಗಳಲ್ಲೂ ಹೆಚ್ಚಿನ ರೀತಿ ಆಯೋಜಿಸಲಿ ಎಂದರು.

ಸ್ಫೂರ್ತಿ ಲಯನ್ಸ್ ಸಂಸ್ಥೆ ಅಧ್ಯಕ್ಷ ಕೆ.ಎಲ್.ಶಿವರಾಮು ಮಾತನಾಡಿ, ಪ್ರತಿ ಗುರುವಾರವು ನಮ್ಮ ಸಂಸ್ಥೆ ವತಿಯಿಂದ ಹಸಿವು ಆರೈಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಇಂದು ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಅವರು ಚಾಲನೆ ನೀಡಿದ್ದಾರೆ. ಪ್ರತಿ ವಾರ ದಾನಿಗಳಿಂದ ಈ ಸೇವಾ ಕಾರ್ಯ ಜರುಗುತ್ತಿದೆ ಎಂದರು.



ಹಸಿವು–ಆರೈಕೆ ಕಾರ್ಯಕ್ರಮಕ್ಕೆ ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಚಾಲನೆ ನೀಡಿದರು.

ಈ ವೇಳೆ ಜೆಡಿಎಸ್ ತಾಲೂಕು ಅಧ್ಯಕ್ಷ ಚಿಕ್ಕತಿಮ್ಮೇಗೌಡ, ಕಾರ್ಯಾಧ್ಯಕ್ಷ ಮಾದನಾಯಕನಹಳ್ಳಿ ರಾಜಣ್ಣ, ಸಂಘದ ಪ್ರಧಾನ ಕಾರ್ಯದರ್ಶಿ ಬಿ.ಎಸ್. ಬೋರೇಗೌಡ, ಪತ್ರಿಕಾ ಕಾರ್ಯದರ್ಶಿ ಅಣ್ಣೂರು ಸತೀಶ್, ಸದಸ್ಯರಾದ ವೈ.ಎಂ.ಬೋರೇಗೌಡ, ಗಿರೀಶ್, ದೇವರಾಜು, ಸಂದೀಪ್, ಚನ್ನಶೆಟ್ಟಿ, ವೆಂಕಟೇಶ್, ರಘು, ಸಿದ್ದರಾಮೇಗೌಡ, ಕೆಟಿ.ಸುರೇಶ್, ಶಿವಲಿಂಗ, ಶೆಟ್ಟಹಳ್ಳಿ ಶಿವರಾಜು ಸೇರಿದಂತೆ ಹಲವರಿದ್ದರು.

ಮೇ 27, ನೇರ ಸಂದರ್ಶನ

ಮಂಡ್ಯ, ಮೇ 21– ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಮಂಡ್ಯ ಹಾಗೂ ಮೆ॥ ಮೆಡ್‌ಪ್ಲಸ್ ಮತ್ತು ಮೆ॥ ವಿಲ್‌ಕಾರ್ಟ್ ಸಲ್ಯೂಷನ್ಸ್, ಮಂಡ್ಯ ಸಂಸ್ಥೆ ಸಹಯೋಗದಲ್ಲಿ ಮೇ 27 ರಂದು ಬೆಳಗ್ಗೆ 10 ಗಂಟೆಗೆ ನೇರಸಂದರ್ಶನವನ್ನು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಆಯೋಜಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಸಂದರ್ಶನದಲ್ಲಿ ಸದರಿ ಸಂಸ್ಥೆಯಲ್ಲಿ ಖಾಲಿ ಇರುವ ಸಿಎಸ್‌ಎ, ಫಾರ್ಮಸಿ ಏಡ್, ಆಡಿಟ್ ಅಸಿಸ್ಟೆಂಟ್ ಹಾಗೂ ಟೆಲಿಕಾಲರ್ಸ್ ಹುದ್ದೆಗಳಿಗೆ ಭರ್ತಿ ಮಾಡಿಕೊಳ್ಳಲಿದ್ದಾರೆ. ಮಂಡ್ಯ ಹಾಗೂ ಬೆಂಗಳೂರಲ್ಲಿ ಕೆಲಸ ಮಾಡಲು ಎಸ್‌ಎಸ್‌ಎಲ್‌ಸಿ, ಪಿಯುಸಿ, ಡಿಪ್ಲೊಮಾ ಹಾಗೂ ಡಿ.ಫಾರ್ಮಾ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ತಮ್ಮ ಬಯೋಡೇಟಾಗಳೊಂದಿಗೆ ನೇರ ಸಂದರ್ಶನದಲ್ಲಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗೆ ಮೊ: 9164642684, 9113500761 ಅನ್ನು ಸಂಪರ್ಕಿಸಬಹುದು.

ತಲೆ ನೋವಿನಿಂದ ಬಳಲುತ್ತಿದ್ದ ಗೃಹಿಣಿ ಆತ್ಮಹತ್ಯೆ

ಹಲಗೂರು, ಮೇ 21– ತಲೆ ನೋವಿನಿಂದ ಬಳಲುತ್ತಿದ್ದ ಮಹಿಳೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಸಮೀಪದ ಗ್ರಾಮದೇವತಾಪುರ ಗ್ರಾಮದಲ್ಲಿ ನಡೆದಿದೆ.

ಕಸಬಾ ಹೋಬಳಿ ಗ್ರಾಮದೇವತಾಪುರ ಗ್ರಾಮದ ನಿವಾಸಿ ದೇವರಾಜು ಅವರ ಪುತ್ರಿ ಶೋಭಾ (25) ಆತ್ಮಹತ್ಯೆ ಮಾಡಿಕೊಂಡವರು. ಈಕೆಯನ್ನು ಕೋಡಿಪುರ ಗ್ರಾಮದ ಜಿ.ಮಧು ಅವರಿಗೆ ವಿವಾಹ ಮಾಡಿಕೊಡಲಾಗಿತ್ತು. ಆದರೆ ಇತ್ತೀಚಿನ ದಿನಗಳಲ್ಲಿ ದೀರ್ಘ ಕಾಲದ ತಲೆನೋವಿನಿಂದ ಬಳಲುತ್ತಿದ್ದ ಈಕೆ ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದರೂ ಗುಣಮುಖವಾಗದ ಹಿನ್ನೆಲೆಯಲ್ಲಿ ಮಾನಸಿಕವಾಗಿ ಕುಗ್ಗಿದ್ದರು ಎನ್ನಲಾಗಿದೆ. ಹೀಗಾಗಿ ಮನೆಯಲ್ಲಿ ಯಾರು ಇಲ್ಲದ ವೇಳೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಸಂಬಂಧ ಹಲಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ರಸ್ತೆಗಳ ಅಭಿವೃದ್ಧಿಗೆ ಪ್ರಥಮ ಆದ್ಯತೆ ನೀಡುವೆ

ಶಾಸಕ ಹೆಚ್.ಟಿ.ಮಂಜು ಭರವಸೆ

ಕೆ.ಆರ್.ಪೇಟೆ, ಮೇ 21– ಕ್ಷೇತ್ರದ ಸಮಗ್ರ ಅಭಿವೃದ್ಧಿ ನನ್ನ ಏಕಮಾತ್ರ ಧ್ಯೇಯವಾಗಿದೆ. ತಾಲೂಕಿನ ರಸ್ತೆಗಳ ಅಭಿವೃದ್ಧಿಗೆ ಪ್ರಥಮ ಆದ್ಯತೆ ನೀಡುತ್ತಿದ್ದೇನೆ ಎಂದು ಶಾಸಕ ಹೆಚ್.ಟಿ.ಮಂಜು ತಿಳಿಸಿದರು.

ತಾಲೂಕಿನ ಬೂಕನಕೆರೆ ಹೋಬಳಿಯ ನಾಟನಹಳ್ಳಿ, ಬಿ.ಬಾಚಹಳ್ಳಿ, ಹೆಮ್ಮಡಹಳ್ಳಿ ಗ್ರಾಮಗಳಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ತಾಲೂಕಿನ ವಿವಿಧೆಡೆ ಹತ್ತಾರು ವರ್ಷಗಳಿಂದ ಡಾಂಬರು ಕಾಣದ ಗುಂಡಿ ರಸ್ತೆಗಳೇ ಇವೆ. ಎಲ್ಲಾ ರಸ್ತೆಗಳ ಅಭಿವೃದ್ಧಿ ಹಾಗೂ ಶಿಥಿಲಗೊಂಡಿರುವ ಸೇತುವೆಗಳ ದುರಸ್ತಿಗೆ ಕನಿಷ್ಠ 500 ಕೋಟಿ ಅಗತ್ಯವಿದೆ. ಆದರೆ ರಾಜ್ಯ ಕಾಂಗ್ರೆಸ್ ಸರ್ಕಾರ ನನ್ನ ಮನವಿಗೆ ಸೂಕ್ತವಾಗಿ ಸ್ಪಂದಿಸುತ್ತಿಲ್ಲ. ಆದರೂ ಸಂಬಂಧಪಟ್ಟ ಸಚಿವರು ಹಾಗೂ ಇಲಾಖೆ ಮುಖ್ಯ ಅಧಿಕಾರಿಗಳಿಗೆ ಸಮಸ್ಯೆಗಳನ್ನು ಮನವರಿಕೆ ಮಾಡಿಕೊಟ್ಟು ಅಲ್ಪಸ್ವಲ್ಪ ಅನುದಾನ ಬಿಡುಗಡೆ ಮಾಡಿಸಿ ಪ್ರಮುಖ ಸಂಪರ್ಕ ರಸ್ತೆಗಳ ಅಭಿವೃದ್ಧಿಗೆ ಆದ್ಯತೆ ನೀಡುತ್ತಿದ್ದೇನೆ. ಜೊತೆಗೆ ಶಾಸಕರಿಗೆ ನೀಡುತ್ತಿರುವ ಪ್ರದೇಶಾಭಿವೃದ್ಧಿ ನಿಧಿ ಅನುದಾನದಲ್ಲಿ ಪ್ರತಿಯೊಂದು ಗ್ರಾಮಗಳಿಗೂ ತಲಾ 10 ಲಕ್ಷ ರೂ.ಗಳಂತೆ ಹಂಚಿಕೆ ಮಾಡಿ ತೀರಾ ಹದಗೆಟ್ಟಿರುವ ರಸ್ತೆ ಹಾಗೂ ಬಾಕ್ಸ್ ಡ್ರೈನೇಜ್ ನಿರ್ಮಾಣಕ್ಕೆ ಒತ್ತು ನೀಡಲಾಗುತ್ತಿದೆ. ಅಲ್ಲದೇ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿ ಇರುವುದರಿಂದ ನಾನು ಶಾಸಕನಾಗಿದ್ದರೂ ನಿರೀಕ್ಷಿತ ಸಾಧನೆ ಮಾಡಲು ಸಾಧ್ಯವಾಗುತ್ತಿಲ್ಲ ಹೀಗಾಗಿ 2028ಕ್ಕೆ ನಮ್ಮ ಜೆಡಿಎಸ್–ಬಿಜೆಪಿ ಮೈತ್ರಿ ಸರ್ಕಾರ ಅಧಿಕಾರಕ್ಕೆ ಬರುವುದು ಖಚಿತ. ಆದ್ದರಿಂದ ತಾಲೂಕಿನ ಜನತೆ ಮತ್ತೊಮ್ಮೆ ನನಗೆ ಆಶೀರ್ವಾದ ಮಾಡಿದರೇ ಸಾವಿರಾರು ಕೋಟಿ ಅನುದಾನ ತಂದು ತಾಲೂಕಿನ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದರು ಭರವಸೆ ನೀಡಿದರು.



ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ಹೆಚ್.ಟಿ.ಮಂಜು ಚಾಲನೆ ನೀಡಿದರು.

ನಮ್ಮ ನಿಷ್ಠಾವಂತ ಜೆಡಿಎಸ್ ಕಾರ್ಯಕರ್ತರು ತಾಲೂಕಿನಲ್ಲಿ ಪಕ್ಷ ಸಂಘಟನೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಹೀಗಾಗಿ ಅವರು ಸ್ಪರ್ಧಿಸುವ ಜಿಪಂ, ತಾಪಂ ಹಾಗೂ ಗ್ರಾಪಂ ಚುನಾವಣೆಗಳಲ್ಲಿ ಅವರ ಗೆಲುವಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ. ಸದಾ ಕಾರ್ಯಕರ್ತರ ಕಷ್ಟ–ಸುಖಗಳಿಗೆ ಭಾಗಿಯಾಗಿ ಅವರ ಬೆನ್ನೆಲುಬಾಗಿ ಕೆಲಸ ಮಾಡುತ್ತೇನೆ ಎಂದರು.

ಈ ವೇಳೆ ಜೆಡಿಎಸ್ ಮುಖಂಡರಾದ ಬೋರ್‌ವೆಲ್ ಮಹೇಶ್, ಲೋಕೋಪಯೋಗಿ ಇಲಾಖೆ ಎಇಇ ರಾಧಿಕಾ, ಇಂಜಿನಿಯರ್ ಬಸವೇಗೌಡ, ಪ್ರಥಮ ದರ್ಜೆ ಗುತ್ತಿಗೆದಾರರಾದ ಎನ್.ಆರ್.ರಮೇಶ್, ಬಳ್ಳೇಕೆರೆ ಮನು, ಪುರಸಭಾ ಮಾಜಿ ಸದಸ್ಯ ಹೆಚ್.ಡಿ.ಅಶೋಕ್, ಶರತ್ ಚಂದ್ರ, ಗ್ರಾಮಸ್ಥರು ಉಪಸ್ಥಿತರಿದ್ದರು.

ಮೂರನೇ ಪುಟದಿಂದ

ಶೇ45.65 ರಷ್ಟು ತೇರ್ಗಡೆ

ಕೈಗೊಂಡ ಹಲವು ಯೋಜಿತ ಕ್ರಮಗಳಿಂದಾಗಿ ಸುಧಾರಣೆ ಸಾಧ್ಯವಾ ಗಿದೆ. ಎರಡು ಪರೀಕ್ಷೆಗಳಿಗೆ ದೇಶದಲ್ಲಿ ಹೊಸ ವಿಧಾನವನ್ನು ಕರ್ನಾಟಕ ಸರ್ಕಾರ ಮೊದಲ ಬಾರಿಗೆ ಜಾರಿಗೆ ತಂದಿದ್ದು, ಇದರಿಂದ ಶೇಕಡಾವಾರು ಅಂಕ ಹೆಚ್ಚಿಸಿ ಕೊಳ್ಳಲು ವಿದ್ಯಾರ್ಥಿಗಳಿಗೆ ಅನುಕೂಲವಾಗಿದೆ ಪರೀಕ್ಷೆ–2 ರಲ್ಲೂ ಇಂತಹ ಅವಕಾಶ ಕಲ್ಪಿಸಲಾಗಿತ್ತು.

ಎರಡೂ ಪರೀಕ್ಷೆಗಳ ಪೈಕಿ ಯಾವುದರಲ್ಲಿ ಗರಿಷ್ಠ ಅಂಕ ಪಡೆದಿರುತ್ತಾರೋ ಅದನ್ನು ಪರಿಗಣಿಸುವುದರಿಂದ ಒಟ್ಟಾರೆ ಉತ್ತೀರ್ಣ ವಿದ್ಯಾರ್ಥಿಗಳ ಸಂಖ್ಯೆಯಷ್ಟೇ ಅಲ್ಲದೆ, ಉತ್ತೀರ್ಣಗೊಂಡ ಅಂಕಗಳ ಪ್ರಮಾಣದಲ್ಲೂ ಹೆಚ್ಚಳವಾಗಿದೆ.

ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗಗಳಲ್ಲಿ ಗಮನಾರ್ಹ ಸಾಧನೆ ದಾಖಲಾಗಿದೆ. ಕಲಾ ವಿಭಾಗದ ಫಲಿತಾಂಶ ಕಳೆದ ವರ್ಷದ ಶೇ.69.47 ರಿಂದ ಶೇ.83.31ಕ್ಕೆ, ವಾಣಿಜ್ಯ ವಿಭಾಗದ ಫಲಿತಾಂಶ ಶೇ.87.83 ರಿಂದ ಶೇ.92.84ಕ್ಕೆ ಹಾಗೂ ವಿಜ್ಞಾನ ವಿಭಾಗದ ಫಲಿತಾಂಶ ಶೇ.91.88ರಿಂದ ಶೇ.96.01ಕ್ಕೆ ಏರಿಕೆಯಾಗಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಈ ಬಾರಿ ವಿಶೇಷ ಸಾಧನೆ ಮಾಡಿದ್ದು, ಶೇ.92.77ರಷ್ಟು ಫಲಿತಾಂಶ ದಾಖಲಾಗಿದೆ. ನಗರ ಪ್ರದೇಶದ ಫಲಿತಾಂಶ ಶೇ.92.01ರಷ್ಟಿದೆ ಎಂದಿದ್ದಾರೆ.

ಡಿಸಿಇಟಿ, ಎಂ.ಟೆಕ್ ಪ್ರವೇಶ ಪರೀಕ್ಷೆ: ಕೆಇಎ

ಕಲ್ಬುರ್ಗಿ, ಮೈಸೂರು ಮತ್ತು ತುಮಕೂರು ಕೇಂದ್ರಗಳಲ್ಲಿ ನಡೆಯಲಿವೆ ಎಂದು ಅವರು ವಿವರಿಸಿದ್ದಾರೆ. ಡಿಸಿಇಟಿ ಪರೀಕ್ಷೆಯನ್ನು 51 ಕೇಂದ್ರಗಳಲ್ಲಿ ಒಟ್ಟು 21,095 ಹಾಗೂ ಎಂ.ಟೆಕ್ ಪರೀಕ್ಷೆಯನ್ನು 26 ಕೇಂದ್ರಗಳಲ್ಲಿ ಒಟ್ಟು 12,116 ಅಭ್ಯರ್ಥಿಗಳು ಬರೆಯುತ್ತಿದ್ದಾರೆ. ಈ ಎರಡೂ ಕೋರ್ಸ್ ಗಳಿಂದ ಒಟ್ಟು 34,211 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದು ಬಿಗಿ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ಇದಲ್ಲದೆ ಹೊರನಾಡು, ಗಡಿನಾಡು ಅಭ್ಯರ್ಥಿಗಳಿಗೆ ಕಡ್ಡಾಯ ಕನ್ನಡ ಪರೀಕ್ಷೆ ಕೂಡ ಬೆಂಗಳೂರಿನಲ್ಲಿ ಅಂದು ನಡೆಯಲಿದೆ ಎಂದು ತಿಳಿಸಿದ್ದಾರೆ.

ಆರ್‌ಐಟಿ ಕಾರ್ಯಕರ್ತ ಗಂಗರಾಜು ಬಂಧನ

ಇಂದು ಮುಂಜಾನೆ ಪೂರ್ಣಗೊಳಿಸಿದ್ದರು. ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) ಸೆಕ್ಷನ್ 307 ರ ಅಡಿ ಕೊಲೆ ಯತ್ನ ಆರೋಪದ ಮೇರೆಗೆ ಗಂಗರಾಜುವನ್ನು ಪೊಲೀಸರು ಬಂಧಿಸಿದ್ದು, ಇಂದು ಮೈಸೂರಿನ ಮೊದಲ ಎಸಿಜೆ ಮತ್ತು ಜೆಎಂಎಫ್‌ಸಿ ಕೋರ್ಟ್ ಮುಂದೆ ಹಾಜರುಪಡಿಸಿದ್ದರು. ನ್ಯಾಯಾಧೀಶರಾದ ಸನ್ಮತಿ ಅವರು ಗಂಗರಾಜುವನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಮುಡಾ, ಎಂಡಿಎನಲ್ಲಿ ಗಂಗರಾಜು ಕಾರುಬಾರು!

ಕೊಲೆ ಯತ್ನ ಆರೋಪ ಎದುರಿಸುತ್ತಿರುವ ಆರ್‌ಟಿಐ ಕಾರ್ಯಕರ್ತ ಗಂಗರಾಜುವಿನ ಬಹುತೇಕ ವ್ಯವಹಾರ ಕೇಂದ್ರ (ಮುಡಾ) ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ಈಗಿನ ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಎಂಡಿಎ) ಆಗಿತ್ತು. ಬೆಳಿಗ್ಗೆಯಿಂದ ಸಂಜೆವರೆಗೆ ಇಲ್ಲೇ ಇರುತ್ತಿದ್ದ ಗಂಗರಾಜು, ಒಂದು ರೀತಿ ಹಿಂದಿನ ಮುಡಾ ಹಾಗೂ ಎಂಡಿಎ ಆಡಳಿತದ ಒಂದು ಭಾಗವೇ ಆಗಿ ಹೋಗಿದ್ದ.

ಇತ್ತೀಚೆಗೆ ಎಂಡಿಎ ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್ ಒಬ್ಬರು ಗಂಗರಾಜುವಿಗೆ ಮಣೆ ಹಾಕದಿದ್ದಾಗ, ತನ್ನ ಹಾಗೂ ಇತತರ ನೆರವಿನಿಂದ ರಾಜಕೀಯ ಪ್ರಭಾವ ಬಳಸಿ ಅವರನ್ನು ಇದೇ ಗಂಗರಾಜು ಬೇರೆಡೆಗೆ ಎತ್ತಂಗಡಿ ಮಾಡಿಸಿದ್ದನಂತೆ. ಈ ಖುಷಿಗಾಗಿ ಗಂಗರಾಜು ಹಾಲಿ ಎಂಡಿಎ ಆಯುಕ್ತರ ಕಚೇರಿಯ ಆಪ್ತ ಸಿಬ್ಬಂದಿ ಕೊಠಡಿಯಲ್ಲೇ ನಂದಿನಿ ಪೇಡಾ ಸ್ವೀಟ್ ಬಾಕ್ಸ್ ಇರಿಸಿಕೊಂಡು, ಮುಡಾದ ಎಲ್ಲಾ ಸಿಬ್ಬಂದಿಗೆ ಸಿಹಿ ಹಂಚಿದ್ದು ದೊಡ್ಡ ಸುದ್ದಿಯಾಗಿತ್ತು.

ಸದಸ್ಯರು, ಶಾಸಕರು ಹೇಳಿದ ಕೆಲಸ ಮಾಡಲು ಹಿಂದೇಟು ಹಾಕುವ ಹಿಂದಿನ ಮುಡಾ ಹಾಗೂ ಈಗಿನ ಎಂಡಿಎ ಸಿಬ್ಬಂದಿ, ಗಂಗರಾಜು ಏನೇ ಹೇಳಿದರೂ ಚಾಚೂ ತಪ್ಪದೇ ತ್ವರಿತವಾಗಿ ಮಾಡಿ ಮುಗಿಸುತ್ತಿದ್ದರು. ಗಂಗರಾಜು ಕೊಡುವ ಯಾವುದೇ ಫೈಲ್ ಸಲೀಸಾಗಿ ಒಂದು ಟೇಬಲ್ ನಿಂದ ಮತ್ತೊಂದು ಟೇಬಲ್‌ಗೆ ಹಾದು ಕೊನೆಗೆ ಆಯುಕ್ತರ ಸಹಿಯೂ ಸಲೀಸು..!

ಆಯುಕ್ತರಾಗಿದ್ದ ದಿನೇಶ್ ಕುಮಾರ್ ಛೇಂಬರ್ ಗಂಗರಾಜುಗೆ ಒಂದು ರೀತಿ ಸ್ವಂತ ಛೇಂಬರ್ ಆಗಿತ್ತು. ಆಯುಕ್ತರ ಟೇಬಲ್ ಮೇಲೆ ತಲೆಗೆ ಕೈಕೊಟ್ಟು ಒರಗಿ ಮೊಬೈಲ್ ಹಿಡಿದು ಗಂಟೆಗಟ್ಟಲೇ ಮಾತನಾಡುತ್ತಿದ್ದರೆ, ಯಾರು ಏನು ಮಾಡಲಾಗುತ್ತಿರಲಿಲ್ಲ. ಅಷ್ಟರ ಮಟ್ಟಿಗೆ ಮುಡಾ ಹಾಗೂ ಎಂಡಿಎ ಅಧಿಕಾರಿಗಳ ಜೊತೆ ಸಲುಗೆ ಬೆಳೆಸಿದ್ದ. ಈತನ ವ್ಯವಹಾರ ಯಾವ ಅಡ್ಡಿ ಇಲ್ಲದೆ ಇಲ್ಲಿ ಸಲೀಸಾಗಿ ಆಗುತ್ತಿತ್ತು. ಅಷ್ಟರ ಮಟ್ಟಿಗೆ ಗಂಗರಾಜು ಮುಡಾ ಮತ್ತು ಎಂಡಿಎನಲ್ಲಿ ಅಧಿಪತ್ಯ ಸ್ಥಾಪಿಸಿದ್ದ. ಈಗ ಬಾನೆಟ್ ಮೇಲಿಂದ ಬಿಸಾಡಲ್ಪಟ್ಟು, ಬಿದ್ದು ಪಾರಾಗಿರುವ ಧನಂಜಯನ ಹಣಕಾಸಿನ ವ್ಯವಹಾರ ಕೂಡ ಮುಡಾಗೆ ಸಂಬಂಧಿಸಿದ್ದಾಗಿದೆ.

ಮತ್ತೆ ಇಬ್ಬರು ಯುವಕರ ಬಲಿ

ದುರಂತ ತಡೆಗಟ್ಟುವಲ್ಲಿ ಜಿಲ್ಲಾಡಳಿತ, ತಾಲೂಕು ಆಡಳಿತ ವಿಫಲ: ಯುವಜನತೆ ಜಲಸಮಾಧಿ ಪ್ರಕರಣಗಳು ಹೆಚ್ಚಾದ ಹಿನ್ನೆಲೆಯಲ್ಲಿ ತಾಲೂಕಿನ ಬಲಮುರಿ, ಎಡಮುರಿ ಹಾಗೂ ಕಾವೇರಿ ನದಿ ಪಾತ್ರದಲ್ಲಿ ಪ್ರವಾಸಿಗರ ಪ್ರವೇಶ ನಿರ್ಬಂಧಿಸಿ ಶ್ರೀರಂಗಪಟ್ಟಣ ತಾಲೂಕು ಆಡಳಿತ ನಿಷೇಧಾಜ್ಞೆ ವಿಧಿಸಿತ್ತು. ಇಷ್ಟಾದರೂ ಪೊಲೀಸ್ ಇಲಾಖೆ ಸಮರ್ಪಕವಾಗಿ ನಿಗಾ ವಹಿಸದ ಪರಿಣಾಮ ನಿತ್ಯ ಸಾವಿರಾರು ಪ್ರವಾಸಿಗರು ಇಲ್ಲಿನ ಪ್ರವಾಸಿ ತಾಣಕ್ಕೆ ಭೇಟಿ ನೀಡುತ್ತಿದ್ದು, ಅಮಾಯಕರ ಪ್ರಾಣ ಹಾನಿ ಮುಂದುವರೆದಿದೆ. ಇವುಗಳನ್ನು ತಡೆಗಟ್ಟುವಲ್ಲಿ ಜಿಲ್ಲಾಡಳಿತ, ತಾಲೂಕು ಆಡಳಿತ ವಿಫಲವಾಗಿದೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನಿಷೇಧವಿದ್ದರೂ, ನಿಯಂತ್ರಣವಿಲ್ಲ: ಬಲಮುರಿ, ಎಡಮುರಿ ಹಾಗೂ ಕಾವೇರಿ ನದಿ ಪಾತ್ರದ ಪ್ರದೇಶಗಳಲ್ಲಿ ಈ ಹಿಂದೆ ಸಾಕಷ್ಟು ಬಾರಿ ಪ್ರವಾಸಿಗರು, ವಿಶೇಷವಾಗಿ ಯುವಕರು, ನೀರಿನಲ್ಲಿ ಈಜಲು ಇಳಿದು ಮುಳುಗಿ ಸಾವನ್ನಪ್ಪಿದ ಘಟನೆಗಳು ವರದಿಯಾಗಿದ್ದವು. ಈ ಕುರಿತು ಮಾಧ್ಯಮಗಳಲ್ಲಿ ನಿರಂತರ ವರದಿ ಪ್ರಕಟಿಸಿದ್ದ ಹಿನ್ನೆಲೆಯಲ್ಲಿ ಎಚ್ಚೆತ್ತ ತಾಲೂಕು ಆಡಳಿತ ಕಲಂ 144 ಅಡಿ ಪ್ರವಾಸಿಗರಿಗೆ ಪ್ರವೇಶ ನಿಷೇಧಿಸಿ ನಿಷೇಧಾಜ್ಞೆ ಜಾರಿಗೊಳಿಸಲಾಗಿತ್ತು.

ಆದರೆ ಸ್ಥಳದಲ್ಲಿ ಸಮರ್ಪಕ ಪೊಲೀಸ್ ಬಂದೋಬಸ್ತ್ ಇಲ್ಲದಿರುವುದು. ಎಚ್ಚರಿಕೆ ಫಲಕಗಳ ನಿರ್ಲಕ್ಷ್ಯ, ಪ್ರವಾಸಿಗರ ಮುಕ್ತ ಸಂಚಾರ ಹಾಗೂ ಅಪಾಯ ಪ್ರದೇಶಗಳಿಗೆ ತಡೆಗೋಡೆಗಳ ಕೊರತೆ ಜೊತೆಗೆ ಜನಪ್ರತಿನಿಧಿಗಳ ಕುಮ್ಮಕ್ಕಿನಿಂದ ನಿಷೇಧ ಕೇವಲ ಕಾಗದದಲ್ಲೇ ಉಳಿದಿದೆ ಎಂಬ ಟೀಕೆ ವ್ಯಾಪಕವಾಗಿ ಕೇಳಿ ಬರುತ್ತಿದೆ. ರಜಾ ದಿನಗಳು ಹಾಗೂ ವಾರಾಂತ್ಯಗಳಲ್ಲಿ ಸಾವಿರಾರು ಮಂದಿ ಬಲಮುರಿಗೆ ಆಗಮಿಸುತ್ತಿದ್ದರೂ, ಪೊಲೀಸರು ಯಾವುದೇ ಕಟ್ಟುನಿಟ್ಟಿನ ತಪಾಸಣೆ ಅಥವಾ ನಿಯಂತ್ರಣ ಮಾಡದೇ ಇರುವುದು ಮತ್ತೆ ದುರಂತಕ್ಕೆ ಕಾರಣವಾಗಿದೆ.

ಸಾರ್ವಜನಿಕರ ಆಕ್ರೋಶ: ತಾಲೂಕಿನ ಪ್ರಸಿದ್ಧ ಬಲಮುರಿಯಲ್ಲಿ ಗಣಪತಿ, ಶಿವ, ಆಂಜನೇಯ, ಚಾಮುಂಡೇಶ್ವರಿ ಸೇರಿದಂತೆ ಸಾಕಷ್ಟು ದೇವಾಲಯಗಳಿದ್ದು, ಕಾವೇರಿ ನದಿ ಹರಿಯುವುದರಿಂದ ಪ್ರಸಿದ್ಧ ಪ್ರವಾಸಿ ತಾಣವಾಗಿ ಮಾರ್ಪಟ್ಟಿದೆ. ಇಂತಹ ಧಾರ್ಮಿಕ ಕ್ಷೇತ್ರದಲ್ಲಿ ಪ್ರವಾಸಿಗರಿಗೆ ಮಾಂಸಾಹಾರ, ಮದ್ಯಪಾನಕ್ಕೆ ಅವಕಾಶ ಮಾಡಿಕೊಡಲಾಗಿದೆ. ಅಲ್ಲದೇ ಮಧ್ಯರಾತ್ರಿ 2 ಗಂಟೆವರೆಗೂ ಡಿಜೆ ಹಾಗೂ ಬಾರ್ ಅಂಡ್ ರೆಸ್ಟೋರೆಂಟ್ ನಡೆಸಲು ಪರವಾನಗಿ ನೀಡಲಾಗಿದೆ. ಸಾಕಷ್ಟು ಮಾಂಸಾಹಾರ, ಮದ್ಯಪಾನ ಮಾಡಿ ನದಿಗೆ ಇಳಿಯುವ ಯುವ ಸಮೂಹ ನೀರಿನಲ್ಲಿ ಮುಳುಗಿ ಸಾವನ್ನಪ್ಪುತ್ತಿದ್ದಾರೆ. ಇದನ್ನು ಮನಗಂಡ ಶ್ರೀರಂಗಪಟ್ಟಣ ತಾಲೂಕು ಆಡಳಿತ ಪ್ರವಾಸಿಗರಿಗೆ ನಿರ್ಬಂಧ ವಿಧಿಸಿ ನಿಷೇಧಾಜ್ಞೆ ಜಾರಿಗೊಳಿಸಿತ್ತು. ಆದರೆ ಪ್ರವಾಸಿ ತಾಣದಲ್ಲಿ ವ್ಯಾಪಾರ ಮಾಡುವ ವ್ಯಾಪಾರಿಗಳು, ಸ್ಥಳೀಯ ಜನಪ್ರತಿನಿಧಿಗಳ ಮೇಲೆ ಒತ್ತಡ ಹೇರಿ, ನಿಷೇಧಾಜ್ಞೆ ಸಡಿಲಗೊಳಿಸಿದ್ದಾರೆ. ಇದರಿಂದಾಗಿ ರಾಜ್ಯ, ಹೊರರಾಜ್ಯ ಸೇರಿದಂತೆ ವಿವಿಧೆಡೆಗಳಿಂದ ಇಲ್ಲಿನ ಪ್ರವಾಸಿ ತಾಣಕ್ಕೆ ಸಾವಿರಾರು ಮಂದಿ ಆಗಮಿಸುತ್ತಿದ್ದು, ನದಿಯಲ್ಲಿ ಈಜಲು ಇಳಿಯುವ ಯುವಕರೇ ಹೆಚ್ಚಾಗಿ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ಇದೀಗ ಇಬ್ಬರು ಯುವಕರು ಸಾವನ್ನಪ್ಪಿರುವುದಕ್ಕೆ ಸ್ಥಳೀಯ ಪೊಲೀಸರೇ ನೇರ ಹೊಣೆ. ಇನ್ನಾದರೂ ದುರಂತ ತಡೆ ಗಟ್ಟಲು ವಿಫಲವಾಗಿರುವ ಜಿಲ್ಲಾಡಳಿತ, ತಾಲೂಕು ಆಡಳಿತ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪ್ರತಿ ವರ್ಷವೂ ಇದೇ ರೀತಿಯ ದುರ್ಘಟನೆಗಳು ಮರುಕಳಿಸುತ್ತಿವೆ. ಇನ್ನು ಎಷ್ಟು ಯುವಕರ ಜೀವ ಬಲಿಯಾಗಬೇಕು? ನಿಷೇಧಾಜ್ಞೆ ಜಾರಿಯಲ್ಲಿದ್ದರೆ ಪ್ರವೇಶ ಹೇಗೆ ಸಾಧ್ಯ? ಎಂದು ಸ್ಥಳೀಯರು ಹಾಗೂ ಸಾರ್ವಜನಿಕರು ಪ್ರಶ್ನಿಸಿದ್ದಾರೆ.

ಅಪಾಯ ಪ್ರದೇಶಗಳಿಗೆ ಕಬ್ಬಿಣದ ತಡೆಗೋಡೆ ನಿರ್ಮಿಸುವುದು, ನಿರಂತರ ಪೊಲೀಸ್ ಪಹರೆ, ಸಿಸಿಟಿವಿ ನಿಗಾ ವ್ಯವಸ್ಥೆ ಹಾಗೂ ಪ್ರವಾಸಿಗರ ಸಂಪೂರ್ಣ ನಿರ್ಬಂಧ ಜಾರಿಗೊಳಿಸುವಂತೆ ಸಾರ್ವಜನಿಕರು ಆಗ್ರಹಿಸಿದ್ದಾರೆ.

ಪ್ರವಾಸಿ ತಾಣವಾದ ಬಲಮುರಿ, ಎಡಮುರಿಗೆ ಪ್ರವಾಸಿಗರಿಗೆ ನಿರ್ಬಂಧವಿಲ್ಲ. ಆದರೆ ಕಾವೇರಿ ನದಿಗೆ ಇಳಿಯದಂತೆ ಶ್ರೀರಂಗಪಟ್ಟಣ ತಾಲೂಕು ಆಡಳಿತದಿಂದ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಹೀಗಾಗಿ ಪ್ರವಾಸಿ ತಾಣದಲ್ಲಿ ಪ್ರವಾಸಿಗರ ರಕ್ಷಣೆಗಾಗಿ, ಕಾವೇರಿ ನದಿಗೆ ಇಳಿಯದಂತೆ ನಮ್ಮ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಇಷ್ಟಾದರೂ ಈ ದುರ್ಘಟನೆ ನಡೆದಿದೆ.
– ವಿವೇಕಾನಂದ,
ಕೆಆರ್‌ಎಸ್ ಠಾಣೆ ವೃತ್ತ ನಿರೀಕ್ಷಕ.

ಪೊಲೀಸ್ ಠಾಣೆಗಳಲ್ಲಿ ಎಫ್‌ಐಆರ್ ದಾಖಲು

ಹಣಕ್ಕೆ ಬೇಡಿಕೆ ಇಟ್ಟಿದ್ದಾರೆಂಬ ಆರೋಪದ ಬಗ್ಗೆ ಮೈಸೂರಿನ ದೇವರಾಜ ಪೊಲೀಸ್ ಠಾಣೆಯಲ್ಲಿ ಗಂಗರಾಜು ವಿರುದ್ಧ ಜೂನ್ 30, 2021 ರಂದು ಎಫ್‌ಐಆರ್ ದಾಖಲಾಗಿದೆ. ಹೀಗೆ ಗಂಗರಾಜು ವಿರುದ್ಧ ಹಲವು ಪೊಲೀಸ್ ಠಾಣೆಗಳಲ್ಲಿ ಪ್ರಕರಣ ದಾಖಲಾಗಿದ್ದು, ಈಗ ಕೊಲೆ ಯತ್ನ ಆರೋಪದಲ್ಲಿ ಮತ್ತೊಂದು ಎಫ್‌ಐಆರ್ ಕುವೆಂಪುನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.

ನಗರ ಪ್ರದೇಶದ ಅರಣ್ಯ ಭೂಮಿ ರಕ್ಷಣೆಗೆ ಕಾಂಪಾ ನಿಧಿ ಬಳಕೆ

ಬೆಂಗಳೂರು, ಮೇ 21(ಕೆಎಂಶಿ)– ನಗರ ಪ್ರದೇಶಗಳಿಗೆ ಹೊಂದಿಕೊಂಡ ಅರಣ್ಯ ಭೂಮಿ ಒತ್ತುವರಿ ತಡೆಗೆ ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಲು ಕಾಂಪಾ ನಿಧಿ ಬಳಸುವಂತೆ ಅರಣ್ಯ ಸಚಿವ ಈಶ್ವರ ಖಂಡ್ರೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಅರಣ್ಯ ಇಲಾಖೆ ಉನ್ನತಾಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಕಾಂಪಾ ನಿಧಿಯಲ್ಲಿ ಅರಣ್ಯ ಭೂಮಿ ರಕ್ಷಣೆಗೆ ಅವಕಾಶವಿದೆ. ನಗರ ಮತ್ತು ಪಟ್ಟಣ ಸಮೀಪ ಕೋಟ್ಯಂತರ ರೂ. ಬೆಲೆ ಬಾಳುವ ಅರಣ್ಯ ಭೂಮಿ ಒತ್ತುವರಿ ಆಗದಂತೆ ಬೇಲಿ ಹಾಕಲು ನಿಧಿ ಬಳಸಬಹುದಾಗಿದೆ ಎಂದರು.

ಸರ್ಕಾರ ಮತ್ತು ರಾಜರ ಆಳ್ವಿಕೆ ಕಾಲದಲ್ಲಿ ಅರಣ್ಯ ಎಂಬುದಾಗಿ ಗೆಜೆಟ್ ಅಧಿಸೂಚನೆ ಹಾಗೂ ಅರಣ್ಯ ಸ್ವರೂಪ ಇದ್ದರೂ ಕೆಲವು ಕಡೆ ಅರಣ್ಯ ಎಂಬುದಾಗಿ ಇಂಡೀಕರಣ ಆಗದೆ. ಆರ್‌ಟಿಸಿಯಲ್ಲಿ ದಾಖಲಾಗದ ಕಾರಣ ಅಕ್ರಮ ಮಂಜೂರಾತಿ, ಒತ್ತುವರಿ ಆಗುತ್ತಿದೆ.

ರನ್‌ವೇಗೆ ಬಡಿದ ವಿಮಾನದ ಹಿಂಭಾಗ; ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ತಪ್ಪಿದ ಭಾರೀ ಅನಾಹುತ

ಬೆಂಗಳೂರು, ಮೇ 21(ಕೆಎಂಶಿ)– ದೇವನಹಳ್ಳಿಯ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕೂದಲೆಳೆಯ ಅಂತರದಲ್ಲಿ ಭಾರಿ ದುರಂತ ತಪ್ಪಿದೆ. ಇದರಿಂದ 180ಕ್ಕೂ ಹೆಚ್ಚು ಕುಟುಂಬಗಳು ನೆಮ್ಮದಿಯ ನಿಟ್ಟಿಸಿರುವ ಬಿಟ್ಟಿವೆ. ದೆಹಲಿಯ ಇಂದಿರಾ ಗಾಂಧಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ 181 ಪ್ರಯಾಣಿಕರನ್ನು ಹೊತ್ತು ಏರ್ ಇಂಡಿಯಾ ಸಂಸ್ಥೆಗೆ ಸೇರಿದ ವಿಮಾನ ಬೆಂಗಳೂರಿಗೆ ಬಂದಿತ್ತು. ಈ ವಿಮಾನವು ದೇವನಹಳ್ಳಿಯ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಲ್ಯಾಂಡಿಂಗ್ ಆಗುವ ವೇಳೆ ವಿಮಾನದ ಹಿಂಭಾಗ ರನ್‌ವೇಗೆ ಬಡಿದಿದೆ, ಇದರಿಂದ ಭಾರೀ ಅವಘಡವೊಂದು ಕೂದಲೆಳೆ ಅಂತರದಲ್ಲಿ ತಪ್ಪಿದೆ. ಏರ್ ಇಂಡಿಯಾ ವಕ್ತಾರರು ಈ ಕುರಿತಂತೆ ಸ್ಪಷ್ಟನೆ ನೀಡಿದ್ದು ದೆಹಲಿಯಿಂದ ಬೆಂಗಳೂರಿಗೆ ಹೊರಟ ಏರ್ ಇಂಡಿಯಾ ಎಐ2651 ವಿಮಾನದಲ್ಲಿ 181 ಪ್ರಯಾಣಿಕರು ಇದ್ದರು. ಈ ವಿಮಾನ ಲ್ಯಾಂಡಿಂಗ್ ವೇಳೆ ವಿಮಾನದ ಹಿಂಭಾಗ ರನ್ ವೇಗೆ ಅಪ್ಪಳಿಸಿದೆ ಎಂದು ತಿಳಿಸಿದ್ದಾರೆ. ಇದರಿಂದ ವಿಮಾನದ ಹೊರಭಾಗಕ್ಕೆ ಕೊಂಚ ದಕ್ಕೆಯಾಗಿರುವುದನ್ನು ಹೊರತುಪಡಿಸಿದರೆ ವಿಮಾನದಲ್ಲಿದ್ದ ಪ್ರಯಾಣಿಕರು ಸುರಕ್ಷಿತರಾಗಿದ್ದಾರೆ ಎಂದು ಅವರು ತಿಳಿಸಿದ್ದಾರೆ.



ಜ್ಞಾನ ಕಾರ್ಯಗಳಿಂದ ಅನಂತ ಪುಣ್ಯಪ್ರಾಪ್ತಿ

ಭಾಗವತ ಸಂದೇಶದ ವೇಳೆ ಶ್ರೀ ಸತ್ಯಾತ್ಮ ತೀರ್ಥ ಸ್ವಾಮೀಜಿ ಕಿವಿಮಾತು

ಮೈಸೂರು, ಮೇ 21– ಯಾವುದೇ ಕಾರ್ಯಕ್ರಮದಲ್ಲಿ ಸಲ್ಪವಾದರೂ ಜ್ಞಾನ ಕಾರ್ಯಗಳಾದರೆ ಅನಂತ ಪುಣ್ಯ ಲಭ್ಯವಾಗುತ್ತದೆ ಎಂದು ಶ್ರೀ ಉತ್ತರಾದಿ ಮಠದ ಶ್ರೀ ಸತ್ಯಾತ್ಮ ತೀರ್ಥ ಸ್ವಾಮೀಜಿ ಹೇಳಿದರು.

ಅಧಿಕ ಜ್ಯೇಷ್ಠ ಮಾಸದ ಅಂಗವಾಗಿ ಶ್ರೀಮನ್ ಮಧ್ವಾಚಾರ್ಯ ಮೂಲ ಮಹಾಸಂಸ್ಥಾನ ಉತ್ತರಾದಿ ಮಠದ ವತಿಯಿಂದ ಹಮ್ಮಿಕೊಂಡಿರುವ ಧರ್ಮ ಸಭೆಯಲ್ಲಿ ಭಾಗವತ ಸಂದೇಶ ನೀಡಿದ ಶ್ರೀಗಳು, ದೇವರ ಸ್ಮರಣೆ, ಭಜನೆ, ಧ್ಯಾನ ಮತ್ತು ಗ್ರಂಥಗಳ ಅಧ್ಯಯನ ಮತ್ತು ಶ್ರವಣ(ಆಲಿಸುವುದು)ದಿಂದ ಆತ್ಮ ಸಾಧನೆಯಾಗುತ್ತದೆ ಎಂದರು.



ಅಧಿಕ ಜ್ಯೇಷ್ಠ ಮಾಸದ ಅಂಗವಾಗಿ ಶ್ರೀಮನ್ ಮಧ್ವಾಚಾರ್ಯ ಮೂಲ ಮಹಾಸಂಸ್ಥಾನ ಉತ್ತರಾದಿ ಮಠದ ವತಿಯಿಂದ ಹಮ್ಮಿಕೊಂಡಿರುವ ಸಾಂಸ್ಕೃತಿಕ ಕಾರ್ಯಕ್ರಮ ಸರಣಿಯಲ್ಲಿ ಡಾ.ತುಳಸೀ ರಾಮಚಂದ್ರ ಅವರ ತಂಡದ ಕಲಾವಿದರಿಂದ ಭರತನಾಟ್ಯ ಪ್ರಸ್ತುತಗೊಂಡಿತು.

ಈ ಎಲ್ಲಾ ಜ್ಞಾನ ಕಾರ್ಯಗಳನ್ನು ಏಕಾಗ್ರತೆಯ ಮನಸ್ಸಿನಿಂದ ಮಾಡಬೇಕು. ತೀರ್ಥಯಾತ್ರೆ, ತೀರ್ಥಸ್ನಾನ, ಹಿರಿಯರ ಸೇವೆ, ಗುರುಗಳ ದರ್ಶನದಿಂದ ಪಾಪ ನಿವಾರಣೆ ಆಗುತ್ತದೆ. ಶಾಸ್ತ್ರಗಳೂ ಇದನ್ನೇ ಪ್ರತಿಪಾದಿಸಿವೆ ಎಂದು ನುಡಿದರು.

ಒಬ್ಬ ಸಾಮಾನ್ಯ ಮಹಿಳೆಯಾಗಿದ್ದ ನಾರದರ ತಾಯಿ ನಿರಂತರವಾಗಿ ಋಷಿ–ಮುನಿಗಳ ಸೇವೆ ಮಾಡಿದರು. ಅಂತಹ ಒಳ್ಳೆಯ ಪರಿಸರದಲ್ಲಿ ಬಾಲಕ ವಿಷ್ಣುವಿನ ಮಹಾಭಕ್ತನಾಗಿ, ತ್ರಿಲೋಕ ಸಂಚಾರಿಯಾದ. ಇಂತಹ ಸಂಗತಿಗಳು ನಮಗೆ ಮಾದರಿ ಆಗಬೇಕು. ನಮ್ಮ ಮಕ್ಕಳನ್ನು ಮೊಬೈಲ್ ಗೀಳಿನಿಂದ ತಪ್ಪಿಸಿ, ನಮ್ಮ ನಾಡಿನ ಸಂಸ್ಕೃತಿ, ಸಂಪ್ರದಾಯದಂತೆ ಬೆಳೆಸಬೇಕು ಎಂದು ತಿಳಿಹೇಳಿದರು.

ದೇವರ ಕತೆಗಳನ್ನು ಸುಮ್ಮನೇ ಕೇಳುವುದಕ್ಕಿಂತ ಮನನದೊಂದಿಗೆ ಧ್ಯಾನ ಮಾಡಬೇಕು. ದೇವರ ಉಪಕಾರವನ್ನು ಸದಾ ಸ್ಮರಿಸಬೇಕು. ಕುಂತಿ ದೇವಿ ಇದಕ್ಕೆ ಉದಾಹರಣೆ. ನಿತ್ಯವೂ ದೇವರ ಕೊಡುಗೆಗಳನ್ನು ಸ್ಮರಿಸಿದರೆ ಆಪತ್ಕಾಲ ದಲ್ಲಿ ಅದು ನಮ್ಮನ್ನು ರಕ್ಷಣೆ ಮಾಡುತ್ತದೆ. ಕಲಿಯುಗದಲ್ಲಿ ಸಲ್ಪ ಧರ್ಮ ಮಾಡಿದರೂ ಪುಣ್ಯ ಬರುತ್ತದೆ. ಈ ನಿಟ್ಟಿನಲ್ಲಿ ಅಧಿಕ ಮಾಸವು ವರದಾನವಾಗಿ ಬಂದಿದೆ ಎಂದರು.

ಶುದ್ಧ ಮನದಿಂದ ದೇವರನ್ನು ಕುರಿತಾದ ಸಾಹಿತ್ಯ ಓದಬೇಕು. ಮಹಾಭಾರತ ಮತ್ತು ಭಾಗವತದಂಥಹ ಗ್ರಂಥಗಳು ಕಥಾ ಸಮುದ್ರ ಲೋಕದಲ್ಲಿ ಎಲ್ಲೂ ಇಲ್ಲ. ಭಗವಾನ್ ವೇದವ್ಯಾಸರು ಇದನ್ನು ರಚಿಸಿ ಕೊಟ್ಟಿದ್ದು, ಆಚಾರ್ಯ ಮಧ್ವರು ಸಮಗ್ರವಾಗಿ ತಾತ್ಪರ್ಯ ನಿರ್ಣಯಗಳನ್ನು ರಚನೆ ಮಾಡಿಕೊಟ್ಟಿದ್ದಾರೆ ಎಂದು ಶ್ರೀ ಸತ್ಯಾತ್ಮ ತೀರ್ಥರು ಹೇಳಿದರು. ಇದೇ ವೇಳೆ ಶ್ರೀಗಳು ಪೃಥು ಮಹಾರಾಜ, ಅಭಿಮನ್ಯು, ಅಶ್ವತ್ಥಾಮ, ಪರೀಕ್ಷಿತರನ್ನು ಉದಾಹರಿಸಿ, ನಾವು ಎತ್ತರಕ್ಕೆ ಏರಬೇಕು ಎಂದರೆ ಹರಿಕಥಾ ಶ್ರವಣ, ಜ್ಞಾನಿಗಳ ಒಡನಾಟದಿಂದ ಮಾತ್ರ ಸಾಧ್ಯ ಎಂದು ತಿಳಿಸಿದರು.

ವಿಶೇಷ ನೃತ್ಯ: ಉಪನ್ಯಾಸಕ್ಕೂ ಮುನ್ನ ನೃತ್ಯಾಲಯ ಸಂಸ್ಥೆಯ ಡಾ.ತುಳಸೀ ರಾಮ ಚಂದ್ರ ಮತ್ತು ತಂಡದ ಕಲಾವಿದರು ವಿಶೇಷ ಭರತನಾಟ್ಯ ಪ್ರಸ್ತುತಪಡಿಸಿದರು.

ಬಿಜೆಪಿಯನ್ನೇ ಹಿಂದಿಕ್ಕಿದ ಕಾಕ್ರೋಚ್ ಜನತಾ ಪಕ್ಷ

ಐದೇ ದಿನದಲ್ಲಿ 10 ಮಿಲಿಯನ್ ಫಾಲೋವರ್ಸ್!!



ನವದೆಹಲಿ: ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರ ಹೇಳಿಕೆಗೆ ವಿರೋಧವಾಗಿ ಆರಂಭವಾದ ಕಾಕ್ರೋಚ್ ಜನತಾ ಪಾರ್ಟಿ ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ಸದ್ದು ಮಾಡುತ್ತಿದ್ದು, ಇನ್ಸ್ಟಾಗ್ರಾಮ್‌ನಲ್ಲಿ ಕೇಂದ್ರದ ಆಡಳಿತರೂಢ ಬಿಜೆಪಿಯನ್ನೇ ಹಿಂದಿಕ್ಕಿದೆ.

ಕಳೆದ ವಾರ ಆರಂಭವಾದ ವಿಡಂಬನಾತ್ಮಕ ಕಾಕ್ರೋಚ್ ಜನತಾ ಪಕ್ಷ ಭಾರತದ ರಾಜಕೀಯ ವಲಯ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ಸಂಚಲನ ಸೃಷ್ಟಿಸಿದ್ದು, ಇನ್‌ಸ್ಟಾಗ್ರಾಮ್‌ನಲ್ಲಿ ಬಿಜೆಪಿಯ ಅಧಿಕೃತ ಖಾತೆಯನ್ನು ಹಿಂದಿಕ್ಕಿದೆ.

ಇನ್‌ಸ್ಟಾಗ್ರಾಮ್ ನಲ್ಲಿ ಅಕೌಂಟ್ ಓಪನ್ ಆದ್ಮೇಲೆ ಕೇವಲ ಐದನೇ ದಿನಗಳಲ್ಲಿಯೇ 10 ಮಿಲಿಯನ್‌ಗಿಂತಲೂ ಅಂದ್ರೆ 1 ಕೋಟಿಗೂ ಅಧಿಕ ಫಾಲೋವರ್ಸ್ ಹೊಂದಿದೆ.

@cockroachjantaparty ಹೆಸರಿನ ಇನ್‌ಸ್ಟಾಗ್ರಾಮ್ ಖಾತೆ ಈವರೆಗೆ 10.6 ಮಿಲಿಯನ್ ಫಾಲೋವರ್ಸ್‌ಗಳನ್ನು ಹೊಂದಿದ್ದು, ಕ್ಷಣ ಕ್ಷಣದಿಂದ ಈ ಸಂಖ್ಯೆ ಏರಿಕೆಯಾಗುತ್ತಿದೆ.

ಬಿಜೆಪಿಯ ಅಧಿಕೃತ ಖಾತೆ @bjp4india ಸುಮಾರು 8.7 ಮಿಲಿಯನ್ ಫಾಲೋವರ್ಸ್ ಹೊಂದಿದೆ. ಕಾಂಗ್ರೆಸ್‌ನ @incindia ಖಾತೆಗೆ ಸುಮಾರು 13.2 ಮಿಲಿಯನ್ ಫಾಲೋವರ್ಸ್ ಇದ್ದರೆ, ಆಮ್ ಆದ್ಮಿ ಪಕ್ಷದ ಖಾತೆಗೆ ಸುಮಾರು 1.9 ಮಿಲಿಯನ್ ಫಾಲೋವರ್ಸ್ ಗಳಿದ್ದಾರೆ.

ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರು ಯುವ ನಿರುದ್ಯೋಗಿ ಯುವಕರು ಜಿರಳೆಗಳಂತೆ ಎಂದು ಟೀಕಿಸಿದ್ದರು. ಅವರಲ್ಲಿ ಕೆಲವರು ಮಾಧ್ಯಮಗಳಲ್ಲಿ, ಇನ್ನು ಕೆಲವರು ಸಾಮಾಜಿಕ ಮಾಧ್ಯಮದಲ್ಲಿದ್ದರೆ, ಇನ್ನು ಕೆಲವರು ಆರ್‌ಟಿಐ ಕಾರ್ಯಕರ್ತರಾಗಿದ್ದಾರೆ ಎಂದು ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಶುಕ್ರವಾರ ಕಿಡಿಕಾರಿದ್ದರು. ಅವರ ಹೇಳಿಕೆ ಖಂಡಿಸಿ ವಿಭಿನ್ನ ಹೆಸರಿನಲ್ಲಿ ಆರಂಭಿಸಿದ ಕಾಕ್ರೋಚ್ ಜನತಾ ಪಕ್ಷ ಸೋಷಿಯಲ್ ಮೀಡಿಯಾದಲ್ಲಿ ಬಿರುಗಾಳಿ ಎಬ್ಬಿಸಿದೆ.

ಕಾಂಗ್ರೆಸ್ ನಾಯಕರಿಂದ ಐ ಆಮ್ ಕಾಕ್ರೋಚ್ ಟೀ ಶರ್ಟ್ ಬಿಡುಗಡೆ: ಕಾಕ್ರೋಚ್ ಜನತಾ ಪಕ್ಷ ಭಾರತದ ರಾಜಕೀಯ ವಲಯ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ಸಂಚಲನ ಸೃಷ್ಟಿಸಿದ್ದು, ಇತ್ತ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆದ ಯುವ ಕಾಂಗ್ರೆಸ್ ಪ್ರತಿಭಟನೆ ವೇಳೆ ಕಾಂಗ್ರೆಸ್ ನಾಯಕರು ಐ ಆಮ್ ಕಾಕ್ರೋಚ್ ಎಂಬ ಟೀ ಶರ್ಟ್ ಅನ್ನು ಬಿಡುಗಡೆ ಮಾಡಿದರು.

ನೀಟ್ ಪರೀಕ್ಷೆಯ ಅಕ್ರಮ ಖಂಡಿಸಿ ಯುವ ಕಾಂಗ್ರೆಸ್ ಕಾರ್ಯಕರ್ತರು ನಗರದ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದು, ಇದೇ ಸಂದರ್ಭದಲ್ಲಿ ಪಿಎಂ ಕಾಂಪ್ರಮೈಸ್, ಐ ಆಮ್ ಕಾಕ್ರೋಚ್ ಎಂಬ ಟೀ ಶರ್ಟ್ ಬಿಡುಗಡೆ ಮಾಡುವ ಮೂಲಕ ಕೇಂದ್ರ ಸರ್ಕಾರ ಮತ್ತು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಜೂ.4ಕ್ಕೆ ರಾಜ್ಯ ಮಟ್ಟದ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಆಚರಣೆ

ಜಯಂತಿ ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಆರ್.ಐಶ್ವರ್ಯ



ಮೈಸೂರಿನ ಸಿದ್ಧಾರ್ಥನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೋರ್ಟ್ ಹಾಲ್‌ನಲ್ಲಿ ಗುರುವಾರ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜಯಂತಿ ಆಚರಣೆ ಸಂಬಂಧ ಪೂರ್ವ ಸಿದ್ಧತಾ ಸಭೆ ನಡೆಯಿತು.

ಮೈಸೂರು,ಮೇ 21(ಪಿಎಂ)– ಜಿಲ್ಲಾಡಳಿತದ ವತಿಯಿಂದ ಜೂ.4ರಂದು ರಾಜ್ಯ ಮಟ್ಟದ ರಾಜರ್ಷಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಆಚರಿಸಲಾಗುವುದು. ನಾಲ್ವಡಿಯವರ ಕೊಡುಗೆಗಳನ್ನು ಸಮಾಜಕ್ಕೆ ತಿಳಿಸುವ ನಿಟ್ಟಿನಲ್ಲಿ ಅರ್ಥಪೂರ್ಣವಾಗಿ ಜಯಂತಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಆರ್.ಐಶ್ವರ್ಯ ತಿಳಿಸಿದರು.

ಮೈಸೂರಿನ ಸಿದ್ಧಾರ್ಥನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೋರ್ಟ್ ಹಾಲ್‌ನಲ್ಲಿ ಗುರುವಾರ ಹಮ್ಮಿಕೊಂಡಿದ್ದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮೈಸೂರಿನ ಕಲಾಮಂದಿರದಲ್ಲಿ ಅಂದು ಬೆಳಗ್ಗೆ 12ಕ್ಕೆ ಸಭಾ ಕಾರ್ಯಕ್ರಮ ಆಯೋಜಿಸಲಾಗುವುದು. ಇದಕ್ಕೂ ಮುನ್ನ ಅರಮನೆ ಆವರಣದಲ್ಲಿರುವ ಪುರಾತನ ಶ್ರೀ ಲಕ್ಷ್ಮೀರಮಣಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಮೆರವಣಿಗೆಗೆ ಚಾಲನೆ ನೀಡಲಾಗುವುದು. ಅಶ್ವರೋಹಿ ದಳ ಹಾಗೂ ಪೊಲೀಸ್ ಬ್ಯಾಂಡ್, ಡೊಳ್ಳು ಕುಣಿತ ಸೇರಿದಂತೆ ವಿವಿಧ ಕಲಾ ತಂಡಗಳು ಭಾಗವಹಿಸಿ ಮೆರವಣಿಗೆಗೆ ಮೆರಗು ನೀಡಲಿವೆ ಎಂದರು.

ಜಯಂತಿ ಹಿಂದಿನ ದಿನವೇ ಕೆಆರ್ ವೃತ್ತಕ್ಕೆ ವಿದ್ಯುತ್ ದೀಪಾಲಂಕಾರ ಮಾಡಲಾಗುವುದು. ವೃತ್ತದಲ್ಲಿರುವ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರತಿಮೆಗೆ ಪುಷ್ಪಾರ್ಚನೆ ಮಾಡುವ ಜೊತೆಗೆ ಇಲ್ಲಿ ನಾಲ್ವಡಿ ಗೀತ ಗಾಯನ ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ತಿಳಿಸಿದರು.

ಮೆರವಣಿಗೆಯಲ್ಲಿ ಭಾಗವಹಿಸುವವರಿಗೆ ಕುಡಿಯುವ ನೀರು, ಉಪಹಾರದ ವ್ಯವಸ್ಥೆಯಾಗಬೇಕು. ಶಿಷ್ಟಾಚಾರದಂತೆ ಎಲ್ಲಾ ಗಣ್ಯರಿಗೆ ಆಹ್ವಾನ ಪತ್ರಿಕೆ ವಿತರಣೆಯಾಗಬೇಕು. ಮೆರವಣಿಗೆ ಹಾಗೂ ವೇದಿಕೆ ಕಾರ್ಯಕ್ರಮ ನಡೆಯುವ ಸ್ಥಳಗಳಲ್ಲಿ ಪೊಲೀಸ್ ಬಂದೋಬಸ್ತ್ ಆಗಬೇಕು. ಈ ಎಲ್ಲದಕ್ಕೂ ಕ್ರಮ ವಹಿಸಲಾಗುವುದು. 7ರಿಂದ 14 ವರ್ಷ ಹಾಗೂ 15ರಿಂದ 18 ವರ್ಷದ ಎರಡು ವಿಭಾಗಗಳಲ್ಲಿ ವಿದ್ಯಾರ್ಥಿಗಳಿಗೆ ಚಿತ್ರಕಲಾ ಸ್ಪರ್ಧೆ, ರಸಪ್ರಶ್ನೆ ಸ್ಪರ್ಧೆ, ಪ್ರಬಂಧ ಸ್ಪರ್ಧೆಗಳನ್ನು ಆಯೋಜಿಸಿ ವಿಜೇತರಿಗೆ ಕಾರ್ಯಕ್ರಮದ ದಿನದಂದು ಬಹುಮಾನ ವಿತರಿಸಲಾಗುವುದು ಎಂದರು.

ನಾಲ್ವಡಿಯವರು ನಾಡು ಕಂಡಂತಹ ಅಪ್ರತಿಮ ನಾಯಕರು, ಮಹಾನ್ ಚೇತನರು. ಅವರು ಎಲ್ಲಾ ಕ್ಷೇತ್ರಗಳ ಅಭಿವೃದ್ಧಿಗೆ ಶ್ರಮಿಸಿದರು. ಶಿಕ್ಷಣಕ್ಕೆ ಒತ್ತು ನೀಡಿದ್ದರು. ವಿಶೇಷವಾಗಿ ಮಹಿಳಾ ಶಿಕ್ಷಣ ಹಾಗೂ ದೀನ ದಲಿತರ ಶಿಕ್ಷಣಕ್ಕೆ ಒತ್ತು ನೀಡಿದ್ದರು. ಮೈಸೂರು ಸಂಸ್ಥಾನವನ್ನು ತಮ್ಮ ಆಡಳಿತಾವಧಿಯಲ್ಲಿ ಮಾದರಿಯಾಗಿ ರೂಪಿಸಿದರು. ಇಂದು ಮೈಸೂರು ಸ್ವಚ್ಛನಗರಿ, ಪಾರಂಪರಿಕ ನಗರ ಎಂಬಿತ್ಯಾದಿ ಹಿರಿಮೆ ಗಳಿಸಲು ಅವರೇ ಕಾರಣಕರ್ತರು ಎಂದು ಸ್ಮರಿಸಿದರು.

ವಿವಿಧ ಉದ್ಯಮಗಳನ್ನು ಆರಂಭಿಸಿ ಜನತೆಗೆ ಉದ್ಯೋಗ ಕಲ್ಪಿಸಿದರು. ಆ ಮೂಲಕ ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ನಾಂದಿ ಹಾಡಿದರು. ಅವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸುವ ನಿಟ್ಟಿನಲ್ಲಿ ಸಭೆಯಲ್ಲಿ ವ್ಯಕ್ತವಾದ ಅವರ ಹೆಸರಿನಲ್ಲಿ ಪ್ರಶಸ್ತಿ ಪ್ರದಾನ, ಅವರ ಜೀವನ, ಕೊಡುಗೆ ಕುರಿತ ಸಾಕ್ಷ್ಯ ಪ್ರದರ್ಶನ ಸೇರಿದಂತೆ ವಿವಿಧ ವಿಚಾರಗಳನ್ನು ಪರಿಗಣಿಸಲಾಗುವುದು. ಎಲ್ಲವನ್ನೂ ಸಾಕಾರಾತ್ಮಕವಾಗಿ ಕಾರ್ಯಗತ ಗೊಳಿಸಲು ಜಿಲ್ಲಾಡಳಿತದಿಂದ ಪ್ರಯತ್ನ ಮಾಡಲಾಗುವುದು. ಸಮಾಜಕ್ಕೆ ನಾಲ್ವಡಿಯವರ ಕೊಡುಗೆ ಹಾಗೂ ವಿಚಾರಧಾರೆಗಳನ್ನು ಪಸರಿಸಿದಾಗ ಅವರ ಜಯಂತಿ ಆಚರಣೆ ಸಾರ್ಥಕವಾಗಲಿದೆ. ಈ ರೀತಿಯ ಅರ್ಥಪೂರ್ಣ ಆಚರಣೆಗೆ ನಿಮ್ಮೆಲ್ಲರ ಸಹಕಾರ ಅಗತ್ಯ ಎಂದು ಕೋರಿದರು.

ಇದಕ್ಕೂ ಮುನ್ನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಸುದರ್ಶನ್ ಮಾತನಾಡಿ, ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿಯನ್ನು ರಾಜ್ಯಮಟ್ಟದ ಜಯಂತಿಯಾಗಿ ಮೈಸೂರಿನಲ್ಲಿ ಆಚರಣೆ ಮಾಡಲು ರಾಜ್ಯ ಸರ್ಕಾರದಿಂದ ಸೂಚನೆ ಬಂದಿದೆ. ಕಾರ್ಯಕ್ರಮದಲ್ಲಿ ನಾಲ್ವಡಿಯವರ ಕುರಿತು ಉಪನ್ಯಾಸ ನೀಡಲು ಸಂಪನ್ಮೂಲ ವ್ಯಕ್ತಿ ಆಯ್ಕೆ ಮಾಡಬೇಕಿದೆ. ಕೆಆರ್ ವೃತ್ತದಲ್ಲಿ ಗೀತಗಾಯನ ಆಯೋಜನೆಗೂ ತಂಡ ಆಯ್ಕೆ ಮಾಡಬೇಕಿದೆ ಎಂದರು.

ಮುಖಂಡ ಅರವಿಂದ ಶರ್ಮ ಮಾತನಾಡಿ, ನಾಲ್ವಡಿಯವರ ಕುರಿತ ಗೀತಗಾಯನ ಕಾರ್ಯಕ್ರಮ ಶಾಲಾ–ಕಾಲೇಜುಗಳಲ್ಲಿ ನಡೆಸಬೇಕು. ನಾಲ್ವಡಿಯವರ ಕುರಿತ ಸಾಕ್ಷ್ಯಚಿತ್ರ ವಾರ್ತಾ ಇಲಾಖೆಯಲ್ಲಿದ್ದು, ಅದನ್ನು ಮೈಸೂರು ವಿವಿ ಆವರಣ ಸೇರಿದಂತೆ ನಗರದಲ್ಲಿರುವ ಎಲೆಕ್ಟ್ರಾನಿಕ್ ಪರದೆಗಳಲ್ಲಿ ಅಂದು ಪ್ರಸಾರ ಮಾಡಬೇಕು. ನಾಲ್ವಡಿಯವರ ಹೆಸರಿನಲ್ಲಿ ಜಯಂತಿಯಂದು ನೀಡುವ ಪ್ರಶಸ್ತಿಯನ್ನು ಕನಿಷ್ಠ 10 ಮಂದಿಗೆ ಸೀಮಿತಗೊಳಿಸಬೇಕು ಎಂದು ಕೋರಿದರು.

ಸಭಿಕರೊಬ್ಬರು ಮಾತನಾಡಿ, ನಾಲ್ವಡಿ ಪ್ರಶಸ್ತಿ ನೀಡುವಲ್ಲಿ ಮಹಿಳೆಯರಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಗ್ರಾಪಂಗಳಲ್ಲೂ ನಾಲ್ವಡಿ ಜಯಂತಿ ಆಚರಣೆಗೆ ಕ್ರಮ ವಹಿಸಬೇಕು ಎಂದು ಮನವಿ ಮಾಡಿದರು.

ಹಿರಿಯ ಸಾಹಿತಿ ಪ್ರೊ.ನುಜರಾಜ ಅರಸ್, ಮುಖಂಡರಾದ ಸೋಸಲೆ ಸಿದ್ದರಾಜು, ಬಿ.ಎಂ.ಶಿವಶಂಕರ್, ಕಾಂಗ್ರೆಸ್ ಮುಖಂಡ ಕೆ.ಮಹೇಶ್, ಕನ್ನಡ ಸಾಂಸ್ಕೃತಿಕ ಪರಿಷತ್ ಅಧ್ಯಕ್ಷ ಎಸ್.ಕೆ.ರಾಜುಗೌಡ, ಪದ್ಮಪಾಣಿ ಲಲಿತ ಕಲಾ ಅಕಾಡೆಮಿ ಗಾಯಕ ಜಯಶಂಕರ ಮೇಸ್ತ್ರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ಹೆಚ್.ಎಸ್.ನಿರ್ಮಲ ಸೇರಿದಂತೆ ವಿವಿಧ ಸಂಘಟನೆಗಳು ಮುಖಂಡರು ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

ಯಕಶ್ಚಿತ್ ರೂಂ ಬುಕ್ ಮಾಡಲು ಡೆಬಿಟ್, ಕ್ರೆಡಿಟ್ ಕಾರ್ಡ್ ಮಾಹಿತಿ ನೀಡಿ

4.99 ಲಕ್ಷ ಹಣ ಕಳೆದುಕೊಂಡ ವೃದ್ಧೆ

ಮೈಸೂರು, ಮೇ 21(ಪಿಎಂ)– ಆನ್‌ಲೈನ್‌ನಲ್ಲಿ ಹೋಟೆಲ್ ರೂಂ ಬುಕ್ ಮಾಡಿದ ಸಂಬಂಧ 4,99,242 ರೂ. ಕಳೆದುಕೊಂಡು ವಂಚನೆಗೆ ಒಳಗಾಗಿರುವುದಾಗಿ ಮಹಿಳೆಯೊಬ್ಬರು ನೀಡಿದ ದೂರಿನನ್ವಯ ಮೈಸೂರಿನ ಸರಸ್ವತಿಪುರಂ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸರಸ್ವತಿಪುರಂನ 67 ವರ್ಷದ ಮಹಿಳೆಯೊಬ್ಬರು ಹಣ ಕಳೆದುಕೊಂಡವರು. ತಿರುಪತಿಗೆ ಹೋಗಿ ಅಲ್ಲಿ ವಾಸ್ತವ್ಯಕ್ಕಾಗಿ ಗೂಗಲ್‌ನಲ್ಲಿ ಹೋಟೆಲ್ ಹುಡುಕಾಟ ನಡೆಸಿದ ವೇಳೆ ಕೋರ್ಟ್ ಯಾರ್ಡ್ ಮ್ಯಾರಿಯೇಟ್ ಎಂಬ ಹೋಟೆಲ್ ಸಂಬಂಧ ಮೊಬೈಲ್ ನಂಬರ್‌ವೊಂದು ಪ್ರಕಟವಾಯಿತು. ಸದರಿ ಮೊಬೈಲ್ ನಂಬರ್‌ಗೆ ಕರೆ ಮಾಡಿದಾಗ ಸ್ವೀಕರಿಸಿದ ವ್ಯಕ್ತಿಯು ಕಾರ್ಡ್ ಮೂಲಕ ಬುಕ್ ಮಾಡುವಂತೆ ಸೂಚಿಸಿದರು. ನಾನು ಡೆಬಿಟ್ ಕಾರ್ಡ್ ಮಾಹಿತಿ ನೀಡಿದಾಗ, 5,250 ರೂ. ತೆಗೆದುಕೊಳ್ಳುವುದಾಗಿ ತಿಳಿಸಿದರು ಎಂದು ಮಹಿಳೆಯು ದೂರಿನಲ್ಲಿ ತಿಳಿಸಿದ್ದಾರೆ.

ಆದರೆ ಕೆನರಾ ಬ್ಯಾಂಕ್ ಖಾತೆ ಡೆಬಿಟ್ ಕಾರ್ಡ್ ಮೂಲಕ 46,386 ರೂ.ಗಳನ್ನು ಹಿಡಿದುಕೊಂಡರು. ನಂತರ ರೀಫಂಡ್ ಮಾಡದೇ ಇರುವುದರಿಂದ ಪೊಲೀಸ್ ಠಾಣೆಗೆ ದೂರು ನೀಡುವುದಾಗಿ ಎಚ್ಚರಿಸಿದೆ. ಆಗ ಯುಎಸ್‌ಡಿ ಮೂಲಕ ಮಾತ್ರ ಹೋಟೆಲ್ ಟ್ರಾಂಜಾಕ್ಷನ್ ನಡೆಯುವುದು ಎಂದರಲ್ಲದೆ, ವಾಪಸ್ ಹಣ ಸಂದಾಯ ಮಾಡಲು ಯಾವುದಾದರೂ ಒಂದು ಇಂಟರ್‌ನ್ಯಾಷನಲ್ ಕಾರ್ಡ್ ಮಾಹಿತಿ ಬೇಕೆಂದರು. ನಾನು ತಿಳಿಯದೇ ನನ್ನ ಮಗನ ಡೆಬಿಟ್ ಮತ್ತು ಕ್ರೆಡಿಟ್ ಕಾರ್ಡ್ ಮಾಹಿತಿ ನೀಡಿದೆ. ಆಗ ಅವರು ನನ್ನ ಮಗನ ಕ್ರೆಡಿಟ್ ಕಾರ್ಡ್ ಮೂಲಕ 2,99,507 ರೂ., ಡೆಬಿಟ್ ಕಾರ್ಡ್ ಮೂಲಕ 1,15,201 ರೂ. ಹಾಗೂ ನನ್ನ ಡೆಬಿಟ್ ಕಾರ್ಡ್ ಮೂಲಕ 38,148 ರೂ.ಗಳು ಸೇರಿದಂತೆ ಒಟ್ಟು 4,99,242 ಪಾವತಿಸಿಕೊಂಡು ವಂಚಿಸಿದ್ದಾರೆ ಎಂದು ಅವರು ದೂರಿನಲ್ಲಿ ಆರೋಪಿಸಿದ್ದಾರೆ.

ಅಕ್ಕಮಹಾದೇವಿ ವಚನಗಳು ಇಂದಿಗೂ ಪ್ರಸ್ತುತ

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದ ಸಹ ಪ್ರಾಧ್ಯಾಪಕರಾದ ಡಾ.ಹೇಮಾ ಪಾಟೀಲ್ ಅಭಿಮತ



ವಾತ್ಸಲ್ಯ ಸೇವಾ ಫೌಂಡೇಶನ್‌ನ ಬಿ.ನಾಗರತ್ನ ಅವರನ್ನು ಬಳಗದ ವತಿಯಿಂದ ಸನ್ಮಾನಿಸಲಾಯಿತು.

ಮೈಸೂರು, ಮೇ 21(ವಿವಿಹೆಚ್)– ಆತ್ಮಶುದ್ಧಿ, ಸತ್ಯನಿಷ್ಠತೆ ಹಾಗೂ ನಿಸ್ವಾರ್ಥ ಬದುಕಿನ ಮೌಲ್ಯಗಳನ್ನು ಸಾರುವ ಅಕ್ಕಮಹಾದೇವಿ ಅವರ ವಚನಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದ ಸಹ ಪ್ರಾಧ್ಯಾಪಕರಾದ ಡಾ.ಹೇಮಾ ಪಾಟೀಲ್ ಅಭಿಪ್ರಾಯಿಸಿದರು.

ಮೈಸೂರಿನ ಕುವೆಂಪುನಗರದ ಜೆಎಸ್‌ಎಸ್ ಕಾನೂನು ಕಾಲೇಜಿನಲ್ಲಿ ಚಾಮರಾಜೇಶ್ವರಿ ಅಕ್ಕನ ಬಳಗ ವತಿಯಿಂದ ಗುರುವಾರ ಆಯೋಜಿಸಿದ್ದ ಅಕ್ಕಮಹಾದೇವಿ ಜಯಂತಿಯಲ್ಲಿ ಭಾಗವಹಿಸಿ ಮಾತನಾಡಿದರು.

ಶಿವಶರಣೆ ಅಕ್ಕಮಹಾದೇವಿ 12ನೇ ಶತಮಾನದಲ್ಲಿಯೇ ಸಮಾಜದಲ್ಲಿನ ಮಹಿಳೆಯರ ಸ್ಥಾನಮಾನ, ಆತ್ಮಗೌರವ ಮತ್ತು ಆಧ್ಯಾತ್ಮಿಕ ಚಿಂತನೆಗೆ ಮೂಲ ಅಡಿಪಾಯ ಹಾಕಿದರು. ವಚನಗಳ ಮೂಲಕ ಆಧ್ಯಾತ್ಮಿಕ ಸಾಹಿತ್ಯಕ್ಕೆ ಮಹತ್ತರ ಕೊಡುಗೆ ನೀಡಿದ ಕನ್ನಡದ ಪ್ರಥಮ ಕವಯಿತ್ರಿ ಅಕ್ಕಮಹಾದೇವಿ ಎಂದು ಬಣ್ಣಿಸಿದರು.

ಜಾತಿ, ಧರ್ಮ, ಲಿಂಗ, ವೃತ್ತಿ ಬೇಧ–ಭಾವ ಇಲ್ಲದೇ ತಮ್ಮ ಅಧ್ಯಾತ್ಮಿಕ ಅನುಭವವನ್ನು ಹಂಚಿಕೊಳ್ಳುವ ಪವಿತ್ರ ಸ್ಥಳ ಅನುಭವ ಮಂಟಪ ಈ ಅನುಭವ ಮಂಟಪದಲ್ಲಿ ಎಲ್ಲರಿಂದ ಮೆಚ್ಚುಗೆ ಗಳಿಸಿ, ಮಹಿಳಾ ಪ್ರಧಾನವಾದ ವಿಷಯಗಳ ಬಗ್ಗೆ ಎಲ್ಲರ ಗಮನ ಸೆಳೆದು ಹಿರಿಯಕ್ಕ ಎಂಬ ಬಿರುದು ಪಡೆದರು ಎಂದು.

ಮಾನವನ ಬದುಕಿನಲ್ಲಿ ಅಸತ್ಯ, ಅಹಂಕಾರ, ಸ್ವಾರ್ಥ ತೊರೆದು ಸನ್ಮಾರ್ಗದಲ್ಲಿ ಸಾಗುವುದನ್ನು ಕಲಿಯಬೇಕು. ಅಂತಃಕರಣದ ಶುದ್ಧಿಯೂ ಶಾಂತಿಯ ಪ್ರತೀಕವಾಗಿದೆ. ಇಂತಹ ಶಿವಶರಣರ ತತ್ವಗಳನ್ನು ಇಂದಿನ ಯುವಜನತೆ ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಆ ಮೂಲಕ ಜೀವನದ ಪರಿಪೂರ್ಣತೆ ಹೊಂದಬಹುದಾಗಿದೆ ಎಂದು ಕಿವಿಮಾತು ಹೇಳಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ವಾತ್ಸಲ್ಯ ಸೇವಾ ಫೌಂಡೇಶನ್‌ನ ಬಿ.ನಾಗರತ್ನ, ಸಮಾಜದಲ್ಲಿ ನೊಂದವರ, ಅಸಹಾಯಕರ, ನಿರಾಶ್ರಿತರ ಕುಟುಂಬವಿದ್ದು ಎಲ್ಲರಿಂದ ದೂರಾದ ಪೋಷಕರ ಸೇವೆ ಮಾಡುವುದರಿಂದ ನನಗೆ ತೃಪ್ತಿ ಸಿಗುತ್ತಿದೆ. ನಮ್ಮ ಆಶ್ರಮದಲ್ಲಿ 400ಕ್ಕೂ ಹೆಚ್ಚು ಮಂದಿ ನೋಂದಣಿಯಾಗಿದ್ದಾರೆ. ಇದನ್ನು ನೋಡಿದರೆ ಸಮಾಜ ಎತ್ತ ಸಾಗುತ್ತಿದೆ ಎಂದು ಆತಂಕವಾಗುತ್ತದೆ ಎಂದರು.

ಇದಕ್ಕೂ ಮೊದಲು ಸಮಾಜ ಸೇವೆಯಲ್ಲಿ ಉನ್ನತ ಸಾಧನೆ ಮಾಡಿದ ವಾತ್ಸಲ್ಯ ಸೇವಾ ಫೌಂಡೇಶನ್‌ನ ಬಿ.ನಾಗರತ್ನ ಅವರನ್ನು ಬಳಗದ ವತಿಯಿಂದ ಸನ್ಮಾನಿಸಲಾಯಿತು.

ಅರಮನೆ ಪಂಚಗವಿಮಠದ ಶ್ರೀಕಂಠ ಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿದ್ದರು. ಬಳಗದ ಅಧ್ಯಕ್ಷೆ ಮಾದಲಾಂಬಿಕೆ ನಂಜುಂಡಸ್ವಾಮಿ, ಕಾರ್ಯದರ್ಶಿ ಸುನೀತಾ ಗುರು, ಕಾರ್ಯಕಾರಿ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

ಬೆಮೆಲ್ ಆವರಣದ 137 ಮರ ಕಡಿತ ಸಂಬಂಧ

ಸಾರ್ವಜನಿಕರ ಆಕ್ಷೇಪಣೆ ಸಲ್ಲಿಕೆಗೆ ಮೇ 25 ಕಡೇ ದಿನ

ಮೈಸೂರು, ಮೇ 21– ಮೈಸೂರಿನ ಕೂರ್ಗಳ್ಳಿ ಗ್ರಾಮದ ಬೆಮೆಲ್ ಆವರಣದಲ್ಲಿ ಔದ್ಯೋಗಿಕ ಚಿಕಿತ್ಸಾ ಕೇಂದ್ರ ಕಟ್ಟಡ ನಿರ್ಮಾಣಕ್ಕೆ ವಿವಿಧ ಜಾತಿಯ 137 ಮರಗಳ ಕಡಿತ ಸಂಬಂಧ ಆಕ್ಷೇಪಣೆ ಸಲ್ಲಿಸಲು ಮೇ 25 ಕಡೇ ದಿನವಾಗಿದೆ.

ಕಟ್ಟಡ ನಿರ್ಮಾಣಕ್ಕೆ ಗುರುತಿಸಿರುವ ಜಾಗದಲ್ಲಿರುವ 47 ತೇಗದ ಮರ, 13 ಅಕೇಶಿಯಾ, 10 ಮಹಾಗನಿ, 50 ಕಾಡುಜಾತಿ ಮರ, 9 ಫೆಲ್ಟೋಫಾರಂ, 6 ಸಿಲ್ವರ್ ಮರ, ಆರ್ಕಿಡ್ ಮರ, ಹೊಂಗೆ ಮರ ಸೇರಿ ಒಟ್ಟು 137 ವಿವಿಧ ಜಾತಿಯ ಮರಗಳನ್ನು ತೆರವುಗೊಳಿಸಲು ಬೆಮೆಲ್ ಅಧಿಕಾರಿಗಳು ಮನವಿ ಮಾಡಿದ್ದರು.

ಬಳಿಕ ಅರಣ್ಯ ಇಲಾಖೆ ವತಿಯಿಂದ ಮಹಜರು ಮಾಡಿ, ಅಳತೆ ಪಟ್ಟಿ ತಯಾರಿಸಿ, ನಿಯಮಾನುಸಾರ ಸಾರ್ವಜನಿಕ ಆಕ್ಷೇಪಣೆ ಸಲ್ಲಿಕೆಗೆ ಕ್ರಮ ವಹಿಸಲಾಗಿದೆ. ಮೈಸೂರು ವಲಯ ಅರಣ್ಯಾಧಿಕಾರಿಗಳ ಕಚೇರಿಯಲ್ಲಿರುವ ಅಹವಾಲು ಪೆಟ್ಟಿಗೆ, ಇ–ಮೇಲ್(rfomyspublichearing@gmail.com) ಅಥವಾ ಅಂಚೆ ಮೂಲಕ ಮೇ 25ರ ಸಂಜೆ 5.30ರೊಳಗೆ ಆಕ್ಷೇಪಣೆ ಸಲ್ಲಿಸಬಹುದು ಎಂದು ಅರಣ್ಯ ಇಲಾಖೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಬಕ್ರೀದ್ ಹಬ್ಬದ ವೇಳೆ ತ್ಯಾಜ್ಯ ವಿಲೇವಾರಿಗೆ ಮೈಸೂರಿನಲ್ಲಿ 25 ವಾಹನಗಳ ಬಳಕೆ

ಮೈಸೂರು, ಮೇ 21(ಬಿಎಲ್ ಯು)– ಬಕ್ರಿದ್ ಹಬ್ಬದ ಹಿನ್ನೆಲೆ ಮೈಸೂರು ನಗರದಲ್ಲಿ ಉತ್ಪತ್ತಿಯಾಗುವ ತ್ಯಾಜ್ಯ ಶೀಘ್ರ ವಿಲೇವಾರಿಗೆ 25 ವಾಹನಗಳನ್ನು ಬಳಕೆ ಮಾಡಲಾಗುವುದು ಎಂದು ಮೈಸೂರು ನಗರ ಪಾಲಿಕೆ ಆಯುಕ್ತ ಷೇಕ್ ತನ್ವೀರ್ ಆಸೀಫ್ ತಿಳಿಸಿದ್ದಾರೆ.


ಮೇ 28 ರಂದು ಬಕ್ರೀದ್ ಹಬ್ಬ ನಡೆಯಲಿದ್ದು, ಅಂದಿನಿಂದ ಮೂರು ದಿನಗಳ ಕಾಲ ಅಂದರೆ ಮೇ 30 ರವರೆಗೆ ಮೈಸೂರಿನಲ್ಲಿ ಉತ್ಪತ್ತಿಯಾಗುವ ತ್ಯಾಜ್ಯಗಳನ್ನು ಶೀಘ್ರ ವಿಲೇವಾರಿ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಮಿನಿ ಟಿಪ್ಪರ್, ಹೆವಿ ಟಿಪ್ಪರ್ ಸೇರಿದಂತೆ ವಿವಿಧ ವಾಹನಗಳನ್ನು ಬಳಕೆ ಮಾಡಲಾಗುತ್ತಿದ್ದು, ವಾಹನಗಳಿಗೆ ಚಾಲಕರನ್ನು ಈಗಾಗಲೇ ನಿಯೋಜನೆ ಮಾಡಲಾಗಿದೆ.

ಮೂರು ದಿನಗಳ ಕಾಲ 25 ವಾಹನಗಳು ಬೆಳಿಗ್ಗೆ 6 ರಿಂದ ಸಂಜೆ 4 ಗಂಟೆವರೆಗೆ ಸಂಬಂಧ ಪಟ್ಟ ವಲಯ ಕಚೇರಿಗಳ ಪರಿಸರ ಅಭಿಯಂತರರ ಅಧೀನದಲ್ಲಿ ಕಾರ್ಯ ನಿರ್ವಹಿಸಲಿದೆ.

ಮೂರ್ತಿ ಪೂಜೆ ವಿರೋಧಿಸಿದ ಬಸವಣ್ಣನವರ ಮೂರ್ತಿಯನ್ನೇ ಇರಿಸಿ ಹೂ ಹಾಕುವುದು ತರವೇ...!

ಅಂಕಣಕಾರ ತ್ರಿಪುರಾಂತಕ ಅಚ್ಚರಿ



ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಗುರುವಾರ 'ಶ್ರೀ ಜಗಜ್ಯೋತಿ ಬಸವೇಶ್ವರ ಜಯಂತಿ ಆಚರಿಸಲಾಯಿತು. ವಿವಿ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ, ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಸಹಾಯಕ ಆಡಳಿತಾಧಿಕಾರಿ ಜಿ.ಎಲ್. ತ್ರಿಪುರಾಂತಕ, ಕುಲಸಚಿವರಾದ ಪ್ರೊ.ಎಸ್.ಕೆ.ನವೀನ್ ಕುಮಾರ್, ಪ್ರೊ.ಸಿ.ಎಸ್.ಆನಂದ್ ಕುಮಾರ್ ಮತ್ತಿತರರಿದ್ದರು.

ಮೈಸೂರು, ಮೇ 21(ಎಂಕೆ)– ಸಮಾಜದಲ್ಲಿ ಪುರುಷ ಪ್ರಧಾನ ವ್ಯವಸ್ಥೆ ಇಂದಿಗೂ ಜಾಗೃತವಾಗಿದ್ದು, ಮನೆಯೊಳಗೆಯೇ ಮಹಿಳೆಯರ ಮೇಲೆ ಸಾಫ್ಟ್ ಶೋಷಣೆಗಳು ನಡೆಯುತ್ತಲೇ ಇವೆ ಎಂದು ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಸಹಾಯಕ ಆಡಳಿತಾಧಿಕಾರಿ ಹಾಗೂ ಅಂಕಣಕಾರ ಜಿ.ಎಲ್. ತ್ರಿಪುರಾಂತಕ ವಿಷಾದ ವ್ಯಕ್ತಪಡಿಸಿದರು.

ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ 'ಶ್ರೀ ಜಗಜ್ಯೋತಿ ಬಸವೇಶ್ವರ ಜಯಂತಿ ಆಚರಣೆಯಲ್ಲಿ ಬಸವಣ್ಣನವರ ಪುತ್ಥಳಿಗೆ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, 12ನೇ ಶತಮಾನದಲ್ಲೇ ಸ್ತ್ರೀ ಸಮಾನತೆ ಕುರಿತು ಪ್ರತಿಪಾದಿಸಿ, ಸೂಕ್ತ ಸ್ಥಾನಮಾನ ನೀಡಿದ ಬಸವೇಶ್ವರರ ನಾಡಿನಲ್ಲಿ 21ನೇ ಶತಮಾನ ಕಳೆದರೂ ಸ್ತ್ರೀಯರು ಸಮಾನತೆಗಾಗಿ ಹೆಣಗಾಡುವ ಪರಿಸ್ಥಿತಿ ಇದೆ ಎಂದು ಹೇಳಿದರು.

ವೇದಿಕೆಗಳಲ್ಲಿ ಸ್ತ್ರೀಯರಿಗೆ ಸಮಾನತೆ ಸಿಗಬೇಕು. ಸಮಾನ ಅವಕಾಶಗಳು ದೊರೆಯುವಂತಾಗಬೇಕು ಎಂದು ಮಾತನಾಡುತ್ತೇವೆ. ಆದರೆ, ಮನೆಗಳಲ್ಲಿ ಅತ್ತ ಪೊಲೀಸರಿಗೆ ಕಂಪ್ಲೈಂಟ್ ಕೊಡಲಾಗದ, ಇತ್ತ ಬದುಕಲು ಕಷ್ಟವಾದ ಸ್ಥಿತಿಯಲ್ಲಿ ಮಹಿಳೆಯರ ಮೇಲೆ ಶೋಷಣೆಯಾಗುತ್ತಿದೆ. ಇದರಿಂದಾಗಿಯೇ ಡೈವರ್ಸ್ ಕೇಸ್‌ಗಳು ಹೆಚ್ಚಾಗುತ್ತಿವೆ ಎಂದು ತಿಳಿಸಿದರು.

ಅನುಸರಣೆಯಲ್ಲಿ ಸೋಲು: ಪ್ರತೀ ವರ್ಷ ಮಹನೀಯರ ಜಯಂತಿಗಳನ್ನು ಆಚರಿಸುತ್ತೇವೆ. ಅವರ ಪ್ರತಿಮೆ, ಪುತ್ಥಳಿ, ಫೋಟೊ ಇಟ್ಟು ಪೂಜೆ ಮಾಡುತ್ತೇವೆ. ಅವರ ಆದರ್ಶ, ತತ್ವ–ಸಿದ್ಧಾಂತಗಳನ್ನು ಕೊಂಡಾಡುತ್ತೇವೆ. ಆದರೆ, ಅನುಸರಣೆ ಮಾಡಲು ಸೋತಿದ್ದೇವೆ. ಮೂರ್ತಿ ಪೂಜೆಯನ್ನು ವಿರೋಧಿಸಿದ ಬಸವೇಶ್ವರ ಮೂರ್ತಿಯನ್ನಿಟ್ಟು ಪೂಜೆ ಮಾಡುತ್ತಿದ್ದೇವೆ. ಅವರು, ದೇವಸ್ಥಾನಗಳಲ್ಲಿ ಸುತ್ತು ಹಾಕುವುದನ್ನು ವಿರೋಧಿಸಿದರು. ಆದರೆ, ದೇವಸ್ಥಾನಗಳು ತುಂಬಿ ತುಳುಕುತ್ತಿವೆ. ಯಾವ ದೇವಸ್ಥಾನಕ್ಕೂ ಹೋಗಬೇಡಿ, ದೇಹವೇ ದೇಗುಲ ಎಂದರೂ ನಾವುಗಳು ದೇಹವನ್ನೇ ಮರೆತು ಇಲ್ಲ–ಸಲ್ಲದ ದೇವರುಗಳನ್ನು ಹುಡುಕುತ್ತಿದ್ದೇವೆ ಎಂದರು.


ಸಾಕ್ಷಿ ಪ್ರಜ್ಞೆಯಾಗಬೇಕು: ಮೂಢನಂಬಿಕೆಗಳ ಆಚರಣೆಯ ಕಾಲದಲ್ಲಿ ವೈಜಾರಿಕತೆ ಕುರಿತು ಜಾಗೃತಿ ಮೂಡಿಸಿದವರು ಬಸವೇಶ್ವರರು ನಾಣ್ಯ, ಸ್ಟ್ಯಾಂಪು, ಮೂರ್ತಿಯಾದರೆ ಸಾಲದು ನಮ್ಮ ಸಾಕ್ಷಿ ಪ್ರಜ್ಞೆಯಾಗಬೇಕು. ತಪ್ಪು ಮಾಡುವ ಮುನ್ನವೇ ನಮ್ಮನ್ನು ಎಚ್ಚರಿಸುವ ಸಾಕ್ಷಿ ಪ್ರಜ್ಞೆಯಾದಾಗ ಮಾತ್ರವೇ ಬಸವೇಶ್ವರರ ಶ್ರಮಕ್ಕೆ ಪ್ರತಿಫಲ ದೊರೆಯಲಿದೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಅಧ್ಯಕ್ಷತೆ ವಹಿಸಿದ್ದರು. ಕುಲಸಚಿವರಾದ ಪ್ರೊ.ಎಸ್.ಕೆ.ನವೀನ್ ಕುಮಾರ್, ಪ್ರೊ.ಸಿ.ಎಸ್.ಆನಂದ್ ಕುಮಾರ್, ಡೀನ್‌ಗಳಾದ ಪ್ರೊ.ಎಂ.ರಾಮನಾಥಂ ನಾಯುಡು, ಡಾ.ಎನ್.ಆರ್.ಚಂದ್ರೇಗೌಡ, ಹಣಕಾಸು ಅಧಿಕಾರಿ ಪ್ರೊ.ಎಸ್.ನಿರಂಜನ್ ರಾಜ್, ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರದ ಸಂಯೋಜಕ ಜೈನಹಳ್ಳಿ ಸತ್ಯನಾರಾಯಣಗೌಡ ಮತ್ತಿತರರು ಉಪಸ್ಥಿತರಿದ್ದರು.

> ಬಸವೇಶ್ವರರು ಸುಮಾರು 1500 ವಚನಗಳನ್ನು ಬರೆದಿದ್ದಾರೆ. ಅವುಗಳಲ್ಲಿ 'ಕಳಬೇಡ, ಕೊಲಬೇಡ, ಹುಸಿಯ ನುಡಿಯಲು ಬೇಡ, ಮುನಿಯಬೇಡ, ಅನ್ಯರಿಗೆ ಅಸಹ್ಯ ಪಡಬೇಡ, ತನ್ನ ಬಣ್ಣಿಸಬೇಡ, ಇದಿರ ಹಳಿಯಲು ಬೇಡ. ಇದೇ ಅಂತರಂಗಶುದ್ಧಿ, ಇದೇ ಬಹಿರಂಗಶುದ್ಧಿ, ಇದೇ ನಮ್ಮ ಕೂಡಲಸಂಗಮದೇವರ ನೊಲಿಸುವ ಪರಿ!' ಎಂಬ ವಚನ ಒಂದು ಧರ್ಮ ಗ್ರಂಥಕ್ಕೆ ಸಮವಾದರೆ, 'ಛಲಬೇಕು ಶರಣಂಗೆ ಪರಧನವನೊಲ್ಲೆನೆಂಬ, ಛಲಬೇಕು ಶರಣಂಗೆ ಪರಸತಿಯನೊಲ್ಲೆನೆಂಬ, ಛಲಬೇಕು ಶರಣಂಗೆ ಪರದೈವವನೊಲ್ಲೆನೆಂಬ, ಛಲಬೇಕು ಶರಣಂಗೆ ಲಿಂಗ ಜಂಗಮವೊಂದೆಂಬ, ಛಲಬೇಕು ಶರಣಂಗೆ ಪ್ರಸಾದ ದಿಟವೆಂಬ, ಛಲವಿಲ್ಲದವರ ಮೆಚ್ಚ ನಮ್ಮ ಕೂಡಲಸಂಗಮದೇವ' ಎಂಬ ವಚನ ಪಾಲಿಸಿದರೆ ನ್ಯಾಯಾಲಯಕ್ಕೆ ಹೋಗುವ ಅವಶ್ಯವಿಲ್ಲ
>
> – ಜಿ.ಎಲ್.ತ್ರಿಪುರಾಂತಕ

ಮೈಸೂರಲ್ಲಿ 'ಟ್ರೀ ಕಮಿಟಿ' ಕಾರ್ಯಾರಂಭಕ್ಕೆ ತ್ವರಿತ ಕ್ರಮ

ಮೈಗ್ರಾಪ ನಿಯೋಗಕ್ಕೆ ಡಿಸಿಎಫ್ ಪರಮೇಶ್ವರ್ ಭರವಸೆ



ಸರ್ಕಾರ ಅನುಮತಿಸಿರುವ ಪತ್ರದ ಪ್ರತಿಯನ್ನು ಬಾಮಿ ವಿ.ಶೆಣೈ ಅವರಿಗೆ ನೀಡಲಾಯಿತು

ಮೈಸೂರು, ಮೇ 21– ಮೈಸೂರಿನ ಹಸಿರು ವಲಯ ಸಂರಕ್ಷಣೆಗಾಗಿ 'ಟ್ರೀ ಕಮಿಟಿ(ವೃಕ್ಷ ಪ್ರಾಧಿಕಾರ)' ರಚನೆಗೆ ಸರ್ಕಾರ ಅನುಮತಿಸಿರುವುದಾಗಿ ಡಿಸಿಎಫ್ ಪರಮೇಶ್, ತಮ್ಮನ್ನು ಗುರುವಾರ ಭೇಟಿಯಾದ ಮೈಸೂರು ಗ್ರಾಹಕ ಪರಿಷತ್ (ಮೈಗ್ರಾಪ) ನಿಯೋಗಕ್ಕೆ ತಿಳಿಸಿದ್ದಾರೆ.

ಈ ವೇಳೆ ಮೈಗ್ರಾಪದ ಬಾಮಿ ವಿ.ಶೆಣೈ ಅವರಿಗೆ ಸರ್ಕಾರದ ಆದೇಶ ಪತ್ರದ ಪ್ರತಿ ನೀಡಿ, ಟ್ರೀ ಕಮಿಟಿ ರಚನೆ ಸಂಬಂಧ ಅನುಮೋದನೆ ಪಡೆದು ಕೆಲವು ನಿಬಂಧನೆಗಳೊಂದಿಗೆ ಮುಂದಿನ ದಿನಗಳಲ್ಲಿ ಕಾರ್ಯ ಚಟುವಟಿಕೆ ನಡೆಸುವ ಬಗ್ಗೆ ವಿವರಿಸಿದರು.

ಇದೇ ವೇಳೆ ಮೈಗ್ರಾಪ ಮನವಿಗೆ ಸ್ಪಂದಿಸಿ, ಅರಣ್ಯ ಇಲಾಖೆಯ ಮೇಲಧಿಕಾರಿಗಳು ಹಾಗೂ ಸರ್ಕಾರಕ್ಕೆ ಪತ್ರ ಬರೆದು, ಟ್ರೀ ಕಮಿಟಿ ರಚನೆಗೆ ಶ್ರಮಿಸಿದ ಮೈಸೂರು ಡಿಸಿಎಫ್ ಪರಮೇಶ್ ಅವರನ್ನು ನಾಗರಿಕರ ಪರವಾಗಿ ಅಭಿನಂದಿಸಲಾಯಿತು.

ಈ ವೇಳೆ ಮೇಜರ್ ಜನರಲ್ ಒಂಬತ್ಕೆರೆ, ಶ್ರೀಮತಿ ಭಾನುಮೋಹನ್, ಸಂಜಯ್ ದತ್ತಾತ್ರಿ ಶಂಕರ್ ಭಟ್ಟ, ಡಿ.ವಿ.ದಯಾನಂದ್, ಸುಮನ್ ಶೆಣೈ, ಮೋಹನ್ ಮತ್ತಿತರರು ಉಪಸ್ಥಿತರಿದ್ದರು.

1976ರ ಕಾಯ್ದೆಯಡಿ ಕರ್ನಾಟಕ ಮರಗಳ ಸಂರಕ್ಷಣೆ ಅದಿನಿಯಮದ ಪ್ರಕಾರ 'ಟ್ರೀ ಕಮಿಟಿ' ರಚಿಸುವ ಮೂಲಕ ಮೈಸೂರು ನಗರದಲ್ಲಿ ಮರಗಳ ಮಾರಣಹೋಮ ತಡೆದು, ಹಸಿರುವಲಯ ಸಂರಕ್ಷಿಸಬೇಕು ಎಂದು ಮೈಗ್ರಾಪ ಸ್ಥಾಪಕ ಬಾಮಿ ವಿ ಶೆಣೈ, ಅಧ್ಯಕ್ಷ ರಾಯ್ ಜೋಸೆಫ್ ಹಾಗೂ ಕಾರ್ಯಾಧ್ಯಕ್ಷ ದಿನೇಶ್ ನೇತೃತ್ವದಲ್ಲಿ ಫೆಬ್ರವರಿ 29ರಂದು ಡಿಸಿಎಫ್ ಪರಮೇಶ್ ಅವರಿಗೆ ಮನವಿ ಸಲ್ಲಿಸಲಾಗಿತ್ತು. ಈ ಬಗ್ಗೆ ಶೀಘ್ರ ಸರ್ಕಾರದ ಗಮನಕ್ಕೆ ತಂದು ಕ್ರಮ ವಹಿಸುವುದಾಗಿ ಅವರು ಭರವಸೆ ನೀಡಿದ್ದರು.

ಹುಟ್ಟುಹಬ್ಬ; ಪೌರಕಾರ್ಮಿಕರಿಗೆ ಬಟ್ಟೆ ವಿತರಣೆ



ಮೈಸೂರಿನ ಬಿಜೆಪಿ ಯುವ ಮುಖಂಡ ಯೋಗೇಶ್ ಅವರು ವಾರ್ಡ್ ನಂ–3ರ ಮಹದೇಶ್ವರ ಬಡಾವಣೆಯಲ್ಲಿ ಪೌರಕಾರ್ಮಿಕರಿಗೆ ಬಟ್ಟೆ ವಿತರಿಸಿ, ಅವರಿಗೆ ಭೋಜನ ವ್ಯವಸ್ಥೆ ಮಾಡುವ ಮೂಲಕ ತಮ್ಮ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಿಕೊಂಡರು. ಈ ವೇಳೆ ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವ ಸ್ವಾಮಿ, ಪಕ್ಷದ ಚಾಮರಾಜ ಕ್ಷೇತ್ರದ ಅಧ್ಯಕ್ಷ ದಿನೇಶ್ ಗೌಡ, ಯುವ ಮೋರ್ಚಾದ ಉಮೇಶ್, ಕೆಆರ್‌ಎಸ್ ಗಿರೀಶ್, ನವೀನ್, ಕುಂಬಾರ ಕೊಪ್ಪಲು ಚೇತನ್, ರಾಮಪ್ರಸಾದ್, ಮುಖಂಡ ಮಹೇಶ್ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಮಿತ್ರ

ಶುಕ್ರವಾರ 22 ಮೇ 2026

ನಾಳೆ ವಿಶ್ವ ಜೇನು ದಿನಾಚರಣೆ

ಮಡಿಕೇರಿ, ಮೇ 21– ಮಂಡ್ಯದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ವ್ಯಾಪ್ತಿಯ ಮಡಿಕೇರಿ ವಿಸ್ತರಣಾ ಘಟಕ ಹಾಗೂ ಅರಣ್ಯ ಮಹಾ ವಿದ್ಯಾಲಯ, ರೇನ್‌ಪೋರೆಸ್ಟ್ ಮತ್ತು ಬೈಫ್ ಸಬಲ ಯೋಜನೆಯ ವತಿಯಿಂದ ಮೇ 23ರಂದು ಪೊನ್ನಂಪೇಟೆಯ ಅರಣ್ಯ ಮಹಾವಿದ್ಯಾಲಯದಲ್ಲಿ 'ವಿಶ್ವ ಜೇನು ದಿನಾಚರಣೆ–2026' ನಡೆಯಲಿದೆ.



ಸುದ್ದಿಗೋಷ್ಠಿಯಲ್ಲಿ ಡಾ.ಆರ್.ಎನ್.ಕೆಂಚರೆಡ್ಡಿ ಮಾತನಾಡಿದರು.

ಸುದ್ದಿಗೋಷ್ಠಿಯಲ್ಲಿ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯದ ಮಡಿಕೇರಿ ವಿಸ್ತರಣಾ ಶಿಕ್ಷಣ ಘಟಕದ ಮುಖ್ಯಸ್ಥ ಡಾ.ಆರ್.ಎನ್. ಕೆಂಚರೆಡ್ಡಿ ಈ ಕುರಿತು ಮಾಹಿತಿ ನೀಡಿ, ಕೃಷಿಯಲ್ಲಿನ ರಾಸಾಯನಿಕ ಗೊಬ್ಬರಗಳ ಬಳಕೆ, ಆಹಾರದ ಅಲಭ್ಯತೆ ಮೊದಲಾದ ಕಾರಣಗಳಿಂದ ಇತ್ತೀಚಿನ ದಿನಗಳಲ್ಲಿ ಜೇನು ಹುಳುಗಳ ಸಂಖ್ಯೆ ಕ್ಷೀಣಿಸುತ್ತಿದೆ. ಈ ಹಿನ್ನೆಲೆಯಲ್ಲಿ ವಿವಿಧ ಬೆಳೆಗಳಲ್ಲಿ ಪರಾಗ ಸ್ಪರ್ಶಕ್ಕೆ ಅತ್ಯವಶ್ಯಕವಾಗಿರುವ ಜೇನು ಹುಳುಗಳನ್ನು ಸಂರಕ್ಷಿಸುವ ಮತ್ತು ಜೇನು ಕೃಷಿಯನ್ನು ಉತ್ತೇಜಿಸುವ ಉದ್ದೇಶದಿಂದ ವಿಶ್ವ ಜೇನು ದಿನಾಚರಣೆಯನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ವಿಶ್ವ ಜೇನು ದಿನಾಚರಣೆಯನ್ನು ಮೇ 23ರ ಬೆಳಗ್ಗೆ 10.30 ಗಂಟೆಗೆ ಮಂಡ್ಯದ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯದ ಕುಲಪತಿಗಳಾದ ಡಾ. ಕೆ.ಸಿ.ನಾರಾಯಣ ಸ್ವಾಮಿ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕೃಷಿ ಸಚಿವರ ವಿಶೇಷ ಕರ್ತವ್ಯಾಧಿಕಾರಿಗಳಾದ ಡಾ. ಎ.ಬಿ.ಪಾಟೀಲ್ ಪಾಲ್ಗೊಳ್ಳಲಿದ್ದಾರೆ. ಅಧ್ಯಕ್ಷತೆಯನ್ನು ಕೃಷಿ ವಿಜ್ಞಾನಗಳ ವಿ.ವಿಯ ವಿಸ್ತರಣಾ ನಿರ್ದೇಶಕ ಡಾ. ಸಿ.ರಾಮಚಂದ್ರ ವಹಿಸಲಿದ್ದಾರೆ. ಪೊನ್ನಂಪೇಟೆ ಅರಣ್ಯ ಮಹಾವಿದ್ಯಾಲಯದ ಡೀನ್ ಡಾ.ಜಿ.ಎಂ.ದೇವಗಿರಿ ಅವರ ಗೌರವ ಉಪಸ್ಥಿತಿ ಇರಲಿದೆ ಎಂದು ತಿಳಿಸಿದರು.

ಜೇನು ಕೃಷಿಕರಿಗೆ ಸನ್ಮಾನ: ಕಾರ್ಯಕ್ರಮದಲ್ಲಿ ಕೊಡಗಿನ ಆಯ್ದ ಪ್ರಗತಿಪರ ಜೇನು ಕೃಷಿಕರನ್ನು ಸನ್ಮಾನಿಸಿ ಗೌರವಿಸಲಾಗುತ್ತದೆ. ಇದರೊಂದಿಗೆ ಕೊಡಗಿನಲ್ಲಿ ಲಭ್ಯವಿರುವ ವಿವಿಧ ಬಗೆಯ ಜೇನು ತುಪ್ಪ, ಬೇರೆಡೆಗಳಿಂದ ತಂದ ಜೇನು ತುಪ್ಪಗಳ ಮಾದರಿ ಪ್ರದರ್ಶನವಿರುತ್ತದೆ. ವಿಶೇಷವಾಗಿ ಜೇನಿನ ಪರಿಶುದ್ಧತೆಯನ್ನು ಪರೀಕ್ಷಿಸುವ ಕೆಲವು ವಿಧಾನಗಳ ಪ್ರಾತ್ಯಕ್ಷಿಕೆಯನ್ನು ಕಾರ್ಯಕ್ರಮದಲ್ಲಿ ಅಳವಡಿಸಲಾಗಿದೆ. ವಿವಿಧ ಜೇನು ಕೃಷಿ ಉಪಕರಣಗಳ ಪ್ರದರ್ಶನ ಮತ್ತು ಮಾರಾಟವನ್ನು ಆಯೋಜಿಸಲಾಗಿದೆ ಎಂದರು. ಜೇನು ಕೃಷಿ ಹೇಗೆ ಮಾನವನ ಆರೋಗ್ಯಕ್ಕೆ ಸಹಕಾರಿಯಾಗಬಲ್ಲದು ಮತ್ತು ವಿವಿಧ ಬೆಳೆಗಳ ಇಳುವರಿಯಲ್ಲಿ ಅವುಗಳ ಪಾತ್ರ, ಜೇನು ಕೃಷಿ ಕೈಗೊಳ್ಳುವ ವಿಧಾನ, ಜೇನು ಕುಟುಂಬಗಳ ನಿರ್ವಹಣೆಯ ಮಾಹಿತಿಯನ್ನು ಕಾರ್ಯಕ್ರಮದ ಮೂಲಕ ಒದಗಿಸಲಾಗುತ್ತದೆ ಎಂದು ಡಾ. ಕೆಂಚರೆಡ್ಡಿ ತಿಳಿಸಿದರು.

ಜೇನು ಕುಟುಂಬಗಳ ಮಾರಾಟ: ಕೃಷಿ ವಿಜ್ಞಾನಗಳ ವಿವಿಯ ವಿಸ್ತರಣಾ ಘಟಕಗಳ ಮೂಲಕ ಸ್ಥಳೀಯ 'ತುಡುವೆ' ಜೇನು ಕುಟುಂಬಗಳನ್ನು ಆಸಕ್ತ ಕೃಷಿಕರಿಗೆ ಒದಗಿಸಲಾಗುತ್ತದೆ. ಇದಕ್ಕಾಗಿ ಪ್ರತಿ 1 ಜೇನು ಕುಟುಂಬಕ್ಕೆ 1,600 ರೂ.ಗಳನ್ನು ನಿಗದಿಪಡಿಸಲಾಗಿದೆ. ಪ್ರಸ್ತುತ ಜಿಲ್ಲೆಯ ವಿಸ್ತರಣಾ ಘಟಕಗಳಲ್ಲಿ 600 ಜೇನು ಕುಟುಂಬಗಳಿವೆ ಎಂದು ಮಾಹಿತಿ ನೀಡಿದರು.

ಈ ವೇಳೆ ಸುದ್ದಿಗೋಷ್ಠಿಯಲ್ಲಿ ಮಡಿಕೇರಿ ವಿಸ್ತರಣಾ ಶಿಕ್ಷಣ ಘಟಕದ ತೋಟಗಾರಿಕೆ ತಜ್ಞ ಡಾ.ಹೇಮಂತ್ ಕುಮಾರ್.ಪಿ, ಪೊನ್ನಂಪೇಟೆಯ ಕೃಷಿ ಮತ್ತು ತೋಟಗಾರಿಕಾ ಸಂಶೋಧನಾ ಕೇಂದ್ರದ ಕ್ಷೇತ್ರ ಅಧೀಕ್ಷಕ ಡಾ. ಸಿ.ಪ್ರಶಾಂತ್ ಉಪಸ್ಥಿತರಿದ್ದರು.

ರೋಗ ಕ್ಷೀಣಿಸಿದೆ

ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಸುಮಾರು 3 ದಶಕಗಳ ಹಿಂದೆ ಕಾಣಿಸಿಕೊಂಡ 'ಥಾಯ್ ಸ್ಯಾಕ್ ಬ್ರೂಡ್' ಎನ್ನುವ ವೈರಸ್ ರೋಗದಿಂದ ಜೇನು ಹುಳುಗಳ ಸಂಖ್ಯೆ ಗಣನೀಯವಾಗಿ ಕ್ಷೀಣಿಸಿತ್ತು. ಪ್ರಸ್ತುತ ರೋಗ ಬಾಧೆ ಸಾಕಷ್ಟು ಇಳಿಮುಖವಾಗಿದೆ. ಈಗ ರೋಗ ನಿಯಂತ್ರಣದ ಕ್ರಮಗಳನ್ನು ಕಂಡುಕೊಳ್ಳಲಾಗಿದೆ ಎಂದು ತಿಳಿಸಿದರು.

ಸಿದ್ದಾಪುರ ಬಳಿ ಆನೆಗಳು ಪ್ರತ್ಯಕ್ಷ

ಸಾರ್ವಜನಿಕರಲ್ಲಿ ಆತಂಕ

ಮಡಿಕೇರಿ, ಮೇ 21– ಸಿದ್ದಾಪುರ ಬಳಿಯ ಪಳ್ಳಕೆರೆ ವ್ಯಾಪ್ತಿಯಲ್ಲಿ ಬೆಳ್ಳಂಬೆಳಗ್ಗೆ ಬೃಹತ್ ಗಾತ್ರದ ಒಂಟಿ ಸಲಗವೊಂದು ಪ್ರತ್ಯಕ್ಷವಾಗುವ ಮೂಲಕ ಕಾರ್ಮಿಕರಲ್ಲಿ ಆತಂಕವನ್ನುಂಟುಮಾಡಿತ್ತು. ಅದರ ಬೆನ್ನಲ್ಲೇ ಅರೆಕಾಡು ವ್ಯಾಪ್ತಿಯಿಂದ ಮತ್ತೆರಡು ಆನೆಗಳು ಕಾವೇರಿ ನದಿ ದಾಟಿ ಬಂದಿದ್ದು, ಸಾರ್ವಜನಿಕರಲ್ಲಿ ಭೀತಿಯನ್ನು ಮತ್ತಷ್ಟು ಭೀತಿ ಹೆಚ್ಚಿಸಿದೆ.

ಕಳೆದ ಕೆಲವು ದಿನಗಳಿಂದ ಸುಮಾರು 25ಕ್ಕೂ ಅಧಿಕ ಕಾಡಾನೆಗಳು ಇಲ್ಲಿನ ಕಾಫಿ ತೋಟದಲ್ಲಿ ಪ್ರತ್ಯಕ್ಷವಾಗಿದ್ದು, ತೋಟ ಕಾರ್ಮಿಕರು ಮತ್ತು ಮಾಲೀಕರಿಗೆ ಸಂಕಷ್ಟ ತಂದೊಡ್ಡಿವೆ. ನದಿಯಲ್ಲಿ ನೀರಿನ ಪ್ರಮಾಣ ಕಡಿಮೆ ಇದ್ದು, ಸುಲಭವಾಗಿ ಕಾಡಾನೆಗಳು ನದಿ ದಾಟಿ ತೋಟಕ್ಕೆ ಲಗ್ಗೆ ಇಡುತ್ತಿವೆ. ಕಾಡಾನೆಗಳು ತೋಟಕ್ಕೆ ಲಗ್ಗೆ ಇಟ್ಟು ಕಾಫಿ ಗಿಡಗಳ ನಡುವೆಯೇ ನುಸುಳಿ ಮರೆಯಾಗುತ್ತಿರುವ ದೃಶ್ಯಗಳನ್ನು ತೋಟ ಕಾರ್ಮಿಕರು ತಮ್ಮ ಮೊಬೈಲ್‌ನಲ್ಲಿ ಸೆರೆ ಹಿಡಿದಿದ್ದಾರೆ. ತೋಟದ ಒಳಗೆ ಬೀಡು ಬಿಟ್ಟಿರುವ ಕಾಡಾನೆಗಳಿಂದ ಕಾರ್ಮಿಕರಿಗೆ ಜೀವ ಭಯ ಕಾಡುತ್ತಿದೆ.

ದಿನದಿಂದ ದಿನಕ್ಕೆ ಕಾಡಾನೆಗಳ ಹಾವಳಿ ಹೆಚ್ಚಾಗುತ್ತಿರುವುದರ ಬಗ್ಗೆ ಮಾಹಿತಿ ಇದ್ದರೂ ಕೂಡ ಇಲಾಖೆ ಯಾವುದಕ್ಕೂ ಕ್ಯಾರೆ ಎನ್ನದೇ ಕೈ ಕಟ್ಟಿ ಕುಳಿತಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಕಾಡಾನೆಗಳಿಂದ ಮಾನವ ಜೀವ ಹಾನಿ ಸಂಭವಿಸುವ ಮುನ್ನ ಕೂಡಲೇ ಕಾಡಾನೆಗಳನ್ನು ಅರಣ್ಯಕ್ಕೆ ಅಟ್ಟಲು ಇಲಾಖೆ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.



ಸಿದ್ದಾಪುರ ಬಳಿಯ ಪಳ್ಳಕೆರೆ, ಅರೆಕಾಡು ವ್ಯಾಪ್ತಿಯಲ್ಲಿ ಕಾಣಿಸಿಕೊಂಡ ಆನೆಗಳು.

ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ

ಕೊಟ್ಟ ಮಾತಿನಂತೆ ಗ್ರಾಮೀಣ ಪ್ರದೇಶಗಳ ರಸ್ತೆ ಅಭಿವೃದ್ಧಿ

ಮಡಿಕೇರಿ, ಮೇ 21– ಸೋಮವಾರಪೇಟೆ ತಾಲೂಕಿನ ಶನಿವಾರಸಂತೆ ಮತ್ತು ದುಂಡಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿವಿಧೆಡೆ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಮಡಿಕೇರಿ ಶಾಸಕ ಡಾ.ಮಂತರ್ ಗೌಡ ಭೂಮಿಪೂಜೆ ನೆರವೇರಿಸಿದರು. ಶನಿವಾರಸಂತೆ ಬೈಪಾಸ್ ರಸ್ತೆಯಲ್ಲಿರುವ ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ ಜಾಗದಲ್ಲಿ ಮುಖ್ಯಮಂತ್ರಿಗಳ ನಿಧಿಯಿಂದ ಬಿಡುಗಡೆಯಾದ 10 ಲಕ್ಷ ರೂ. ವೆಚ್ಚದ ತಡೆಗೋಡೆ ನಿರ್ಮಾಣ ಮತ್ತು ಕಾಂಕ್ರೀಟ್ ರಸ್ತೆ ಕಾಮಗಾರಿ, ಬೈಪಾಸ್ ರಸ್ತೆಯಿಂದ ದುಂಡಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೆಮ್ಮನೆ ಗ್ರಾಮಕ್ಕೆ ಹೋಗಲು 400 ಮೀ. ಕಾಂಕ್ರೀಟ್ ರಸ್ತೆ ನಿರ್ಮಾಣ, 2025–26ನೇ ಸಾಲಿನ ಪರಿಶಿಷ್ಟ ಜನಾಂಗದವರ ಕಾಲೋನಿಗಳಿಗೆ ಮೂಲಭೂತ ಸೌಕರ್ಯ ಒದಗಿಸುವ ಉದ್ದೇಶದಿಂದ ಪ್ರಗತಿ ಕಾಲೋನಿ ಯೋಜನೆ ಅಡಿಯಲ್ಲಿ 1 ಕೋಟಿ ರೂ. ಮಂಜೂರಾಗಿರುವ ರಸ್ತೆ ಅಭಿವೃದ್ಧಿ ಕಾಮಗಾರಿ, ಶಾಸಕರ ನಿಧಿಯಿಂದ 10 ಲಕ್ಷ ರೂ. ವೆಚ್ಚದಲ್ಲಿ ಚಿಕ್ಕಕೊಳತ್ತೂರು ಗ್ರಾಮದ ರಸ್ತೆ ಅಭಿವೃದ್ಧಿ, ಸೇರಿದಂತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು. ಇದೇ ಸಂದರ್ಭ ಗ್ರಾಮಸ್ಥರು ತಮ್ಮ ಬೇಡಿಕೆಗಳ ಮನವಿ ಪತ್ರವನ್ನು ಶಾಸಕರಿಗೆ ಸಲ್ಲಿಸಿದರು.



ಶಾಸಕ ಡಾ.ಮಂತರ್ ಗೌಡ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸುವ ವೇಳೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ.ಮಂತರ್ ಗೌಡ, ತಾವು ಶಾಸಕನಾದ ಸಂದರ್ಭ ಗ್ರಾಮೀಣ ರಸ್ತೆ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುವುದಾಗಿ ಭರವಸೆ ನೀಡಿದ್ದೆ. ಅದರಂತೆ ಸ್ವಲ್ಪ ವಿಳಂಬವಾದರೂ ಸಹ ಈ ಭಾಗದಲ್ಲಿ ಗ್ರಾಮೀಣ ರಸ್ತೆ ಅಭಿವೃದ್ಧಿ, ಕಾಂಕ್ರೀಟ್ ರಸ್ತೆ ಅಭಿವೃದ್ಧಿಗೆ ಅನುದಾನ ಒದಗಿಸಲಾಗಿದೆ. ಕೆಲವು ರಸ್ತೆ ಅಭಿವೃದ್ಧಿ ಕಾಮಗಾರಿ ಪೂರ್ಣಗೊಂಡಿದ್ದು, ಉಳಿದಂತೆ ಹಂತಹಂತವಾಗಿ ಪ್ರಗತಿಯಲ್ಲಿರುವ ರಸ್ತೆ ಅಭಿವೃದ್ಧಿ ಕಾಮಗಾರಿ ಪೂರ್ಣ ಗೊಳಿಸಲಾಗುವುದು ಎಂದರು.

ಈ ಸಂದರ್ಭ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸತೀಶ್, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಕಾಂತರಾಜ್, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಲೋಕೇಶ್, ತಾಲೂಕು ಅಕ್ರಮ ಸಕ್ರಮ ಸಮಿತಿ ಸದಸ್ಯ ಜನಾರ್ಧನ್, ಪ್ರಮುಖರಾದ ಶರತ್ ಶೇಖರ್, ಗಿರೀಶ್, ಆದಿತ್ಯ ಗೌಡ, ಅಶೋಕ್, ಬಿ.ಕೆ.ದಿನೇಶ್, ಕಿರಣ್, ನಾಗರಾಜ್, ಎಪಿಸಿಎಂಎಸ್ ಅಧ್ಯಕ್ಷ ಧರ್ಮಪ್ಪ, ಉಪಾಧ್ಯಕ್ಷ ಕುಮಾರ್ ನಾಯಕ್, ಸರೋಜ ಶೇಖರ್, ಅಬ್ಬಾಸ್, ಮಹಮದ್ ಖನ್ನ, ಮಂಜುನಾಥ್ ಮತ್ತಿತರರು ಹಾಜರಿದ್ದರು.

ನೆಲಜಿ ಶ್ರೀ ಈಶ್ವರ ಇಗ್ಗುತ್ತಪ್ಪ ದೇವರ ಮಹಿಮೆ ಅದ್ಭುತ

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ದಂಪತಿಯಿಂದ ವಿಶೇಷ ಪೂಜೆ



ದೇವಸ್ಥಾನದ ಅಭಿವೃದ್ಧಿ ಕಾರ್ಯಗಳಿಗೆ ಮೊದಲ ಕಂತಿನ ದೇಣಿಗೆಯಾಗಿ 10 ಲಕ್ಷ ರೂ.ಗಳ ಚೆಕ್ ಅನ್ನು ಮಾಜಿ ಸಚಿವ ಸಿ.ಎಸ್. ಪುಟ್ಟರಾಜು ಹಸ್ತಾಂತರಿಸಿದರು.

ನಾಪೋಕ್ಲು: ಕೊಡಗು ಜಿಲ್ಲೆಯ ನೆಲಜಿ ಗ್ರಾಮದ ಪ್ರಕೃತಿ ರಮಣೀಯ ಕ್ಷೇತ್ರದಲ್ಲಿ ನೆಲೆ ನಿಂತಿರುವ ಶ್ರೀ ಈಶ್ವರ ಇಗ್ಗುತ್ತಪ್ಪ ದೇವರ ಮಹಿಮೆ ನಿಜಕ್ಕೂ ಅದ್ಭುತ ಎಂದು ಮೇಲುಕೋಟೆ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಸಿ.ಎಸ್.ಪುಟ್ಟರಾಜು ಹೇಳಿದರು.

ಶ್ರೀ ಕ್ಷೇತ್ರಕ್ಕೆ ತಮ್ಮ ಧರ್ಮಪತ್ನಿ ಸಮೇತ ಭೇಟಿ ನೀಡಿದ ಸಂದರ್ಭ ಮಾತನಾಡಿ, ಈ ಹಿಂದೆ ಎರಡು–ಮೂರು ಬಾರಿ ದೇವಸ್ಥಾನಕ್ಕೆ ಭೇಟಿ ನೀಡಿ, ದೇವಸ್ಥಾನದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾರ್ಯಗಳನ್ನು ನೋಡಿದ್ದೇನೆ. ಚೆನ್ನಾಗಿ ಕೆಲಸ ನಡೆಯುತ್ತಿದೆ ಎಂದು ಪ್ರಶಂಸೆ ವ್ಯಕ್ತಪಡಿಸಿದ್ದರು.

ಕೊಡಗಿನ ಮೂರು ಇಗ್ಗುತ್ತಪ್ಪ ದೇವಸ್ಥಾನಗಳಲ್ಲಿ ಒಂದಾದ ನೆಲಜಿಯ ದೇವಸ್ಥಾನವು ಬಲು ಸುಂದರವಾಗಿದ್ದು ದಿವ್ಯ ಶಕ್ತಿಯನ್ನು ಹೊಂದಿದೆ ಕೇವಲ ಊರಜನರು ಮತ್ತು ಭಕ್ತಾದಿಗಳ ಆರ್ಥಿಕ ನೆರವಿನಿಂದ ನಡೆಸಿದ ಅಭಿವೃದ್ಧಿ ಕಾರ್ಯಗಳು ನಿಜಕ್ಕೂ ಶ್ಲಾಘನೀಯ ಎಂದರು.

ಶ್ರೀ ಈಶ್ವರ ಇಗ್ಗುತ್ತಪ್ಪ ದೇವರ ಮಹಿಮೆಯ ವಿಶಿಷ್ಟ ಅನುಭವದಿಂದ ಪುನೀತರಾದ ಅವರು ಶ್ರೀ ದೇವರ ಅಭಿವೃದ್ಧಿ ಕಾರ್ಯಗಳಿಗೆ ತಾವೂ ಕೂಡ ಕೈ ಜೋಡಿಸಿ ದೇವರ ಸೇವೆಗೆ ಸದಾ ಸಿದ್ಧ ಮತ್ತು ಬದ್ಧ ಎಂದ ಅವರು ಅದಕ್ಕಾಗಿ ತಮ್ಮ ಮೊದಲ ಕಂತಿನ ದೇಣಿಗೆಯಾಗಿ ರೂ.10 ಲಕ್ಷದ ಚೆಕ್ ಅನ್ನು ದೇವಸ್ಥಾನದ ಆಡಳಿತ ಮಂಡಳಿ ಹಾಗೂ ತಕ್ಕ ಮುಖ್ಯಸ್ಥರಿಗೆ ಹಸ್ತಾಂತರಿಸಿದರು.

ದೇವಸ್ಥಾನದ ಆಡಳಿತ ಮಂಡಳಿಯ ಅಧ್ಯಕ್ಷ ಮುಂಡಂಡ ಸಿ.ನಾಣಯ್ಯ ಶಾಲು ಹೊದಿಸಿ ಸನ್ಮಾನಿಸಿದರು. ತಕ್ಕ ಮುಖ್ಯಸ್ಥರಾದ ಬದ್ದಂಜೆಟ್ಟಿರ ಬಿ.ನಾಣಯ್ಯ, ನಾಪನೆರವಂಡ ಪೊನ್ನಪ್ಪ, ಕಯ್ಯಂದಿರ ಉತ್ತಯ, ಭಕ್ತ ಜನ ಸಂಘದ ಅಧ್ಯಕ್ಷ ಮುಕ್ಕಾಟಿರ ವಿನಯ್, ಮಣವಟ್ಟಿರ ಚೆಂಗಪ್ಪ, ಚೀಯಕಪೂವಂಡ ಅಪ್ಪಚ್ಚು, ಅಪ್ಪ ಮಣಿಯಂಡ ಸೋಮಣ್ಣ, ಬದ್ದಂಜೆಟ್ಟಿರ ದೇವಯ್ಯ, ಅಪ್ಪ ಮಣಿಯಂಡ ಉತ್ತಯ, ಶಾಸಕರ ಭೇಟಿಗೆ ಮತ್ತು ಆರ್ಥಿಕ ನೆರವಿಗೆ ಸರ್ವ ರೀತಿಯಿಂದ ಸಹಕರಿಸಿದ ಪಾಡಿ ಶ್ರೀ ಈಶ್ವರ ಇಗ್ಗುತ್ತಪ್ಪ ದೇವಸ್ಥಾನದ ವ್ಯವಸ್ಥಾಪನ ಸಮಿತಿ ಮಾಜಿ ಅಧ್ಯಕ್ಷ ಬಾಚಮಂಡ ಲವ ಚಿಣ್ಣಪ್ಪ ದಾನಿಗಳಾದ ಮಂಡಿರ ಜಯ ದೇವಯ್ಯ, ನಿವೃತ್ತ ಉಪ ಅರಣ್ಯ ಸಂರಕ್ಷಣಾಧಿಕಾರಿ ಮುಕ್ಕಾಟಿರ ಜಯ ಉಪಸ್ಥಿತರಿದ್ದರು.

ಮೇ 26ಕ್ಕೆ ಪಾಲೂರು ಶ್ರೀ ಅಮನೂರು ದೇವಿಯ ವಾರ್ಷಿಕ ಉತ್ಸವ

ನಾಪೋಕ್ಲು: ಇಲ್ಲಿಗೆ ಸಮೀಪದ ಪಾಲೂರು ಗ್ರಾಮದ ಶ್ರೀ ಅಮನೂರು ದೇವಿಯ ವಾರ್ಷಿಕ ಉತ್ಸವ ಮೇ 26 ರಂದು ನಡೆಯಲಿದೆ. ಉತ್ಸವದ ಅಂಗವಾಗಿ ಅಂದು ಬೆಳಗ್ಗೆ 11 ಗಂಟೆಗೆ ಜಳಕಕ್ಕೆ ಹೋಗುವುದು. 12 ಗಂಟೆಗೆ ಮಹಾಪೂಜೆ ಹಾಗೂ ಪ್ರಸಾದ ವಿತರಣೆ ಬಳಿಕ ಅನ್ನ ಸಂತರ್ಪಣೆ ಜರುಗಲಿದೆ. ಭಕ್ತಾದಿಗಳು ಅಧಿಕ ಸಂಖ್ಯೆಯಲ್ಲಿ ಭಾಗವಹಿಸಿ ದೇವರ ಕೃಪೆಗೆ ಪಾತ್ರರಾಗಬೇಕೆಂದು ದೇವಾಲಯದ ಆಡಳಿತ ಮಂಡಳಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ವಿಪತ್ತು ಕಾರ್ಯ ನಿರ್ವಹಣಾ ಸಮಿತಿ ಕೋರ್ ಕಮಿಟಿ ಸಭೆ

ವಿರಾಜಪೇಟೆ, ಮೇ 21– ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ವಿರಾಜಪೇಟೆ ತಾಲೂಕು ಶೌರ್ಯ ವಿಪತ್ತು ನಿರ್ವಹಣಾ ಸಮಿತಿ ಕೋರ್ ಕಮಿಟಿ ಸಭೆ ವಿರಾಜಪೇಟೆ ಶಿಕ್ಷಕರ ಭವನದಲ್ಲಿ ನಡೆಯಿತು.

ಯೋಜನಾಧಿಕಾರಿ ಶ್ರೀ ಜೈವಂತ್ ಪಟಗಾರ ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು. ಧರ್ಮಸ್ಥಳ ಯೋಜನಾಧಿಕಾರಿ ಹರೀಶ್, ಜನಜಾಗೃತಿ ಯೋಜನಾಧಿಕಾರಿ ಗಣೇಶ್ ಆಚಾರ್ಯ ಮಾತನಾಡಿದರು. ಇದೇ ಸಂದರ್ಭ ವಿರಾಜಪೇಟೆ ತಾಲೂಕಿನಲ್ಲಿ ನೂತನವಾಗಿ 15 ಜನರ ತುರ್ತು ಸ್ಪಂದನ ಘಟಕ ರಚನೆ ಮಾಡಿ ಜವಾಬ್ದಾರಿ ಹಸ್ತಾಂತರಿಸಲಾಯಿತು. ಸಭೆಯಲ್ಲಿ ಜನಜಾಗೃತಿ ಮೇಲ್ವಿಚಾರಕರಾದ ನಿತೇಶ್ ಕೆ, ಆಡಳಿತ ಪ್ರಬಂಧಕರಾದ ಕು. ಮಮತಾ, ವಲಯ ಮೇಲ್ವಿಚಾರಕರಾದ ಧನೇಶ್, ಪುಷ್ಪಲತಾ, ಸಂಯೋಜಕರು, ಘಟಕ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಶೀಘ್ರ ಮೇಕೆದಾಟು ಯೋಜನೆಗೆ ಡಿಪಿಆರ್ ಸಲ್ಲಿಕೆ

ಕೇಂದ್ರದ ಅನುಮತಿ ದೊರೆತ ಕೂಡಲೇ ಭೂಮಿಪೂಜೆ : ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

ಚಾಮರಾಜನಗರ: ಮೇಕೆದಾಟು ಯೋಜನೆಗೆ ಶೀಘ್ರವೇ ಕೇಂದ್ರಕ್ಕೆ ಡಿಪಿಆರ್ ಸಲ್ಲಿಸಲಾಗುವುದು. ಕೇಂದ್ರ ಸರ್ಕಾರ ಅನುಮತಿ ನೀಡಿದ ಬಳಿಕ ಯೋಜನೆಯ ಭೂಮಿ ಪೂಜೆ ಮಾಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಜಿಲ್ಲೆಯ ಕೊಳ್ಳೇಗಾಲ ತಾಲೂಕಿನ ಶಿವನ ಸಮುದ್ರದ ಮಧ್ಯರಂಗನಾಥ ದೇವಸ್ಥಾನದ ಉದ್ಘಾಟನೆಗಾಗಿ ಭೇಟಿ ನೀಡಿದ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದರು.

ಮೇಕೆದಾಟು ಯೋಜನೆಗೆ ಡಿಪಿಆರ್ ಸಿದ್ಧಪಡಿಸಲಾಗಿದ್ದು, ಈ ಯೋಜನೆಯ ಕಚೇರಿ ಆರಂಭಿಸಿದ್ದೇವೆ. ಮುಳುಗಡೆಯಾಗುವ ಅರಣ್ಯ ಪ್ರದೇಶಕ್ಕೆ ಪರ್ಯಾಯ ಜಮೀನು ನೀಡಲು ಜಮೀನು ಗುರುತಿಸುತ್ತಿದ್ದೇವೆ ಎಂದು ವಿವರಿಸಿದರು.



ಜೀರ್ಣೋದ್ಧಾರಗೊಂಡ ಮಧ್ಯರಂಗನಾಥ ದೇವಸ್ಥಾನ ಕಾರ್ಯಕ್ರಮವನ್ನು ಡಿಸಿಎಂ ಡಿ.ಕೆ.ಶಿವಕುಮಾರ್ ಉದ್ಘಾಟಿಸಿದರು. ಈ ವೇಳೆ ಡಿ.ಕೆ. ಶಿವಕುಮಾರ್ ಅವರ ಪತ್ನಿ, ಸಚಿವರು, ಶಾಸಕರು ಮತ್ತು ಗಣ್ಯರು ಉಪಸ್ಥಿತರಿದ್ದರು.

177 ಟಿಎಂಸಿ ನೀರು ಬಿಡಲೇಬೇಕು: ಕಾವೇರಿ ನೀರು ವಿಚಾರದಲ್ಲಿ ತಮಿಳುನಾಡಿಗೆ 177 ಟಿಎಂಸಿ ನೀರನ್ನು ಬಿಡಲೇಬೇಕು ಎಂದು ಸ್ಪಷ್ಟ ಆದೇಶ ನೀಡಲಾಗಿದೆ. ಇದನ್ನು ಹೇಗೆ ಬಗೆಹರಿಸಬೇಕು ಎಂದು ಮುಂದಿನ ದಿನಗಳಲ್ಲಿ ಚರ್ಚೆ ಮಾಡುತ್ತೇವೆ. ಮೇಕೆದಾಟು ಯೋಜನೆಗೆ ಆಕ್ಷೇಪ ಸಲ್ಲಿಸಲು ತಮಿಳುನಾಡಿಗೆ ಯಾವುದೇ ರೀತಿಯ ಹಕ್ಕಿಲ್ಲ, ಇದರ ಬಗ್ಗೆ ಕೇಂದ್ರ ಜಲ ಆಯೋಗ ತೀರ್ಮಾನ ಮಾಡಬೇಕು ಎಂದು ಸುಪ್ರೀಂಕೋರ್ಟ್ ಆದೇಶ ನೀಡಿದೆ ಎಂದರು.

ಕೊಟ್ಟ ಮಾತಿನಂತೆ ನಡೆದಿದ್ದೇವೆ: ನಮ್ಮ ಸರ್ಕಾರಕ್ಕೆ ಮೂರು ವರ್ಷ ಪೂರ್ಣಗೊಂಡಿದೆ. ಕೊಟ್ಟ ಮಾತಿನಂತೆ ನಡೆದಿದ್ದೇವೆ. ಜೊತೆಗೆ 6ನೇ ಗ್ಯಾರಂಟಿಯಾಗಿ ಭೂ ಗ್ಯಾರಂಟಿ ಯೋಜನೆ ನೀಡಿದ್ದೇವೆ. ಪ್ರತಿಯೊಬ್ಬ ಫಲಾನುಭವಿಗಳ ಆಸ್ತಿ ದಾಖಲೆಗಳಲ್ಲಿ ಅವರ ಫೋಟೋ, ಆಸ್ತಿಯ ಫೋಟೋ ಹಾಕಿ ಮನೆ ಮನೆಗೆ ಖಾತೆ ಒದಗಿಸಿಕೊಡುತ್ತಿದ್ದೇವೆ. ಬೇರೆಯವರು ಮಾಡಲಾಗದ ಕೆಲಸವನ್ನು ನಾವು ಮಾಡಿ ಜನರ ಋಣ ತೀರಿಸುತ್ತಿದ್ದೇವೆ. ಮುಂದಿನ 2 ವರ್ಷಗಳಲ್ಲಿ ಇನ್ನು ಹೆಚ್ಚಿನ ಕೆಲಸ ಮಾಡಲಿದ್ದೇವೆ ಎಂದರು.

ಜಿಬಿಎ ಚುನಾವಣೆಗೆ ಸಿದ್ಧತೆ: ಜಿಬಿಎ ಚುನಾವಣೆ ಬಗ್ಗೆ ಕೇಳಿದಾಗ, ಜಿಬಿಎ ಚುನಾವಣೆ ನಡೆಸುವ ಜವಾಬ್ದಾರಿ ಚುನಾವಣಾ ಆಯೋಗದ ಮೇಲಿದೆ ಚುನಾವಣೆ ನಡೆಸಲು ಸರ್ಕಾರ ಸಂಪೂರ್ಣವಾಗಿ ಸಹಕಾರ ನೀಡಲು ಸಿದ್ಧವಾಗಿದೆ. ಸಮಯದ ಪ್ರಕಾರ ಚುನಾವಣೆ ನಡೆಯಲಿದೆ. ನಾವೆಲ್ಲ ಸಿದ್ಧತೆಯನ್ನು ಮಾಡಿಕೊಳ್ಳುತ್ತೇವೆ ಎಂದು ಸ್ಪಷ್ಟಪಡಿಸಿದರು. ಇದಕ್ಕೂ ಮುನ್ನ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಕುಟುಂಬ ಸಮೇತರಾಗಿ ಮಧ್ಯರಂಗನಾಥ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು.

ಚಾ.ನಗರದಲ್ಲಿ ವೈದ್ಯಕೀಯ ವಿಜ್ಞಾನಸಂಸ್ಥೆ ಕಾರ್ಮಿಕರ ಸಂಘದಿಂದ ಪ್ರತಿಭಟನೆ



ತಮ್ಮ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಕಾರ್ಮಿಕರು ಪ್ರತಿಭಟನೆ ನಡೆಸಿದರು.

ಚಾಮರಾಜನಗರ: ಗುತ್ತಿಗೆ ಆಧಾರಿತ ಸಿಬ್ಬಂದಿಗಳಿಗೆ ನ್ಯಾಯಯುತ ವೇತನ ಹಾಗೂ ಕಾನೂನುಬದ್ಧ ಸೌಲಭ್ಯಗಳನ್ನು ಒದಗಿಸುವಂತೆ ಆಗ್ರಹಿಸಿ ಚಾಮರಾಜನಗರ ವೈದ್ಯಕೀಯ ವಿಜ್ಞಾನಸಂಸ್ಥೆ ಕಾರ್ಮಿಕರ ಸಂಘದ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಸಿಮ್ಸ್ ಕಾರ್ಮಿಕರ ಸಂಘದ ರಾಜ್ಯಾಧ್ಯಕ್ಷ ಚಂದ್ರಶೇಖರಮೇಟಿ ನೇತೃತ್ವದಲ್ಲಿ ಸಮಾವೇಶಗೊಂಡ ಸಿಮ್ಸ್ ಸಿಬ್ಬಂದಿ ರಾಜ್ಯ ಸರ್ಕಾರದ ವೇತನ ತಾರತಮ್ಯದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಚಾಮರಾಜನಗರ ಸಿಮ್ಸ್ ಸಂಸ್ಥೆಗೆ 2025 ಡಿಸೆಂಬರ್‌ನಲ್ಲಿ 35 ಶುಶ್ರೂಷಕರನ್ನು ನೇಮಿಸುವ ಮೂಲಕ ಆರಂಭದಲ್ಲಿ ಮಾಸಿಕ 8 ಸಾವಿರ ವೇತನ ನೀಡಲಾಗುತ್ತಿತ್ತು, 2019 ಫೆ.26ರಂದು ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುವ ಶುಶ್ರೂಷಕರಿಗೆ ಮಾಸಿಕ 33,500 ರೂ.ನಿಗದಿಪಡಿಸಿದೆ. ಆದರೆ ಸಿಮ್ಸ್ ಡೀನ್ ಮತ್ತು ನಿರ್ದೇಶಕರು, ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುವ ಶುಶ್ರೂಷಕರಿಗೆ ಕೇವಲ 10,500 ರೂ. ವೇತನ ನೀಡುತ್ತಿದ್ದಾರೆ. ಗಳಿಕೆ ರಜೆ, ರಾಷ್ಟ್ರೀಯ ಹಬ್ಬಗಳ ರಜೆಸೌಲಭ್ಯ, ಇಎಸ್‌ಐ. ಪಿಎಸ್‌ಐ, ಸಾಮಾಜಿಕ ಭದ್ರತಾ ಸೌಲಭ್ಯ ಸಿಗುತ್ತಿಲ್ಲ ಎಂದು ಆರೋಪಿಸಿದರು.

ಕೂಡಲೇ ರಾಜ್ಯಸರ್ಕಾರ ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುವ ಶುಶ್ರೂಷಕರಿಗೆ ಮಾಸಿಕ 33,500 ರೂ.ವೇತನ ನೀಡಬೇಕು, ರಾಷ್ಟ್ರೀಯ ಹಬ್ಬಗಳ ರಜೆಸೌಲಭ್ಯ ಇಎಸ್‌ಐ. ಪಿಎಸ್‌ಐ ಸೌಲಭ್ಯ ಒದಗಿಸಬೇಕು, ಸರ್ಕಾರದ ಆದೇಶ ಜಾರಿಗೊಳಿಸದಿರುವ ಸಂಬಂಧಪಟ್ಟ ಇಲಾಖಾಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ನೀಟ್ ಪರೀಕ್ಷೆಗಳನ್ನು ಆಯಾಯ ರಾಜ್ಯ ಸರ್ಕಾರಗಳೇ ನಡೆಸಲು ಅವಕಾಶ ನೀಡಿ



ಜಿಲ್ಲಾಧಿಕಾರಿ ಶ್ರೀರೂಪ ಅವರ ಮುಖಾಂತರ ಪ್ರಧಾನಮಂತ್ರಿ ನರೇಂದ್ರಮೋದಿ ಅವರಿಗೆ ಮನವಿ ಪತ್ರ ಸಲ್ಲಿಸುತ್ತಿರುವುದು.

ಚಾಮರಾಜನಗರ: ವೈದ್ಯಕೀಯ ವಿದ್ಯಾಭ್ಯಾಸದ ಪ್ರವೇಶಕ್ಕೆ ಸಂಬಂಧಿಸಿದಂತೆ ನಡೆಸುವ ನೀಟ್ ಪರೀಕ್ಷೆಗಳನ್ನು ಆಯಾಯ ರಾಜ್ಯ ಸರ್ಕಾರಗಳೇ ನಡೆಸಲು ಆದೇಶ ನೀಡುವಂತೆ ಒತ್ತಾಯಿಸಿ, ಅಖಿಲ ಕರ್ನಾಟಕ ಕನ್ನಡ ಮಹಾಸಭಾದ ವತಿಯಿಂದ ನಗರದ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಧಿಕಾರಿ ಶ್ರೀರೂಪ ಅವರ ಮುಖಾಂತರ ಪ್ರಧಾನಮಂತ್ರಿ ನರೇಂದ್ರಮೋದಿ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಾರಿಯ ವೈದ್ಯಕೀಯ ವಿದ್ಯಾಭ್ಯಾಸದ ಪ್ರವೇಶಕ್ಕೆ ಸಂಬಂಧಿಸಿದಂತೆ ದೇಶಾದ್ಯಂತ ನಡೆದ ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆಯಿಂದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ನಾಶವಾಗಿದೆ ಮತ್ತು ಈ ಪ್ರಶ್ನೆಪತ್ರಿಕೆ ಸೋರಿಕೆಯಿಂದ ಅರ್ಹ ವಿದ್ಯಾರ್ಥಿಗಳು ಬಹಳ ಜನ ಆತ್ಮ ಹತ್ಯೆಯನ್ನು ಸಹ ಮಾಡಿಕೊಂಡಿರುತ್ತಾರೆ. ಇದು ಅತ್ಯಂತ ಖಂಡನೀಯವಾದುದು. ಕೇಂದ್ರ ಸರ್ಕಾರ ಇದರ ಬಗ್ಗೆ ತೀವ್ರವಾಗಿ ನಿಗಾವಹಿಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಬೇಕು. ಮತ್ತು ಮುಂದೆ ಇಂತಹ ಅನಾಹುತಗಳು ನಡೆಯದ ರೀತಿಯಲ್ಲಿ ಮುನ್ನೆಚ್ಚರಿಕೆ ಕ್ರಮವನ್ನು ಕೇಂದ್ರ ಸರ್ಕಾರ ವಹಿಸಬೇಕು. ಮತ್ತು ಇಂತಹ ಒಂದು ಅನಾಹುತ ನಡೆದಿರುವ ಹಿನ್ನಲೆಯಲ್ಲಿ ಕೇಂದ್ರ ಶಿಕ್ಷಣ ಸಚಿವರು ಇದರ ನೈತಿಕ ಹೊಣೆಯನ್ನು ಹೊತ್ತು ರಾಜೀನಾಮೆಯನ್ನು ನೀಡಬೇಕಾಗಿ ಮತ್ತು ಇದರ ಜೊತೆಗೆ ಇನ್ನು ಮುಂದೆ ಕೇಂದ್ರ ಸರ್ಕಾರ ಈ ವೈದ್ಯಕೀಯ ವಿದ್ಯಾಭ್ಯಾಸದ ಪರೀಕ್ಷೆಗಳನ್ನು ಇನ್ನು ಮುಂದೆ ಆಯಾಯ ರಾಜ್ಯ ಸರ್ಕಾರಗಳಿಗೆ ನಡೆಸುವಂತೆ ಆದೇಶ ನೀಡಬೇಕಾಗಿದೆ. ಈ ಹಿಂದೆ ಈ ನೀಟ್ ಪರೀಕ್ಷೆಗಳನ್ನು ಆಯಾ ರಾಜ್ಯ ಸರ್ಕಾರಗಳೇ ನಡೆಸುತ್ತಿದ್ದವು. ಆದರೆ ಇತ್ತೀಚಿನ ದಿನಗಳಲ್ಲಿ ಕೇಂದ್ರ ಸರ್ಕಾರ ಈ ನೀಟ್ ಪರೀಕ್ಷೆಯನ್ನು ನಡೆಸುವ ಜವಾಬ್ದಾರಿಯನ್ನು ತೆಗೆದುಕೊಂಡಿದೆ. ಆದರೆ ಇದು ಇಡೀ ದೇಶಾದ್ಯಂತ ಈ ನೀಟ್ ಪರೀಕ್ಷೆಗಳು ಅವ್ಯವಸ್ಥೆಯಿಂದ ಕೂಡಿದ್ದು ವಿದ್ಯಾರ್ಥಿಗಳಿಗೆ ಇದು ಒಂದು ರೀತಿಯ ಮರಣ ಶಾಸನವಾಗಿದೆ. ಆದ್ದರಿಂದ ಈ ತಕ್ಷಣ ತಾವು ಮುಂದಿನ ವರ್ಷದಿಂದ ಈ ನೀಟ್ ಪರೀಕ್ಷೆಗಳನ್ನು ಆಯಾಯ ರಾಜ್ಯ ಸರ್ಕಾರಗಳೇ ನಡೆಸುವಂತೆ ಅನುಮತಿ ನೀಡುವಂತೆ ಪ್ರಧಾನಮಂತ್ರಿಗಳಿಗೆ ಸಲ್ಲಿಸಿರುವ ಮನವಿಯಲ್ಲಿ ಕನ್ನಡ ಮಹಾಸಭಾದ ಅಧ್ಯಕ್ಷ ಚಾ.ರಂ. ಶ್ರೀನಿವಾಸಗೌಡ ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಎಡಿಸಿ ಜವರೇಗೌಡ, ಪಣ್ಯದಹುಂಡಿ ರಾಜು, ಹೊಮ್ಮ ಲೋಕೇಶ್, ಅರುಣ್ ಕುಮಾರ್ ಗೌಡ, ರವಿಚಂದ್ರಪ್ರಸಾದ್ ಕಹಳೆ, ರಾಜಪ್ಪ, ಶಿವು, ಇತರರು ಹಾಜರಿದ್ದರು.

ನಾಳೆಯಿಂದ ರಾಮಸಮುದ್ರದಲ್ಲಿ ಬಸವ ಜಯಂತಿ

ಚಾಮರಾಜನಗರ: ನಗರದ ರಾಮಸಮುದ್ರ ಬಡಾವಣೆಯ ಶ್ರೀ ಗುರುಕಂಬಳೇಶ್ವರ ಭಿಕ್ಷಾ ಮಠ ವತಿಯಿಂದ ಮೇ 23,24 ರಂದು ಬಸವ ಜಯಂತಿ, ಧಾರ್ಮಿಕ ಸಭೆ ನಡೆಯಲಿದೆ ಎಂದು ಗೌಡಿಕೆ ಮಹೇಶ್ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಮೇ 23 ರಂದು ಬಸವ ಜಯಂತಿ ಅಂಗವಾಗಿ ಜಗಜ್ಯೋತಿ ಬಸವೇಶ್ವರ ಭಾವಚಿತ್ರ ಮೆರವಣಿಗೆ ಬೆಳಗ್ಗೆ 10 ಗಂಟೆಗೆ ಆರಂಭವಾಗಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಿ ಸಂಜೆಗೆ ಮುಕ್ತಾಯವಾಗಲಿದೆ ಎಂದರು.

ಧಾರ್ಮಿಕ ಸಭೆ: ಮೇ.24 ರಂದು ಬೆಳಗ್ಗೆ 10:30ಕ್ಕೆ ಶ್ರೀಮಠ ಮಹದೇವಸ್ವಾಮೀಜಿಗಳಿಗೆ ಗುರುವಂದನೆ, ಶ್ರೀ ಮಲ್ಲನಮೂಲೆ ಚನ್ನಬಸವಮಹಾಸ್ವಾಮೀಜಿ ಶ್ರೀಗಳವರಿಗೆ ನುಡಿನಮನ ಕಾರ್ಯಕ್ರಮ, ಬಸವ ಮಂದಿರದ 12ನೇ ವರ್ಷ ಹಾಗೂ ಶ್ರೀಮಠದ 30ನೇ ವಾರ್ಷಿಕೋತ್ಸವ ಪ್ರಯುಕ್ತ ಧಾರ್ಮಿಕ ಸಭೆ ಅಯೋಜಿಸಲಾಗಿದೆ ಎಂದರು

ಅಂದು ಶ್ರೀಮಠದ ಆವರಣದಲ್ಲಿ ಬೆಳಗ್ಗೆ 7ಕ್ಕೆ ಧ್ವಜಾರೋಹಣವನ್ನು ನಗರದ ಶ್ರೀ ಸಿದ್ದಮಲ್ಲೇಶ್ವರ ವಿರಕ್ತ ಮಠಾಧ್ಯಕ್ಷರಾದ ಶ್ರೀ ಚನ್ನಬಸವಸ್ವಾಮೀಜಿ ನೆರವೇರಿಸುವರು, ಬೆಳಗ್ಗೆ 8ಕ್ಕೆ ಸುಕ್ಷೇತ್ರ ಮಲ್ಲನಮೂಲೆ ಮಠಾಧ್ಯಕ್ಷರಾದ ಶ್ರೀ ಇಮ್ಮಡಿ ಸಿದ್ದಲಿಂಗಮಹಾಸ್ವಾಮೀಜಿಗಳ ದಿವ್ಯಪಾದಪೂಜೆ, ಬೆಳಗ್ಗೆ 10:30ಕ್ಕೆ ಧಾರ್ಮಿಕ ಸಭೆ ಆರಂಭವಾಗಲಿದ್ದು, ದೇವನೂರು ಶ್ರೀ ಗುರುಮಲ್ಲೇಶ್ವರ ತ್ರಿವಿಧ ದಾಸೋಹ ಮಠದ ಶ್ರೀ ಮಹಾಂತಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸುವವರು, ಶ್ರೀಮಲ್ಲನಮೂಲೆ ಸುಕ್ಷೇತ್ರ ಮಠಾಧ್ಯಕ್ಷರಾದ ಶ್ರೀ ಇಮ್ಮಡಿ ಸಿದ್ದಲಿಂಗ ಸ್ವಾಮಿಜೀ ಅಧ್ಯಕ್ಷತೆ ವಹಿಸುವರು, ಹರವೆ ವಿರಕ್ತ ಮಠಾಧ್ಯಕ್ಷರಾದ ಶ್ರೀ ಸರ್ಪ ಭೂಷಣಸ್ವಾಮೀಜಿ ಉದ್ಘಾಟಿಸಲಿದ್ದಾರೆ. ಮರಿಯಾಲ ಮುರುಘರಾಜೇಂದ್ರ ಮಠಾಧ್ಯಕ್ಷರಾದ ಶ್ರೀ ಇಮ್ಮಡಿ ಮುರುಘರಾಜೇಂದ್ರ ಸ್ವಾಮೀಜಿ ಶ್ರೀಬಸವೇಶ್ವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವರು, ನಗರದ ಸಿದ್ದಮಲ್ಲೇಶ್ವರ ವಿರಕ್ತ ಮಠಾಧ್ಯಕ್ಷರಾದ ಶ್ರೀ ಚನ್ನಬಸವಸ್ವಾಮೀಜಿ, ಮುಡುಕನಪುರ ಹಲವಾರ ಮಠಾಧ್ಯಕ್ಷರಾದ ಶ್ರೀ ಷಡಕ್ಷರ ದೇಶಿಕೇಂದ್ರಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ದೇವನೂರು ನಿವೃತ್ತ ಪ್ರಾಂಶುಪಾಲ ಪ್ರೊ.ಸದಾಶಿವ ಮೂರ್ತಿ, ಅಖಿಲ ಭಾರತೀಯ ವೀರಶೈವ ಮಹಾಸಭಾದ ಜಿಲ್ಲಾಧ್ಯಕ್ಷ ಮೂಡ್ಲು ಪುರ ನಂದೀಶ್ ಮುಖ್ಯ ಅತಿಥಿಯಾಗಿ ಭಾಗವಹಿಸುವರು, ವಿವಿಧ ಮಠಾಧೀಶರು ಭಾಗವಹಿಸಲಿದ್ದಾರೆ ಈ ಕಾರ್ಯಕ್ರಮಕ್ಕೆ ಬಸವಾದಿ ಶರಣರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿ ಗೊಳಿಸಬೇಕು ಎಂದು ಮನವಿ ಮಾಡಿದರು. ಈ ವೇಳೆ



ಚಾಮರಾಜನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಗೌಡಿಕೆ ಮಹೇಶ್ ಮಾತನಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಕೋಮುವಾರು ಯಜಮಾನರಾದ ಆರ್.ಪುಟ್ಟಮಲ್ಲಪ್ಪ, ಯಜಮಾನ ನಾಗರಾಜಪ್ಪ ಗೌಡಿಕೆ ಗುರುಮಲ್ಲಪ್ಪ ಮಾಜಿ ಯಜಮಾನರಾದ ಆರ್.ವಿ. ಮಹದೇವಸ್ವಾಮಿ, ಎಲ್.ಮಹದೇವಪ್ಪ, ಮಾಜಿ ಗೌಡಿಕೆ ನಾಗರಾಜು, ಯುವ ಮುಖಂಡ ಆರ್.ಎನ್.ನವೀನ್ ಕುಮಾರ್ ಹಾಜರಿದ್ದರು.

ವಾರ್ತಾ ಇಲಾಖೆ ವಾಹನಕ್ಕೆ ಚಾಲನೆ

ಚಾಮರಾಜನಗರ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ನೂತನವಾಗಿ ನೀಡಿರುವ ವಾಹನಕ್ಕೆ ನಗರದ ಪ್ರವಾಸಿ ಮಂದಿರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ ಶುಭ ಕೋರಿದರು.

ನಂತರ ಮಾತನಾಡಿ, ಸಾರ್ವಜನಿಕರಿಗೆ ಸರ್ಕಾರದ ಯೋಜನೆಗಳು ಹಾಗೂ ಮಾಹಿತಿ ತಲುಪಿಸುವಲ್ಲಿ ವಾರ್ತಾ ಇಲಾಖೆಯ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಶಾಸಕ ಸಿ. ಪುಟ್ಟರಂಗಶೆಟ್ಟಿ, ಕಾಡಾಧ್ಯಕ್ಷ ಪಿ. ಮರಿಸ್ವಾಮಿ, ಜಿಲ್ಲಾಧಿಕಾರಿ ಶ್ರೀರೂಪ, ಜಿಪಂ ಸಿಇಒ ಮೋನಾರೋತ್, ಹೆಚ್ಚುವರಿ ಜಿಲ್ಲಾಧಿಕಾರಿ ಜವರೇಗೌಡ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಶಿಧರ್, ವಾರ್ತಾಧಿಕಾರಿ ರಮೇಶ್ ಇತರರಿದ್ದರು.

ನೀನಿದ್ದರೆ... ನೆನಪಿನಾಳದ ಹಾಡು





ಕೆಲವೊಂದು ಘಟನೆಗಳು ನಮ್ಮ ನೆನಪಿನಾಳದಲ್ಲಿ ಗಟ್ಟಿಯಾಗಿ ನೆಲೆಯೂರಿರುತ್ತವೆ. ಅಂಥ ಒಂದಷ್ಟು ನೆನಪುಗಳನ್ನು 'ನೀನಿದ್ದರೆ' ಹಾಡಲ್ಲಿ ತೆರೆದಿಡಲು ನಿರ್ದೇಶಕ ವಿನ್ಸೆಂಟ್ ಫರ್ನಾಂಡಿಸ್ ಕಾಸ್ಸಿಯಾ ಪ್ರಯತ್ನಿಸಿದ್ದಾರೆ.

ಮಂಗಳೂರು ಮೂಲದ ನೂರ್ ಬಟ್ ಅವರು ನಿರ್ಮಿಸಿರುವ 'ನೀನಿದ್ದರೆ' ಆಲ್ಬಂ ಹಾಡು ಸಿರಿ ಮ್ಯೂಸಿಕ್ ಮೂಲಕ ಬಿಡುಗಡೆಯಾಯಿತು. ಹಿರಿಯ ನಟ ರಮೇಶ್ ಭಟ್ ಈ ಹಾಡನ್ನು ಬಿಡುಗಡೆಗೊಳಿಸಿ ಮಾತನಾಡುತ್ತಾ, ನಿರ್ಮಾಪಕರು ನನ್ನನ್ನು ಫಾದರ್ ಅಂತ ಕರೆಯುತ್ತಾರೆ. ಆದರೆ, ನನಗೆ ಅವರು ಗಾಡ್ ಫಾದರ್ ಥರ. ಚಿತ್ರೀಕರಣ ಕ್ಕೆಂದು ಮಂಗಳೂರಿಗೆ ಹೋದಾಗ, ತುಂಬಾ ಚೆನ್ನಾಗಿ ನೋಡಿಕೊಳ್ಳುತ್ತಾರೆ. ಇವರ ಋಣ ತೀರಿಸಲು ಬ್ಯುಸಿ ಇದ್ದರೂ ಬಂದಿರುವೆ ಎಂದರು.

ಈ ಹಾಡಿಗೆ ವಿನ್ಸೆಂಟ್ ಫರ್ನಾಂಡಿಸ್ ಕಾಸ್ಸಿಯಾ ಸಾಹಿತ್ಯ ರಚಿಸಿ, ಸಂಗೀತದ ಜತೆ ನಿರ್ದೇಶನ ಮಾಡಿದ್ದಾರೆ. ನಾಯಕಿಯ ನೆನಪಿನಾಳದ ಮಾತುಗಳು, ಭಾವನೆಗಳು ಈ ಹಾಡಲ್ಲಿದೆ ತಾಯಿ, ಮಗಳು ಇಬ್ಬರೂ ನಟಿಸಿರುವುದು ಈ ಹಾಡಿನ ವಿಶೇಷ. ಅವಿಲ್ ರೋಡ್ರಿಗಸ್, ಕಿರನ್ ಪಿಂಟೋ, ಸ್ಮಿತಾ ಪಿಂಟೋ ಅಭಿನಯಿಸಿರೋ ಈ ಹಾಡಿಗೆ ಲಕ್ಷೀಕಾಂತ್ ಅವರ ಛಾಯಾಗ್ರಹಣವಿದೆ.



ಹರಿವರಾಸನಂ ಅವರ 'ಅವನಿ' ಕಾದಂಬರಿಯನ್ನಾಧರಿಸಿ ನಿರ್ಮಾಣವಾದ ಚಿತ್ರ 'ಮಗ್ಗಿಪುಸ್ತಕ' ಇದೀಗ ಯಶಸ್ವಿಯಾಗಿ ನೂರು ದಿನಗಳನ್ನು ಪೂರೈಸಿದೆ. ಈ ವರ್ಷ 100 ದಿನ ಪ್ರದರ್ಶನಗೊಂಡ ಮೊದಲ ಮಕ್ಕಳ ಚಿತ್ರ ಎಂಬ ಹೆಗ್ಗಳಿಕೆ ಈ ಚಿತ್ರದ್ದು. ಈ ನೂರರ ಸಂಭ್ರಮಾಚರಣೆಯ ಸಮಾರಂಭವನ್ನು ಚಿತ್ರ ಪ್ರದರ್ಶನ ನಡೆಯುತ್ತಿರುವ ಭೂಮಿಕಾ ಥಿಯೇಟರಿನಲ್ಲೇ ಆಚರಿಸಲಾಯಿತು. ಈ ಸಂದರ್ಭದಲ್ಲಿ ಚಿತ್ರದಲ್ಲಿ ಕೆಲಸ ಮಾಡಿದ ಕಲಾವಿದ, ತಂತ್ರಜ್ಞರೆಲ್ಲರಿಗೂ ಸ್ಮರಣ ಫಲಕ ವಿತರಿಸಲಾಯಿತು.

ಹರಿವರಾಸನಂ ಅವರೇ ಚಿತ್ರಕಥೆ ಬರೆದು ನಿರ್ದೇಶನ ಮಾಡಿದ ಚಿತ್ರ ಮಗ್ಗಿ ಪುಸ್ತಕ ಚಿತ್ರವನ್ನು ಚಿನ್ನಸ್ವಾಮಿ ಫಿಲಂಸ್ ಅಡಿಯಲ್ಲಿ ಚಿನ್ನಸ್ವಾಮಿ ಎತಿರಾಜ್ ಅವರು ನಿರ್ಮಿಸಿದ್ದಾರೆ. ರಾಜಶೇಖರ್ ದಾವಣಗೆರೆ, ಈಶ್ವರಿ ಮಂಜು, ನಾಗವೇಣಿ, ಡಾ.ಲಲಿತಾರಾವ್, ಸುನಿಗೌಡ ಕನಕಪುರ, ನವೀನ್ ಗೌಡ, ಶಶಿಕಾಂತ್ ವರದಹಳ್ಳಿ, ಎಂ. ಮಹೇಶ್ ಕೆ.ನಟರಾಜ್, ಎನ್. ನಾಗರಾಜ್ ಸಹ ನಿರ್ಮಾಪಕರಾಗಿ ಕೈಜೋಡಿಸಿದ್ದಾರೆ. ವೇದಿಕೆಯಲ್ಲಿ ಹಾಜರಿದ್ದ ಇವರೆಲ್ಲ ನಿರ್ದೇಶಕರ ಪ್ರಾಮಾಣಿಕ ಪ್ರಯತ್ನದ ಫಲವಾಗಿಯೇ ಈ ಯಶಸ್ಸು ಸಾಧ್ಯವಾಯಿತು ಎಂದು ಹೇಳಿದರು.

ನಿರ್ಮಾಪಕ ಚಿನ್ನಸ್ವಾಮಿ ಯತಿರಾಜ್ ಮಾತನಾಡಿ, ಇವತ್ತಿನ ದಿನಗಳಲ್ಲಿ ಕನ್ನಡ ಚಿತ್ರವೊಂದು ನೂರು ದಿನ ಓಡಿದೆ ಎಂದರೆ ನಿಜಕ್ಕೂ ಅದೊಂದು ಮಿರಾಕಲ್. ಈ ಯಶಸ್ಸಿಗೆ ನಿರ್ದೇಶಕರ ನಿರಂತರ ಎಫರ್ಟ್ ಕಾರಣ. ಅವರಿಂದಲೇ ಇವತ್ತು ನಾವೆಲ್ಲ ಈ ವೇದಿಕೆಯಲ್ಲಿ ನಿಂತಿದ್ದೇವೆ. ತುಂಬಾ ಸಂತಸವಾಗ್ತಿದೆ. ಈ ಯಶಸ್ಸಿಗೆ ಸಹಕರಿಸಿದ ಎಲ್ಲ ತಂತ್ರಜ್ಞರು, ಕಲಾವಿದರಿಗೆ ನನ್ನ ಕೃತಜ್ಞತೆಗಳು ಎಂದು ಹೇಳಿದರು.

ನಿರ್ದೇಶಕ ಹರಿವರಾಸನಂ ಮಾತನಾಡುತ್ತ ಪ್ರೇಕ್ಷಕರು, ಚಿತ್ರತಂಡ ನೀಡಿದ ಸಹಕಾರ ಬೆಂಬಲದಿಂದಲೇ ಇವತ್ತು ನಮ್ಮ ಚಿತ್ರ ಗೆದ್ದಿದೆ ಎಂದು ಹೇಳಿದರು.

ಮಗ್ಗಿ ಪುಸ್ತಕವೆಂಬುದು ಬದುಕಿನ ಲೆಕ್ಕಾಚಾರವಾಗಿದ್ದು, ಜೀವನವೇ ಒಂದು ಮಗ್ಗಿ ಪುಸ್ತಕವಿದ್ದಂತೆ, ಇದರಲ್ಲಿ ಒಳ್ಳೆಯದನ್ನು ಕೂಡಬೇಕು. ಕೆಟ್ಟದ್ದನ್ನು ಕಳೆಯಬೇಕು. ಅಜ್ಞಾನವನ್ನು ಗುಣಿಸಬೇಕು. ಜ್ಞಾನವನ್ನು ಭಾಗಿಸಬೇಕು ಎಂಬ ಸಂದೇಶವಿದೆ. ನಾಲ್ಕು ಆಯಾಮಗಳಲ್ಲಿ ನಡೆಯುವ ಹೈಪರ್ ಲಿಂಕ್ ಕಥೆಯಿದು.

ಈ ಚಿತ್ರಕ್ಕೆ ಯಶಸ್ ನಾಚಪ್ಪ ಅವರ ಸಂಗೀತ ನಿರ್ದೇಶನ, ನಂದಕುಮಾರ್ ಅವರ ಛಾಯಾಗ್ರಹಣವಿದೆ. ಚಿತ್ರದಲ್ಲಿ 7 ಹಾಡುಗಳಿದ್ದು ಎಂ.ಎಂ.ಕೀರವಾಣಿ ಅವರು ಹಾಡೊಂದಕ್ಕೆ ದನಿಯಾಗಿರುವುದು ವಿಶೇಷ. ಉಳಿದಂತೆ ಕನ್ನಡ ಗಾಯಕರಾದ ರಾಜೇಶ್ ಕೃಷ್ಣನ್, ವಿಜಯ ಪ್ರಕಾಶ್, ಕಂಬದ ರಂಗಯ್ಯ, ನವೀನ್ ಸಜ್ಜು, ಇಂದು ನಾಗರಾಜ್, ಗುರುರಾಜ್ ಹೊಸಕೋಟೆ, ಸೈಂಧವಿ, ವೈಕಂ ವಿಜಯಲಕ್ಷ್ಮಿ ಹಾಗೂ ರವೀಂದ್ರ ಸೊರಗಾವಿ ಸೇರಿದಂತೆ 17 ಜನ ಹಾಡಿದ್ದಾರೆ. ಈ ಚಿತ್ರವನ್ನು ಎಂ.ಪಿ. ಫಿಲಂಸ್ ಮೂಲಕ ಕೆ. ಮುನೀಂದ್ರ ಅವರು ರಿಲೀಸ್ ಮಾಡಿದ್ದರು. ಅವರ ಸಂಸ್ಥೆಯಿಂದ ಬಿಡುಗಡೆಯಾಗಿ 100 ದಿನ ಪೂರೈಸಿದ ಮೊದಲ ಚಿತ್ರವಿದು.

ರಂಜನ್ ಕಾಸರಗೋಡು, ರಾನ್ವಿ ಶೇಖರ್, ಮೈಸೂರು ರಮಾನಂದ್, ಮಹೇಶ್, ಮೋಹಿತ್, ಮೂಗ್ ಸುರೇಶ್, ಪಂಕಜ, ಮೇಘಶ್ರೀ, ರಕ್ಷಾ ಗೌಡ, ಮಿಮಿಕ್ರಿ ಗೋಪಿ, ಚಂದ್ರಪ್ರಭ ರಘು ರಾಮನಕೊಪ್ಪ ಹಾಗೂ ಇತರರು ಚಿತ್ರದಲ್ಲಿದ್ದಾರೆ.

ಪ್ರೀತಿ ಪ್ರೇಮಕ್ಕೆ ಹೊಸ ವ್ಯಾಖ್ಯಾನ

ಕೀರ್ತಿ ಐ ಲವ್ ಯು...



ಈಗಾಗಲೇ ಪ್ರೀತಿ, ಪ್ರೇಮದ ಕಾನ್ಸೆಪ್ಟ್ ಇಟ್ಟುಕೊಂಡು ಸಾವಿರಾರು ಚಿತ್ರಗಳು ನಿರ್ಮಾಣ ವಾಗಿವೆ. ಆದರೆ ಅದೆಲ್ಲವನ್ನೂ ಮೀರಿ ನಾವು ಬೇರೆಯದೇ ಕಾನ್ಸೆಪ್ಟನ್ನು ನಮ್ಮ ಚಿತ್ರದಲ್ಲಿ ಹೇಳಲು ಪ್ರಯತ್ನಿಸಿದ್ದೇವೆ ಎಂದು ಕೀರ್ತಿ ಐಲವ್ ಯು ಚಿತ್ರದ ನಿರ್ದೇಶಕ ನಿರಂಜನ್ ಆರಾಧ್ಯ ಹೇಳಿದ್ದಾರೆ. ಪೂಜಿತ ಎಸ್. ರಾವ್ ನಿರ್ಮಾಣದ ಈ ಚಿತ್ರದಲ್ಲಿ ಪ್ರಜ್ಯೋತ್ ಎಸ್.ರಾವ್ ನಾಯಕನಾಗಿದ್ದು, ನಿಧಿಗೌಡ ನಾಯಕಿಪಾತ್ರ ನಿರ್ವಹಿಸಿದ್ದಾರೆ. ಇತ್ತೀಚೆಗೆ ಈ ಚಿತ್ರದ ಮುದ್ದಾದ ಮೂಗುತಿ ಎಂಬ ಹಾಡಿನ ಬಿಡುಗಡೆ ಸಮಾರಂಭ ನಡೆಯಿತು.

ವೇದಿಕೆಯಲ್ಲಿ ನಿರಂಜನ್ ಆರಾಧ್ಯ ಮಾತನಾಡುತ್ತ ನೃತ್ಯ ಕಲಾವಿದನಾಗಿದ್ದ ನನಗೆ ಮೊದಲಿನಿಂದಲೂ ಸಿನಿಮಾ ನಿರ್ದೇಶನದ ಬಗ್ಗೆ ಆಸಕ್ತಿಯಿತ್ತು. ಅದು ಈ ಚಿತ್ರದಿಂದ ಈಡೇರಿದೆ, ಈಗಾಗಲೇ ಪ್ರೀತಿ, ಪ್ರೇಮದ ಕಥೆ ತುಂಬಾ ಚಿತ್ರಗಳಲ್ಲಿ ಬಂದಿದ್ದರೂ ನಾವಿಲ್ಲಿ ಪ್ರೀತಿಯ ಬಗ್ಗೆ ಬೇರೆಯದೇ ವ್ಯಾಖ್ಯಾನ ಹೇಳಿದ್ದೇವೆ. ಅದರಲ್ಲೂ ಈಗಿನ ಕಾಲದ ಯುವಜನತೆ ಚಿಕ್ಕವಯಸ್ಸಿನಲ್ಲೇ ಲವ್, ಡೇಟಿಂಗ್ ಅಂತ ಹೋಗ್ತಾರೆ. ಅದೆಲ್ಲಾ ತಪ್ಪು ಎಂದು ಜಾಗೃತಿ ಮೂಡಿಸುವ ಚಿತ್ರವೂ ಹೌದು. ಅಭಿರಾಮ್ ಅವರ ಸಂಗೀತದ ಮೂರು ಹಾಡುಗಳು ಚಿತ್ರದಲ್ಲಿವೆ ಜುಲೈ 31ರಂದು ನಮ್ಮ ಚಿತ್ರ ತೆರೆಗೆ ಬರುತ್ತಿದೆ ಎಂದು ಹೇಳಿದರು.

ನಾಯಕ ಪ್ರಜ್ಯೋತ್ ಎಸ್.ರಾವ್ ಮಾತನಾಡುತ್ತ ನಾನು ನಟನಾಗಲು ಕಿಚ್ಚ ಸುದೀಪ್ ಅವರೇ ಸ್ಫೂರ್ತಿ. ನನ್ನ ಅಕ್ಕ ಪೂಜಿತಾ ಎಸ್. ರಾವ್ ನನ್ನನ್ನು ಕಲಾವಿದನಾಗಿ ಬೆಳೆಸಲು ಈ ಚಿತ್ರಕ್ಕೆ ಬಂಡವಾಳ ಹಾಕಿದ್ದಾರೆ ಎಂದು ಹೇಳಿದರು. ನಾಯಕಿ ನಿಧಿಗೌಡ ತಮ್ಮ ಪಾತ್ರದ ಬಗ್ಗೆ ಚಿಕ್ಕದಾಗಿ ವಿವರಿಸಿದರು.


ಈಗಿನ ಕಾಲದ ಯುವಜನತೆ ನೋಡಲೇಬೇಕಾದ ಸಿನಿಮಾ ಎಂದು ನಿರ್ಮಾಪಕಿ ಪೂಜಿತಾ ಎಸ್. ರಾವ್ ಹೇಳಿದರು. ಛಾಯಾಗ್ರಾಹಕ ಅಭಿಷೇಕ್, ರೋಹಿತ್ ದನಿ, ಸಹನಿರ್ಮಾಪಕ ಯತೀಶ್ ಕುಮಾರ್, ಐ ಟು ಐ ಇನ್ಫೊಟೆಕ್‌ನ ಶಮಂತ್ ಶೆಟ್ಟಿ, ನಟ ಹರೀಶ್‌ಕುಮಾರ್ ಹಾಗೂ ಕಾರ್ಯಕಾರಿ ನಿರ್ಮಾಪಕ ಲಿಯಾನ್‌ಗೌಡ ಪತ್ರಿಕಾಗೋಷ್ಠಿಯಲ್ಲಿದ್ದರು.



ಸಿನಿಪದಬಂಧ-627



ಉಮ್ಮತ್ತೂರು ಇಂದುಶೇಖರ್
ಮೊ.9880820462



ಹೆಸರು ______

ವಿಳಾಸ ______

ದೂರವಾಣಿ ಸಂಖ್ಯೆ ______

ಎಡದಿಂದ ಬಲಕ್ಕೆ

1. ವಿಶ್ವಕ್ಕೆ ಬೆಳಕು ಚೆಲ್ಲಿದ 12 ನೇ ಶತಮಾನದ ಸಮಾಜ ಸುಧಾರಕ 9
5. ನಮ್ಮ ಸಂಸಾರ 'ಸಂತೋಷದ ಕಡಲು' 6
7. ಹುದುಗಿಟ್ಟ ಸಂಪತ್ತು 2
8. ರಾಜಕುಮಾರ್ ವಿಲಾಸ ಪ್ರಿಯರಿಗೆಲ್ಲ ಅರಸ 6
10. ಡಾ. ರಾಜ್‌ಕುಮಾರ್ – ರೂಪದೇವಿ ಅಭಿನಯದ ಕಾಲ ಪುತಳಿ 6
14. _ _ ಕೋಕಿಲ 2
15. ವಿಷ್ಣುವರ್ಧನ್ – ಭಾರತಿಯ ಚಿನ್ನದ ಹರಿಣಿ ಇಲ್ಲಿ ತಿರುಗಿದೆ 6
17. 'ಒಲವಿನ ಗೆಳೆಯನೇ ನಿನಗೆ ಕೈ ಮುಗಿವೆ.....', ಗೀತೆಯ ಚಿತ್ರ 9

ಮೇಲಿನಿಂದ ಕೆಳಕ್ಕೆ

1. ವಿಷ್ಣುವರ್ಧನ್ ಮಂದಿಯ ಮುಖಂಡ 5
2. ಏಳು ಸಮುದ್ರ 5
3. ದತ್ತ ಚಿತ್ರದ ನಾಯಕಿ 2
4. ವಿಷ್ಣುವರ್ಧನ್ – ರೂಪಿಣಿ ಅಭಿನಯಕ್ಕೆ ಭಾರ್ಗವ ನಿರ್ದೇಶಕ 5
5. ಸುರೇಶ್ ಹೇಬ್ಳಿಕರನಿಗೆ ಆದ ಪೆಟ್ಟು 3
6. ಬೆಲೆಬಾಳುವ ಮಣಿಯನ್ನು ಕೈಯಲ್ಲಿ ಇರಿಸಿಕೊಂಡಿರುವ ಹಾಸ್ಯ ನಟ 4
9. ಅಲಂಕಾರಿಕ ಸ್ತ್ರೀ ವಿಗ್ರಹ 4
10. ಪತಿಯ ಪ್ರಾಣವನ್ನು ಯಮನಿಂದ ಹಿಂದಕ್ಕೆ ಪಡೆದವಳು 5
11. ಎನ್. ಲಕ್ಷ್ಮೀ ನಾರಾಯಣ್ ಅವರ ಗಿರಿಯಲ್ಲಿನ ಸುಮ 5
12. ವಿಷ್ಣುವರ್ಧನ್ – ಸುಹಾಸಿನಿ ಅಭಿನಯದ ಚಿತ್ರ ಇಲ್ಲಿ ತಲೆ ಕೆಳಗು 3
13. ಒಂದು ಬಗೆಯ ವಾದ್ಯ ಹಿಡಿದು ಬಂದ ರವಿಚಂದ್ರನ್ 5
16. ರಾಶಿಗಳಲ್ಲಿ ಕೊನೆಗೆ ಸಿಕ್ಕ ನಟಿ 2

ಸಿನಿ ಪದಬಂಧ 626ರ ಉತ್ತರ

ಮೈ	ಸೂ	ರು	ಮ	ಲ್ಲಿ	ಗೆ		ಸ	ಪ್ತ	ಪ	ದಿ
ಡಿ			ಹಾ		ದ್ದ		ವ			ಲ್
ಯ	ಮ		ನ				ತಿ		ಪಾ	ಪ
ರ್		ಇಂ	ದಿ	ನ	ರಾ	ಮಾ	ಯ	ಣ		ಸಂ
ಟೈ		ದ್ರ			ಜ		ನೆ			ದ್
ಗ	ಜಾ	ನ	ನ		ನ	ಮ್ಮೂ	ರ	ರಾ	ಜ	
ರ್		ಗೆ		ಧೀ	ರ		ಳು		ನು	
		ದ್ದ			ಸಿಂ			ಸ	ಮ	ರ
ಉ	ಗ್ರ	ನ	ರ	ಸಿಂ	ಹ		ರ		ದ	
ಷಾ		ರೇಂ					ವ		ಜೋ	
	ಇಂ	ದ್ರ	ಜಾ		ಮ	ರ	ಳಿ	ಗೂ	ಡಿ	ಗೆ

ವಿಜೇತರು: ರವಿ, ನಂ. 76, 6ನೇ ಕ್ರಾಸ್, ಟಿ.ಕೆ.ಲೇಔಟ್, ಮೈಸೂರು

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

ಮಕ್ಕಳ ಮೊಬೈಲ್ ಚಟದ ಸುತ್ತ 'ಅಡಿಕ್ಷನ್'



ಬೃಂದಾ ಎನ್. ಜಯರಾಮ್



ಇತ್ತೀಚಿನ ದಿನಗಳಲ್ಲಿ ಮಕ್ಕಳು ಮೊಬೈಲ್ ಚಟಕ್ಕೆ ಹೇಗೆಲ್ಲ ಅಡಿಕ್ಟ್ ಆಗುತ್ತಿದ್ದಾರೆ., ಅದರ ಪರಿಣಾಮಗಳೇನು ಎಂಬುದನ್ನು ಹೇಳುವ ಚಿತ್ರ 'ಅಡಿಕ್ಷನ್'. ಎಸ್.ಬಿ.ವಿ. ಪ್ರೊಡಕ್ಷನ್ಸ್ ಅಡಿ 'ರಾಷ್ಟ್ರಪ್ರಶಸ್ತಿ' ವಿಜೇತ ಚಿತ್ರ ನಿರ್ಮಾಪಕ ಮಾಜಿ ಎಂಎಲ್‌ಸಿ ಸಂದೇಶ್ ನಾಗರಾಜ್ ಅವರ ಪುತ್ರಿ ಬೃಂದಾ ಎನ್. ಜಯರಾಮ್ ನಿರ್ಮಾಣದ ಈ ಚಿತ್ರ ಜೂನ್ ತಿಂಗಳಲ್ಲಿ ಬಿಡುಗಡೆಯಾಗಲಿದೆ. ಒಂದಷ್ಟು ನೈಜ ಘಟನೆಗಳನ್ನು ಆಧರಿಸಿ ಈ ಚಿತ್ರದ ಕಥಾ ಹಂದರ ಹೆಣೆಯಲಾಗಿದೆ. ಅಜಯ್ ಕುಮಾರ್ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡಿರುವ ಈ ಚಿತ್ರದ ಟೈಟಲ್ ಟೀಸರ್ ಇತ್ತೀಚೆಗೆ ಬಿಡುಗಡೆಯಾಯಿತು.

ಸುಂದರಕೃಷ್ಣ ಅರಸ್ ಮೊಮ್ಮಗ ಹಾಗೂ ನಾಗೇಂದ್ರ ಅರಸ್ ಅವರ ಮಗ ವಿಧು ಸುಂದರಕೃಷ್ಣ ಅರಸ್ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಅತಿಥಿ ಪಾತ್ರದಲ್ಲಿ ಹಿರಿಯನಟ ರಾಘವೇಂದ್ರ ರಾಜ್‌ಕುಮಾರ್, ವಿಶೇಷ ಪಾತ್ರದಲ್ಲಿ ಡಾ. ಸಿ.ಆರ್. ಚಂದ್ರಶೇಖರ್ ಹಾಗೂ ಲವ್‌ಯು ಮುದ್ದು ಖ್ಯಾತಿಯ ಸಿದ್ದು ಮೂಲಿಮನಿ ಅವರುಗಳು ಕಾಣಿಸಿಕೊಂಡಿದ್ದಾರೆ. ಉಳಿದಂತೆ ರಿಷಿಕ, ಬೇಬಿ ಅಂಕಿತಗೌಡ, ಮಾಸ್ಟರ್ ಆರುಷ್ ಗುಣಕಿಮಠ, ಶಾಮ್‌ಸುಂದರ್, ಸುಂದರ್ ವೀಣಾ, ಹರೀಶ್ ರೈ, ಸಿತಾರಾ, ತನುಶ್ರೀ, ಅನುಪಮಾ ಪಂಚಾಕ್ಷರಿ, ಶೈಲೇಶ್ ನಟಿಸಿದ್ದಾರೆ. ಗುಂಡ್ಲುಪೇಟೆ ಸುರೇಶ್ ಅವರ ಛಾಯಾಗ್ರಹಣ, ದಿನೇಶ್‌ಕುಮಾರ್ ಅವರ ಸಂಗೀತ ಸಂಯೋಜನೆ ಈ ಚಿತ್ರಕ್ಕಿದೆ.

ನಟಿ ಮೈತ್ರಿಯಾಗೌಡ ಈಗ ನಿರ್ಮಾಪಕಿ





ಒಮ್ಮೆ ಬಣ್ಣದ ಲೋಕಕ್ಕೆ ಎಂಟ್ರಿ ಕೊಟ್ಟರೆ ಅದರಿಂದ ಹೊರಬರುವುದು ಅಷ್ಟು ಸುಲಭವಲ್ಲ. ಕೆಲವರು ನಟನೆಯಿಂದ ದೂರ ಉಳಿದರೂ, ಇದೇ ಕ್ಷೇತ್ರದಲ್ಲಿ ಏನಾದರೂ ಒಂದು ಕೆಲಸದಲ್ಲಿ ತೊಡಗಿಕೊಳ್ಳುತ್ತಾರೆ. ಆ ಸಾಲಿಗೆ ನಟಿ ಮೈತ್ರಿಯಾಗೌಡ ಸೇರಿಕೊಳ್ಳುತ್ತಿದ್ದಾರೆ.

ಹೌದು, 'ಮೌರ್ಯ' ಚಿತ್ರದಲ್ಲಿ ಪುನೀತ್ ಸಹೋದರಿಯಾಗಿ ನಟಿಸಿದ್ದ ಮೈತ್ರಿಯಾ ಗೌಡ ಸಾಕಷ್ಟು ಸಿನಿಮಾಗಳಲ್ಲಿ ನಾಯಕಿಯಾಗಿ ನಟಿಸಿದ್ದಾರೆ. ಸ್ವಲ್ಪದಿನಗಳ ಕಾಲ ಅಭಿನಯಕ್ಕೆ ಬ್ರೇಕ್ ನೀಡಿದ್ದ ಅವರು ಇದೀಗ ನಿರ್ಮಾಪಕಿಯಾಗಿ ಚಿತ್ರರಂಗಕ್ಕೆ ಮರಳಿದ್ದಾರೆ.

ಇತ್ತೀಚೆಗೆ ಮೈತ್ರಿಯಾಗೌಡ ಅವರು ಗ್ಲೋಬಲ್ ಟ್ರಸ್ಟ್ ಎಂಬ ಪ್ರೊಡಕ್ಷನ್ ಹೌಸನ್ನು ಆರಂಭಿಸಿದ್ದು, ಆ ಮೂಲಕ ಸಿನಿಮಾ ನಿರ್ಮಾಣಕ್ಕೆ ಮುಂದಾಗಿದ್ದಾರೆ. ನಟ ಅನಿರುದ್ಧ್, ಹಿರಿಯ ನಿರ್ಮಾಪಕ ಉದಯ್ ಕೆ.ಮೆಹ್ತಾ, ವಿಧಾನಪರಿಷತ್ ಸದಸ್ಯ ಶರವಣ ಇವರೆಲ್ಲ ನೂತನ ಪ್ರೊಡಕ್ಷನ್ ಹೌಸ್ ಉದ್ಘಾಟನಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮೈತ್ರಿಯಾಗೌಡ, ನನ್ನ ಹುಟ್ಟುಹಬ್ಬದ ದಿನ ನಮ್ಮ ಹೊಸ ಪ್ರೊಡಕ್ಷನ್ ಸಂಸ್ಥೆಯನ್ನು ಶುರುಮಾಡಿದ್ದೇನೆ. ಚಿಕ್ಕವಳಿದ್ದಾಗ ಮುಂದೆ ಏನಾಗುತ್ತಿಯಾ ಅಂತ ಯಾರಾದರೂ ಕೇಳಿದರೆ, ನಾನು ನಟಿಯಾಗಬೇಕು, ಸಮಾಜಸೇವೆ ಮಾಡಬೇಕು ಎಂದು ಹೇಳುತ್ತಿದ್ದೆ. ಈಗಾಗಲೇ ನಾಯಕಿಯಾಗಿ ಗುರುತಿಸಿಕೊಂಡಿದ್ದು, ಇದೀಗ ನಿರ್ಮಾಪಕಿಯಾಗಿ ಹೊಸ ಹೆಜ್ಜೆ ಇಡುತ್ತಿದ್ದೇನೆ. ನಮ್ಮ ಸಂಸ್ಥೆಯಲ್ಲಿ ಅವಕಾಶವಂಚಿತ ಪ್ರತಿಭಾವಂತರಿಗೆ ಅವಕಾಶ ನೀಡುತ್ತಿದ್ದೇವೆ. ಜತೆಗೆ ಅನಾಥಾಶ್ರಮ, ಗೋಶಾಲೆ, ವೃದ್ಧಾಶ್ರಮ, ಬೀದಿನಾಯಿಗಳ ಸಂರಕ್ಷಣೆ ಇನ್ನಿತರೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಈಗಾಗಲೇ ಸಿನಿಮಾಗಾಗಿ ಎರಡು ಕಥೆಗಳನ್ನು ಕೇಳಿದ್ದೇನೆ. ಚಿತ್ರಕ್ಕಾಗಿ ಹೊಸ ಕಲಾವಿದರ ಆಯ್ಕೆ ಪ್ರಕ್ರಿಯೆ ನಡೆಯುತ್ತಿದೆ. ಮುಂದಿನ ದಿನಗಳಲ್ಲಿ ಹೊಸ ಚಿತ್ರದ ಬಗ್ಗೆ ತಿಳಿಸುತ್ತೇನೆ ಎಂದು ಹೇಳಿದರು.

ಬಸವಾದಿ ಶರಣರ 12ನೇ ಶತಮಾನ ಬೆಳಕಿನ ಯುಗ

ತುಮಕೂರಿನ ಸಿದ್ಧಗಂಗಾ ಮಠದ ಸಿದ್ಧಲಿಂಗ ಸ್ವಾಮೀಜಿ ಬಣ್ಣನೆ

ಬೆಟ್ಟದಪುರ, ಮೇ 21– ನಾವು ಯಾವ ದೃಷ್ಟಿಕೋನದಲ್ಲಿ ನೋಡಿದರೂ ಬಸವಾದಿ ಶರಣರ 12ನೇ ಶತಮಾನ ಬೆಳಕಿನ ಯುಗವಾಗಿದೆ ಎಂದು ತುಮಕೂರಿನ ಸಿದ್ಧಗಂಗಾ ಮಠದ ಸಿದ್ಧಲಿಂಗ ಸ್ವಾಮೀಜಿ ತಿಳಿಸಿದರು.

ಪಿರಿಯಾಪಟ್ಟಣ ತಾಲೂಕಿನ ರಾವಂದೂರು ಗ್ರಾಮದಲ್ಲಿ ಬಸವ ಬಳಗದಿಂದ ನಡೆದ ಬಸವ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸಾಮಾಜಿಕ, ಆರ್ಥಿಕ, ರಾಜಕೀಯ ಹಾಗೂ ಸಾಹಿತ್ಯ ಸೇರಿದಂತೆ ಎಲ್ಲಾ ರಂಗಕ್ಕೂ ಬೆಳಕಿನ ನೀಡಿದ ಬಸವಾದಿ ಶರಣರ 12ನೇ ಶತಮಾನ ಅದ್ಭುತ ಕಾಲವಾಗಿದೆ. ಪ್ರಸ್ತುತ ಜನ ಸಾಮಾನ್ಯರಿಗೆ ಬಸವಣ್ಣನವರ ತತ್ವಾದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಅರಿವು ಮೂಡಿಸಬೇಕಿದೆ. ಇದರಿಂದ ಉತ್ತಮ ಬದುಕು ನಡೆಸಲು ಸಾಧ್ಯವಾಗುತ್ತದೆ ಎಂದ ಅವರು, ಉತ್ತಮ ಸಮಾಜ ನಿರ್ಮಿಸುವಲ್ಲಿ ಶಿವಶರಣೆಯರ ಕೊಡುಗೆ ಅಪಾರ. ಇಂದು ಬಸವಣ್ಣನವರನ್ನು ಇಡೀ ವಿಶ್ವವೇ ಕೊಂಡಾಡುತ್ತಿದೆ ಎಂದರು.

ಪಾಂಡವಪುರ ಬೇಬಿ ಮಠದ ತ್ರಿನೇತ್ರ ಮಹಾಂತ ಶಿವಯೋಗಿ ಸ್ವಾಮೀಜಿ ಮಾತನಾಡಿ, ಬೇರೆ ದೇಶದ ಜನರನ್ನು ನಾವು ಮಂಗನಿಂದ ಮಾನವ ಎನ್ನುತ್ತೇವೆ.



ಬಸವ ಜಯಂತಿಯನ್ನು ಸಿದ್ಧಗಂಗಾ ಮಠದ ಸಿದ್ಧಲಿಂಗ ಸ್ವಾಮೀಜಿ ಉದ್ಘಾಟಿಸಿದರು.

ಆದರೆ ಭಾರತೀಯರಾದ ನಾವು ದೇವತೆಗಳು, ಋಷಿ ಮುನಿಗಳು, ಸಾಧು ಸಂತರು ಹಾಗೂ ಶಿವಶರಣರ ಅನುಯಾಯಿಗಳಾಗಿದ್ದೇವೆ. ಆದ್ದರಿಂದ ಭಾರತವನ್ನು ಸ್ವರ್ಗದ ನಾಡು ಎನ್ನಲಾಗುತ್ತದೆ. ಭಾರತ ರಾಗ, ದ್ವೇಷ, ತಾರ ತಮ್ಯವಿಲ್ಲದ ದೇಶವಾಗಿದ್ದು, ಸಹೋದರತ್ವ ಭಾವನೆ ಇರುವ ಪ್ರಪಂಚದ ಅತ್ಯುತ್ತಮ ದೇಶವಾಗಿದೆ. ನಮ್ಮ ಅಭಿವೃದ್ಧಿಯ ಜೊತೆಗೆ ಇತರ ದೇಶದ ಅಭಿವೃದ್ಧಿಗೂ ಕೈ ಜೋಡಿಸುವ ದೇಶವಿದ್ದರೆ ಅದು ಭಾರತ ಮಾತ್ರ. ಇದಕ್ಕೆ 12ನೇ ಶತಮಾನದ ಶಿವಶರಣರ ಮಾರ್ಗ ದರ್ಶನವೇ ಮೂಲ ಕಾರಣ. ಆದ್ದರಿಂದ ಶಿವಶರಣರ ವಿಚಾರ ಧಾರೆಗಳು ಪ್ರಸ್ತುತ ಸಮಾಜಕ್ಕೆ ಅಗತ್ಯವಿದೆ ಎಂದರು.


ಗಾವಡಗೆರೆ ಮಠದ ನಟರಾಜ ಸ್ವಾಮೀಜಿ ಮಾತನಾಡಿ, ಪ್ರಸ್ತುತ ಎಲ್ಲಾ ಸಮಾಜದವರಿಗೆ ಬಸವಣ್ಣನ ವಿಚಾರಗಳ ಅರಿವು ಅಗತ್ಯವಿದೆ. ಜನರು ಇಂದು ಗೊಂದಲದಲ್ಲಿ ತಮ್ಮ ಜೀವನ ನಡೆಸುತ್ತಿದ್ದಾರೆ. ಹೀಗಾಗಿ ನೆಮ್ಮದಿ ಹಾಗೂ ಉತ್ತಮ ಬದುಕಿಗೆ ಶಿವಶರಣರ ವಿಚಾರಧಾರೆಗಳು ಅಗತ್ಯ ಎಂದರು.

ಇದೇ ವೇಳೆ ಕೆಂಪೇಗೌಡ ಪ್ರಶಸ್ತಿ ವಿಜೇತ, ಪತ್ರಕರ್ತ ಪ್ರವೀಣ್ ಹಾಗೂ ಕಾರ್ಯಕ್ರಮ ಯಶಸ್ಸಿಗೆ ಶ್ರಮಿಸಿದ ದಾನಿಗಳು ಮತ್ತು ಯುವಕರನ್ನು ಸನ್ಮಾನಿಸಲಾಯಿತು. ಉಕ್ಕಿನಕಂತೆ ಮಠದ ಸಾಂಬ ಸದಾಶಿವ ಸ್ವಾಮೀಜಿ ಮಾತನಾಡಿದರು. ಅಂಕನಹಳ್ಳಿ ಮಠದ ವಿಜಯ ಕುಮಾರ ಸ್ವಾಮೀಜಿ, ದಿಂಡಗಾಡು ಮಠದ ನಟರಾಜ ಸ್ವಾಮೀಜಿ, ಮಾದಾಪುರದ ಮಲ್ಲಿಕಾರ್ಜುನ ಸ್ವಾಮೀಜಿ, ಕರ್ಪೂರವಳ್ಳಿ ಮಠದ ಅಭಿನವ ಚಂದ್ರಶೇಖರ ಸ್ವಾಮೀಜಿ, ಕಲ್ಮಟ್ಟದ ಮಹಾಂತ ಸ್ವಾಮೀಜಿ, ತೊರೆನೂರು ಮಲ್ಲೇಶ್ವರ ಸ್ವಾಮೀಜಿ ಹಾಗೂ ತಾಲೂಕು ವೀರಶೈವ ಸಮಾಜದ ಅಧ್ಯಕ್ಷ ಪರಮೇಶ್, ಕುಮಾರ್, ವಿಜಯ್, ಡಾ.ಆರ್.ಡಿ.ಸತೀಶ್, ಕೆ.ಹೊಲದಪ್ಪ ಆರ್.ಟಿ. ಸತೀಶ್, ಮಾಜಿ ಜಿಪಂ ಸದಸ್ಯ ಚಿಕ್ಕವೀರಪ್ಪ, ಕೂರ್ಗಲ್ ಶಿವಕುಮಾರ್ ಸೇರಿದಂತೆ ಇತರರಿದ್ದರು.

> ಕನ್ನಡ ಸಾಹಿತ್ಯ ಇಂದು ಶ್ರೀಮಂತಗೊಂಡಿದೆ ಎಂದರೆ ಅದಕ್ಕೆ ಮೂಲ ಕಾರಣ ಬಸವಣ್ಣನವರ ವಚನಗಳು. ಇಡೀ ವಿಶ್ವಕ್ಕೆ ಮೊದಲ ಸಂಸತ್ತನ್ನು ನೀಡಿದ ಬಸವಣ್ಣನವರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಂಡು ಪಾಲಿಸಬೇಕು. ಭಾರತ ದೇಶ ಒಂದು ಆಧ್ಯಾತ್ಮಿಕ ಕೇಂದ್ರವಾಗಿದೆ. ಇದಕ್ಕೆ ಶಿವಶರಣರ ಕೊಡುಗೆ ಅಪಾರ. – ಮೋಕ್ಷಪತಿ ಸ್ವಾಮೀಜಿ, ರಾವಂದೂರು ಮುರುಘ ಮಠ.

ರಾಜ್ಯಾದ್ಯಂತ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಆಚರಣೆಗೆ ಒತ್ತಾಯ

ತಿ.ನರಸೀಪುರ, ಮೇ 21– ರಾಜ್ಯಾದ್ಯಂತ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಆಚರಿಸಲು ಆದೇಶಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕನ್ನಡ ಸಾಂಸ್ಕೃತಿಕ ಪರಿಷತ್ ಅಧ್ಯಕ್ಷ ಎಸ್.ಕೆ. ರಾಜೂಗೌಡ ಒತ್ತಾಯಿಸಿದರು.



ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿಯನ್ನು ಆಚರಿಸುತ್ತಿರುವುದು ಸರಿಯಷ್ಟೆ. ಆದರೆ ಮೈಸೂರು, ಬೆಂಗಳೂರು ಸೇರಿದಂತೆ ಕೆಲ ಜಿಲ್ಲೆಗಳಲ್ಲಿ ಮಾತ್ರ ಜಯಂತಿ ಆಚರಿಸಲಾಗುತ್ತಿದೆ. ಹೀಗಾಗಿ ರಾಜ್ಯ ಸರ್ಕಾರ ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಲ್ಲೂ ಜಿಲ್ಲಾಡಳಿತ ಮತ್ತು ಕನ್ನಡ ಸಂಸ್ಕೃತಿ ಇಲಾಖೆ ವತಿಯಿಂದ ಜೂ.4 ರಂದು ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿಯನ್ನು ಆಚರಿಸಬೇಕು. ಅಲ್ಲದೇ ಮೈಸೂರು ಜಿಲ್ಲಾಡಳಿತವು ನಾಲ್ವಡಿರವರ ಆಶಯಕ್ಕೆ ಪೂರಕವಾಗಿ ಕೆಲಸ ಮಾಡುತ್ತಿರುವವರನ್ನು ಗುರುತಿಸಿ ಅವರ ಹೆಸರಿನಲ್ಲಿ ಪ್ರಶಸ್ತಿ ನೀಡಿ ಗೌರವಿಸುತ್ತಿರುವುದನ್ನು ಪ್ರಸ್ತಾಪಿಸಿ, ಆ ಪ್ರಶಸ್ತಿಯನ್ನು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜಯಂತಿಯಂದು ನೀಡದೇ ಯಾವುದೋ ಬೇರೆ ಬೇರೆ ಕಾರ್ಯಕ್ರಮಗಳಲ್ಲಿ ನೀಡುತ್ತಿರುವುದು ಸರಿಯಲ್ಲ. ಹೀಗಾಗಿ ಅವರ ಜಯಂತಿಯಂದೇ ಪ್ರಶಸ್ತಿ ವಿತರಿಸಬೇಕು ಎಂದು ಒತ್ತಾಯಿಸಿದರು.

ಮೈಸೂರು ಅರಮನೆ ಮುಂಭಾಗ ನಾಲ್ವಡಿ ಜಯಂತಿಯನ್ನು ಜೂ.4 ರಂದು ಖುದ್ದು ಮುಖ್ಯಮಂತ್ರಿಗಳ ಉಪಸ್ಥಿತಿಯಲ್ಲಿ ಆಚರಿಸುವಂತೆ ಮತ್ತು ನಾಲ್ವಡಿ ಹೆಸರಿನಲ್ಲಿ ನೀಡುವ ಪ್ರಶಸ್ತಿಯನ್ನು ರಾಜ್ಯದ ಮಟ್ಟದ ಪ್ರಶಸ್ತಿಯಾಗಿ ಸರ್ಕಾರ ಘೋಷಿಸಿ, ಸಾಧಕರಿಗೆ 1 ಲಕ್ಷ ರೂ.ಗಳ ಬಹುಮಾನ ನೀಡುವಂತೆ ಆಗ್ರಹಿಸಿದರು.

ಮನೆ ಬಾಗಿಲಿಗೆ ಔಷಧ ವಿತರಣೆ ನಿಷೇಧಕ್ಕೆ ಮನವಿ

ತಿ.ನರಸೀಪುರ, ಮೇ 21– ಆನ್‌ಲೈನ್ ಮೂಲಕ ಅನಧಿಕೃತ ಔಷಧಿ ಮಾರಾಟ ಹಾಗೂ ಮನೆ ಬಾಗಿಲಿಗೆ ಔಷಧ ವಿತರಣೆ ಸೇವೆ ನಿಷೇಧಿಸುವಂತೆ ಸರ್ಕಾರಕ್ಕೆ ತಹಸೀಲ್ದಾರ್ ಸುರೇಶ್ ಆಚಾರ್ ಮೂಲಕ ತಾಲೂಕು ಮೆಡಿಕಲ್ ಸ್ಟೋರ್ ಮಾಲೀಕರು ಮನವಿ ಸಲ್ಲಿಸಿದರು.

ತೋಳಿಗೆ ಕಪ್ಪು ಬಟ್ಟೆ ಧರಿಸಿ ಪ್ರತಿಭಟನೆ ನಡೆಸಿದ ಸಂಘದ ಸದಸ್ಯ ಪೂಜಿತ್ ಮೆಡಿಕಲ್ ಕುಮಾರ್ ಮಾತನಾಡಿ, ಕಳೆದ ಹತ್ತಾರು ವರ್ಷಗಳಿಂದ ಪರವಾನಗಿ ಪಡೆದು ಔಷಧ ಅಂಗಡಿ ನಡೆಸುತ್ತಿದ್ದು, ಸಾರ್ವಜನಿಕರಿಗೆ ನಿಯಮಾನುಸಾರ ಔಷಧಿಗಳನ್ನು ಪೂರೈಸುತ್ತಾ ಬಂದಿದ್ದೇವೆ. ಇತ್ತೀಚಿನ ದಿನಗಳಲ್ಲಿ ವಿವಿಧ ಆನ್‌ಲೈನ್ ವೇದಿಕೆಗಳು ಹಾಗೂ ಅಪ್ಲಿಕೇಶನ್‌ಗಳ ಮೂಲಕ ವೈದ್ಯರ ಚೀಟಿ ಇಲ್ಲದೇ ಔಷಧಿಗಳನ್ನು ಮನೆ ಬಾಗಿಲಿಗೆ ತಲುಪಿಸುವ ವ್ಯವಸ್ಥೆ ಹೆಚ್ಚಾಗುತ್ತಿದೆ. ಇದರ ಪರಿಣಾಮ ನಿಯಮ ಬಾಹಿರ ಔಷಧ ಮಾರಾಟ ನಡೆಯುವ ಸಾಧ್ಯತೆ ಹೆಚ್ಚಾಗಿದೆ. ಅಲ್ಲದೇ ನಕಲಿ ಅಥವಾ ಅವಧಿ ಮೀರಿದ ಔಷಧಿಗಳು ಜನರಿಗೆ ತಲುಪುವ ಅಪಾಯವಿದೆ ಎಂದರು.

ವೈದ್ಯರ ಸಲಹೆ ಇಲ್ಲದೆ ಔಷಧಿ ಬಳಕೆ ಹೆಚ್ಚಾಗಿ ಸಾರ್ವಜನಿಕ ಆರೋಗ್ಯಕ್ಕೆ ಹಾನಿಯಾಗುತ್ತಿದೆ. ಸ್ಥಳೀಯ ಪರವಾನಗಿ ಪಡೆದ ಔಷಧಿ ಅಂಗಡಿಗಳಿಗೆ ಆರ್ಥಿಕ ನಷ್ಟ ಉಂಟಾಗುತ್ತಿದೆ. ಸರ್ಕಾರದ ಔಷಧಿ ಮಾರಾಟ ನಿಯಮಾವಳಿಗಳ ಉಲ್ಲಂಘನೆ ನಡೆಯುತ್ತಿರುವ ಬಗ್ಗೆ ಅನುಮಾನ ಇದೆ ಎಂದರು.


ಸ್ಟೋರ್ಸ್ ಮಾಲೀಕರು ತಹಸೀಲ್ದಾರ್‌ಗೆ ಮನವಿ ಸಲ್ಲಿಸಿದರು.

ಜಿಲ್ಲೆ ವ್ಯಾಪ್ತಿ ನಡೆಯುತ್ತಿರುವ ಆನ್‌ಲೈನ್ ಔಷಧಿ ವಿತರಣೆ ಕಾನೂನು ಬದ್ಧತೆ ಪರಿಶೀಲಿಸಬೇಕು. ಔಷಧಿ ಮತ್ತು ಸೌಂದರ್ಯ ವಸ್ತುಗಳ ಕಾಯ್ದೆ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು. ವೈದ್ಯರ ಚೀಟಿ ಇಲ್ಲದೆ ಔಷಧಿ ವಿತರಿಸುವವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಸ್ಥಳೀಯ ಔಷಧಿ ವ್ಯಾಪಾರಿಗಳೊಂದಿಗೆ ಸಭೆ ನಡೆಸಿ ಸಮಸ್ಯೆಗಳಿಗೆ ಪರಿಹಾರ ಒದಗಿಸಬೇಕು. ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಸೂಕ್ತ ಕ್ರಮ ಕೈಗೊಳ್ಳುವಂತೆ ವಿನಂತಿಸುತ್ತೇವೆ ಎಂದರು.

ಈ ವೇಳೆ ಮಹದೇವ್, ಮೆಡಿಕಲ್ ಮಧು, ಪೂಣ್ಣಪ್ಪ ಮೆಡಿಕಲ್ ಮಂಜುನಾಥ್, ಸಾಗರ್ ಮೆಡಿಕಲ್ ಆಸಿಫ್ ಹಾಜರಿದ್ದರು.

ನಿರ್ಗತಿಕರು, ಬಡವರಿಗಾಗಿ ಜನಮಂಗಳ ಕಾರ್ಯಕ್ರಮ

ಧರ್ಮಸ್ಥಳ ಸಂಸ್ಥೆ ತಾಲೂಕು ಯೋಜನಾಧಿಕಾರಿ ಕೆ.ಸದಾನಂದ ದೇವಾಡಿಗ

ಕೆ.ಆರ್.ನಗರ, ಮೇ 21– ನಿರ್ಗತಿಕರು, ಬಡ ಕುಟುಂಬಗಳು ಸಮಾಜದಲ್ಲಿ ಇತರರಂತೆ ಬದುಕನ್ನು ಕಟ್ಟಿಕೊಳ್ಳಬೇಕೆಂಬ ಉದ್ದೇಶದಿಂದ ಧರ್ಮಸ್ಥಳ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರು ಜನಮಂಗಳ ಕಾರ್ಯಕ್ರಮ ರೂಪಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕು ಯೋಜನಾಧಿಕಾರಿ ಕೆ.ಸದಾನಂದ ದೇವಾಡಿಗ ತಿಳಿಸಿದರು.

ತಾಲೂಕಿನ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವ್ಯಾಪ್ತಿಯ ಪಟ್ಟಣದ ಆಂಜನೇಯ ಬ್ಲಾಕ್, ಮಧುವನಹಳ್ಳಿ ಬಡಾವಣೆ ಹಾಗೂ ಮಾವತ್ತೂರು ಗ್ರಾಮದ ಮೂವರು ಫಲಾನುಭವಿಗಳಿಗೆ ಜನಮಂಗಳ ಕಾರ್ಯಕ್ರಮದಡಿ ಮಂಜೂರಾಗಿರುವ ವಾಟರ್ ಬೆಡ್, ವ್ಹೀಲ್‌ಚೇರ್, ವಾಕಿಂಗ್ ಸ್ಟಿಕ್‌ಗಳನ್ನು ವಿತರಿಸಿ ಮಾಡಿ ಮಾತನಾಡಿದ ಅವರು, ಸಮಾಜದಲ್ಲಿ ಬದುಕು ಕಟ್ಟಿಕೊಳ್ಳಲಾಗದೆ ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ನಿರ್ಗತಿಕ ಕುಟುಂಬಗಳನ್ನು ಗುರ್ತಿಸಿ ಅವರಿಗೆ ಬೇಕಾದ ಸೌಲಭ್ಯಗಳನ್ನು ಒದಗಿಸುವ ಕೆಲಸವನ್ನು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಾಡುತ್ತಿದೆ ಎಂದು ತಿಳಿಸಿದರು.


ಫಲಾನುಭವಿಗಳಿಗೆ ವಾಟರ್ ಬೆಡ್, ವ್ಹೀಲ್‌ಚೇರ್, ವಾಕಿಂಗ್ ಸ್ಟಿಕ್‌ಗಳನ್ನು ವಿತರಿಸಲಾಯಿತು.

ರಾಜ್ಯದ ಒಂದು ಕೋಟಿಗೂ ಅಧಿಕ ಜನರಿಗೆ ಧರ್ಮಸ್ಥಳ ಯೋಜನೆಯ ಲಾಭ ತಲುಪಿದೆ. ವೈದ್ಯಕೀಯ ತರಬೇತಿ, ಉಚಿತ ವಿವಾಹ ಕಾರ್ಯಕ್ರಮದಂತಹ ಅನೇಕ ಮಾನವೀಯ ಯೋಜನೆ ನಡೆಸುತ್ತಿದ್ದು, ರಾಜ್ಯದ ವಿವಿಧ ಭಾಗದಲ್ಲಿ ಕೋಟಿಗೂ ಅಧಿಕ ಮೊತ್ತದ ಉಪಕರಣಗಳನ್ನು ನೀಡಲಾಗಿದೆ ಎಂದರು.

ವಿಕಲಾಂಗರಿಗೆ, ಅನಾರೋಗ್ಯ ಪೀಡಿತರಿಗೆ, ಸಂಕಷ್ಟದಲ್ಲಿರುವವರಿಗೆ ಹಣಕಾಸಿನ ನೆರವು ನೀಡಿದ್ದು, ಅನೇಕ ಜನೋಪಯೋಗಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಯೋಜನೆ ಪ್ರಯೋಜನ ಪಡೆದವರು ಸದುಪಯೋಗ ಪಡೆದುಕೊಳ್ಳಬೇಕು. ನೀವು ಅಭಿವೃದ್ಧಿ ಹೊಂದಿದರೆ ಅದು ಹೆಗ್ಗಡೆಯವರಿಗೆ ಗೌರವ ಪುಣ್ಯ ಲಭಿಸಿದಂತೆ ಎಂದರು.

ಪುರಸಭೆ ಮಾಜಿ ಅಧ್ಯಕ್ಷ ಕೋಳಿ ಪ್ರಕಾಶ್, ಗ್ರಾಮದ ಮುಖಂಡರಾದ ಹೇಮಂತ್ ಕುಮಾರ್, ಸಣ್ಣೇಗೌಡ, ರವಿಕುಮಾರ್, ಗೋಪಾಲರಾಜ್ ಅರಸ್, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಮೇಲ್ವಿಚಾರಕರಾದ ರಜನಿಕಾಂತ್, ರವಿ, ಹರ್ಷಿತ್, ಕೃಷಿ ಮೇಲ್ವಿಚಾರಕ ಮಹದೇವಸ್ವಾಮಿ ಸೇರಿದಂತೆ ಅನೇಕರಿದ್ದರು.

ಚುಂಚನಕಟ್ಟೆ ಹೋಬಳಿ ವಿವಿಧೆಡೆ

ಕೆಟ್ಟು ನಿಂತ ಶುದ್ಧ ಕುಡಿಯುವ ನೀರಿನ ಘಟಕಗಳು

- ತುಕ್ಕು ಹಿಡಿಯುತ್ತಿರುವ ಯಂತ್ರೋಪಕರಣಗಳು
- ಲಕ್ಷಾಂತರ ರೂ. ನೀರಿನಲ್ಲಿ ಹೋಮ
- ಶುದ್ಧ ಕುಡಿಯುವ ನೀರು ಸಿಗದೇ ಸಾರ್ವಜನಿಕರ ಪರದಾಟ

ಚುಂಚನಕಟ್ಟೆ, ಮೇ 21– ಸಾರ್ವಜನಿಕರಿಗೆ ಅಶುದ್ಧ ಹಾಗೂ ಫ್ಲೋರೈಡ್‌ಯುಕ್ತ ನೀರು ಪೂರೈಕೆ ತಪ್ಪಿಸಲು ಸರ್ಕಾರದ ವತಿಯಿಂದ ನಿರ್ಮಿಸಿರುವ ಶುದ್ಧ ಕುಡಿಯುವ ನೀರಿನ ಘಟಕಗಳು ಕೆಟ್ಟು ನಿಂತು ದುರಸ್ತಿ ಕಾಣದೆ ತುಕ್ಕು ಹಿಡಿಯುತ್ತಿದ್ದು, ಈ ಬಗ್ಗೆ ಗಮನ ಹರಿಸಬೇಕಾದ ಇಲಾಖೆ ಮೌನಕ್ಕೆ ಶರಣಾಗಿದೆ.

ಈ ಅವ್ಯವಸ್ಥೆಯಿಂದ ಸಾಲಿಗ್ರಾಮ ತಾಲೂಕಿನ ಚುಂಚನಕಟ್ಟೆ ಹೋಬಳಿಗೆ ಸೇರಿದ 4 ಗ್ರಾಮಗಳಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ತಲಾ 10 ಲಕ್ಷ ರೂ.ಗೂ ಹೆಚ್ಚು ವೆಚ್ಚದಲ್ಲಿ ನಿರ್ಮಿಸಿರುವ 5 ಶುದ್ಧ ಕುಡಿಯುವ ನೀರಿನ ಘಟಕಗಳು ಕೆಟ್ಟು ಹೋಗಿ ಅನೇಕ ತಿಂಗಳು ಕಳೆದರೂ, ದುರಸ್ತಿಗೆ ಅಧಿಕಾರಿಗಳು ಕ್ರಮ ವಹಿಸದ ಹಿನ್ನೆಲೆಯಲ್ಲಿ ಈ ಘಟಕಗಳು ಇದ್ದು ಇಲ್ಲದಂತಾಗಿದೆ.

ಇಲ್ಲಿನ ಶ್ರೀರಾಮಪುರ, ಸಾಲೇಕೊಪ್ಪಲು, ಹನಸೋಗೆ ಗ್ರಾಮಗಳಲ್ಲಿ ತಲಾ ಒಂದೊಂದು ಘಟಕ ಮತ್ತು ಕುಪ್ಪೆ ಗ್ರಾಮದಲ್ಲಿ 2 ಶುದ್ಧ ಕುಡಿಯುವ ನೀರಿನ ಘಟಕಗಳು ಕೆಟ್ಟು ನಿಂತಿದ್ದು, ಇವುಗಳ ನಿರ್ವಹಣೆಕ್ಕೆ ಖರ್ಚು ಮಾಡಿರುವ ಲಕ್ಷಾಂತರ ರೂ. ನೀರಿನಲ್ಲಿ ಹೋಮ ಮಾಡಿದಂತಾಗಿದೆ.

2 ಮತ್ತು 5 ರೂ. ನೀಡಿ 25 ಲೀಟರ್ ಶುದ್ಧ ಕುಡಿಯುವ ನೀರಿನ ಸೌಲಭ್ಯ ಪಡೆಯುತ್ತಿದ್ದ ಸಾರ್ವಜನಿಕ ಕುಡಿಯುವ ನೀರಿನ ಘಟಕಗಳು ಕೆಟ್ಟಿರುವ ಪರಿಣಾಮ ಸಾರ್ವಜನಿಕರು ಬೇರೆ ಗ್ರಾಮಗಳಿಗೆ ಹೋಗಿ ಶುದ್ಧ ಕುಡಿಯುವ ನೀರಿನ ಘಟಕದಿಂದ ನೀರು ತರುವ ಪರಿಸ್ಥಿತಿ ಎದುರಾಗಿದೆ. ಈ ಘಟಕದಲ್ಲಿನ ಯಂತ್ರೋಪಕರಣಗಳನ್ನು ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ಇಲಾಖೆಯವರು ದುರಸ್ತಿ ಪಡಿಸದ ಕಾರಣ ಇವುಗಳು ತುಕ್ಕು ಹಿಡಿದು ಹಾಳಾಗುತ್ತಿದ್ದು, ಜೊತೆಗೆ ಸುತ್ತಮುತ್ತಲೂ ಗಿಡಗಂಟಿಗಳು ಬೆಳೆದು ಅನೈರ್ಮಲ್ಯ ತಾಂಡವವಾಡುತ್ತಿದ್ದು, ಘಟಕವು ಹಾವು, ಚೇಳುಗಳ ಆವಾಸ ತಾಣವಾಗಿ ಪರಿವರ್ತನೆಯಾಗಿದೆ.

> ಈ ಘಟಕಗಳು ಕೆಟ್ಟು ನಿಂತಾಗ ಇವುಗಳನ್ನು ದುರಸ್ತಿ ಪಡಿಸಬೇಕಾದ ಸಂಬಂಧಪಟ್ಟ ಅಧಿಕಾರಿಗಳು ಇದಕ್ಕೂ ತಮಗೂ ಸಂಬಂಧ ಇಲ್ಲ ಎಂಬಂತೆ ವರ್ತಿಸುತ್ತಿರುವುದು ಈ ಘಟಕಗಳು ತುಕ್ಕು ಹಿಡಿಯಲು ಕಾರಣವಾಗಿದೆ. ಹೀಗಾಗಿ ತಕ್ಷಣ ಇವುಗಳನ್ನು ದುರಸ್ತಿ ಪಡಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿ ಕೊಡಲಿ. –ಎಸ್.ಡಿ.ಪ್ರಸನ್ನ, ಶ್ರೀರಾಮಪುರ ಡೇರಿ ಮಾಜಿ ಅಧ್ಯಕ್ಷ.


ಶ್ರೀರಾಮಪುರ ಗ್ರಾಮದಲ್ಲಿ ಕೆಟ್ಟು ನಿಂತಿರುವ ಶುದ್ಧ ಕುಡಿಯುವ ನೀರಿನ ಘಟಕ.

ಇವುಗಳನ್ನು ಕಾಲ ಕಾಲಕ್ಕೆ ಸೂಕ್ತ ನಿರ್ವಹಣೆ ಮಾಡದ ಪರಿಣಾಮ ಕೆಲವು ಘಟಕದಲ್ಲಿ ಅಳವಡಿಸಲಾಗಿರುವ ಗಾಜುಗಳು ಒಡೆದು ಹೋಗಿದ್ದು, ಯಾರು ಬೇಕಾದರೂ ಈ ಘಟಕದ ಒಳಗೆ ಪ್ರವೇಶಿಸಬಹುದಾಗಿದೆ. ಅಲ್ಲದೇ ಬೀದಿ ನಾಯಿಗಳು ಇವುಗಳನ್ನು ತಮ್ಮ ತಂಗುದಾಣವನ್ನಾಗಿ ಮಾಡಿಕೊಂಡಿವೆ.

ಹಳಿಯೂರಲ್ಲಿ ನಾಪತ್ತೆಯಾದ ಘಟಕ: ಸಾಲಿಗ್ರಾಮ ತಾಲೂಕಿನ ಹಳಿಯೂರು ಗ್ರಾಮದಲ್ಲಿ ಈ ಹಿಂದೆ ಶಾಸಕರಾಗಿದ್ದ ಸಾ.ರಾ.ಮಹೇಶ್ ಅವರ ಅವಧಿಯಲ್ಲಿ ಮಂಜೂರಾಗಿದ್ದ ಶುದ್ಧ ನೀರಿನ ಘಟಕವನ್ನು ಗ್ರಾಮದ ಶಾಲೆಯ ಎದುರು ನಿರ್ಮಿಸಿದ್ದು, ಇದರಿಂದ ಸಾರ್ವಜನಿಕರಿಗೆ ಸಾಕಷ್ಟು ಅನುಕೂಲವಾಗಿತ್ತು. ಆದರೆ ಇದೀಗ ಆ ಘಟಕವನ್ನು ತೆರವು ಮಾಡಲಾಗಿದ್ದು, ಘಟಕದಲ್ಲಿದ್ದ ಲಕ್ಷಾಂತರ ರೂ. ಬೆಲೆ ಬಾಳುವ ಯಂತ್ರೋಪಕರಣಗಳು ಸೇರಿದಂತೆ ಇಡೀ ಘಟಕವೇ ನಾಪತ್ತೆಯಾಗಿದೆ. ಇದರ ಬಗ್ಗೆ ಯಾವುದೇ ಮಾಹಿತಿ ಇಲ್ಲದಂತಾಗಿದ್ದು, ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಘಟಕ ಎಲ್ಲಿ ಹೋಯಿತು ಎಂಬ ಮಾಹಿತಿ ನೀಡುತ್ತಿಲ್ಲ ಎಂಬುದು ಗ್ರಾಮಸ್ಥರ ಆರೋಪವಾಗಿದೆ.

ಕೃಷಿ ಇಲಾಖೆಯ ಕೃಷಿ ಮಾಹಿತಿ ರಥಕ್ಕೆ ಚಾಲನೆ

ಹೆಚ್.ಡಿ.ಕೋಟೆ, ಮೇ 21– ತಾಲೂಕಿನ ಡಿ.ಬಿ.ಕುಪ್ಪೆ ಗ್ರಾಪಂ ವ್ಯಾಪ್ತಿಯಲ್ಲಿ ಕೃಷಿ ಇಲಾಖೆಯ ಕೃಷಿ ಮಾಹಿತಿ ರಥಕ್ಕೆ ಶಾಸಕ ಅನಿಲ್ ಚಿಕ್ಕಮಾದು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ನಂತರ ಮಾತನಾಡಿದ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಪ್ರಸಾದ್, ಕೃಷಿ ಇಲಾಖೆಯಿಂದ ದೊರೆಯುವ ಸೌಲಭ್ಯಗಳು, ಮುಸುಕಿನ ಜೋಳದಲ್ಲಿ ಕಂಡು ಬರುವ ಬಿಳಿಸುಳಿ ರೋಗದ ಹತೋಟಿಗೆ ಅನುಸರಿಸಬೇಕಾದ ಕ್ರಮಗಳು, ಸಮತೋಲಿತ ರಸಗೊಬ್ಬರ ಬಳಕೆ ಕುರಿತು ರೈತರಿಗೆ ಮಾಹಿತಿ ನೀಡುವ ಸಲುವಾಗಿ ಈ ಟ್ಯಾಬ್ಲೋ ತಾಲೂಕಿನ ಎಲ್ಲಾ ಗ್ರಾಮಗಳಲ್ಲಿ ಸಂಚರಿಸಲಿದ್ದು, ಧ್ವನಿವರ್ಧಕದ ಮೂಲಕ ಮಾಹಿತಿ ನೀಡಲಾಗುತ್ತಿದೆ ಎಂದರು.

ಬೇಸಿಗೆಯಲ್ಲಿ ಭೂಮಿಯನ್ನು ಆಳವಾಗಿ 2 ಬಾರಿ ಉಳುಮೆ ಮಾಡಬೇಕು. ಮುಸುಕಿನ ಜೋಳದ ಬದಲು ರಾಗಿ, ಅಲಸಂದೆ, ತೊಗರಿ ಮತ್ತು ಅವರೆ ಬೆಳೆ ಬೆಳೆಯಬೇಕು. ಸಮಗ್ರ ಪೋಷಕಾಂಶ ನಿರ್ವಹಣೆಗಾಗಿ ಭೂಮಿಗೆ ಕೊಟ್ಟಿಗೆ ಗೊಬ್ಬರ, ಹಸಿರೆಲೆ ಬೆಳೆ ಗೊಬ್ಬರಗಳ ಬಳಕೆ, ಜೈವಿಕ ಜೀವಾಣು ಮತ್ತು ಜೈವಿಕ ಗೊಬ್ಬರಗಳ ಬಳಕೆ ಹಾಗೂ ಶಿಫಾರಸ್ಸು ಮಾಡಿದ ರಸಗೊಬ್ಬರಗಳ ಬಳಕೆ ಜೊತೆಗೆ ಬದುಗಳ ಮೇಲೆ ಕಳೆ ನಿರ್ವಹಣೆ ಮಾಡು ವುದು. ಭೂಮಿಯ ತೇವಾಂಶ ಹೆಚ್ಚಾಗುವುದನ್ನು ತಡೆಯಲು ನೀರು ಬಸಿದು ಹೋಗುವಂತಹ ಬಸಿ ಕಾಲುವೆಗಳನ್ನು ನಿರ್ಮಾಣ ಮಾಡುವುದು. ಬಿತ್ತನೆಗೆ ಮೊದಲು ಯಾವುದೇ ಖಾಸಗಿ ಅಥವಾ ಸರ್ಕಾರಿ ಸಂಸ್ಥೆಯಿಂದ ಖರೀದಿಸಿದ ಬೀಜವನ್ನು ಪ್ರತಿ ಕೆಜಿ ಬೀಜಕ್ಕೆ 3 ಗ್ರಾಂ ಮೆಟಾಲಾಕ್ಸಿಲ್, ಮ್ಯಾಂಕೋಜೆಬ್ ಎಂಬ ಸಂಯುಕ್ತ ಶಿಲೀಂಧ್ರ ನಾಶಕದಿಂದ ಬೀಜೋಪಚಾರ ಮಾಡಬೇಕು. ಬಿತ್ತನೆ ಮಾಡಿದ 15–20 ದಿನಗಳ ಅಂತರದಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಸಂಯುಕ್ತ ಶಿಲೀಂಧ್ರ ನಾಶಕವಾದ ಮೆಟಲಾಕ್ಸಿಲ್ 4% ಡಬ್ಲ್ಯೂಪಿ, ಮ್ಯಾಂಕೋಜೆಬ್ 64% ಪ್ರತಿ ಲೀಟರ್ ನೀರಿಗೆ 2 ಗ್ರಾಂನಂತೆ ಮತ್ತು 2ನೇ ಸಿಂಪರಣೆಯಾಗಿ ಬಿತ್ತನೆ ಮಾಡಿದ 25–30 ದಿನಗಳ ಅಂತರದಲ್ಲಿ ರೋಗ ಲಕ್ಷಣಗಳು ಕಂಡು ಬಂದಲ್ಲಿ ಅಜೋಕ್ಸಿಸ್ಟ್ರೋಬಿನ್ 18.2 ಡೈಫ್ಲೋಕೊನೋಜೋಲ್ 11.4% ಪ್ರತಿ ಲೀಟರ್ ನೀರಿಗೆ 1 ಮಿಲೀ ಬೆರಸಿ ತಪ್ಪದೇ ಸಿಂಪರಣೆ ಮಾಡಬೇಕು ಎಂದರು.


ಕೃಷಿ ಮಾಹಿತಿ ರಥಕ್ಕೆ ಶಾಸಕ ಅನಿಲ್ ಚಿಕ್ಕಮಾದು ಚಾಲನೆ ನೀಡಿದರು.

ರೈತರಿಗೆ ದೊರೆಯುವ ಸೌಲಭ್ಯಗಳು: ಕೃಷಿ ಯಾಂತ್ರೀಕರಣ ಯೋಜನೆಯಿಂದ ರೈತರಿಗೆ ಮಿನಿ ಟ್ರ್ಯಾಕ್ಟರ್, ಪವರ್ ಟಿಲ್ಲರ್, ಕಲ್ಟಿವೇಟರ್, ರೋಟೋವೇಟರ್, ಬ್ರಷ್ ಕಟರ್, ಹುಲ್ಲು ಕತ್ತರಿಸುವ ಯಂತ್ರ, ಒಕ್ಕಣೆ ಯಂತ್ರ ಮುಂತಾದ ಕೃಷಿ ಯಂತ್ರೋಪಕರಣಗಳನ್ನು ಸಬ್ಸಿಡಿ ದರದಲ್ಲಿ ವಿತರಿಸಲಾಗುವುದು.

ಲಘು ನೀರಾವರಿ ಯೋಜನೆಗೆ ರೈತರಿಗೆ ಬೇಕಾಗುವ ತುಂತುರು ನೀರಾವರಿ, ಹನಿ ನೀರಾವರಿ ಉಪಕರಣಗಳನ್ನು 90% ಸಬ್ಸಿಡಿ ದರದಲ್ಲಿ ವಿತರಿಸಲಾಗುವುದು. ರೈತರು ಸರ್ಕಾರದಿಂದ ಸಿಗುವ ಸವಲತ್ತುಗಳನ್ನು ಸದುಪಯೋಗ ಪಡಿಸಿಕೊಳ್ಳುವುದರ ಜೊತೆಗೆ ಬೆಳೆಗಳ ಬಗ್ಗೆ ಸಂಪೂರ್ಣ ಮಾಹಿತಿಗಳನ್ನು ಇಲಾಖೆಯಿಂದ ಪಡೆದುಕೊಳ್ಳಬೇಕು ಎಂದರು.

ತಹಸೀಲ್ದಾರ್ ಶ್ರೀನಿವಾಸ್, ತಾಲೂಕು ಆರೋಗ್ಯಾಧಿಕಾರಿ ಡಾ.ರವಿಕುಮಾರ್, ಶಂಭುಲಿಂಗ ನಾಯಕ, ಕಲೀಮ್ ಪಾಷಾ, ಬಾಲಯ್ಯ, ವೆಂಕಟೇಗೌಡ, ತಿರುಪತಿ ಸೇರಿದಂತೆ ರೈತರು ಹಾಜರಿದ್ದರು.



ನೂತನ ಅಪರ ಜಿಲ್ಲಾಧಿಕಾರಿಗೆ ಸನ್ಮಾನ

ಮೈಸೂರು ಜಿಲ್ಲೆ ನೂತನ ಅಪರ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಅವರನ್ನು ಮುಖಂಡರಾದ ದೇವನೂರು ಮಹದೇವಪ್ಪ ಹಾಗೂ ಡಾ.ಹೆಚ್.ಸಿ. ಮಹದೇವಪ್ಪ ಅವರ ಅಭಿಮಾನಿ ಬಳಗದಿಂದ ಸನ್ಮಾನಿಸಲಾಯಿತು. ಈ ವೇಳೆ ಬಳಗದ ರಾಜ್ಯಾಧ್ಯಕ್ಷ ಹಿನಕಲ್ ನಂಜುಂಡ, ರಾಜ್ಯ ಉಪಾಧ್ಯಕ್ಷರಾದ ಭರತ್, ಮಂಜುನಾಥ್, ಮಧುಕುಮಾರ್, ಸ್ವಾಮಿ ಉಪಸ್ಥಿತರಿದ್ದರು.



ಆದೇಶ ಪತ್ರ ವಿತರಣೆ

ಸಾಲಿಗ್ರಾಮ ಮತ್ತು ಕೆ.ಆರ್.ನಗರ ತಾಲೂಕಿನ ಜೆಡಿಎಸ್ ಸಾಮಾಜಿಕ ಜಾಲತಾಣದ ವಕ್ತಾರನಾಗಿ ಸಾಲಿಗ್ರಾಮ ತಾಲೂಕಿನ ನರಚನಹಳ್ಳಿ ಪ್ರಸನ್ನ ಅವರನ್ನು ಜೆಡಿಎಸ್ ಜಿಲ್ಲಾಧ್ಯಕ್ಷ ಅಶ್ವಿನ್ ಕುಮಾರ್ ನೇಮಿಸಿದ್ದು, ಮಾಜಿ ಸಚಿವ ಸಾ.ರಾ.ಮಹೇಶ್ ಆದೇಶ ಪತ್ರ ವಿತರಿಸಿ ಶುಭ ಹಾರೈಸಿದರು.

ಮತದಾರರ ಪಟ್ಟಿಯಿಂದ ಮತದಾರರ ಕೈ ಬಿಡುವ ಷಡ್ಯಂತ್ರ

ಕೇಂದ್ರ ಸರ್ಕಾರದ ವಿರುದ್ಧ ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್ ಆರೋಪ

ಹುಣಸೂರು, ಮೇ 21– ಕೇಂದ್ರ ಸರ್ಕಾರ ಚುನಾವಣಾ ಆಯೋಗದ ಮೂಲಕ ಜಿಲ್ಲೆಯ 7 ಲಕ್ಷ ಹಾಗೂ ಹುಣಸೂರು ತಾಲೂಕಿನ 23 ಸಾವಿರ ಮತದಾರರನ್ನು ಮತದಾರರ ಪಟ್ಟಿಯಿಂದ ಕೈಬಿಡುವ ವ್ಯವಸ್ಥಿತ ಷಡ್ಯಂತ್ರ ನಡೆಸುತ್ತಿದೆ ಎಂದು ಮಾಜಿ ಶಾಸಕ ಹೆಚ್.ಪಿ. ಮಂಜುನಾಥ್ ಆರೋಪಿಸಿದರು.

ನಗರದ ಕಾಂಗ್ರೆಸ್ ಕಚೇರಿ ಆವರಣದಲ್ಲಿ ನಡೆದ ಹುಣಸೂರು ವಿಧಾನಸಭಾ ವ್ಯಾಪ್ತಿಯ ಬೂತ್ ಅಧ್ಯಕ್ಷರು(ಬಿಎಲ್‌ಎ)ಗಳ ಸಭೆಯಲ್ಲಿ ಮಾತನಾಡಿದ ಅವರು, ಈಗಾಗಲೇ ಚುನಾವಣಾ ಆಯೋಗ ಮತದಾರರ ಪಟ್ಟಿಯ ಮ್ಯಾಪಿಂಗ್ ಕಾರ್ಯ ಮುಗಿಸಿದೆ. ಈ ವೇಳೆ ನಮ್ಮ ಪಕ್ಷದ ಬಿಎಲ್‌ಎಗಳು ಪರಿಶೀಲಿಸಿದ್ದು, ಆ ದಾಖಲಾತಿಗಳು ನಮ್ಮ ಬಳಿ ಇದೆ. ಅದರಲ್ಲಿ ಯಾರ ಹೆಸರು ಕೈ ಬಿಟ್ಟಿದ್ದಾರೆ. ಯಾರ ಹೆಸರು ಸೇರಿಸಿದ್ದಾರೆ ಎಂಬುದನ್ನು ಖಚಿತ ಪಡಿಸಿಕೊಳ್ಳಬೇಕು. ಒಂದೇ ಒಂದು ಲೋಪದೋಷ ಕಂಡು ಬಂದರೇ ಕೂಡಲೇ ನಮ್ಮ ಗಮನಕ್ಕೆ ತರಬೇಕು ಎಂದರು.



ಸಭೆಯಲ್ಲಿ ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್ ಮಾತನಾಡಿದರು.

ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಮಾತನಾಡಿ, ಕೇಂದ್ರ ಸರ್ಕಾರ ಪ್ರಮುಖವಾಗಿ ಪರಿಶಿಷ್ಟರು, ಮುಸ್ಲಿಮರು, ಕ್ರಿಶ್ಚಿಯನ್ನರನ್ನು ಗುರಿ ಮಾಡಿಕೊಂಡು ಮತದಾರರ ಪಟ್ಟಿಯಿಂದ ಕೆಲ ಮತದಾರರನ್ನು ಕೈ ಬಿಡುತ್ತಿದ್ದು, ಈ ಬಗ್ಗೆ ಕಾಂಗ್ರೆಸ್ ಪಕ್ಷದ ಬಿಎಲ್‌ಎಗಳು ಎಚ್ಚರ ವಹಿಸಬೇಕು. ಜಿಲ್ಲಾಧಿಕಾರಿಗಳು ಮ್ಯಾಪಿಂಗ್‌ಗೆ ಇನ್ನೂ ಸಮಯವಿದೆ ಎನ್ನುತ್ತಿದ್ದಾರೆ. ಆದರೆ ಈಗಾಗಲೇ ಮತದಾರರ ಪಟ್ಟಿ ಮ್ಯಾಪಿಂಗ್ ಕಾರ್ಯ ಮುಗಿದಿದೆ. ಮ್ಯಾಪಿಂಗ್ ಕಾರ್ಯದಲ್ಲಿ ಸಮರ್ಪಕ ದಾಖಲಾತಿ ನೀಡಲು ಮಾತ್ರ ಸಮಯವಿದೆ. ಎಸ್‌ಐಆರ್‌ಗೆ 12 ದಾಖಲಾತಿ ನೀಡಬೇಕು ಎಂದು ಆದೇಶಿಸಿದ್ದಾರೆ. ಇದು ಅಗತ್ಯವಿತ್ತೆ ಎಂದು ಪ್ರಶ್ನಿಸಿದ ಅವರು ಜಿಲ್ಲಾಡಳಿತ ಕೂಡಲೇ ಮತದಾರರ ಪಟ್ಟಿಯಿಂದ ಕೈ ಬಿಟ್ಟಿರುವ ಮತದಾರರ ಹೆಸರನ್ನು ಬಿಡುಗಡೆ ಮಾಡಬೇಕೆಂದು ಆಗ್ರಹಿಸಿದರು. ಇನ್ನು 10 ವರ್ಷ ಬಿಜೆಪಿಯವರ ಕೈಗೆ ಅಧಿಕಾರ ಕೊಟ್ಟಲ್ಲಿ ಬದುಕಿರುವವರನ್ನು ಸಾಯಿಸಿ ಬಿಡುತ್ತಾರೆ. ದೇಶದಲ್ಲಿ ಪೆಟ್ರೋಲ್, ಡೀಸೆಲ್, ಗ್ಯಾಸ್ ಸೇರಿದಂತೆ ಎಲ್ಲಾ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿದೆ. ಈ ಬಗ್ಗೆ ಪ್ರಶ್ನಿಸಿದರೇ ಯುದ್ಧ ನಡೆಯುತ್ತಿದೆ ಎಂದು ಸಬೂಬು ಹೇಳುತ್ತಾರೆ ಎಂದು ಕೇಂದ್ರದ ವಿರುದ್ಧ ಕಿಡಿಕಾರಿದರು.

ಮಾಧ್ಯಮಗಳು ಬಿಜೆಪಿ ಪರವಾಗಿದ್ದು, ಅವರ ಲೋಪಗಳನ್ನು ಎತ್ತಿ ಹಿಡಿಯಲು ಹಿಂಜರಿಯುತ್ತಿವೆ. ಬಿಜೆಪಿ ಅಂದ ಭಕ್ತರು ನಾನು ನೇರವಾಗಿ ನೀಡುವ ಹೇಳಿಕೆಗಳಿಗೆ ನನ್ನನ್ನು ಕೆಟ್ಟದಾಗಿ ಬಿಂಬಿಸಿ ಬೈಯುತ್ತಾರೆ. ಇದಕ್ಕೆ ನಾನು ಕೇರ್ ಮಾಡುವವನಲ್ಲ. ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್ ಕಳೆದ ಚುನಾವಣೆಯಲ್ಲಿ ಸೋತಿದ್ದರೂ ಸಿಎಂ ಸಿದ್ದರಾಮಯ್ಯನವರ ಮೇಲೆ ಒತ್ತಡ ಹಾಕಿ ತಾಲೂಕಿನ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ ಎಂದರು.

ಸಭೆಯಲ್ಲಿ ಕಾಂಗ್ರೆಸ್ ಕಾರ್ಯಾಧ್ಯಕ್ಷ ದೇವರಾಜ್, ಬ್ಲಾಕ್ ಅಧ್ಯಕ್ಷರಾದ ಪ್ರೇಮ್ ಕುಮಾರ್, ಬಾಲಸುಂದರ್, ಹುಡಾ ಅಧ್ಯಕ್ಷ ಹೆಚ್.ಪಿ.ಅಮರನಾಥ್ ಸೇರಿದಂತೆ ಬೂತ್ ಅಧ್ಯಕ್ಷರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ಅಕ್ರಮ ಒತ್ತುವರಿ ತೆರವುಗೊಳಿಸಲು ಮನವಿ

ನಂಜನಗೂಡು, ಮೇ 21– ತಾಲೂಕಿನ ಮಾದನಹಳ್ಳಿಯಲ್ಲಿ ಬಡವರಿಗಾಗಿ ಸರ್ಕಾರದಿಂದ ಖರೀದಿಸಿದ್ದ 1 ಎಕರೆ 20 ಗುಂಟೆ ಜಮೀನನ್ನು ಸ್ಥಳೀಯ ಬಿಜೆಪಿ ಮುಖಂಡರೊಬ್ಬರು ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿದ್ದು, ತಾಲೂಕು ದಂಡಾಧಿಕಾರಿಗಳು ಕ್ರಮವಹಿಸಿ ಒತ್ತುವರಿ ತೆರವುಗೊಳಿಸಬೇಕು ಎಂದು ಕಾಂಗ್ರೆಸ್ ಮುಖಂಡ ಗಿರೀಶ್ ಮನವಿ ಮಾಡಿದರು.


ಸುದ್ದಿಗೋಷ್ಠಿಯಲ್ಲಿ ಮುಖಂಡ ಗಿರೀಶ್ ಮಾತನಾಡಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾದನಹಳ್ಳಿಯಲ್ಲಿ ಬಡ ಜನರ ವಸತಿ ಸೌಕರ್ಯಕ್ಕಾಗಿ ಸರ್ಕಾರದಿಂದ 1.20 ಎಕರೆ ಜಮೀನನ್ನು ಖರೀದಿಸಿ ಮಾಲೀಕರಿಗೆ ಹಣ ಪಾವತಿಸಿ, ಸ್ಥಳೀಯರಿಗೆ ನಿವೇಶನ ನೀಡಲು ಮೀಸಲಿಟ್ಟ ಪ್ರದೇಶ ಎಂಬ ಬಗ್ಗೆ ಆರ್‌ಟಿಸಿಯಲ್ಲೂ ದಾಖಲಾಗಿದೆ. ಆದರೆ ಗ್ರಾಮದ ಬಿಜೆಪಿ ಮುಖಂಡರೊಬ್ಬರು ತಮ್ಮ ರಾಜಕೀಯ ಪ್ರಭಾವ ಬೀರಿ ಅಕ್ರಮವಾಗಿ ಒತ್ತುವರಿ ಮಾಡಿಕೊಂಡು ಮನೆ ನಿರ್ಮಿಸಿಕೊಂಡಿದ್ದಾರೆ. ಒತ್ತುವರಿ ತೆರವುಗೊಳಿಸುವಂತೆ ಒತ್ತಾಯಿಸಿ ಹಲವು ಬಾರಿ ಗ್ರಾಮಸ್ಥರು ಪ್ರತಿಭಟನೆ ನಡೆಸಿ ತಹಸೀಲ್ದಾರ್ ಮತ್ತು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರೂ, ಯಾವುದೇ ಕ್ರಮ ಕೈಗೊಂಡಿಲ್ಲ. ಆದ್ದರಿಂದ ಜಿಲ್ಲಾಧಿಕಾರಿಗಳು ಶೀಘ್ರ ಕ್ರಮ ಕೈಗೊಂಡು ಸರ್ಕಾರಿ ಜಾಗ ಒತ್ತುವರಿ ತೆರವುಗೊಳಿಸಿ ಬಡಜನರಿಗೆ ನಿವೇಶನ ಹಂಚಿಕೆ ಮಾಡಲು ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ನಗರಸಭೆ ಮಾಜಿ ಅಧ್ಯಕ್ಷ ಶ್ರೀಕಂಠಸ್ವಾಮಿ, ರಾಜು, ಸತೀಶ್ ಇದ್ದರು.

ಡಾ.ರಾಧಾಕೃಷ್ಣನ್ ಬಂಗಲೆ ಪರಿಶೀಲಿಸಿದ ಸಂಸದ ಯದುವೀರ್

ತಜ್ಞರ ಸಲಹೆ ಪಡೆದು, ಶೀಘ್ರ ನವೀಕರಣಕ್ಕೆ ಕುಲಪತಿ ಪ್ರೊ.ಲೋಕನಾಥ್‌ಗೆ ಸೂಚನೆ
ಡಾ.ರಾಧಾಕೃಷ್ಣನ್ ಬಂಗಲೆ ದುರಸ್ತಿಗೆ ಪುರಾತತ್ವ ಇಲಾಖೆಗೆ ಮೈಸೂರು ವಿವಿ ಪತ್ರ

- ▶ಮೈಸೂರು ಮಿತ್ರ ವರದಿಯಿಂದ ಎಚ್ಚೆತ್ತ ಜನಪ್ರತಿನಿಧಿಗಳು, ಅಧಿಕಾರಿಗಳು
- ▶ಪಾರಂಪರಿಕ ಕಟ್ಟಡವಾದ ಕಾರಣ ದುರಸ್ಥಿ ಸವಾಲಿನ ಕೆಲಸ
- ▶ಶೀಘ್ರ ದುರಸ್ತಿ ಮಾಡದಿದ್ದರೆ ಕಟ್ಟಡಕ್ಕೆ ಮತ್ತಷ್ಟು ಹಾನಿ ಆತಂಕ



ಮೈಸೂರು, ಮೇ21(ಬಿಎಲ್‌ಯು)– ಶಿಥಿಲಾವಸ್ಥೆಯಲ್ಲಿರುವ ಮೈಸೂರಿನ ಸರಸ್ವತಿಪುರಂನಲ್ಲಿರುವ ಡಾ.ರಾಧಾಕೃಷ್ಣನ್ ಬಂಗಲೆಯನ್ನು ಶೀಘ್ರವೇ ದುರಸ್ತಿ ಮಾಡುವಂತೆ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತ ದೇವರಾಜ್ ಅವರಿಗೆ ಮೈಸೂರು ವಿಶ್ವವಿದ್ಯಾನಿಲಯ ಪತ್ರ ಬರೆದಿದೆ.

ರಾಧಾಕೃಷ್ಣನ್ ಬಂಗಲೆಯ ಎಡಭಾಗದ ಮೇಲ್ಚಾವಣಿ ಕುಸಿದಿರುವ ಬಗ್ಗೆ 'ಮೈಸೂರು ಮಿತ್ರ' ಮೇ 18 ರ ಸಂಚಿಕೆಯಲ್ಲಿ ಮಾಜಿ ರಾಷ್ಟ್ರಪತಿ ಡಾ.ರಾಧಾಕೃಷ್ಣನ್ ನೆಲೆಸಿದ್ದ ಬಂಗಲೆ ಭಾಗ ಕುಸಿತ ಶೀರ್ಷಿಕೆಯಡಿ ವರದಿ ಪ್ರಕಟಿಸಿತ್ತು.

ಈ ವರದಿ ಪ್ರಕಟವಾದ ಮಾರನೆ ದಿನವೇ ಮೈಸೂರು ವಿಶ್ವವಿದ್ಯಾನಿಲಯದ ಕುಲ ಸಚಿವೆ ಎಂ.ಕೆ.ಸವಿತಾ ಅವರು ಡಾ. ರಾಧಾ ಕೃಷ್ಣನ್ ಬಂಗಲೆಗೆ ಭೇಟಿ ನೀಡಿ ಖುದ್ದು ಪರಿಶೀಲನೆ ನಡೆಸಿದ್ದರು. ಬಂಗಲೆಯ ಮೇಲಿನ ಎಡ ಭಾಗ ಮೇಲ್ಚಾವಣಿ ಕುಸಿದಿರುವುದು ಸೇರಿದಂತೆ ಕಟ್ಟಡದ ಇತರೆ ಭಾಗಕ್ಕೆ ಹಾನಿ ಯಾಗಿ ರುವ ಬಗ್ಗೆ ಸಮಗ್ರ ಮಾಹಿತಿ ಕಲೆ ಹಾಕಿದರು.

ತರುವಾಯ ಈ ವಿಚಾರದ ಬಗ್ಗೆ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಅವರ ಜೊತೆ ಸಮಾಲೋಚನೆ ನಡೆಸಿದರು. ಈಗ ಬಂಗಲೆಯ ಮೊದಲ ಮಹಡಿಯ ಎಡಭಾಗದ ಕೊಠಡಿ ಮೇಲ್ಚಾವಣಿ ಕುಸಿದು ಬಿದ್ದಿದೆ. ಅಲ್ಲದೆ ಗೋಡೆ ಬೀಳುವ ಹಂತದಲ್ಲಿದೆ. ಈ ಹಿನ್ನೆಲೆಯಲ್ಲಿ ಮುಂದೆ ಹೆಚ್ಚಿನ ಅನಾಹುತವಾಗುವುದನ್ನು ತಡೆಯಲು ಶಿಥಿಲಾವಸ್ಥೆಯಲ್ಲಿರುವ ಕಟ್ಟಡ ನವೀಕರಣ ಮಾಡಲು ತೀರ್ಮಾನ ಕೈಗೊಂಡಿದ್ದಾರೆ.

ಡಾ.ರಾಧಾಕೃಷ್ಣನ್ ಬಂಗಲೆಯ ಒಂದು ಭಾಗದ ಮೇಲ್ಚಾವಣಿ ಕುಸಿದಿರುವುದು ಸಂಸದ ಯದುವೀರ್ ಗಮನಕ್ಕೆ ಕೂಡ ಬಂದಿತು. ಈ ಹಿನ್ನೆಲೆಯಲ್ಲಿ ಯದುವೀರ್ ಅವರು ಮಂಗಳವಾರ ಕುಲಪತಿ ಪ್ರೊ.ಲೋಕನಾಥ್, ಕುಲಸಚಿವೆ ಸವಿತಾ, ಪಾರಂಪರಿಕ ತಜ್ಞರಾದ ಪ್ರೊ.ರಂಗರಾಜು ಅವರ ಜೊತೆ ಡಾ.ಎಸ್. ರಾಧಾಕೃಷ್ಣನ್ ತತ್ವಶಾಸ್ತ್ರ ಮತ್ತು ಭಾರತೀಯ ಸಂಸ್ಕೃತಿ ಕೇಂದ್ರದ ಕಟ್ಟಡಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಪಾರಂಪರಿಕ ಕಟ್ಟಡವಾದ್ದರಿಂದ ತಜ್ಞರ ಸಲಹೆ ಪಡೆದು ಶೀಘ್ರ ದುರಸ್ತಿ ಕಾರ್ಯ ಕೈಗೊಳ್ಳಬೇಕು ಎಂದು ಕುಲಪತಿ ಪ್ರೊ.ಲೋಕನಾಥ್ ಅವರಿಗೆ ಸೂಚನೆ ನೀಡಿದರು.

ಈ ಹಿನ್ನೆಲೆಯಲ್ಲಿ ಕುಲಸಚಿವೆ ಸವಿತಾ ಅವರು ಡಾ.ರಾಧಾಕೃಷ್ಣನ್ ಬಂಗಲೆಯನ್ನು ಶೀಘ್ರ ದುರಸ್ತಿ ಮಾಡಬೇಕೆಂದು ಪುರಾತತ್ವ ಸಂಗ್ರಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತ ದೇವರಾಜ್ ಅವರಿಗೆ ನಿನ್ನೆ ಪತ್ರ ಬರೆದಿದ್ದಾರೆ.

ಇದು ಪಾರಂಪರಿಕ ಕಟ್ಟಡವಾದ್ದರಿಂದ ತಾವೇ ಖುದ್ದು ಭೇಟಿ ನೀಡಿ ಪರಿಶೀಲನೆ ನಡೆಸಿ ದುರಸ್ತಿ ಕಾಮಗಾರಿ ಕೈಗೊಳ್ಳಬೇಕು ಎಂದು ಸವಿತಾ ಅವರು ದೇವರಾಜ್ ಅವರಿಗೆ ಬರೆದಿರುವ ಪತ್ರದಲ್ಲಿ ತಿಳಿಸಿದ್ದಾರೆ.

ಶತಮಾನದಷ್ಟು ಹಳೆಯದಾದ ಈ ಕಟ್ಟಡ ಶಿಥಿಲಾವಸ್ಥೆಯಲ್ಲಿದ್ದು, ನವೀಕರಣ ಸವಾಲಿನ ಸಂಗತಿಯಾಗಿದೆ. ಬಂಗಲೆಯ ಪಾರಂಪರಿಕ ಸೌಂದರ್ಯಕ್ಕೆ ಯಾವುದೇ ರೀತಿಯಲ್ಲೂ ಧಕ್ಕೆಯಾಗದಂತೆ ದುರಸ್ತಿ ಮಾಡಬೇಕಿದೆ. ಈ ಹಿನ್ನೆಲೆಯಲ್ಲಿ ಪುರಾತತ್ವ ಇಲಾಖೆ ತಜ್ಞರ ಸಲಹೆ ಪಡೆದು ನವೀಕರಣ ಕಾರ್ಯ ಕೈಗೊಳ್ಳಬೇಕಿದೆ

ಡಾ.ರಾಧಾಕೃಷ್ಣನ್ ಬಂಗಲೆ ನವೀಕರಣಕ್ಕೆ ಪಿಇಎಸ್ ಶಿಕ್ಷಣ ಸಂಸ್ಥೆ ಸಮ್ಮತಿ

ಡಾ.ರಾಧಾಕೃಷ್ಣನ್ ಅವರ ಬಂಗಲೆಯನ್ನು ನವೀಕರಣ ಮಾಡಲು ಸಮ್ಮತಿಸಿರುವ ಬೆಂಗಳೂರಿನ ಪಿಇಎಸ್ ವಿದ್ಯಾಸಂಸ್ಥೆಯ ಅಧ್ಯಕ್ಷ ಪ್ರೊ.ಜವಾಹರ ದೊರೆಸ್ವಾಮಿ ಅವರ ಉದಾರತೆಗೆ ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವೆ ಎಂ.ಕೆ.ಸವಿತಾ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪ್ರೊ.ಜವಾಹರ ದೊರೆಸ್ವಾಮಿ ಅವರಿಗೆ ಪತ್ರ ಬರೆದಿರುವ ಅವರು, ಶಿಥಿಲಾವಸ್ಥೆಯಲ್ಲಿರುವ ಡಾ.ಎಸ್.ರಾಧಾಕೃಷ್ಣನ್ ತತ್ವಶಾಸ್ತ್ರ ಮತ್ತು ಭಾರತೀಯ ಸಂಸ್ಕೃತಿ ಕೇಂದ್ರಕ್ಕೆ ತಮ್ಮ ಶಿಕ್ಷಣ ಸಂಸ್ಥೆಯ ಪ್ರಾಧ್ಯಾಪಕರು ಭೇಟಿ ನೀಡಿ ಪರಿಶೀಲಿಸಿದರು. ದುರಸ್ತಿ ಕಾರ್ಯವನ್ನು ತಮ್ಮ ಸಂಸ್ಥೆಯಿಂದಲೇ ಕೈಗೊಳ್ಳಲು ಬಂದಿರುವುದು ಅತ್ಯಂತ ಸಂತೋಷದ ಸಂಗತಿಯಾಗಿದೆ ಎಂದು ಹೇಳಿದ್ದಾರೆ.

ಈ ಕಟ್ಟಡವು ಪಾರಂಪರಿಕ ಕಟ್ಟಡವಾದ ಕಾರಣ ಕಟ್ಟಡದ ವಿನ್ಯಾಸಕ್ಕೆ ಯಾವುದೇ ರೀತಿಯಲ್ಲೂ ಧಕ್ಕೆಯಾಗದಂತೆ ದುರಸ್ತಿ ಕಾರ್ಯ ಕೈಗೊಳ್ಳಲು ಹಾಗೂ ಐದು ವರ್ಷಗಳ ವಾರ್ಷಿಕ ನಿರ್ವಹಣೆಯನ್ನು ನಿಯಮ ಅನುಸರಿಸಿ ಕೈಗೊಳ್ಳಲು ವಿಶ್ವವಿದ್ಯಾನಿಲಯದಿಂದ ಯಾವುದೇ ಅಭ್ಯಂತರವಿಲ್ಲ ಎಂದು ಸ್ಪಷ್ಟ ಪಡಿಸಿದ್ದಾರೆ.

ಒಟ್ಟಾರೆ ಬಂಗಲೆ ನವೀಕರಣ ಮಾಡಲು ಮುಂದೆ ಬಂದಿರುವ ನಿಮ್ಮ ಉದಾರ ಮನೋಭಾವಕ್ಕೆ ಮೈಸೂರು ವಿಶ್ವವಿದ್ಯಾನಿಲಯ ಸದಾ ಅಭಾರಿಯಾಗಿರುತ್ತದೆ ಎಂದು ಸವಿತಾ ಅವರು ಪ್ರೊ.ಜಹಾಹರ ಅವರಿಗೆ ಬರೆದಿರುವ ಪತ್ರದಲ್ಲಿ ತಿಳಿಸಿದ್ದಾರೆ.

ಪಿಇಎಸ್ ಶಿಕ್ಷಣ ಸಂಸ್ಥೆಯವರೇ ಇದನ್ನು ನವೀಕರಣ ಮಾಡಲು ಮುಂದಾದರೂ ಪುರಾತತ್ವ ಇಲಾಖೆಯ ತಜ್ಞರ ಮಾರ್ಗದರ್ಶನದಲ್ಲಿ ದುರಸ್ತಿ ಮಾಡಬೇಕಿದೆ. ಈ ಹಿನ್ನೆಲೆಯಲ್ಲಿ ಸವಿತಾ ಅವರು ಪುರಾತತ್ವ ಇಲಾಖೆಯ ಆಯುಕ್ತ ದೇವರಾಜ್ ಅವರಿಗೆ ಪತ್ರ ಬರೆದು ಬಂಗಲೆಗೆ ಖುದ್ದು ಭೇಟಿ ನೀಡಿ ಪರಿಶೀಲನೆ ನಡೆಸುವಂತೆ ಕೋರಿದ್ದಾರೆ.

ಮೈಸೂರು ವಿವಿಗೆ ಕೆಲವು ಲಕ್ಷ ಖರ್ಚು ಸಾಧ್ಯವಿಲ್ಲವೆ..?

ಮೈಸೂರು ವಿಶ್ವವಿದ್ಯಾನಿಲಯದಷ್ಟೆ ಡಾ.ರಾಧಾಕೃಷ್ಣನ್ ಅವರ ಬಂಗಲೆ ಕೂಡ ಶತಮಾನದ ಸಂಭ್ರಮ ಕಂಡಿದೆ. ಆದರೆ ಇಂತಹ ಪಾರಂಪರಿಕ ಕಟ್ಟಡದ ಒಂದು ಭಾಗದ ಮೇಲ್ಚಾವಣಿ ಕುಸಿದು ಬಿದ್ದು, ಮತ್ತಷ್ಟು ಭಾಗಕ್ಕೆ ಹಾನಿಯಾಗುವ ಪರಿಸ್ಥಿತಿ ಬಂದರೂ ಸ್ವಂತ ವೆಚ್ಚದಲ್ಲಿ ಇದರ ನವೀಕರಣ ಮಾಡಲು ಮೈಸೂರು ವಿಶ್ವವಿದ್ಯಾನಿಲಯ ಹಿಂಜರಿಯುತ್ತಿದೆ.

ಡಾ.ರಾಧಾಕೃಷ್ಣನ್ ಬಂಗಲೆ ನವೀಕರಣಕ್ಕೇನು ಕೋಟ್ಯಾಂತರ ರೂಪಾಯಿ ವೆಚ್ಚವಾಗುವುದಿಲ್ಲ. ಕೆಲವು ಲಕ್ಷದಲ್ಲಿ ಗುಣಮಟ್ಟದಲ್ಲಿ ನವೀಕರಣ ಮಾಡಿದರೆ ಕಟ್ಟಡವನ್ನು ಸುಭದ್ರಗೊಳಿಸಬಹುದು. ನೂರಾರು ಕೋಟ್ಯಾಂತರ ರೂಪಾಯಿ ಆಯವ್ಯಯ ಮಂಡಿಸುವ ಮೈಸೂರು ವಿಶ್ವವಿದ್ಯಾನಿಲಕ್ಕೆ ಕೆಲವು ಲಕ್ಷ ಖರ್ಚು ಮಾಡಲು ಸಾಧ್ಯವಿಲ್ಲವೆ ಎಂಬ ಪ್ರಶ್ನೆ ಎದುರಾಗಿದೆ. ವಿಶ್ವವಿದ್ಯಾನಿಲಯದ ಡಿಜಿಟಲ್ ಉಪಕರಣ ಸೇರಿದಂತೆ ಇತರೆ ವಸ್ತು ಖರೀದಿಗೆ ಇತ್ತೀಚೆಗೆ ಸುಮಾರು ಐದು ಕೋಟಿ ಟೆಂಡರ್ ಕರೆದಿದೆ. ಇಂತಹ ಸಂದರ್ಭದಲ್ಲಿ ಡಾ.ರಾಧಾಕೃಷ್ಣನ್ ಬಂಗಲೆ ಸಂರಕ್ಷಣೆಗೆ ಆಸಕ್ತಿ ತೋರುತ್ತಿಲ್ಲ.

ಮೈಸೂರು ವಿಶ್ವವಿದ್ಯಾನಿಲಯದಲ್ಲಿ 22 ಪಾರಂಪರಿಕ ಕಟ್ಟಡಗಳಿದ್ದು, ಇವುಗಳ ಪರಿಸ್ಥಿತಿ ಕೂಡ ಹೀನಾಯವಾಗಿದೆ. ಇವುಗಳು ಧರೆಗುರುಳುವ ಮುನ್ನ ನವೀಕರಣ ಮಾಡುವುದು ಅನಿವಾರ್ಯವಾಗಿದೆ. ಇಲ್ಲದಿದ್ದರೆ ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಪಾರಂಪರಿಕ ಕಟ್ಟಡಗಳಿದ್ದವು ಎಂದು ಮುಂದಿನ ಪೀಳಿಗೆಗೆ ಫೋಟೋದಲ್ಲಿ ತೋರಿಸುವ ಪರಿಸ್ಥಿತಿ ಬರುತ್ತದೆ

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ದೃಶ್ಯಂ–3 (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ರೆಬೆಲ್ (ತೆ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಪೆಟ್ರಿಯೋಟ್ (ಮ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಕರುಪ್ಪು (ತ)	4 ಪ್ರದರ್ಶನಗಳು
ಗಾಯಿತ್ರಿ	
ಲೋ ನವೀನ (ಕ)	4 ಪ್ರದರ್ಶನಗಳು
ರಾಜಕಮಲ್	
ಕರುಪ್ಪು (ತ)	4 ಪ್ರದರ್ಶನಗಳು
ಸಂಗಂ	
ದೃಶ್ಯಂ–3 (ಕ)	4 ಪ್ರದರ್ಶನಗಳು
ಲಿಡೋ	
ಕೋಟಿಗೊಬ್ಬ(ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಕುಚುಕು (ಕ)	4 ಪ್ರದರ್ಶನಗಳು

ಪುಲ್ವಾಮಾ ದಾಳಿ ಮಾಸ್ಟರ್ ಮೈಂಡ್ ಅಪರಿಚಿತರ ಗುಂಡಿಗೆ ಬಲಿ



ಇಸ್ಲಾಮಾಬಾದ್: ಜಮ್ಮು–ಕಾಶ್ಮೀರದ ಪುಲ್ವಾಮಾದಲ್ಲಿ 2019ರಲ್ಲಿ ನಡೆದಿದ್ದ ಉಗ್ರ ದಾಳಿಯ ಮಾಸ್ಟರ್ ಮೈಂಡ್ ಹಮ್ಜಾ ಬುರ್ಹಾನ್‌ನನ್ನು ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಅಪರಿಚಿತ ವ್ಯಕ್ತಿಗಳು ಗುಂಡಿಕ್ಕಿ ಹತ್ಯೆ ಮಾಡಿದ್ದಾರೆ.

ಅಪರಿಚಿತ ವ್ಯಕ್ತಿಗಳು ಮುಜಾಫರಾಬಾದ್ ಕಚೇರಿಯೊಳಗೆ ನುಗ್ಗಿ ತರಬೇತುದಾರನ ರೂಪದಲ್ಲಿ ಅಡಗಿದ್ದ ಹಮ್ಜಾ ಬುರ್ಹಾನ್ ಅಲಿಯಾಸ್ ಡಾಕ್ಟರ್ ಮೇಲೆ ಹಲವು ಬಾರಿ ಗುಂಡಿನ ದಾಳಿ ನಡೆಸಿದ್ದಾರೆ. ಗಂಭೀರವಾಗಿ ಗಾಯಗೊಂಡಿದ್ದ ಈತ ಬಳಿಕ ಮೃತಪಟ್ಟಿದ್ದಾನೆ ಎಂದು ವರದಿಯಾಗಿದೆ. ಪಾಕಿಸ್ತಾನ ಮತ್ತು ಪಿಒಕೆ ನೆಲದಲ್ಲಿ ಭಾರತದ ಮೋಸ್ಟ್ ವಾಂಟೆಡ್ ಉಗ್ರರನ್ನು ಗುರಿಯಾಗಿಸಿ ನಡೆಯುತ್ತಿರುವ ಸರಣಿ ಹತ್ಯೆಗಳಲ್ಲಿ ಇದು ಇತ್ತೀಚಿನ ಪ್ರಮುಖ ಘಟನೆಯಾಗಿದೆ.

ಜಮ್ಮು–ಕಾಶ್ಮೀರದ ಪುಲ್ವಾಮಾ ಮೂಲದ ಹಮ್ಜಾ ಬುರ್ಹಾನ್‌ನ ನಿಜವಾದ ಹೆಸರು ಅರ್ಜುಮಂಡ್ ಗುಲ್ಜಾರ್ ದಾರ್ ಎಂದು ತಿಳಿದು ಬಂದಿದೆ. 2022ರಲ್ಲಿ ಭಾರತದ ಗೃಹ ಸಚಿವಾಲಯ ಆತನನ್ನು ಉಗ್ರನೆಂದು ಘೋಷಿಸಿತ್ತು. ಈತ ಪಾಕಿಸ್ತಾನ ಬೆಂಬಲಿತ ಅಲ್–ಬದರ್ ಭಯೋತ್ಪಾದಕ ಸಂಘಟನೆಯ ಹಿರಿಯ ಕಮಾಂಡರ್ ಆಗಿದ್ದ. 2019ರ ಪುಲ್ವಾಮಾ ಉಗ್ರರ ದಾಳಿಯಲ್ಲಿ ಈತ ಓವರ್ ಗ್ರೌಂಡ್ ವರ್ಕರ್ ಆಗಿ ಪ್ರಮುಖ ಸಂಚು ರೂಪಿಸಿದ್ದನು. ದಕ್ಷಿಣ ಕಾಶ್ಮೀರದಲ್ಲಿ ಯುವಕರನ್ನು ಉಗ್ರ ಸಂಘಟನೆಗೆ ಸೇರಿಸುವ ಮತ್ತು ಭಯೋತ್ಪಾದಕರಿಗೆ ಧನ ಸಹಾಯ ನೀಡುವ ಕೆಲಸ ಮಾಡುತ್ತಿದ್ದ. ಫೆಬ್ರವರಿ 14, 2019ರಂದು ಜಮ್ಮು–ಶ್ರೀನಗರ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಾಗುತ್ತಿದ್ದ ಸಿಆರ್‌ಪಿಎಫ್ ವಾಹನಗಳ ಮೇಲೆ ಆತ್ಮಾಹುತಿ ದಾಳಿ ನಡೆದಿತ್ತು.

ಎರಡು ತಿಂಗಳಿನಿಂದ ಸಿಲಿಂಡರ್ ವಿತರಿಸದ ಆರೋಪ
ಗ್ಯಾಸ್ ಏಜೆನ್ಸಿ ಮುಂದೆ ಗ್ರಾಹಕರ ಪ್ರತಿಭಟನೆ



ಗ್ಯಾಸ್ ಏಜೆನ್ಸಿಯು ಕಳೆದ ಎರಡು ತಿಂಗಳಿಂದ ಗ್ಯಾಸ್ ಸಿಲಿಂಡರ್ ನೀಡುತ್ತಿಲ್ಲ ಎಂದು ಮೈಸೂರಿನಲ್ಲಿ ಗ್ರಾಹಕರು ಪ್ರತಿಭಟನೆ ನಡೆಸಿದರು.

ಮೈಸೂರು, ಮೇ 21(ಜಿಎ)–ಗ್ಯಾಸ್ ಏಜೆನ್ಸಿಯು ಕಳೆದ ಎರಡು ತಿಂಗಳಿಂದ ಗ್ಯಾಸ್ ಸಿಲಿಂಡರ್ ನೀಡುತ್ತಿಲ್ಲ ಎಂದು ಮೈಸೂರಿನಲ್ಲಿ ಗ್ರಾಹಕರು ಪ್ರತಿಭಟನೆ ನಡೆಸಿದರು.

ಮೈಸೂರಿನ ಅಗ್ರಹಾರದ ಚಾವಡಿ ಬೀದಿಯಲ್ಲಿರುವ ಪದ್ಮ ಶ್ರೀನಿವಾಸ್ ಇಂಡಿಯನ್ ಗ್ಯಾಸ್ ಏಜೆನ್ಸಿಯೂ ಕಳೆದ ಎರಡು ತಿಂಗಳಿನಿಂದ ಗ್ರಾಹಕರಿಗೆ ಗ್ಯಾಸ್ ಸಿಲಿಂಡರ್ ಪೂರೈಕೆ ಮಾಡಿಲ್ಲ. ಏಜೆನ್ಸಿ ಬಾಗಿಲು ಹಾಕಿದ್ದಾರೆ ಎಂದು ಆರೋಪಿಸಿ ಗ್ರಾಹಕರು ಗುರುವಾರ ಬೆಳಗ್ಗೆ ಏಜೆನ್ಸಿ ಮುಂದೆ ಆಕ್ರೋಶ ವ್ಯಕ್ತಪಡಿಸಿದರು.

ಎಲ್ಲಾ ಕೆಲಸ ಕಾರ್ಯಗಳನ್ನು ಬಿಟ್ಟು ನಿತ್ಯವೂ ಏಜೆನ್ಸಿಗೆ ಅಲೆಯುವುದೇ ದೊಡ್ಡ ಕೆಲಸವಾಗಿದೆ. ಗ್ಯಾಸ್ ಸಿಲಿಂಡರ್ ಏಕೆ ಪೂರೈಸುತ್ತಿಲ್ಲ ಎಂದು ಪ್ರಶ್ನಿಸಲು ಕರೆ ಮಾಡಿದರೂ ಯಾರು ಉತ್ತರ ನೀಡುತ್ತಿಲ್ಲ. ಏಜೆನ್ಸಿ ಮುಂದೆ ಬಂದರೆ ಬಾಗಿಲು ಹಾಕಿಕೊಂಡಿದ್ದಾರೆ ಎಂದು ಗ್ರಾಹಕರು ದೂರಿದರು.

ನಂತರ ಸ್ಥಳಕ್ಕೆ ಕೆ.ಆರ್.ಪೊಲೀಸ್ ಠಾಣೆಯ ಸಿಬ್ಬಂದಿ ಭೇಟಿ ನೀಡಿ ಏಜೆನ್ಸಿ ಮಾಲೀಕರಿಗೆ ಕರೆ ಮಾಡಿದ ನಂತರ ಸಿಬ್ಬಂದಿಗಳು ಬಂದು ಗ್ಯಾಸ್ ಸಿಲೆಂಡರ್ ಅನ್ನು ಗ್ರಾಹಕರಿಗೆ ವಿತರಿಸಿದರು.

ಪಿಹೆಚ್‌ಡಿ ಪದವಿ



ಮೈಸೂರು, ಮೇ 21– ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲೂಕಿನ ಗೂರಮಾರನಹಳ್ಳಿ ಗ್ರಾಮದ ಡಾ. ಜಯಶೀಲ ಅವರಿಗೆ ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ವಿಷಯದಡಿ ವಿಜಯಪುರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ ಪಿಹೆಚ್‌ಡಿ ಪದವಿ ನೀಡಿದೆ. ಪ್ರೊ. ರಾಜಕುಮಾರ್ ಪಿ. ಮಾಲಿಪಾಟೀಲ್ ಮಾರ್ಗದರ್ಶನದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಪ್ರಬಂಧವನ್ನು ವಿವಿ ಅಂಗೀಕರಿಸಿದೆ.

ತಡೆ ಹಿಡಿದಿರುವ ತುಟ್ಟಿ ಭತ್ಯೆ ವಿತರಿಸುವಂತೆ ಆಗ್ರಹಿಸಿ
ಪಿಂಚಣಿದಾರರ ಜಂಟಿ ವೇದಿಕೆ ಪ್ರತಿಭಟನೆ



ಜಯಲಕ್ಷ್ಮೀಪುರಂನಲ್ಲಿರುವ ಬಿಎಸ್‌ಎನ್‌ಎಲ್ ಕಚೇರಿ ಮುಂಭಾಗ ಬಿಎಸ್‌ಎನ್‌ಎಲ್ ಪಿಂಚಣಿದಾರರ ಜಂಟಿ ವೇದಿಕೆ ವತಿಯಿಂದ ಪ್ರತಿಭಟನೆ ನಡೆಯಿತು.

ಮೈಸೂರು, ಮೇ 21(ಜಿಎ)–ಕೇಂದ್ರ ಸರ್ಕಾರವು ಬಿಎಸ್‌ಎನ್‌ಎಲ್ ಪಿಂಚಣಿದಾರರಿಗೆ ಜನವರಿ 1 ರಿಂದ ಕೊಡಬೇಕಿರುವ ತುಟ್ಟಿ ಭತ್ಯೆಯನ್ನು ತಡೆಹಿಡಿದಿರುವುದನ್ನು ಖಂಡಿಸಿ, ಜಯಲಕ್ಷ್ಮೀಪುರಂ ನಲ್ಲಿರುವ ಬಿಎಸ್‌ಎನ್‌ಎಲ್ ಕಚೇರಿ ಮುಂಭಾಗ ಬಿಎಸ್‌ಎನ್‌ಎಲ್ ಪಿಂಚಣಿದಾರರ ಜಂಟಿ ವೇದಿಕೆ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಫೆ.27ರಂದು ಸಾರ್ವಜನಿಕ ಉದ್ಯಮಗಳ ಇಲಾಖೆ ಹೊರಡಿಸಿರುವ ಆದೇಶದಲ್ಲಿ ಇನ್ನು ಮುಂದೆ ತುಟ್ಟಿ ಭತ್ಯೆ ಕೊಡುವ ನಿರ್ಧಾರವನ್ನು ಆಯಾ ಇಲಾಖೆಗಳ ಹಣಕಾಸಿನ ಪರಿಸ್ಥಿತಿಯನ್ನು ಪರಿಗಣಿಸಿ, ಇಲಾಖೆ ಮುಖ್ಯಸ್ಥರ ವಿವೇಚನೆಗೆ ಬಿಟ್ಟಿರುವ ವಿಚಾರದಲ್ಲಿ ಬಿಎಸ್‌ಎನ್‌ಎಲ್ ಪಿಂಚಣಿದಾರರನ್ನು ಈ ಆದೇಶದಿಂದ ಹೊರಗಿಡುವಂತೆ ಒತ್ತಾಯಿಸಲಾಗಿತ್ತು. ಆದರೆ, ಆ ನಿಯಮವನ್ನು ಅಳವಡಿಸಿರುವ ಹಿನ್ನೆಲೆಯಲ್ಲಿ ಜ.1ರಿಂದ ಕೊಡಬೇಕಿರುವ ತುಟ್ಟಿ ಭತ್ಯೆಯನ್ನು ನೀಡುತ್ತಿಲ್ಲ ಎಂದು ಪ್ರತಿಭಟನಾಕಾರರು ದೂರಿದರು.

ದೂರ ಸಂಪರ್ಕ ಇಲಾಖೆ ಸೇವೆಯಿಂದ ಬಿಎಸ್‌ಎನ್‌ಎಲ್‌ಗೆ ಅಭಿಯುಕ್ತಿಗೊಂಡ ನೌಕರರು, ನಿವೃತ್ತಿಯ ನಂತರ ಕೇಂದ್ರ ಸರ್ಕಾರದ ಪಿಂಚಣಿದಾರರೆಂದು ಪರಿಗಣಿಸುವುದಾಗಿ ಸಂಸ್ಥೆ ಸ್ಥಾಪನೆಯಾದ ವರ್ಷದ ಕ್ಯಾಬಿನೆಟ್ ಸಭೆಯಲ್ಲಿ ತೀರ್ಮಾನವಾಗಿರುತ್ತದೆ ಮತ್ತು ಅವರ ಪಿಂಚಣಿ ಮತ್ತು ತುಟ್ಟಿ ಭತ್ಯೆಯನ್ನು ನೌಕರರು ಸೇವೆಯಲ್ಲಿದ್ದಾಗ ವಂತಿಗೆ ರೂಪದಲ್ಲಿ ಕೊಟ್ಟಿರುವ ಸಂಚಿತ ನಿಧಿಯಿಂದ ಕೊಡಲ್ಪಡುತ್ತದೆಯೇ ವಿನಃ ಕೇಂದ್ರ ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ದಿಮೆಯಾದ ಬಿಎಸ್‌ಎನ್‌ಎಲ್‌ನಿಂದ ಪಿಂಚಣಿ ಕೊಡುವುದಿಲ್ಲ ಆದ ಕಾರಣ ಸಂಸ್ಥೆಯ ಲಾಭ–ನಷ್ಟದ ಆಧಾರದ ಮೇಲೆ ಬಿಎಸ್‌ಎನ್‌ಎಲ್ ಪಿಂಚಣಿದಾರರ ತುಟ್ಟಿ ಭತ್ಯೆ ತಡೆಹಿಡಿಯುವುದು ಅನೈತಿಕ ಮತ್ತು ಅಸಂಬದ್ಧವಾಗಿರುತ್ತದೆ ಎಂದರು.

ಕಳೆದ ಬಾರಿ ಪ್ರತಿಭಟನೆ ಮಾಡಿದ ಹಿನ್ನೆಲೆಯಲ್ಲಿ ಏಪ್ರಿಲ್ ತಿಂಗಳ ಭತ್ಯೆ ನೀಡುತ್ತಾರೆ ಎಂದು ಹೇಳುತ್ತಿದ್ದಾರೆ. ಆದರೆ, ಈವರೆಗೂ ಪಿಂಚಣಿದಾರರಿಗೆ ಜನವರಿ 1 ರಿಂದ ಕೊಡಬೇಕಿರುವ ತುಟ್ಟಿ ಭತ್ಯೆಯನ್ನು ನೀಡಬೇಕೆಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಎಸ್.ವಿಷಕಂಠಮೂರ್ತಿ, ರಾಜಶೇಖರ್, ಬಸವರಾಜು ಮತ್ತಿತರರು ಉಪಸ್ಥಿತರಿದ್ದರು.

ಭಯೋತ್ಪಾದನಾ ವಿರೋಧಿ ದಿನ; ಮೈಸೂರಿನ ಪೊಲೀಸ್ ಠಾಣೆಗಳಲ್ಲಿ ಪ್ರತಿಜ್ಞಾವಿಧಿ ಸ್ವೀಕಾರ



ಮೈಸೂರು, ಮೇ 21(ಎಂಕೆ)– ಭಯೋತ್ಪಾದನಾ ವಿರೋಧಿ ದಿನದ ಅಂಗವಾಗಿ ಮೈಸೂರು ನಗರ ಪೊಲೀಸ್ ಆಯುಕ್ತರ ಕಚೇರಿ ಸೇರಿದಂತೆ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಗುರುವಾರ ಪ್ರತಿಜ್ಞಾ ವಿಧಿ ಸ್ವೀಕಾರ ಕಾರ್ಯಕ್ರಮ ನಡೆಯಿತು.

ದೇಶದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಏಕತೆಯನ್ನು ಎತ್ತಿ ಹಿಡಿಯಲು ಸದಾ ಒಟ್ಟಾಗಿ ಶ್ರಮಿಸುವುದಾಗಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿ ಪ್ರತಿಜ್ಞೆ ಮಾಡುವ ಮೂಲಕ ಭಯೋತ್ಪಾದನೆ ಮತ್ತು ಹಿಂಸಾಚಾರದ ಅಪಾಯಗಳ ಬಗ್ಗೆ ಜಾಗೃತಿ ಮೂಡಿಸಿದರು.

ಮಾಜಿ ಪ್ರಧಾನಿ ರಾಜೀವ್ ಗಾಂಧಿಯವರ ಪುಣ್ಯ ತಿಥಿಯ ನೆನಪಿನಲ್ಲಿ ಈ ದಿನವನ್ನು ಆಚರಿಸಲಾಗುತ್ತಿದ್ದು, ಯುವಜನರಲ್ಲಿ ಭಯೋತ್ಪಾದನೆ ಮತ್ತು ಹಿಂಸಾಚಾರದ ಅಪಾಯಗಳ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ದೇಶದಲ್ಲಿ ಶಾಂತಿಯನ್ನು ಕಾಪಾಡುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ಮೈಸೂರು ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ತಿಳಿಸಿದ್ದಾರೆ.

ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮೈಸೂರು, ಮೇ 21– ಹಿಂದುಳಿದ ಕಲ್ಯಾಣ ವರ್ಗಗಳ ಇಲಾಖೆ ವತಿಯಿಂದ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಪ್ರವರ್ಗ–1, ಎಸ್.ಸಿ & ಎಸ್.ಟಿ.ರೂ. 2.50 ಲಕ್ಷ ಹಾಗೂ ಪ್ರವರ್ಗ–2ಎ, 2ಬಿ, 3ಎ, 3ಬಿ ರೂ. 1.00 ಲಕ್ಷ ದೊಳಗಿರಬೇಕು. ಪ್ರವೇಶ ಬಯಸುವ ವಿದ್ಯಾರ್ಥಿಗಳು ಜೂನ್ 8 ರೊಳಗೆ ಇಲಾಖೆಯ https://shp.karnataka.gov.in/bcwd ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ತಾಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in/ ನ್ನು ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 8050770004 ನ್ನು ಸಂಪರ್ಕಿಸಬಹುದೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಘುಲಾಲ್ ಮೆಡಿಕಲ್ಸ್‌ನಿಂದ ದುಸ್ಥಿತಿಯಲ್ಲಿದ್ದ ಮೈಸೂರು ಕೆ.ಆರ್. ಆಸ್ಪತ್ರೆ ಬಳಿಯ ಬಸ್ ಪ್ರಯಾಣಿಕರ ತಂಗುದಾಣ ಜೀರ್ಣೋದ್ಧಾರ

- ●ಹೊಸ ಬೆಂಚುಗಳ ಅಳವಡಿಕೆ, ಮುರಿದ ಕಂಬಗಳು, ಮೇಲ್ಛಾವಣಿ ದುರಸ್ಥಿ
- ●ಕಂಗೊಳಿಸುತ್ತಿದೆ ಜಂಬೂಸವಾರಿ ಚಿತ್ರಗಳಿಂದ ತಂಗುದಾಣ



ಜೀರ್ಣೋದ್ಧಾರಗೊಂಡಿರುವ ಬಸ್ ನಿಲ್ದಾಣ

ಮೈಸೂರು, ಮೇ 21(ಜಿಎ)–ಮೈಸೂರಿನ ಕೆ.ಆರ್. ಆಸ್ಪತ್ರೆ ಮುಂಭಾಗ ಅಳಿವಿನಂಚಿನಲ್ಲಿದ್ದ ಶತಮಾನದ ಬಸ್ ಪ್ರಯಾಣಿಕರ ತಂಗುದಾಣವನ್ನು ಮೈಸೂರಿನ ರಘುಲಾಲ್ ಮೆಡಿಕಲ್ ಸಂಸ್ಥೆಯೂ ಜೀರ್ಣೋದ್ಧಾರ ಮಾಡಿದ್ದು, ಸಾರ್ವಜನಿಕರಿಂದ ಮೆಚ್ಚುಗೆಗೆ ಪಾತ್ರವಾಗಿದೆ.

ಸಮಾಜದ ಋಣ ತೀರಿಸಲು ಸಾಕಷ್ಟು ಮಾರ್ಗಗಳಿವೆ. ಆದರೆ, ರಘುಲಾಲ್ ಮೆಡಿಕಲ್ ಸಂಸ್ಥೆಯ ಮುಖ್ಯಸ್ಥರಾದ ರಾಘವನ್ ಅವರು ತಮ್ಮ ಸಂಸ್ಥೆಗೆ ಕೆ.ಆರ್.ಆಸ್ಪತ್ರೆಯ ಋಣ ಸಾಕಷ್ಟಿರುವುದರಿಂದ ಅದನ್ನು ತೀರಿಸುವ ನಿಟ್ಟಿನಲ್ಲಿ ಸುಮಾರು ಅಂದಾಜು 48 ಸಾವಿರ ರೂ. ವೆಚ್ಚದಲ್ಲಿ ಶೋಚನೀಯ ಸ್ಥಿತಿಯಲ್ಲಿದ್ದ ಬಸ್ ಪ್ರಯಾಣಿಕರ ತಂಗುದಾಣವನ್ನು ಜೀರ್ಣೋದ್ಧಾರ ಮಾಡಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ 'ಮೈಸೂರಿನ ಕಥೆಗಳು' ಪೇಜ್ ಮೂಲಕ ಮೈಸೂರು ನಗರದ ಇತಿಹಾಸ ಮತ್ತು ಐತಿಹಾಸಿಕ ಘಟನೆಗಳ ಕುರಿತು ಮಾಹಿತಿ ನೀಡುವ ಧರ್ಮೇಂದ್ರ ಅವರು ಕೆಲವು ದಿನಗಳ ಹಿಂದೆ ಈ ದುಸ್ಥಿತಿಯಲ್ಲಿದ್ದ ಬಸ್ ನಿಲ್ದಾಣದ ಬಗ್ಗೆ ತಮ್ಮ ಪೇಜ್‌ನಲ್ಲಿ ಮಾಹಿತಿ ಹಂಚಿಕೊಂಡಿದ್ದರು.

ಈ ವೀಡಿಯೊವನ್ನು ಗಮನಿಸಿದ ರಾಘವನ್ ಅವರು ತಕ್ಷಣ ಧರ್ಮೇಂದ್ರಗೆ ಕರೆ ಮಾಡಿ ಬಸ್ ಪ್ರಯಾಣಿಕರ ತಂಗುದಾಣವನ್ನು ಜೀರ್ಣೋದ್ಧಾರ ಮಾಡುತ್ತೇನೆ ಎಂದು ಭರವಸೆ ನೀಡಿದರು. ನಂತರ ಅವರು ರಾಜಕಾರಣಿಗಳು, ಅಧಿಕಾರಿಗಳ ರೀತಿ ಯಾವುದೇ ಆಲೋಚನೆ ಮಾಡದೇ ತಕ್ಷಣ ಬಸ್ ಪ್ರಯಾಣಿಕರ ತಂಗುದಾಣದ ಅಭಿವೃದ್ಧಿ ಕಾರ್ಯವನ್ನು ಕೈಗೊಂಡು ಮೂರೇ ದಿನದಲ್ಲಿ ಜೀರ್ಣೋದ್ಧಾರ ಕಾರ್ಯ ಪೂರ್ಣಗೊಳಿಸಿದ್ದಾರೆ.

ಬಸ್ ಪ್ರಯಾಣಿಕರ ತಂಗುದಾಣದ ಮೇಲ್ಛಾವಣಿ ಮತ್ತು ಸುತ್ತಲಿರುವ ಕಂಬಗಳ ಶಿಥಿಲಗೊಂಡಿದ್ದರಿಂದ ಅವುಗಳನ್ನು ಸರಿಪಡಿಸಿ, ನಂತರ ಮುರಿದು ಬಿದ್ದಿದ ಕಲ್ಲಿನ ಬೆಂಚುಗಳನ್ನು ತೆಗೆದು ಹೊಸ ಕಲ್ಲುಗಳನ್ನು ಅಳವಡಿಸಿ, ಸುತ್ತಲೂ ಕೆಂಪು, ಹಳದಿ ಬಣ್ಣ ಬಳಸಿ ಎಲ್ಲೆಡೆ ಮೈಸೂರು ಜಂಬೂಸವಾರಿ ಪರಂಪರೆ ಸಾರುವ ಚಿತ್ರಗಳನ್ನು ಬಿಡಿಸಿದ್ದಾರೆ. ಈ ಬದಲಾವಣೆ ಸಾರ್ವಜನಿಕರ ಮೆಚ್ಚುಗೆ ಗಳಿಸಿದ್ದು, ಅಭಿವೃದ್ಧಿ ಪಡಿಸಿದವರಿಗೆ ಧನ್ಯವಾದವನ್ನು ಪ್ರಯಾಣಿಕರು ತಿಳಿಸುತ್ತಿದ್ದಾರೆ.



"ನಮ್ಮ ಸಂಸ್ಥೆ ಹಲವಾರು ದಶಕಗಳಿಂದ ಕೆ.ಆರ್.ಆಸ್ಪತ್ರೆ ರೋಗಿಗಳು ಬಂದು ಇಲ್ಲಿ ಔಷಧಿ ಖರೀದಿಸಿದ್ದಾರೆ. ಮೈಸೂರು ಮಹಾರಾಜರು ಮತ್ತು ಅವರು ಕಟ್ಟಿಸಿರುವ ಆಸ್ಪತ್ರೆಯ ಋಣ ಮತ್ತು ಮಹಾರಾಜರ ಮೇಲಿನ ಗೌರವವನ್ನು ಸೂಚಿಸುವ ಈ ಹಿನ್ನೆಲೆಯಲ್ಲಿ ಈ ಸಣ್ಣ ಕಾರ್ಯ ಮಾಡಿದ್ದೇನೆ ಅಷ್ಟೇ.

–ರಾಘವನ್, ಮಾಲೀಕರು, ರಘುಲಾಲ್ ಮೆಡಿಕಲ್ಸ್

ಕುಡುಕರ ಲಾಡ್ಜ್ : ಈ ಬಸ್ ನಿಲ್ದಾಣದಲ್ಲಿ ಯಾವುದೇ ಪ್ರಯಾಣಿಕರು ಕೂರುತ್ತಿಲ್ಲ. ಬದಲಾಗಿ ಕುಡಿದು ತೇಲಾಡಿಕೊಂಡು ಬಂದವರಿಗೆ ಮಲಗಿಕೊಳ್ಳುವ ಕುಡುಕರ ಲಾಡ್ಜ್ ಆಗಿ ಪರಿವರ್ತನೆಯಾಗಿತ್ತು. ಕೆ.ಆರ್.ಆಸ್ಪತ್ರೆ ಬಳಿ ರೋಗಿಗಳ ಸಂಬಂಧಿಕರಿಗೆ ಉಪಚಾರಕ್ಕಾಗಿ ಅನೇಕ ಸಂಘ–ಸಂಸ್ಥೆಯವರು ಊಟ ವಿತರಿಸುತ್ತಾರೆ. ನಿರಾಶ್ರಿತರು ಇಲ್ಲಿ ಊಟ ಪಡೆದುಕೊಂಡು ಸಾರ್ವಜನಿಕರಿಂದ ಭಿಕ್ಷೆ ಬೇಡಿ ಆ ಹಣದಿಂದ ಕುಡಿದು ನಂತರ ಬಸ್ ನಿಲ್ದಾಣದಲ್ಲಿ ಆರಾಮಾಗಿ ರೆಸ್ಟ್ ಮಾಡಿಕೊಳ್ಳುತ್ತಿದ್ದರು.

ಬಸ್ ನಿಲ್ದಾಣದ ಹಿನ್ನೆಲೆ

ಕೆ.ಆರ್.ಆಸ್ಪತ್ರೆ ನಿರ್ಮಾಣಗೊಂಡ ನಂತರ ಮಹಾರಾಜರು ಜನರ ಅನುಕೂಲಕ್ಕಾಗಿ ಮೈಸೂರು ಸ್ಟೇಟ್ ಟ್ರಾನ್ಸ್‌ಪೋರ್ಟೇಷನ್ ಸಾರಿಗೆ ವ್ಯವಸ್ಥೆ ಆರಂಭಿಸಿದ್ದರು. ಅದಕ್ಕೆ ತಕ್ಕಂತೆ 1927ರಲ್ಲಿ ಈ ಬಸ್ ಪ್ರಯಾಣಿಕರ ತಂಗುದಾಣವನ್ನು ನಿರ್ಮಾಣ ಮಾಡಿದ್ದರು. 7ತಿಂಗಳಿನಲ್ಲಿ ಬಸ್ ನಿಲ್ದಾಣವು ಶತಮಾನ ತಲುಪಲಿದೆ ಮೈಸೂರು ನಗರದಾದ್ಯಂತ ಇದೇ ರೀತಿಯ ಪಾರಂಪರಿಕ ಶೈಲಿಯ ಬಸ್ ಪ್ರಯಾಣಿಕರ ತಂಗುದಾಣಗಳಿದ್ದವು ಸೂಕ್ತ ನಿರ್ವಹಣೆ ಇಲ್ಲದೇ ಅವು ನಶಿಸಿಹೋಗಿವೆ.

ರಾಜವಂಶಸ್ಥರಿಂದ ಮರು ಉದ್ಘಾಟನೆ

ಈ ಹಿಂದೆ ಮೈಸೂರು ಮಹಾರಾಜರು ಬಸ್ ಪ್ರಯಾಣಿಕರ ತಂಗುದಾಣವನ್ನು ಸ್ಥಾಪಿಸಿರುವ ಹಿನ್ನೆಲೆಯಲ್ಲಿ ಅವರ ವಂಶಸ್ಥರ ಕೈಯಲ್ಲಿ ಅಭಿವೃದ್ಧಿಗೊಂಡಿರುವ ಬಸ್ ಪ್ರಯಾಣಿಕರ ತಂಗುದಾಣವನ್ನು ಲೋಕಾರ್ಪಣೆ ಮಾಡುವ ಉದ್ದೇಶವಿದ್ದು, ಮೈಸೂರು ರಾಜವಂಶಸ್ಥರು ಹಾಗೂ ಮೈಸೂರು ಮತ್ತು ಕೊಡಗು ಸಂಸದರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಆಹ್ವಾನಿಸಲಾಗಿದೆ. ಮೇ 25 ಅಥವಾ 26ರಂದು ಯದುವೀರ್ ಲೋಕಾರ್ಪಣೆ ಮಾಡಲಿದ್ದಾರೆ.

ಎಬೋಲಾ ಆತಂಕ; ನವದೆಹಲಿ ವಿಮಾನ ನಿಲ್ದಾಣದಲ್ಲಿ ಮುನ್ನೆಚ್ಚರಿಕೆ

ನವದೆಹಲಿ: ಕಾಂಗೋ ಸೇರಿದಂತೆ ಆಫ್ರಿಕಾದ ಕೆಲವು ದೇಶಗಳಲ್ಲಿ ಎಬೋಲಾ ವೈರಸ್ ಪ್ರಕರಣಗಳು ವೇಗವಾಗಿ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ನವದೆಹಲಿಯ ಇಂದಿರಾ ಗಾಂಧಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ತೀವ್ರ ಮುನ್ನೆಚ್ಚರಿಕೆ ವಹಿಸಲಾಗಿದ್ದು, ಈ ಕುರಿತು ವಿಮಾನ ನಿಲ್ದಾಣದ ಅಧಿಕಾರಿಗಳು ಅಧಿಕೃತ ಪ್ರಕಟಣೆಯನ್ನು ಹೊರಡಿಸಿದ್ದಾರೆ.

ಬಾಧಿತ ದೇಶಗಳಿಂದ ಬರುವ ಅಥವಾ ಆ ದೇಶಗಳ ಮೂಲಕ ಪ್ರಯಾಣಿಸುವ ಅನಾರೋಗ್ಯ ಪೀಡಿತ ಪ್ರಯಾಣಿಕರು ವಿಮಾನ ನಿಲ್ದಾಣಕ್ಕೆ ಬಂದ ತಕ್ಷಣವೇ ಅಲ್ಲಿನ ಆರೋಗ್ಯ ಅಧಿಕಾರಿಗಳನ್ನು ಸಂಪರ್ಕಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಕೇಂದ್ರ ಆರೋಗ್ಯ ಕಾರ್ಯದರ್ಶಿಗಳು ರಾಜ್ಯಗಳ ಜೊತೆ ಉನ್ನತ ಮಟ್ಟದ ಪರಿಶೀಲನಾ ಸಭೆ ನಡೆಸಿ, ಎಬೋಲಾ ವೈರಸ್ ತಡೆಗಟ್ಟಲು ದೇಶದಲ್ಲಿ ಕೈಗೊಳ್ಳಬೇಕಾದ ಸಿದ್ಧತೆಗಳ ಕುರಿತು ಚರ್ಚಿಸಿದ ಬೆನ್ನಲ್ಲೇ ದೆಹಲಿ ವಿಮಾನ ನಿಲ್ದಾಣವು ಈ ಮುನ್ನೆಚ್ಚರಿಕಾ ಕ್ರಮವನ್ನು ಕೈಗೊಂಡಿದೆ.

ವಿಮಾನ ನಿಲ್ದಾಣದ ಪ್ರಕಟಣೆಯ ಪ್ರಕಾರ, ತೀವ್ರ ಜ್ವರ, ಅತಿಯಾದ ಸುಸ್ತು ಅಥವಾ ಆಯಾಸ, ತಲೆನೋವು, ಸ್ನಾಯು ನೋವು, ವಾಂತಿ, ಭೇದಿ, ಗಂಟಲು ನೋವು ಮತ್ತು ಯಾವುದೇ ಸ್ಪಷ್ಟ ಕಾರಣವಿಲ್ಲದೆ ದೇಹದಿಂದ ರಕ್ತಸ್ರಾವವಾಗುವುದು ಎಬೋಲಾ ವೈರಸ್‌ನ ಪ್ರಮುಖ ಲಕ್ಷಣಗಳಾಗಿವೆ. ಹೈ–ರಿಸ್ಕ್ ದೇಶಗಳಿಂದ ಭಾರತಕ್ಕೆ ಬಂದಿಳಿದ 21 ದಿನಗಳ ಒಳಗಾಗಿ ಪ್ರಯಾಣಿಕರಲ್ಲಿ ಇಂತಹ ಯಾವುದೇ ಲಕ್ಷಣಗಳು ಕಂಡುಬಂದರೂ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಲು ಸೂಚಿಸಲಾಗಿದೆ.


ದಿವ್ಯ ಸಾನ್ನಿಧ್ಯ
ಪರಮಪೂಜ್ಯ ಜಗದ್ಗುರು
ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರು
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ
ಸುತ್ತೂರು ಶ್ರೀಕ್ಷೇತ್ರ
ಸೇವಾ ಟ್ರಸ್ಟ್(ರಿ)
ಸುಗಮ ಸಂಗೀತ ಹಾಗೂ
ವಚನ ಗಾಯನ
ಎಂ.ಡಿ.ಪಲ್ಲವಿ
ಮತ್ತು ಸಂಗಡಿಗರಿಂದ
ಕೆ.ವಿ.ಮಲ್ಲೇಶ್
ಜನಸೇವಕನ
ಜನ್ಮದಿನ
22-05-2026 ಶುಕ್ರವಾರ ಸಂಜೆ 5 ರಿಂದ
ಸ್ಥಳ: ರವಿತೇಜ ಕನ್ವೆನ್ಷನ್ ಹಾಲ್
ಶಿವ ದೇವಾಲಯದ ಹತ್ತಿರ, ಅರವಿಂದ ನಗರ, ಮೈಸೂರು
ಶುಭಕೋರುವವರು
ಹೆಚ್.ವಿ.ರಾಜೀವ್
ಸ್ನೇಹ ಬಳಗ
ಮೈಸೂರು
ನಾಡಿಗೊಂದು ನವ ಚಿಗುರು
ದಯಮಾಡಿ ಬನ್ನಿ, ನಿಮ್ಮ ಪ್ರೀತಿಯ ಹಾರೈಕೆ ತನ್ನಿ
THE RANGU
8105367007